24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 8 | ನವದೆಹಲಿ | ಬೆಲೆ ₹10 | ಜುಲೈ 4 2026, ಶನಿವಾರ



# ಬಿಡಿಎ ವತಿಯಿಂದ ಬೆಂಗಳೂರು ನಗರ ಸೌಂದರ್ಯಕ್ಕೆ ಹೊಸ ಮೆರುಗು

## ಎಸ್.ಎಂ.ಕೃಷ್ಣ ರಸ್ತೆಯಲ್ಲಿ ದಸರಾ ಮಾದರಿಯಲ್ಲಿ ದೀಪಾಲಂಕಾರ

ಕೆಂಪೇಗೌಡರ 517ನೇ ಜಯಂತಿಯಂದು ನಾಡಪ್ರಭು ಕೆಂಪೇಗೌಡ ಬಡಾವಣೆಯಲ್ಲಿ ಲೋಕಾರ್ಪಣೆಗೊಂಡಿರುವ 10.7 ಕಿಲೋಮೀಟರ್ ಉದ್ದದ "ಎಸ್.ಎಂ. ಕೃಷ್ಣ ರಸ್ತೆ" ಕೇವಲ ಸಂಚಾರಕ್ಕೆ ಮಾತ್ರವಲ್ಲ, ರಾತ್ರಿ ವೇಳೆಯಲ್ಲಿ ತನ್ನ ಆಕರ್ಷಕ ದೀಪಾಲಂಕಾರದಿಂದಲೂ ಗಮನ ಸೆಳೆಯುತ್ತಿದೆ. ಬೆಂಗಳೂರು ನಗರದ ಅಭಿವೃದ್ಧಿಯ ಹೊಸ ಹೆಗ್ಗುರುತಾಗಿರುವ "ಎಸ್.ಎಂ. ಕೃಷ್ಣ ರಸ್ತೆ" ಇದೀಗ ದಸರಾ ಮಾದರಿಯ ಭವ್ಯ ದೀಪಾಲಂಕಾರದಿಂದ ನಗರದ ಜನತೆಯನ್ನು ಆಕರ್ಷಿಸುತ್ತಿದೆ. ವಿಶ್ವವಿಖ್ಯಾತ ಮೈಸೂರು ದಸರಾ ಸಂದರ್ಭದಲ್ಲಿ ಅರಮನೆ ಹಾಗೂ ಪ್ರಮುಖ ರಸ್ತೆಗಳಲ್ಲಿ ಕಾಣಸಿಗುವ ಬೆಳಕಿನ ವೈಭವವನ್ನು ನೆನಪಿಸುವ ರೀತಿಯಲ್ಲಿ ಈ ರಸ್ತೆಯನ್ನು ಅಲಂಕರಿಸಲಾಗಿದೆ. ಈ ರಸ್ತೆ ರಾತ್ರಿ ವೇಳೆ ದಸರಾ ಮಾದರಿಯ ದೀಪಾಲಂಕಾರದಂತೆ ಕಂಗೊಳಿಸುತ್ತಿದೆ. ವರ್ಣರಂಜಿತ ಅಲಂಕಾರಿಕ ದೀಪಗಳು, ವಿನ್ಯಾಸಬದ್ಧ ಬೆಳಕಿನ ಕಮಾನುಗಳು ಹಾಗೂ ಆಧುನಿಕ ಎಲ್‌ಇಡಿ ಲೈಟಿಂಗ್ ರಸ್ತೆಯ ಎರಡೂ ಬದಿಗಳನ್ನು ಬೆಳಗುವ ಮೂಲಕ ಬೆಂಗಳೂರು ನಗರದ ಸಾಂಸ್ಕೃತಿಕ ವೈಭವ ಮತ್ತು ಆಧುನಿಕ ನಗರಾಭಿವೃದ್ಧಿಯ ಸಮನ್ವಯವನ್ನು ಪ್ರತಿಬಿಂಬಿಸುತ್ತಿದೆ.

ಹಗಲಿನಲ್ಲಿ ಅಭಿವೃದ್ಧಿಯ ಹೆಜ್ಜೆ, ರಾತ್ರಿ ಬೆಳಕಿನ ಹಬ್ಬ



## ಬೆಂಗಳೂರು ನಗರದ ಸೌಂದರ್ಯಕ್ಕೆ ಹೊಸ ಆಯಾಮ

ಇಷ್ಟು ದಿನ ಬೆಂಗಳೂರಿನ ಯಾವುದೇ ರಸ್ತೆ, ಸಂಚಾರಕ್ಕೆ ಮುಕ್ತವಾದರೂ ಸಾರ್ವಜನಿಕ ಓಡಾಟಕ್ಕೆ ಸೀಮಿತವಾಗಿ ಹೆಚ್ಚೇನು ಗಮನ ಸೆಳೆಯುತ್ತಿರಲಿಲ್ಲ. ಆದರೆ "ಎಸ್.ಎಂ.ಕೃಷ್ಣ ರಸ್ತೆ" ಸಾರ್ವಜನಿಕರಿಗೆ ವಿಶಿಷ್ಟ ಅನುಭವವನ್ನು ನೀಡುತ್ತಿದೆ. ರಸ್ತೆ ವಿಭಜಕ (ಮೀಡಿಯನ್) ಹಾಗೂ ರಸ್ತೆ ಬದಿ, ಪ್ರಮುಖ ವೃತ್ತಗಳಲ್ಲಿ ಮತ್ತು ಪಾದಚಾರಿ ಮಾರ್ಗದಲ್ಲಿ ಅಳವಡಿಸಿರುವ ಎಲ್‌ಇಡಿ ದೀಪಗಳಿಂದ ರಾತ್ರಿ ವೇಳೆ ಸಂಪೂರ್ಣವಾಗಿ ಪ್ರಕಾಶಮಾನವಾಗಿ ಕಂಗೊಳಿಸಿ ನಗರಕ್ಕೆ ಸೌಂದರ್ಯದ ಹೊಸ ಆಯಾಮವನ್ನು ನೀಡುತ್ತಿದೆ.

ವಿಶಾಲ ರಸ್ತೆ, ಸುಸಜ್ಜಿತ ಪಾದಚಾರಿ ಮಾರ್ಗ, ಹಸಿರು ಪರಿಸರ ಮತ್ತು ದಸರಾ ಶೈಲಿಯ ಬೆಳಕಿನ ಅಲಂಕಾರ, ಉತ್ತಮ ಮೂಲ ಸೌಕರ್ಯದಿಂದ ಎಸ್.ಎಂ.ಕೃಷ್ಣ ರಸ್ತೆ ಅಭಿವೃದ್ಧಿ ಮತ್ತು ಆಧುನಿಕ ನಗರ ಯೋಜನೆಯ ಪ್ರತೀಕವಾಗಿದೆ.

## 10 ಲೇನ್‌ಗಳ ರಸ್ತೆ

ಮಾಗಡಿ ರಸ್ತೆಯ ಕಡಬಗೆರೆ ಕ್ರಾಸ್‌ನಿಂದ ಮೈಸೂರು ರಸ್ತೆ ಚಲ್ಲಘಟ್ಟ ಮೆಟ್ರೋ ನಿಲ್ದಾಣದವರೆಗಿನ 100.0ಮೀ ಅಗಲದ (330 ಅಡಿ), 10 ಲೇನ್‌ಗಳ ರಸ್ತೆ ಕಾಮಗಾರಿ ಹೊಣೆಯನ್ನು ಸ್ಟಾರ್ ಇನ್ಫೋಟೆಕ್ ಕಂಪನಿ ವಹಿಸಿಕೊಂಡಿತ್ತು. ದಕ್ಷಿಣ ಮತ್ತು ಪಶ್ಚಿಮ ಬೆಂಗಳೂರನ್ನು ಬೆಸೆಯುವ ಈ ರಸ್ತೆ 3 ಪ್ರಮುಖ ಅಂಡರ್‌ಪಾಸ್‌ಗಳು, 11 ಸೇತುವೆಗಳು, 270 ಮೀಟರ್ ಉದ್ದದ ಸುರಂಗ ಮಾರ್ಗ, ಆಧುನಿಕ ಸರ್ವಿಸ್ ರಸ್ತೆ, ಸೈಕಲ್ ಟ್ರಾಕ್ ವ್ಯವಸ್ಥೆ ಒಳಗೊಂಡಿದೆ. ರಸ್ತೆಯು ಬೆಂಗಳೂರು–ಮೈಸೂರು ಜೋಡಿ ಮಾರ್ಗದ ರೈಲ್ವೆ ಹಳಿಗಳಿಗೆ ಅಡ್ಡಲಾಗಿ ಹಾದುಹೋಗಿದ್ದು, ರೈಲು ಸಂಚಾರಕ್ಕೆ ಅಡ್ಡಿಯಾಗದಂತೆ ಕೇವಲ ಮೂರು ತಿಂಗಳಲ್ಲಿ ಕೆಳಸೇತುವೆಯನ್ನು ನಿರ್ಮಿಸಿದ ಸ್ಟಾರ್ ಇನ್ಫೋಟೆಕ್ ಕಂಪನಿಯ ಕಾರ್ಯವೈಖರಿಯನ್ನು ಕಂಡು ರೈಲ್ವೆ ಇಲಾಖೆಯೇ ಅಚ್ಚರಿ ವ್ಯಕ್ತಪಡಿಸಿತು. ಈ ರಸ್ತೆ ಕಂಬೀಪುರ, ಕೊಮ್ಮಘಟ್ಟ ಹಾಗೂ ಕೆಂಚನಪುರ, ಸೂಲಿಕೆರೆ ಸೇರಿದಂತೆ 11 ಗ್ರಾಮಗಳ ಸಾರ್ವಜನಿಕರು ಸೇರಿದಂತೆ ಮೈಸೂರು, ಮಾಗಡಿ, ಹಾಸನ, ಕುಣಿಗಲ್, ಮಂಡ್ಯ ಹಾಗೂ ರಾಮನಗರ ಭಾಗಗಳಿಂದ ಬೆಂಗಳೂರಿಗೆ ಆಗಮಿಸುತ್ತಿರುವ ಸಾವಿರಾರು ಪ್ರಯಾಣಿಕರು ಬೆಳಕಿನ ವೈಭವಕ್ಕೆ ಮಾರುಹೋಗುತ್ತಿದ್ದಾರೆ.

## ಅಭಿವೃದ್ಧಿ ಕಾರ್ಯದ ಹಿಂದೆ ಮೇಜರ್ ಪಿ. ಮಣಿವಣ್ಣನ್ ಶ್ರಮ



ನಾಗರಿಕರಿಗೆ ಸುರಕ್ಷಿತ, ಸುಂದರ ಮತ್ತು ಹೆಮ್ಮೆಯ ಸಾರ್ವಜನಿಕ ಸ್ಥಳಗಳನ್ನು ನಿರ್ಮಿಸುವುದು ಎಂಬುದಕ್ಕೆ ಎಸ್.ಎಂ.ಕೃಷ್ಣ ರಸ್ತೆ ಉದಾಹರಣೆಯಾಗಿದೆ. "ಹಗಲಿನಲ್ಲಿ ಅಭಿವೃದ್ಧಿಯ ಹೆಜ್ಜೆ, ರಾತ್ರಿ ಬೆಳಕಿನ ಹಬ್ಬ" ಎಂಬ ಪರಿಕಲ್ಪನೆಯನ್ನು ಸಾಕಾರಗೊಳಿಸುತ್ತಿರುವ ಎಸ್.ಎಂ.ಕೃಷ್ಣ ರಸ್ತೆಯ ದಸರಾ ಮಾದರಿಯ ದೀಪಾಲಂಕಾರ, ಬೆಂಗಳೂರಿನ ನಗರ ಸೌಂದರ್ಯಕ್ಕೆ ಹೊಸ ಮೆರುಗು ನೀಡುವ ಕಾರ್ಯಕ್ಕೆ ಶ್ರಮಿಸಿದ ಆಯುಕ್ತ ಮೇಜರ್ ಪಿ. ಮಣಿವಣ್ಣನ್ ಮಹತ್ವದ ಪಾತ್ರ ವಹಿಸಿದ್ದಾರೆ.


## ಪ್ರವಾಸಿ ತಾಣವಾಗುತ್ತಿರುವ ರಸ್ತೆ

ದಸರಾ ಮಾದರಿಯ ದೀಪಾಲಂಕಾರದಿಂದ "ಎಸ್.ಎಂ. ಕೃಷ್ಣ ರಸ್ತೆ" ರಾತ್ರಿ ಪ್ರವಾಸಿಗರ ಆಕರ್ಷಣೆಯ ಕೇಂದ್ರವಾಗುತ್ತಿದೆ. ಯುವಕರು, ಕುಟುಂಬಸ್ಥರು ವಿದ್ಯುತ್ ದೀಪಗಳ ದೃಶ್ಯ ವೈಭವವನ್ನು ಕಣ್ತುಂಬಿಕೊಳ್ಳಲು ರಾತ್ರಿ ವೇಳೆ ಆಗಮಿಸುತ್ತಿದ್ದು ಯುವಕರ ನೆಚ್ಚಿನ ಹಾಟ್ ಸ್ಪಾಟ್ ರಸ್ತೆಯಾಗುವುದರ ಜೊತೆಗೆ ವಾಣಿಜ್ಯ ಮತ್ತು ಪ್ರವಾಸೋದ್ಯಮ ಚಟುವಟಿಕೆಗಳ ತಾಣವಾಗಿ ಮಾರ್ಪಾಡಾಗುತ್ತಿದೆ.



ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷರಾದ ಪರಮಪೂಜ್ಯ ಜಗದ್ಗುರು ಶ್ರೀ ಶ್ರೀ ಶ್ರೀ ಡಾ.ನಿರ್ಮಲಾನಂದ ನಾಥ ಮಹಾಸ್ವಾಮೀಜಿರವರು, ಶ್ರೀ ಕ್ಷೇತ್ರ ಸುತ್ತೂರು ಮಠದ ಪರಮಪೂಜ್ಯ ಜಗದ್ಗುರು ಶ್ರೀ ಶ್ರೀ ಶ್ರೀ ಶಿವರಾತ್ರಿದೇಶಿಕೇಂದ್ರ ಮಹಾಸ್ವಾಮಿರವರು, ಶ್ರೀ ಸ್ಫಟಿಕಪುರಿ ಮಹಾಸಂಸ್ಥಾನ ಮಠದ ಪರಮಪೂಜ್ಯ ಜಗದ್ಗುರು ಶ್ರೀಶ್ರೀ ಶ್ರೀ ಡಾ. ನಂಜಾವಧೂತ ಮಹಾಸ್ವಾಮೀಜಿರವರು ಮತ್ತು ವಿಶ್ವ ಒಕ್ಕಲಿಗರ ಮಠದ ಪರಮಪೂಜ್ಯ ಶ್ರೀಶ್ರೀಶ್ರೀ ಡಾ. ನಿಶ್ಚಲಾನಂದ ಮಹಾಸ್ವಾಮಿಗಳವರ ದಿವ್ಯ ಉಪಸ್ಥಿತಿಯಲ್ಲಿ, ನಾಡಪ್ರಭು ಕೆಂಪೇಗೌಡರ 517ನೇ ಜಯಂತಿ ಆಚರಣೆ ಹಾಗೂ ಎಸ್. ಎಂ.ಕೃಷ್ಣ ದಶಪಥ ರಸ್ತೆಯ ಲೋಕಾರ್ಪಣೆಯ ಸಭಾ ಕಾರ್ಯಕ್ರಮಕ್ಕೆ ಸನ್ಮಾನ್ಯ ಮುಖ್ಯಮಂತ್ರಿಗಳಾದ ಶ್ರೀ ಡಿ.ಕೆ.ಶಿವಕುಮಾರ್ ಅವರು ದೀಪ ಬೆಳಗುವ ಮೂಲಕ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಸನ್ಮಾನ್ಯ ಉಪಮುಖ್ಯಮಂತ್ರಿಗಳಾದ ಡಾ.ಜಿ.ಪರಮೇಶ್ವರ, ಮಾನ್ಯ ಬೆಂಗಳೂರು ಅಭಿವೃದ್ಧಿ ಸಚಿವರಾದ ಶ್ರೀ ಕೃಷ್ಣ ಭೈರೇಗೌಡ, ಬಿಡಿಎ ಅಧ್ಯಕ್ಷರಾದ ಶ್ರೀ ಎನ್.ಎ.ಹ್ಯಾರಿಸ್, ಮಾನ್ಯ ಇಂಧನ ಮತ್ತು ಪ್ರವಾಸೋದ್ಯಮ ಇಲಾಖೆ ಸಚಿವರಾದ ಶ್ರೀ ಕೆ.ಜೆ.ಜಾರ್ಜ್, ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು, ಗ್ರಾಹಕ ವ್ಯವಹಾರಗಳ ಸಚಿವರಾದ ಶ್ರೀ ಕೆ.ಎಚ್.ಮುನಿಯಪ್ಪ, ಮಾನ್ಯ ಸಾರಿಗೆ ಸಚಿವರಾದ ಶ್ರೀ ಬೈರತಿ ಸುರೇಶ್, ಕರ್ನಾಟಕ ಸರ್ಕಾರದ ದೆಹಲಿಯ ವಿಶೇಷ ಪ್ರತಿನಿಧಿ ಶ್ರೀ ಟಿ.ಬಿ.ಜಯಚಂದ್ರ, ಶಾಸಕರಾದ ಶ್ರೀ ಎಚ್.ಸಿ.ಬಾಲಕೃಷ್ಣ, ಶ್ರೀ ಎಸ್.ಟಿ.ಸೋಮಶೇಖರ್, ವಿಧಾನಪರಿಷತ್ ಸದಸ್ಯರಾದ ಶ್ರೀ ಪುಟ್ಟಣ್ಣ, ಕೆ.ಗೋವಿಂದರಾಜ, ಮಾಜಿ ಮುಖ್ಯಮಂತ್ರಿಗಳಾದ ದಿ.ಎಸ್.ಎಂ.ಕೃಷ್ಣ ಅವರ ಧರ್ಮಪತ್ನಿ ಪ್ರೇಮಾ ಕೃಷ್ಣ, ಸರ್ಕಾರದ ಮುಖ್ಯ ಕಾರ್ಯದರ್ಶಿಗಳಾದ ಶ್ರೀಮತಿ ಶಾಲಿನಿ ರಜನೀಶ್ ಉಪಸ್ಥಿತರಿದ್ದರು. ❖❖❖❖

## ನಿತ್ಯ ಪಂಚಾಂಗ 4.07.2026 ಶನಿವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ-ವಸಂತ/ಗ್ರೀಷ್ಮ ಋತು, ಚಾಂದ್ರಮಾನ, ವೈಶಾಖ - ಜ್ಯೇಷ್ಠ ಮಾಸ

ನಿಜ ಜ್ಯೇಷ್ಠ ಬಹುಳ, ಚೌತಿ,
ಧನಿಷ್ಠ ನಕ್ಷತ್ರ,
ಮೈಸೂರು ಕೋಟೆ ರಥ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ.5.04-6.33 | 12.00-1.30 | 3.00-4.00 |
| ಸೋಮ | ಬೆ.7.20-9.04 | 10.30-12.00 | 1.30-12.00 |
| ಮಂಗಳ | ಮ.3.25-4.59 | 9.00-10.30 | 12.00-1.30 |
| ಬುಧ | ಮ.12.16-1.50 | 7.30-9.00 | 10.30-12.00 |
| ಗುರು | ಮ.1.50-3.29 | 6.00-7.30 | 9.00-10.30 |
| ಶುಕ್ರ | ಬೆ.10.42-12.16 | 3.00-4.30 | 7.30-9.00 |
| ಶನಿ | ಬೆ.9.07-10.41 | 1.30-3.00 | 6.00-7.30 |

# ಕೇಂದ್ರ ಸಚಿವ ಅಮಿತ್ ಶಾ - ಸಂಸದ ಡಾ. ಸಿ.ಎನ್. ಮಂಜುನಾಥ್ ಭೇಟಿ: ಎಸ್‌ಟಿಆರ್‌ಆರ್ ಕುರಿತು ಚರ್ಚೆ

**ನವದೆಹಲಿ, ಜು.3:** ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಸಾವಿರಾರು ರೈತರು ಮತ್ತು ಭೂಮಾಲೀಕರ ನ್ಯಾಯಯುತ ಬೇಡಿಕೆಗೆ ಸ್ಪಂದಿಸುವ ನಿಟ್ಟಿನಲ್ಲಿ ಬೆಂಗಳೂರು ಗ್ರಾಮಾಂತರ ಕ್ಷೇತ್ರದ ಸಂಸದ ಡಾ. ಸಿ.ಎನ್.ಮಂಜುನಾಥ್ ಶುಕ್ರವಾರ ನವದೆಹಲಿಯ ಕರ್ತವ್ಯ ಭವನದಲ್ಲಿ ಕೇಂದ್ರ ಗೃಹ ಹಾಗೂ ಸಹಕಾರ ಸಚಿವ ಅಮಿತ್ ಶಾ ಅವರನ್ನು ಭೇಟಿಯಾಗಿ, ಎನ್.ಎಚ್. 948A ಬೆಂಗಳೂರು ಸ್ಯಾಟಲೈಟ್ ಟೌನ್ ರಿಂಗ್ ರೋಡ್ **(STRR)** ಯೋಜನೆಗೆ ಸಂಬಂಧಿಸಿದಂತೆ ಕೇಂದ್ರ ಸಚಿವ ಸಂಪುಟದ ಶೀಘ್ರ ಅನುಮೋದನೆ ಹಾಗೂ ಭೂಸ್ವಾಧೀನಗೊಂಡ ರೈತರು ಮತ್ತು ಭೂಮಾಲೀಕರಿಗೆ ಬಾಕಿ ಉಳಿದಿರುವ ಪರಿಹಾರ ಮೊತ್ತವನ್ನು ತಕ್ಷಣ ಬಿಡುಗಡೆಗೊಳಿಸುವಂತೆ ಮನವಿ ಸಲ್ಲಿಸಿದರು.

2020-2021ರಲ್ಲೇ ಭೂಸ್ವಾಧೀನ ಪ್ರಕ್ರಿಯೆ ಪೂರ್ಣಗೊಂಡಿದ್ದರೂ, ಅನೇಕ ರೈತರು ಮತ್ತು ಭೂಮಾಲೀಕರು ಇನ್ನೂ ಪರಿಹಾರಕ್ಕಾಗಿ ಕಾಯುತ್ತಿದ್ದಾರೆ. ಇದರಿಂದ ಅನೇಕ ಕುಟುಂಬಗಳು ಆರ್ಥಿಕ ಸಂಕಷ್ಟವನ್ನು ಎದುರಿಸುತ್ತಿದ್ದು, ಸರ್ಕಾರದಿಂದ ಶೀಘ್ರ ಪರಿಹಾರದ ನಿರೀಕ್ಷೆಯಲ್ಲಿವೆ. ಈ ಗಂಭೀರ ವಿಷಯಕ್ಕೆ ವಿಶೇಷ ಗಮನಹರಿಸಿ, ಯೋಜನೆಗೆ ಸಂಬಂಧಿಸಿದ ಬಾಕಿ ಇರುವ ಅನುಮೋದನೆ ಪ್ರಕ್ರಿಯೆಯನ್ನು



ಶೀಘ್ರ ಪೂರ್ಣಗೊಳಿಸಿ, ರೈತರಿಗೆ ಸಲ್ಲಬೇಕಾದ ಪರಿಹಾರವನ್ನು ವಿಳಂಬವಿಲ್ಲದೆ ಬಿಡುಗಡೆಗೊಳಿಸುವಂತೆ ಸಚಿವರಲ್ಲಿ ವಿನಂತಿಸಿದ್ದಾಗಿ ಅವರು ತಿಳಿಸಿದ್ದಾರೆ.

ರೈತರ ಹಿತಾಸಕ್ತಿ ಹಾಗೂ ನ್ಯಾಯಯುತ ಹಕ್ಕುಗಳ ರಕ್ಷಣೆಗೆ ನಾನು ಸದಾ ಬದ್ಧನಾಗಿದ್ದು, ಈ ವಿಷಯದಲ್ಲಿ ಕೇಂದ್ರ ಸರ್ಕಾರ ಶೀಘ್ರದಲ್ಲೇ ಸಕಾರಾತ್ಮಕ ನಿರ್ಧಾರ ಕೈಗೊಂಡು ರೈತರಿಗೆ ನ್ಯಾಯ ಒದಗಿಸಲಿದೆ ಎಂಬ ಪೂರ್ಣ ವಿಶ್ವಾಸವನ್ನು ಡಾ. ಮಂಜುನಾಥ್ ವ್ಯಕ್ತಪಡಿಸಿದ್ದಾರೆ.

# ಮುಖ್ಯಮಂತ್ರಿಗಳ ವಿಶೇಷ ಕರ್ತವ್ಯಾಧಿಕಾರಿ ಡಾ. ವೈಷ್ಣವಿ ಅವರಿಂದ ಭರತನಾಟ್ಯ ಪ್ರದರ್ಶನ



ಬೆಂಗಳೂರು, ಜು.3: ಡಾ. ವೈಷ್ಣವಿ ಕೆ ಕೆಎಎಸ್ ಮುಖ್ಯಮಂತ್ರಿಯವರ ವಿಶೇಷ ಕರ್ತವ್ಯಾಧಿಕಾರಿಗಳು ಇಂದು ಬೆಂಗಳೂರಿನ ಬನಶಂಕರಿ 2ನೇ ಹಂತದಲ್ಲಿರುವ ಸುಚಿತ್ರ ಕನ್ಸರ್ಟ್ ಹಾಲಿನಲ್ಲಿ ಭರತನಾಟ್ಯ ಪ್ರದರ್ಶನವನ್ನು ನೀಡಿದರು. ಅವರು ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ್ ಅವರ ವಿಶೇಷ ಕರ್ತವ್ಯಾಧಿಕಾರಿಗಳಾಗಿ ಮರುನೇಮಕಗೊಂಡಿದ್ದು, ಹಿಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೂ ವಿಶೇಷ ಕರ್ತವ್ಯಾಧಿಕಾರಿಯಾಗಿ ಕಾರ್ಯನಿರ್ವಹಿಸಿದ್ದರು.

ಡಾ. ವೈಷ್ಣವಿ ಅವರು ತಮ್ಮ ಕಾರ್ಯಾವಧಿಯಲ್ಲಿ ಮುಖ್ಯಮಂತ್ರಿಗಳ ಕಚೇರಿಯಲ್ಲಿ ರಾಜ್ಯದ ಸಾರ್ವಜನಿಕ ಕುಂದು ಕೊರತೆಗಳ ವಿಭಾಗದಲ್ಲಿ ಕೈಗೊಂಡ ಪ್ರಮುಖ ಕಾರ್ಯಯೋಜನೆ ಗಳು ಈಗಾಗಲೇ ಎಲ್ಲಾ ಸಾಮಾಜಿಕ ಜಾಲತಾಣಗಳು, ಸುದ್ದಿಮಾಧ್ಯಮಗಳಲ್ಲಿ ವರದಿಯಾಗಿದ್ದು ಮತ್ತು ಸಾರ್ವಜನಿಕ ಹಿತದೃಷ್ಟಿಯಿಂದ ಜನಸ್ನೇಹಿ ಆಡಳಿತದ ಭಾಗವಾಗಿ ಅವರು ಸ್ವಇಚ್ಛೆಯಿಂದ ಸಾರ್ವಜನಿಕ ಕುಂದುಕೊರತೆಗಳನ್ನು ಬಗೆಹರಿಸಿದ್ದು, ಸಾರ್ವಜನಿಕ ಕುಂದುಕೊರತೆಗಳಿಗೆ ಪರಿಣಾಮಕಾರಿಯಾಗಿ ಸ್ಪಂದಿಸುತ್ತಿರುವ ಅವರ ಕಾರ್ಯಕ್ಷಮತೆಯು ಸಾರ್ವಜನಿಕರಿಂದ ಪ್ರಶಂಸೆಗೊಳಗಾಗಿದೆ.

ಡಾ. ವೈಷ್ಣವಿ ಅವರು ಸಾಂಸ್ಕೃತಿಕ, ಕಲೆ, ಕ್ರೀಡೆಗಳಲ್ಲಿ ಅಪಾರ ಪ್ರತಿಭೆಯನ್ನು ಹೊಂದಿದ್ದು ಅದರಲ್ಲೂ ಭರತನಾಟ್ಯಂ, ಮೋಹಿನಿಯಾಟಂ, ಒಡಿಸ್ಸಿ ನೃತ್ಯ ಪ್ರಕಾರಗಳಲ್ಲಿ ಹಲವಾರು ಪ್ರದರ್ಶನಗಳನ್ನು ನೀಡಿದ್ದು ನೃತ್ಯ ಕಲೆಯ ಕಪಿತ್ತ ಮುದ್ರೆ ಪ್ರಾಕಾರವನ್ನು ವಿಶೇಷವಾಗಿ ಪ್ರದರ್ಶಿಸಿದ್ದಾರೆ. ಸ್ವತಃ ಕಲರಿಪಾಯಟ್ಟು ಕ್ರೀಡಾಪಟು ಆಗಿರುವ ಅವರು ಸೀನಿಯರ್ ವಿಭಾಗದಲ್ಲಿ ಚಾಂಪಿಯನ್ ಆಗಿ ಕಿರಿಯ ಕ್ರೀಡಾಪಟುಗಳಿಗೆ ಸ್ಫೂರ್ತಿಯಾಗಿದ್ದಾರೆ.

# ಸಿದ್ದರಾಮಯ್ಯ ನಿವಾಸದಲ್ಲಿ ಉಪಾಹಾರ ಕೂಟ: ಸಿಎಂ ಡಿ.ಕೆ.ಶಿ. ಕುಟುಂಬ ಭಾಗಿ



**ಬೆಂಗಳೂರು, ಜು.3:** ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕುಟುಂಬ ಸಮೇತರಾಗಿ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಶುಕ್ರವಾರ ಭೇಟಿ ಮಾಡಿ ಉಪಾಹಾರ ಕೂಟ ನಡೆಸಿದರು. ನಾಯಕತ್ವ ಬದಲಾದ ಬಳಿಕ ಡಿ.ಕೆ.ಶಿವಕುಮಾರ್ ಕುಟುಂಬ ಮತ್ತು ಸಿದ್ದರಾಮಯ್ಯ ಅವರ ಮೊದಲ ಭೇಟಿ ಇದಾಗಿದೆ. 8 ವರ್ಷ ಕಾಲ ಮುಖ್ಯಮಂತ್ರಿ ಯಾಗಿದ್ದ ಸಿದ್ದರಾಮಯ್ಯ ಅವರು ಯಾವುದೇ ತಗಾದೆ ಇಲ್ಲದೇ ನಿರಾಳವಾಗಿ ಮುಖ್ಯಮಂತ್ರಿ ಸ್ಥಾನವನ್ನು ಡಿ.ಕೆ.ಶಿವಕುಮಾರ್ ಅವರಿಗೆ ಬಿಟ್ಟುಕೊಟ್ಟಿದ್ದರು. ಅಧಿಕಾರ ತ್ಯಾಗದ ಬಳಿಕ ಸಿದ್ದರಾಮಯ್ಯ ಅವರನ್ನು ಕಡೆಗಣಿಸಲಾಗುತ್ತಿದೆ ಎಂಬ ಸಣ್ಣಮಟ್ಟದ ಅಪಸ್ವರ ಅಲ್ಲಲ್ಲಿ ಕಂಡುಬರುತ್ತಿದೆ. ಇದನ್ನು ತೊಡೆದು ಹಾಕುವ ನಿಟ್ಟಿನಲ್ಲಿ ಡಿ.ಕೆ.ಶಿವಕುಮಾರ್ ಮಹತ್ವದ ಹೆಜ್ಜೆ ಇಟ್ಟಿದ್ದಾರೆ. ಕುಟುಂಬ ಸಮೇತರಾಗಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸಿದ್ದಾರೆ.

ಜೊತೆಯಲ್ಲೇ ಉಪಾಹಾರ ಸೇವಿಸಿದ್ದಾರೆ. ಈ ವೇಳೆ ಡಿ.ಕೆ.ಶಿವಕುಮಾರ್ ಅವರ ಪತ್ನಿ ಉಷಾ, ಸಹೋದರ ಡಿ.ಕೆ.ಸುರೇಶ್ ಹಾಜರಿದ್ದರು. ಇದೊಂದು ಸೌಜನ್ಯದ ಭೇಟಿ ಎಂದು ಹೇಳಲಾಗುತ್ತಿದೆ. ಆದರೂ ಸಚಿವ ಸಂಪುಟ ವಿಸ್ತರಣೆಯ ಹಂತದಲ್ಲಿ ಡಿ.ಕೆ.ಶಿವಕುಮಾರ್ ಮತ್ತು ಸಿದ್ದರಾಮಯ್ಯ ಅವರ ಭೇಟಿ ಮಹತ್ವ ಪಡೆದುಕೊಂಡಿದೆ. ಡಿ.ಕೆ.ಶಿವಕುಮಾರ್ ಪ್ರಮಾಣವಚನ ಸ್ವೀಕರಿಸಿ, 30 ದಿನಗಳಾದ ಸಂದರ್ಭದಲ್ಲಿ ಪರಸ್ಪರ ಭೇಟಿಯಾಗಿದ್ದಾರೆ. ಈ ವೇಳೆ ಸಿದ್ದರಾಮಯ್ಯ ಅವರು, ಡಿ.ಕೆ.ಶಿವಕುಮಾರ್ ಕುಟುಂಬದ ಜೊತೆ ಸಂತೋಷದ ಮಾತುಕತೆ ನಡೆಸಿ ಶುಭ ಹಾರೈಸಿದ್ದಾರೆ.



ಸಿಎಂ ಡಿ.ಕೆ.ಶಿವಕುಮಾರ್ ಅವರು ಬೆಂಗಳೂರಿನಲ್ಲಿ ಶುಕ್ರವಾರ ಇಂಧನ ಇಲಾಖೆಯ ಪ್ರಗತಿ ಪರಿಶೀಲನಾ ಸಭೆ ನಡೆಸಿದರು. ಇಂಧನ ಸಚಿವ ಕೆ.ಜೆ. ಜಾರ್ಜ್, ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ಅಪರ ಮುಖ್ಯ ಕಾರ್ಯದರ್ಶಿಗಳಾದ ಗೌರವ್ ಗುಪ್ತಾ, ರಿತೇಶ್ ಕುಮಾರ್ ಸಿಂಗ್, ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರ ಎಲ್.ಕೆ.ಅತೀಕ್, ಕೆಪಿಟಿಸಿಎಲ್ ಎಂ.ಡಿ ರಾಮ್‌ಪ್ರಸಾತ್ ಮನೋಹರ್, ಕರ್ನಾಟಕ ವಿದ್ಯುತ್ ನಿಗಮದ ಎಂ.ಡಿ.ರಾಜೇಂದ್ರ ಚೋಳನ್ ಮತ್ತಿತರರಿದ್ದರು.

# ರಾಜಕಾರಣದಲ್ಲಿ ಧರ್ಮ ಇರಬೇಕು, ಧರ್ಮದಲ್ಲಿ ರಾಜಕಾರಣ ಇರಬಾರದು: ಡಿ.ಕೆ. ಶಿವಕುಮಾರ್

### ಕನಕಪುರದ ದೇಗುಲ ಮಠದಲ್ಲಿ ಶ್ರೀಗಳ ಪುಣ್ಯಸ್ಮರಣೆ ಕಾರ್ಯಕ್ರಮದಲ್ಲಿ ಭಾಗಿ

### ಶ್ರೀಗಳ ಹೆಸರಿನ ಸೇತುವೆ ಉದ್ಘಾಟನೆ

**ರಾಮನಗರ, ಜು.3:** ಎಲ್ಲರೂ ಧರ್ಮದಲ್ಲಿ ಇರಬೇಕು. ರಾಜಕೀಯದಲ್ಲೂ ಧರ್ಮ ಇಟ್ಟುಕೊಂಡು ಕೆಲಸ ಮಾಡಬೇಕು. ಶಿವಾಲ ಮೂರ್ತಿ ಬೆಟ್ಟದಲ್ಲಿ ನನ್ನ ತಂದೆ-ತಾಯಿ ಹರಕೆ ಹೊತ್ತಿದ್ದರು. ಬಳಿಕ ನಾನು ಹುಟ್ಟಿದವನು. ಹೀಗಾಗಿ ನಾನು ನನ್ನ ಸೇವೆಯನ್ನು ಮಾಡುತ್ತಿದ್ದೇನೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ. ಕನಕಪುರದ ದೇಗುಲ ಮಠದ ಲಿಂಗೈಕ್ಯ ಡಾ. ಮುಮ್ಮಡಿ ನಿರ್ವಾಣ ಮಹಾಸ್ವಾಮಿಗಳ ಪುಣ್ಯ ಸಂಸ್ಮರಣೋತ್ಸವ ಕಾರ್ಯಕ್ರಮದಲ್ಲಿ ಸಿಎಂ ಡಿಕೆ ಶಿವಕುಮಾರ್ ಅವರು ಭಾಗವಹಿಸಿ, ತ್ರಿವಿಧ ದಾಸೋಹಿ ಮಹಾಸ್ವಾಮಿಗಳ ಪುತ್ಥಳಿಗೆ ಪುಷ್ಪನಮನ ಸಲ್ಲಿಸಿದರು. ಬಳಿಕ ಮಾತನಾಡಿ ನಾನು ಈ ಮಠಕ್ಕೆ ಭಕ್ತನಾಗಿ



ಬಂದಿದ್ದೇನೆ. ನಮ್ಮ ಮನೆಯಲ್ಲಿ ಯಾರೇ ಹುಟ್ಟಿದರು ಕೆಂಪೇಗೌಡ ಎಂದು ಹೆಸರಿಡುವ ಪ್ರತೀತಿ. ನಮ್ಮ ತಾಯಿ ಶಿವನಲ್ಲಿ ಬೇಡಿಕೊಂಡಿದ್ದರು. ಅದಕ್ಕಾಗಿ ನನ್ನ ಹೆಸರು ಶಿವಕುಮಾರ್ ಆಗಿದೆ. ನಮ್ಮ ಮನೆಯಲ್ಲಿ ಎಲ್ಲರೂ ದೇಗುಲ ಮಠದ ಭಕ್ತರು. ನಾನು ಈಗಲೂ ಧರ್ಮ ಉಳಿಸಿಕೊಂಡು ಧರ್ಮದಿಂದ ನನ್ನ ಕೆಲಸ ಮಾಡುತ್ತಿದ್ದೇನೆ ಎಂದು ಹೇಳಿದರು. ಕನಕಪುರದ ಶ್ರೀ ದೇಗುಲ ಮಠದ ಲಿಂಗೈಕ್ಯ ಡಾ. ಮುಮ್ಮಡಿ ನಿರ್ವಾಣ ಮಹಾಸ್ವಾಮಿಗಳ ಪುಣ್ಯ ಸಂಸ್ಮರಣೋತ್ಸವ ಕಾರ್ಯಕ್ರಮದಲ್ಲಿ ಸಿಎಂ ಡಿ.ಕೆ.ಶಿವಕುಮಾರ್ ಅವರು ಭಾಗವಹಿಸಿ, ತ್ರಿವಿಧ ದಾಸೋಹಿ ಮಹಾಸ್ವಾಮಿಗಳ ಪುತ್ಥಳಿಗೆ ಪುಷ್ಪನಮನ ಸಲ್ಲಿಸಿದರು. ಇದಕ್ಕೂ ಮುನ್ನ ಡಿಕೆ ಶಿವಕುಮಾರ್ ಅವರು ವೇದಿಕೆ ಮೇಲೆ ಆಗಮಿಸುತ್ತಿದ್ದಂತೆಯೇ ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ ಹಾಗೂ ಕೇಂದ್ರ ರಾಜ್ಯ ಖಾತೆ ಸಚಿವ ವಿ.ಸೋಮಣ್ಣ ಅವರು ಎದ್ದು ನಿಂತು ಸ್ವಾಗತ ಮಾಡಿದರು.

ಇದೇ ವೇಳೆ ಸೋಮಣ್ಣ ಅವರು ಡಿಕೆ ಶಿವಕುಮಾರ್ ಅವರಿಗೆ ಹೂಗುಚ್ಛನೀಡಿದರು. ಬಳಿಕ ಡಿಕೆಶಿ, ವೇದಿಕೆ ಮೇಲಿದ್ದ ಎಲ್ಲಾ ಸ್ವಾಮೀಜಿಗಳಿಗೆ ನಮಸ್ಕರಿಸಿದರು.

ಇನ್ನೊಂದಡೆ ಯಡಿಯೂರಪ್ಪ ಹಾಗೂ ವಿ.ಸೋಮಣ್ಣ ಅವರು ವೇದಿಕೆಯಲ್ಲಿ ಅಕ್ಕಪಕ್ಕದಲ್ಲಿ ಕುಳಿತರೂ ಸಹ ಮಾತನಾಡದೆ ಮೌನವಾಗಿದ್ದರು.

ಇದು ಕಣ್ಣೀರು ಹಾಕುವ ದಿನವಲ್ಲ. ಶ್ರೀಗಳ ಕಾರ್ಯವನ್ನು ಉಳಿಸಿಕೊಂಡು ಮುಂದುವರಿಸುವ ದಿನ. ಶ್ರೀಗಳು ಇಲ್ಲಿ ಒಂದು ಸೇತುವೆ ಮಾಡಬೇಕು ಎಂದು ಬಹಳಷ್ಟು ಬಾರಿ ಹೇಳಿದ್ದರು.



ಲಿಂಗೈಕ್ಯ ಮುಮ್ಮಡಿ ನಿರ್ವಾಣ ಶ್ರೀಗಳ ಸಂಸ್ಮರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿದ ನಂತರ ಸಿಎಂ ಡಿ ಕೆ ಶಿವಕುಮಾರ್ ಅವರು ಕನಕಪುರ ದೇಗುಲ ಮಠದ ಪಕ್ಕದ ನೂತನ ಸೇತುವೆ ಉದ್ಘಾಟನೆ ಮಾಡಿ, ಅದಕ್ಕೆ ಮುಮ್ಮಡಿ ನಿರ್ವಾಣ ಶ್ರೀಗಳ ಹೆಸರು ಘೋಷಿಸಿದರು.

ಇಂದು ಶ್ರೀಗಳ ಚಿಂತನೆಯಂತೆ ಸೇತುವೆ ಉದ್ಘಾಟನೆ ಮಾಡಿರುವುದು ನನ್ನ ಭಾಗ್ಯ. ಶ್ರೀ ಮುಮ್ಮಡಿ ನಿರ್ವಾಣ ಸ್ವಾಮೀಜಿಗಳ ಹೆಸರನ್ನೇ ಈ ಸೇತುವೆಗೆ ನಾಮಕರಣ ಮಾಡಲಾಗಿದೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದರು.

# ಅಧಿಕಾರಿಗಳನ್ನು ಗುಲಾಮರಂತೆ ನಡೆಸಿಕೊಳ್ಳುತ್ತಿದೆ, ಹೆದರಿಸಿ, ಬೆದರಿಸಿ ತನ್ನಿಷ್ಟದಂತೆ ಎಸ್‌ಐಆರ್ ಮಾಡಿಸಿಕೊಳ್ಳುತ್ತಿದೆ

### ಯಶವಂತಪುರ ವಿಧಾನಸಭೆ ಕ್ಷೇತ್ರದಲ್ಲೂ ಎಸ್‌ಐಆರ್ ಪ್ರಕ್ರಿಯೆಯಲ್ಲಿ ಅಕ್ರಮ ರಾಜ್ಯ ಸರ್ಕಾರದ ವಿರುದ್ಧ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಆರೋಪ

**ಬೆಂಗಳೂರು, ಜು.3:** ರಾಮನಗರ ಸೇರಿದಂತೆ ರಾಜ್ಯದ ವಿವಿಧೆಡೆ ರಾಜ್ಯ ಸರಕಾರ ಕೇಂದ್ರೀಯ ಚುನಾವಣಾ ಆಯೋಗದ ಮಾರ್ಗಸೂಚಿಯನ್ನು ಗಾಳಿಗೆ ತೂರಿ ಮತದಾರರ ಪಟ್ಟಿ ತೀವ್ರ ಪರಿಷ್ಕರಣೆ ಪ್ರಕ್ರಿಯೆಯನ್ನು ನಡೆಸುತ್ತಿದ್ದು, ಆಡಳಿತ ಯಂತ್ರವನ್ನು ಸಂಪೂರ್ಣವಾಗಿ ದುರುಪಯೋಗ ಮಾಡಿಕೊಳ್ಳುತ್ತಿದೆ ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ನೇರ ಆರೋಪ ಮಾಡಿದರು. ಅಲ್ಲದೆ, ಕೆಲ ಜಿಲ್ಲೆಗಳ ಜಿಲ್ಲಾಧಿಕಾರಿಗಳು ರಾಜ್ಯ ಸರಕಾರದ ತಾಳಕ್ಕೆ ತಕ್ಕಂತೆ ಕುಣಿಯುತ್ತಿದ್ದಾರೆ ಎಂದು ದೂರಿದ ಸಚಿವರು; ರಾಜ್ಯದಲ್ಲಿ ಇಡೀ ಎಸ್‌ಐಆರ್ ಅಕ್ರಮದ ಮೂಲ ಸೂತ್ರಧಾರಿ ಮುಖ್ಯಮಂತ್ರಿಯೇ ಆಗಿದ್ದಾರೆ ಎಂದು ಆರೋಪಿಸಿದರು.

ಜೆಡಿಎಸ್ ಪಕ್ಷದ ರಾಜ್ಯ ಕಚೇರಿ ಜೆ.ಪಿ.ಭವನದಲ್ಲಿ ತುರ್ತು ಮಾಧ್ಯಮಗೋಷ್ಠಿ ಉದ್ದೇಶಿಸಿ ಮಾತನಾಡಿದ ಕೇಂದ್ರ ಸಚಿವರು; ಬೆಂಗಳೂರು ನಗರದ ಯಶವಂತಪುರ ವಿಧಾನಸಭೆ ಕ್ಷೇತ್ರದಲ್ಲಿ ನಡೆಯುತ್ತಿರುವ ಎಸ್‌ಐಆರ್‌ನ ಅಕ್ರಮ ಪ್ರಕ್ರಿಯೆಯ ವಿಡಿಯೋ ದಾಖಲೆಗಳ ಮಾಹಿತಿ ನೀಡಿ ಅದಕ್ಕೆ ಸಂಬಂಧಿಸಿದ ವಿಡಿಯೋಗಳನ್ನು ಮಾಧ್ಯಮಗಳ ಮುಂದೆ ಪ್ರದರ್ಶಿಸಿದರು.

ರಾಜ್ಯದಲ್ಲಿ ಎಸ್‌ಐಆರ್ ಪ್ರಕ್ರಿಯೆ ಪಾರದರ್ಶಕವಾಗಿ ನಡೆಯುತ್ತಿಲ್ಲ. ಈ ಸರಕಾರವು ಅಧಿಕಾರಿಗಳನ್ನು ಗುಲಾಮರಂತೆ ನಡೆಸಿಕೊಳ್ಳುತ್ತದೆ. ಅವರನ್ನು ಹೆದರಿಸಿ ಬೆದರಿಸಿ ತನಗೆ ಬೇಕಾದ ಹಾಗೆ ಎಸ್‌ಐಆರ್ ಮಾಡಿಸಿಕೊಳ್ಳುತ್ತಿದೆ. ಆದ್ದರಿಂದ ಈ ಕೂಡಲೇ ರಾಜ್ಯದ ಮತದಾರರ ಪಟ್ಟಿಯ ತೀವ್ರ ಪರಿಷ್ಕರಣೆಯ ಪ್ರಕ್ರಿಯೆಯಲ್ಲಿ ಕೇಂದ್ರ ಚುನಾವಣಾ ಆಯೋಗ ಮಧ್ಯಪ್ರವೇಶಿಸಬೇಕು



### ರಾಮನಗರ, ಬೆಂ.ನಗರ ಡಿಸಿಗಳ ವಿರುದ್ಧ ಕಠಿಣ ಕ್ರಮಕ್ಕೆ ಒತ್ತಾಯ

ನಾನು ಕೇಂದ್ರದ ಚುನಾವಣಾ ಆಯೋಗಕ್ಕೆ ಡಿಮಾಂಡ್ ಮಾಡುತ್ತೇನೆ, ರಾಮನಗರದ ಜಿಲ್ಲಾಧಿಕಾರಿ ಹಾಗೂ ಬೆಂಗಳೂರು ನಗರದ ಜಿಲ್ಲಾಧಿಕಾರಿ ಕಠಿಣ ಕ್ರಮ ಆಗಬೇಕು. ಸ್ವತಃ ಕೇಂದ್ರದ ಚುನಾವಣಾ ಆಯುಕ್ತವನ್ನು ಭೇಟಿ ಮಾಡಿ ಮನವಿ ಮಾಡುತ್ತೇನೆ. ರಾಜ್ಯದಲ್ಲಿ ನಡೆದಿರುವ ಎಲ್ಲಾ ಅಕ್ರಮಗಳನ್ನು ಅವರ ಗಮನಕ್ಕೆ ತರುತ್ತೇನೆ. ರಾಜ್ಯದ ಮತದಾರರ ಪಟ್ಟಿಯ ಪಟ್ಟಿಯ ಪರಿಷ್ಕರಣೆಯಿಂದ ಸ್ಥಳೀಯ ಅಧಿಕಾರಿಗಳನ್ನು ಹೊರಗಿಟ್ಟು ಹೊರಗಿನಿಂದ ದಕ್ಷ ಅಧಿಕಾರಿಗಳನ್ನು ನಿಯೋಜಿಸಬೇಕು. ಇಲ್ಲವಾದರೆ ಕಾಂಗ್ರೆಸ್ ಸರ್ಕಾರ ಮನಸ್ಸು ಇಚ್ಚೆ ಈ ಪ್ರಕ್ರಿಯೆಯನ್ನು ದುರ್ಬಳಕೆ ಮಾಡಿಕೊಳ್ಳುತ್ತದೆ ಎಂದು ಎಚ್.ಡಿ. ಕುಮಾರಸ್ವಾಮಿ ದೂರಿದರು.

ಹಾಗೂ ಈವರೆಗೂ ಆಗಿರುವ ಪರಿಷ್ಕರಣೆಯನ್ನು ಸಂಪೂರ್ಣವಾಗಿ ಕೈಬಿಟ್ಟು ಹೊಸದಾಗಿ ಮತದಾರರ ಪಟ್ಟಿ ಪರಿಷ್ಕರಣೆ ನಡೆಸಬೇಕು ಎಂದು ಆಗ್ರಹಿಸಿದರು.

ಯಶವಂತಪುರ ವಿಧಾನಸಭೆ ಕ್ಷೇತ್ರದಲ್ಲಿ ನೇರವಾಗಿ ಕ್ಷೇತ್ರದ ಶಾಸಕರ ಸೂಚನೆಯ ಮೇರೆಗೆ ಅಕ್ರಮವಾಗಿ ಎಸ್‌ಐಆರ್ ಪ್ರಕ್ರಿಯೆ ನಡೆಯುತ್ತಿದೆ. ಕಾಂಗ್ರೆಸ್ ಕಾರ್ಯಕರ್ತರು ಮತ್ತು ಪರಿಷ್ಕರಣೆ ಸಿಬ್ಬಂದಿ ಪರಸ್ಪರ ಶಾಮೀಲಾಗಿ ಪರಿಷ್ಕರಣೆಯನ್ನು ಸಂಪೂರ್ಣವಾಗಿ ತಿರುಚುತ್ತಿದ್ದಾರೆ ಎಂದು ಸಚಿವ ಕುಮಾರಸ್ವಾಮಿ ಗಂಭೀರ ಆರೋಪ ಮಾಡಿದರು. ಈಗ ಯಶವಂತಪುರದಲ್ಲಿ ಶಾಸಕರ ಪುಸ್ತಕಗಳು, ಅವರೇ ಕೊಟ್ಟ ಮತದಾರರ ಪಟ್ಟಿಯನ್ನು ಇಟ್ಟುಕೊಂಡು ಅಧಿಕಾರಿಗಳು ಎಸ್‌ಐಆರ್ ಮಾಡುತ್ತಿದ್ದಾರೆ. ಈ ಸರಕಾರ ಎಲ್ಲಾ ಅಧಿಕಾರಿಗಳಿಗೆ ಹೀಗೆಯೇ ಎಸ್‌ಐಆರ್ ಮಾಡಬೇಕು ಎಂದು ತಯಾರು ಮಾಡಿ ಕಳಿಸಿದ್ದಾರೆ. ಇವತ್ತು ಯಶವಂತಪುರ ಕ್ಷೇತ್ರದಲ್ಲಿ ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆಯನ್ನು ನಿಯಮಗಳಿಗೆ ಶುದ್ಧವಾಗಿ ನಡೆಸುತ್ತಿದ್ದ ಅಧಿಕಾರಿಯನ್ನು ನಮ್ಮ ಕಾರ್ಯಕರ್ತರು ರೆಡ್‌ಹ್ಯಾಂಡ್ ಆಗಿ ಹಿಡಿದಿದ್ದಾರೆ. ಆ ಅಧಿಕಾರಿ ಸ್ಸಾರಿ ಎನ್ನುತ್ತಿದ್ದಾರೆ. ಆಮೇಲೆ ಇನ್ನೊಬ್ಬ ಅಧಿಕಾರಿ ಬಂದು ವಿಡಿಯೋ ಮಾಡಬೇಡಿ ಎಂದು ಹೇಳುತ್ತಾರೆ ಎಂದು ಎಚ್‌ಡಿಕೆ ಹರಿಹಾಯ್ದರು.

# ಮಾರ್ಗಸೂಚಿ ಪ್ರಕಾರವೇ ಎಸ್‌ಐಆರ್ ನಡೆಯಬೇಕು: ನಿಯಮ ಉಲ್ಲಂಘಿಸಿದರೆ ಕಾನೂನುಕ್ರಮ- ಸಚಿವ ಪ್ರಿಯಾಂಕ್ ಖರ್ಗೆ



ಬೆಂಗಳೂರು, ಜು.3: ರಾಮನಗರದ ಕಲ್ಯಾಣ ಮಂಟಪಗಳಲ್ಲಿ ಜನರನ್ನು ಕೂರಿಸಿ ಎಸ್‌ಐಆರ್ ಪ್ರಕ್ರಿಯೆ ನಡೆಸಲಾಗುತ್ತಿದೆ ಎಂಬ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರ ಆರೋಪಕ್ಕೆ ಪ್ರತಿಕ್ರಿಯೆ ನೀಡಿರುವ ಗೃಹ ಸಚಿವ ಪ್ರಿಯಾಂಕ್ ಖರ್ಗೆ, ಇದು ಎಚ್.ಡಿ. ಕುಮಾರಸ್ವಾಮಿ ಮತ್ತು ಡಿ.ಕೆ. ಶಿವಕುಮಾರ್ ನಡುವಿನ ವೈಯಕ್ತಿಕ ಹೋರಾಟವಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಈ ಪ್ರಕ್ರಿಯೆಗೆ ತನ್ನದೇ ಆದ ನಿರ್ದಿಷ್ಟ ನಿಯಮಗಳು ಮತ್ತು ಮಾರ್ಗಸೂಚಿಗಳಿವೆ. ಅಧಿಕಾರಿಗಳು ಅವುಗಳ ಪ್ರಕಾರವೇ ಕಾರ್ಯನಿರ್ವಹಿಸಬೇಕು. ಅದನ್ನು ಬಿಟ್ಟು, ಮನೆ ಮನೆಗೆ ಹೋಗಿ ಮಾಹಿತಿ ಸಂಗ್ರಹಿಸುವ ಬದಲಾಗಿ ಸಮುದಾಯ ಭವನ ಅಥವಾ ಕಲ್ಯಾಣ ಮಂಟಪಗಳಲ್ಲಿ ಪ್ರಕ್ರಿಯೆ ನಡೆಸುತ್ತಿದ್ದರೆ ಅದು ನಿಯಮಗಳ ಉಲ್ಲಂಘನೆಯಾಗುತ್ತದೆ. ಅಂತಹ ಸಂದರ್ಭದಲ್ಲಿ ಕಾನೂನು ಪ್ರಕಾರ ಸೂಕ್ತ ಕ್ರಮ ಕೈಗೊಳ್ಳಬೇಕಾಗುತ್ತದೆ ಎಂದು ತಿಳಿಸಿದ್ದಾರೆ. ಯಾವುದೇ ನಾಗರಿಕನ ಮತದಾನದ ಹಕ್ಕನ್ನು ಕಸಿದುಕೊಳ್ಳುವ ಹಕ್ಕು ಯಾರಿಗೂ ಇಲ್ಲ ಮತ್ತು ಪ್ರತಿಯೊಂದು ಕಾರ್ಯವೂ ಸಂವಿಧಾನಬದ್ಧವಾಗಿಯೇ ನಡೆಯಬೇಕು ಎಂದು ಅವರು ಇದೇ ವೇಳೆ ಒತ್ತಿ ಹೇಳಿದ್ದಾರೆ.

ಮುಖ್ಯಮಂತ್ರಿಗಳು ರಾಜ್ಯದ ಪ್ರತಿ ಬೂತ್‌ಗಳನ್ನು ವೈಯಕ್ತಿಕವಾಗಿ ಹೋಗಿ ಪರಿಶೀಲಿಸಲು ಸಾಧ್ಯವಿಲ್ಲ ಎಂದ ಖರ್ಗೆ, ಸ್ಥಳೀಯ ನಾಯಕರು ಪ್ರಕ್ರಿಯೆಯನ್ನು ತ್ವರಿತವಾಗಿ ಮುಗಿಸುವ ಉದ್ದೇಶದಿಂದ ಈ ರೀತಿ ಮಾಡಿರಬಹುದು. ಚುನಾವಣಾ ಆಯೋಗವು ಖಂಡಿತವಾಗಿಯೂ ಈ ವಿಷಯವನ್ನು ಗಮನಿಸುತ್ತದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಇದೇ ವೇಳೆ ವಿರೋಧ ಪಕ್ಷಗಳ ವಿರುದ್ಧ ವಾಗ್ದಾಳಿ ನಡೆಸಿದ ಪ್ರಿಯಾಂಕ್ ಖರ್ಗೆ, ತಾವು ಈ ಹಿಂದೆ ಚುನಾವಣಾ ಆಯೋಗಕ್ಕೆ ಕೇಳಿದ್ದ 12 ಪ್ರಶ್ನೆಗಳಿಗೆ ಇನ್ನೂ ಉತ್ತರ ಸಿಕ್ಕಿಲ್ಲ, ಆ ಬಗ್ಗೆಯೂ ವಿಪಕ್ಷ ನಾಯಕರು ಸ್ವಲ್ಪ ಮಾತನಾಡಲಿ ಎಂದಿದ್ದಾರೆ.

# ಎಸ್‌ಐಆರ್‌ಗೆ ಸಮಾನಾಂತರವಾಗಿ ರಾಜ್ಯ ಚುನಾವಣಾ ಆಯೋಗದಿಂದ ಮತದಾರರ ಪಟ್ಟಿ ಪರಿಷ್ಕರಣೆ

### ತಕ್ಷಣವೇ ಮಧ್ಯಪ್ರವೇಶಿಸಿ ಗೊಂದಲ ಬಗೆಹರಿಸುವಂತೆ ಸಿಇಸಿ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಆಗ್ರಹ



ಬೆಂಗಳೂರು, ಜು.3: ಕರ್ನಾಟಕದಲ್ಲಿ ನಡೆಯುತ್ತಿರುವ ಎಸ್‌ಐಆರ್ ಪ್ರಕ್ರಿಯೆಯಲ್ಲಿ ಗೊಂದಲ ಉಂಟಾಗಿದ್ದು, ತಕ್ಷಣ ಮಧ್ಯಪ್ರವೇಶ ಮಾಡುವಂತೆ ಕೇಂದ್ರ ಚುನಾವಣಾ ಆಯೋಗಕ್ಕೆ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಪತ್ರ ಬರೆದಿದ್ದಾರೆ.

ಕರ್ನಾಟಕ ರಾಜ್ಯ ಚುನಾವಣಾ ಆಯೋಗವು ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯ ಕೆಲವು ವಿಧಾನಸಭಾ ಕ್ಷೇತ್ರಗಳಲ್ಲಿ ಪ್ರತ್ಯೇಕ ವೇಳಾಪಟ್ಟಿ ಹಾಗೂ ವಿಭಿನ್ನ ಕಟ್-ಆಫ್ ದಿನಾಂಕಗಳನ್ನು ನಿಗದಿಪಡಿಸಿ ಮತ್ತೊಂದು ಸಮಾನಾಂತರ ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆಯನ್ನು ಆರಂಭಿಸಿರುವುದು ಗಮನಕ್ಕೆ ಬಂದಿದೆ. ಇಂತಹ ಸಮಾನಾಂತರ ಪ್ರಕ್ರಿಯೆಯು ಮತದಾರರು, ರಾಜಕೀಯ ಪಕ್ಷಗಳು ಹಾಗೂ ಚುನಾವಣಾ ಅಧಿಕಾರಿಗಳಲ್ಲಿ ಗೊಂದಲವನ್ನುಉಂಟು ಮಾಡುವುದಲ್ಲದೆ, ಚುನಾವಣಾ ಪ್ರಕ್ರಿಯೆಯ ವಿಶ್ವಾಸಾರ್ಹತೆಗೆ ಧಕ್ಕೆಯನ್ನುಂಟು ಮಾಡಬಹುದು ಎಂದು ಎಚ್ಚರಿಸಿದ್ದಾರೆ.

ವಿಧಾನಸಭಾ ಕ್ಷೇತ್ರಗಳ ಮತದಾರರ ಪಟ್ಟಿಯನ್ನು ಸಿದ್ಧಪಡಿಸುವುದು ಅಥವಾ ವಿಶೇಷ ತೀವ್ರ ಪರಿಷ್ಕರಣೆ ನಡೆಸುವ ಸ್ವತಂತ್ರ ಅಧಿಕಾರ ರಾಜ್ಯ ಚುನಾವಣಾ ಆಯೋಗಕ್ಕೆ ಇಲ್ಲ. ಈ ಅಧಿಕಾರ ಸಂಪೂರ್ಣವಾಗಿ ಭಾರತ ಚುನಾವಣಾ ಆಯೋಗದ ವ್ಯಾಪ್ತಿಗೆ ಸೇರಿದೆ. ಆದ್ದರಿಂದ, ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯ ವಿಧಾನಸಭಾ ಕ್ಷೇತ್ರಗಳಲ್ಲಿ ಕರ್ನಾಟಕ ರಾಜ್ಯ ಚುನಾವಣಾ ಆಯೋಗ ಪ್ರಾರಂಭಿಸಿರುವ ಸಮಾನಾಂತರ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆಯು ಸಂವಿಧಾನಾತ್ಮಕ ಹಾಗೂ ಕಾನೂನುಬದ್ಧ ವ್ಯವಸ್ಥೆಗೆ ವಿರುದ್ಧವಾಗಿರುವಂತೆ ಕಂಡುಬರುತ್ತದೆ. ಇದು ಅನಗತ್ಯ ಕೆಲಸದ ಪುನರಾವರ್ತನೆ, ಸಾರ್ವಜನಿಕ ಹಣದ ವ್ಯರ್ಥ ವೆಚ್ಚ, ಆಡಳಿತಾತ್ಮಕ ಗೊಂದಲ ಹಾಗೂ ಮತದಾರರ ಪಟ್ಟಿಯ ವಿಶ್ವಾಸಾರ್ಹತೆಯ ಬಗ್ಗೆ ಅನುಮಾನಗಳನ್ನು ಸೃಷ್ಟಿಸುವ ಸಾಧ್ಯತೆಯಿದೆ ಎಂದು ಶೋಭಾ ಕರಂದ್ಲಾಜೆ ತಿಳಿಸಿದ್ದಾರೆ.

# ಸರ್ಕಾರದಿಂದ ಬಿಎಲ್‌ಓಗಳ ದುರುಪಯೋಗ, ಎಸ್‌ಐಆರ್ ಕಾನೂನುಬಾಹಿರ: ಬಿ.ವೈ. ವಿಜಯೇಂದ್ರ ಕಿಡಿ

**ಬೆಂಗಳೂರು, ಜು.3:** ರಾಜ್ಯ ಸರ್ಕಾರವೇ ವ್ಯವಸ್ಥಿತವಾಗಿ ಷಡ್ಯಂತ್ರ ನಡೆಸಿ ಮಸೀದಿಗಳಲ್ಲಿ ಬೂತ್‌ಮಟ್ಟದ ಅಧಿಕಾರಿ (ಬಿಎಲ್‌ಒ)ಗಳನ್ನು ಕೂರಿಸಿ ಮತದಾರರ ವಿಶೇಷ ಪರಿಷ್ಕರಣೆ ನಡೆಸುತ್ತಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಗಂಭೀರ ಆರೋಪ ಮಾಡಿದ್ದಾರೆ.

ಅಧಿಕಾರಿಗಳ ಮೇಲೆ ಒತ್ತಡ ಹಾಕಿ ಮಸೀದಿಗಳು ಮತ್ತು ಕಲ್ಯಾಣ ಮಂಟಪಗಳಲ್ಲಿ ಅಲ್ಪಸಂಖ್ಯಾತರನ್ನು ಗುಡ್ಡೆ ಹಾಕಿಕೊಂಡು

### ಮುಂಗಾರು ಅಧಿವೇಶನ ಮುಂದೂಡಿಕೆ ಕ್ರಮಕ್ಕೆ ವಿಜಯೇಂದ್ರ ಖಂಡನೆ

ರಾಜ್ಯ ಸರ್ಕಾರ ಮುಂಗಾರು ಅಧಿವೇಶನವನ್ನು ಮುಂದೂಡಿಕೆ ಮಾಡುತ್ತಿರುವ ಕ್ರಮವನ್ನು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಖಂಡಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದ ಬಹುತೇಕ ಜಿಲ್ಲೆಗಳಲ್ಲಿ ಮಳೆ ಅಭಾವ ಉಂಟಾಗಿದೆ. ಇದರಿಂದ ರೈತರು ಕಂಗಾಲಾಗಿದ್ದು, ಅವರ ರಕ್ಷಣೆಗೆ ತೆರಳುವಲ್ಲಿ ರಾಜ್ಯ ಸರ್ಕಾರ ವಿಫಲವಾಗಿದೆ. ಸ್ವತಃ ಮುಖ್ಯಮಂತ್ರಿ ಅವರೇ ರೈತರ ರಕ್ಷಣೆ ಮಾಡುವಲ್ಲಿ ಕೈಚೆಲ್ಲಿದ್ದಾರೆ. ಇದು ಕಾಂಗ್ರೆಸ್ ಸರ್ಕಾರದ ದುಸ್ಥಿತಿಯಾಗಿದೆ ಎಂದು ಆಕ್ಷೇಪ ವ್ಯಕ್ತಪಡಿಸಿದರು. ಅಧಿವೇಶನ ನಡೆಸಲು ಸರ್ಕಾರ ಎಸ್.ಐ.ಆರ್ ನೆಪ ಹೇಳುತ್ತಿದೆ. ಆದರೆ, ವಾಸ್ತವವಾಗಿ ಸರ್ಕಾರಕ್ಕೆ ಅಧಿವೇಶನ ನಡೆಸುವ ಇಚ್ಛೆ ಇಲ್ಲ. ಆಗಸ್ಟ್‌ನಲ್ಲಿ ಮುಂಗಾರು ಅಧಿವೇಶನ ನಡೆಸಲು ಸರ್ಕಾರ ಮುಂದಾಗಿರುವ ಕ್ರಮ ಸರಿಯಲ್ಲ. ಮಳೆಯ ಅಭಾವದ ಕುರಿತು ಚರ್ಚಿಸಲು ಅಧಿವೇಶನವನ್ನು ಆದಷ್ಟು ಶೀಘ್ರ ಕರೆಯಬೇಕೆಂದು ಒತ್ತಾಯಿಸಿದರು.



ಎಸ್‌ಐಆರ್ ನಡೆಸುವಂತೆ ಒತ್ತಡ ಹಾಕಲಾಗುತ್ತಿದೆ. ಪರಿಣಾಮ ಹಿಂದೂಗಳು ಮತದಾನದ ಹಕ್ಕನ್ನು ಕಳೆದುಕೊಳ್ಳುವ ಹಂತಕ್ಕೆ ಬಂದಿದ್ದಾರೆ. ಕೂಡಲೇ ಚುನಾವಣಾ ಆಯೋಗ ಸರಿಪಡಿಸಬೇಕೆಂದು ಒತ್ತಾಯಿಸಿದರು.

ಪಕ್ಷದ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿದ ಅವರು, ಬಿಎಲ್‌ಓಗಳು ಕಾಂಗ್ರೆಸ್ ಪಕ್ಷದ ಪರ ಪ್ರಚಾರ ಮಾಡುತ್ತಿದ್ದಾರೆ. ಇದು ಎಸ್‌ಐಆರ್ ಉದ್ದೇಶವನ್ನು ಹಾಳು ಮಾಡುವುದೇ ಆಗಿದೆ. ಕಾಂಗ್ರೆಸ್ ಪಕ್ಷಕ್ಕೆ ಇಬ್ಬಿಬ್ಬರು ಬಿಎಲ್‌ಓಗಳನ್ನು ಏಕೆ ಕೊಟ್ಟಿದ್ದಾರೆ ಎಂದು ಪ್ರಶ್ನಿಸಿದರು. ಕಾಂಗ್ರೆಸ್ ಪಕ್ಷದವರು ಬಿಎಲ್‌ಓಗಳನ್ನು ದುರುಪಯೋಗಪಡಿಸಿಕೊಳ್ಳುತ್ತಿರುವುದಕ್ಕೆ ಕೇಂದ್ರ ಸಚಿವ ಕುಮಾರಸ್ವಾಮಿ ಅವರು ವಿಡಿಯೋಗಳನ್ನು ಬಿಡುಗಡೆ ಮಾಡಿದ್ದಾರೆ. ಮಸೀದಿ, ಕಲ್ಯಾಣ ಮಂಟಪಗಳಲ್ಲಿ ನಮ ಹಿಂದೂಗಳು ಒಳಗೆ ಹೋಗದೆ ದೂರ ಉಳಿಯುತ್ತಿದ್ದಾರೆ. ಚುನಾವಣಾ ಆಯೋಗ ಕೂಡಲೇ ಸರಿಪಡಿಸಬೇಕು. ಇಲ್ಲದಿದ್ದರೆ ಕಾನೂನು ಹೋರಾಟ ಮಾಡಬೇಕಾಗುತ್ತದೆ ಎಂದು ಎಚ್ಚರಿಸಿದರು.

ಈಗಾಗಲೇ ನಾವು ಇದಕ್ಕೆ ಸಂಬಂಧಿಸಿದಂತೆ ಆಯೋಗಕ್ಕೆ ದೂರು ನೀಡಿದ್ದೇವೆ. ನಿಜವಾದ ಮತದಾರರು ಪಟ್ಟಿಗೆ ಸೇರ್ಪಡೆಯಾದರೆ ಅಭ್ಯಂತರವಿಲ್ಲ. ಆದರೆ ಅಕ್ರಮವಾಗಿ ಬಂದಿರುವ ವಲಸಿಗರು ಪಟ್ಟಿಗೆ ಸೇರ್ಪಡೆಯಾಗುವುದು ಎಷ್ಟರಮಟ್ಟಿಗೆ ಸರಿ ಎಂದು ಪ್ರಶ್ನೆ ಮಾಡಿದರು.

### ರೈತರ ಆತ್ಮಸ್ಥೈರ್ಯ ಕುಗ್ಗಿಸುವ ಕೆಲಸ

ರಾಜ್ಯದ ಮುಖ್ಯಮಂತ್ರಿಗಳು ಸಂಕಷ್ಟದ ಸಮಯದಲ್ಲಿ ಜವಾಬ್ದಾರಿಯುತವಾಗಿ ಮಾತನಾಡಬೇಕು. ರೈತರಿಗೆ ಧೈರ್ಯ ತುಂಬುವ ಬದಲು, ಬಿತ್ತನೆ ಮಾಡಬೇಡಿ ಎನ್ನುವ ಮೂಲಕ ಅನ್ನದಾತರ ಆತಸ್ಥೈರ್ಯ ಕುಗ್ಗಿಸುವ ಕೆಲಸ ಮಾಡುತ್ತಿದ್ದಾರೆ ಎಂದು ವಿಜಯೇಂದ್ರ ಕಿಡಿಕಾರಿದ್ದಾರೆ. ಮುಂದಿನ ದಿನಗಳಲ್ಲಿ ಉತ್ತಮ ಮಳೆಯಾಗುವ ನಿರೀಕ್ಷೆಯಿರುವಾಗ, ಸಿಎಂ ಈ ಹೇಳಿಕೆ ರೈತರಲ್ಲಿ ಗೊಂದಲ ಮೂಡಿಸಿದೆ. ಒಂದು ವೇಳೆ ಮುಂಬರುವ ದಿನಗಳಲ್ಲಿ ಮಳೆಯಾಗಿ ಬೆಳೆ ಬಂದರೆ, ಅದಕ್ಕೆ ಸರ್ಕಾರದ ನಿಲುವು ಹೊಣೆಯೇ ಎಂದು ಪ್ರಶ್ನಿಸಿದ್ದಾರೆ.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

ಜುಲೈ 04 2026, ಶನಿವಾರ

## ಒಳಪುಟಗಳಲ್ಲಿ

ಕೊಡಗಿನ ರೆಸಾರ್ಟ್‌ನಲ್ಲಿ ಅತಿಥಿ ಮಹಿಳೆ ದಾಖಲಿಸಿದ್ದ ಪರಿಶಿಷ್ಟರ ದೌರ್ಜನ್ಯ ಕಾಯ್ದೆ ದೂರಿಗೆ ಹೈಕೋರ್ಟ್ ತಡೆ - ಪು.6

'ಸಂಗೀತ ಸ್ವರ ಸಂಗಮ' ಕಾರ್ಯಕ್ರಮಕ್ಕೆ ಚಾಲನೆ

ಸಂಗೀತ-ಸಾಹಿತ್ಯ ಮಾನಸಿಕ ನೆಮ್ಮದಿಗೆ ಪೂರಕ : ನೀಲಕಂಠರಾವ್ ಮೂಲಗೆ - ಪು.7

# ಬಿಸಿಗಾಳಿ: ಜೂನ್ ಕೊನೇ ವಾರದಲ್ಲಿ ಫ್ರಾನ್ಸ್‌ನಲ್ಲಿ 2000ಕ್ಕೂ ಹೆಚ್ಚು ಸಾವು

## ಫ್ರಾನ್ಸ್‌ನ ಆರೋಗ್ಯ ಇಲಾಖೆ ಮಾಹಿತಿ ಯುರೋಪ್ ಅನ್ನು ಸುಡುತ್ತಿದೆ ಅಪಾಯಕಾರಿ ಬಿಸಿಗಾಳಿ

**ಪ್ಯಾರಿಸ್, ಜು.3: ಯುರೋಪ್‌ನಾದ್ಯಂತ ಬಿಸಿಗಾಳಿ (ಹೀಟ್‌ವೇವ್) ಬೀಸುತ್ತಿರುವುದರಿಂದ ಜೂನ್ ಕೊನೆಯ ವಾರದಲ್ಲಿ ಫ್ರಾನ್ಸ್‌ನಲ್ಲಿ 2,000ಕ್ಕೂ ಹೆಚ್ಚು ಸಾವಿನ ವರದಿಯಾಗಿದೆ. ಮುಂದಿನ ದಿನಗಳಲ್ಲಿ ಯುರೋಪ್‌ನ ಬಹುತೇಕ ಭಾಗಗಳಲ್ಲಿ ಮತ್ತೊಂದು ಸುತ್ತಿನ ತಾಪಮಾನ ದಾಖಲಾಗಲಿದೆ ಎಂದು ಫ್ರಾನ್ಸ್‌ನ ಆರೋಗ್ಯ ಇಲಾಖೆ ಅಧಿಕಾರಿಗಳು ಎಚ್ಚರಿಕೆ ನೀಡಿದ್ದಾರೆ.**

ಈ ಬಗ್ಗೆ ಮಾತನಾಡಿರುವ ಫ್ರಾನ್ಸ್‌ನ ಆರೋಗ್ಯ ಸಚಿವೆ ಸ್ಟೆಫನಿ ರಿಸ್ಟ್, ಫ್ರೆಂಚ್ ಆರೋಗ್ಯ ಅಧಿಕಾರಿಗಳ ಪ್ರಕಾರ, ಹಿಂದಿನ ವಾರಕ್ಕೆ ಹೋಲಿಸಿದರೆ ಜೂನ್ 22–28ರ ನಡುವೆ ಸಾವಿನ ಸಂಖ್ಯೆ ಶೇಕಡಾ 29 ರಷ್ಟು ಹೆಚ್ಚಾಗಿದೆ. ಮೃತಪಟ್ಟವರಲ್ಲಿ 45 ವರ್ಷ ಮೇಲ್ಪಟ್ಟವರ ಸಂಖ್ಯೆ ಗಣನೀಯವಾಗಿ ಏರಿಕೆಯಾಗಿದೆ ಎಂದು ಹೇಳಿದ್ದಾರೆ.

ಜೂನ್ 24ರಂದು ಫ್ರಾನ್ಸ್ ದೇಶದಾದ್ಯಂತ ಸರಾಸರಿ ತಾಪಮಾನದ ದೃಷ್ಟಿಯಿಂದ ಅತ್ಯಂತ ಬಿಸಿಯಾದ ದಿನವನ್ನು ದಾಖಲಿಸಿದ ಹಿನ್ನೆಲೆಯಲ್ಲಿ ಈ ಸಾವಿನ ಸಂಖ್ಯೆ ಹೆಚ್ಚಾಗಿದೆ. ಪ್ಯಾರಿಸ್‌ನಲ್ಲಿ ತಾಪಮಾನವು ಸುಮಾರು 41ಡಿ.ಸೆ. ತಲುಪಿತ್ತು, ಹಾಗೆಯೇ ದೇಶದ ಅರ್ಧದಷ್ಟು ಭಾಗದಲ್ಲಿ 'ರೆಡ್ ಹೀಟ್ ಅಲರ್ಟ್' ಘೋಷಿಸಲಾಗಿತ್ತು ಎಂದಿದ್ದಾರೆ.

ಫ್ರಾನ್ಸ್‌ನ ಸಾರ್ವಜನಿಕ ಆರೋಗ್ಯ ಸಂಸ್ಥೆಯು ಆ ವಾರದಲ್ಲಿ 2,025 ಹೆಚ್ಚುವರಿ ಸಾವುಗಳನ್ನು ಸಂಭವಿಸಿದೆ ಎಂದು ವರದಿ ಮಾಡಿದೆ. ಪ್ಯಾರಿಸ್ ನಗರ ಪ್ರದೇಶ ಒಂದರಲ್ಲೇ ಸಾವಿನ ಪ್ರಮಾಣ ಶೇ.62ರಷ್ಟು ಹೆಚ್ಚಿದೆ. ಆರಂಭಿಕ ಅಂಕಿ–ಅಂಶಗಳು ಅಂತಿಮ ಸಾವಿನ ಸಂಖ್ಯೆಗಿಂತ ಕಡಿಮೆ ಇರಬಹುದು ಎಂದು ಅಧಿಕಾರಿಗಳು ಎಚ್ಚರಿಸಿದ್ದಾರೆ.

ಬಿಸಿಗಾಳಿಯ ಕಾರಣದಿಂದಾಗಿ ತೀವ್ರ ತಾಪಮಾನದಿಂದ ಮುಕ್ತಿ ಪಡೆಯಲು ಜನರು ಜಲಮೂಲಗಳತ್ತ ಧಾವಿಸಿದ್ದರಿಂದ ಜೂನ್ 18ರಿಂದೀಚೆಗೆ 72 ಜನರು ನೀರಿನಲ್ಲಿ ಮುಳುಗಿ ಸಾವನ್ನಪ್ಪಿದ್ದಾರೆ ಎಂದು ಆಂತರಿಕ ಸಚಿವ ಲಾರೆಂಟ್ ನುನೆಜ್ ತಿಳಿಸಿದ್ದಾರೆ.

ಮತ್ತೊಂದು ಅವಧಿಯ ತೀವ್ರ ಬಿಸಿಲು ತಲೆದೂರುತ್ತಿದೆ ಎಂದು ಹವಾಮಾನ ತಜ್ಞರು ಈಗ ಎಚ್ಚರಿಸುತ್ತಿದ್ದಾರೆ. ಅಜೋರ್ಸ್‌ನಿಂದ ಐಬೇರಿಯನ್ ಪರ್ಯಾಯ ದ್ವೀಪದ ಕಡೆಗೆ ನಿರ್ಮಾಣವಾಗುತ್ತಿರುವ ದೊಡ್ಡ ಅಧಿಕ–ಒತ್ತಡದ ವ್ಯವಸ್ಥೆಯು ವಾರಾಂತ್ಯದಲ್ಲಿ ಸ್ಪೇನ್, ಪೋರ್ಚುಗಲ್, ಫ್ರಾನ್ಸ್ ಮತ್ತು ದಕ್ಷಿಣ ಬ್ರಿಟನ್‌ನ ಕೆಲವು ಭಾಗಗಳಲ್ಲಿ ತಾಪಮಾನವನ್ನು ಮತ್ತಷ್ಟು ಹೆಚ್ಚಿಸುವ ನಿರೀಕ್ಷೆಯಿದೆ. ದಕ್ಷಿಣ ಫ್ರಾನ್ಸ್‌ನಲ್ಲಿ ತಾಪಮಾನವು ಮತ್ತೆ 40ಡಿ.ಸೆ. ತಲುಪುವ ನಿರೀಕ್ಷೆಯಿದ್ದು, ಬೋರ್ಡೆಕ್ಸ್, ಟೌಲೌಸ್ ಮತ್ತು ಅಜೆನ್ ಸೇರಿದಂತೆ ಪ್ರಮುಖ ನಗರಗಳಲ್ಲಿ 36 ಡಿ.ಸೆ.ನಿಂದ 37ಡಿ.ಸೆ. ವರೆಗೆ ತಾಪಮಾನ ದಾಖಲಾಗುವ ಮುನ್ಸೂಚನೆ ಇದೆ.

**ಬೆಲ್ಜಿಯಂ:** ಬೆಲ್ಜಿಯಂ ಇದೇ ಅವಧಿಯಲ್ಲಿ 1,222 ಹೆಚ್ಚುವರಿ ಸಾವುಗಳನ್ನು ದಾಖಲಿಸಿದೆ, ಇದು ಸಾಮಾನ್ಯ ಮಟ್ಟಕ್ಕಿಂತ ಸುಮಾರು ಶೇಕಡಾ 39 ರಷ್ಟು ಹೆಚ್ಚಾಗಿದೆ. ಇದರಲ್ಲಿ ಅರ್ಧದಷ್ಟು ಸಾವುಗಳು 85 ಮತ್ತು ಅದಕ್ಕಿಂತ ಹೆಚ್ಚಿನ ವಯಸ್ಸಿನವರಲ್ಲಿ ಸಂಭವಿಸಿವೆ. ಬಿಸಿಗಾಳಿಯ ಸಮಯದಲ್ಲಿ ಈ ರೀತಿಯ ಸಾವಿನ ಪ್ರಮಾಣವು ಅಭೂತಪೂರ್ವವಾಗಿದೆ ಎಂದು ಅಲ್ಲಿನ ಆರೋಗ್ಯ ಅಧಿಕಾರಿಗಳು ಬಣ್ಣಿಸಿದ್ದಾರೆ.

**ನೆದರ್‌ಲ್ಯಾಂಡ್ಸ್:** ನೆದರ್‌ಲ್ಯಾಂಡ್ಸ್‌ನಲ್ಲಿ ಕಳೆದ ವಾರ ಸುಮಾರು 480 ಹೆಚ್ಚುವರಿ ಸಾವುಗಳು ವರದಿಯಾಗಿದ್ದು, ಇದರಲ್ಲಿ ಹೆಚ್ಚಿನವರು 80 ವರ್ಷ ಮೇಲ್ಪಟ್ಟವರಾಗಿದ್ದಾರೆ. ಕೆಲವು ಪ್ರದೇಶಗಳಲ್ಲಿ ತಾಪಮಾನವು 40ಡಿ.ಸೆ. ತಲುಪಿದ್ದು, ದೇಶದ ದಕ್ಷಿಣ ಮತ್ತು ಪೂರ್ವ ಭಾಗಗಳಲ್ಲಿ ಹೆಚ್ಚಿನ ಸಾವುಗಳು ಸಂಭವಿಸಿವೆ.

**ಪೋರ್ಚುಗಲ್:** ಪೋರ್ಚುಗಲ್ ಕೆಲವು ಪ್ರದೇಶಗಳಲ್ಲಿ ತಾಪಮಾನವು 40ಡಿ.ಸೆ.ಗಿಂತ ಹೆಚ್ಚಾಗುವ ಮತ್ತು ರಾತ್ರಿಯ ತಾಪಮಾನವು 25ಡಿ.ಸೆ.ಗಿಂತ ಹೆಚ್ಚಿರುತ್ತದೆ ಎಂಬ ಮುನ್ಸೂಚನೆಗಳ ನಡುವೆ ಮಂಗಳವಾರದವರೆಗೆ ದೇಶಾದ್ಯಂತ ತುರ್ತು ಪರಿಸ್ಥಿತಿಯನ್ನು ಘೋಷಿಸಿದೆ.

ಸ್ಪೇನ್‌ನ ಹವಾಮಾನ ಸಂಸ್ಥೆಯಾದ 'ಅಯೆಮೆಟ್' ಸಹ ಹೊಸ ಬಿಸಿಗಾಳಿ ಉಂಟಾಗುವ ಸಾಧ್ಯತೆಯಿದೆ ಎಂದು ಎಚ್ಚರಿಸಿದೆ. ನೈಋತ್ಯದ ಕೆಲವು ಭಾಗಗಳಲ್ಲಿ ಈಗಾಗಲೇ 'ಆರೆಂಜ್–ಲೆವೆಲ್' ಅಲರ್ಟ್ ಘೋಷಿಸಲಾಗಿದೆ.

# 15ನೇ ಹಣಕಾಸು ಆಯೋಗ ಬಾಕಿ 2186 ಕೋಟಿ ತಕ್ಷಣ ಬಿಡುಗಡೆ ಮಾಡಿ

## ಪಂಚಾಯತ್‌ರಾಜ್ ಸಚಿವರ ರಾಷ್ಟ್ರೀಯ ಸಮ್ಮೇಳನದಲ್ಲಿ ಈಶ್ವರ್ ಖಂಡ್ರೆ ಒತ್ತಾಯ

## 16ನೇ ಹಣಕಾಸು ಆಯೋಗದ ಶಿಫಾರಸುಗಳು, ಅನುದಾನದ ಬಗ್ಗೆಯೂ ಚರ್ಚೆ

**ನವದೆಹಲಿ, ಜು.3:** ರಾಜ್ಯಕ್ಕೆ 15ನೇ ಹಣಕಾಸು ಆಯೋಗದ ಶಿಫಾರಸಿನಂತೆ 2025–26ನೇ ಸಾಲಿನಲ್ಲಿ ಬಾಕಿ ಇರುವ 2186 ಕೋಟಿ ರೂ.ಗಳನ್ನು ಕೂಡಲೇ ಬಿಡುಗಡೆ ಮಾಡುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವ ಈಶ್ವರ ಖಂಡ್ರೆ ಒತ್ತಾಯಿಸಿದ್ದಾರೆ.

ನವದೆಹಲಿಯಲ್ಲಿ ನಡೆದ 16ನೇ ಹಣಕಾಸು ಆಯೋಗದ ಶಿಫಾರಸು, ಕಾರ್ಯಾಚರಣೆ ಮಾರ್ಗಸೂಚಿ, ಅನುದಾನ ಬಿಡುಗಡೆ ಪ್ರಕ್ರಿಯೆ, ಅನುಸರಣೆ ಷರತ್ತು, ಪ್ರಮುಖ ಸವಾಲುಗಳು ಮತ್ತು ಅವುಗಳಿಗೆ ಪರಿಹಾರ ಕುರಿತಂತೆ ಕೇಂದ್ರ ಪಂಚಾಯತ್ ರಾಜ್ ಸಚಿವ ರಾಜೀವ್ ರಂಜನ್ ಸಿಂಗ್ ಅಧ್ಯಕ್ಷತೆಯಲ್ಲಿ ನಡೆದ ರಾಷ್ಟ್ರೀಯ ಸಮಾವೇಶದಲ್ಲಿ ಅವರು ಈ ಒತ್ತಾಯ ಮಾಡಿದರು.

ತತ್ಸಂಬಂಧ ಕೇಂದ್ರ ಪಂಚಾಯತ್ ರಾಜ್ ಇಲಾಖೆ ಎತ್ತಿದ್ದ ಎಲ್ಲಾ ಪ್ರಶ್ನೆಗಳಿಗೆ ರಾಜ್ಯ ಪ್ರತಿಕ್ರಿಯಿಸಿದೆ ಮತ್ತು ನಿರಂತರ ಅನುಸರಣೆ ಮಾಡಿದೆ. ಆದಾಗ್ಯೂ, 2025–26ರ ಸಾಲಿನ ಅನುದಾನವನ್ನು ಕರ್ನಾಟಕದ ಗ್ರಾಮ ಪಂಚಾಯಿತಿಗಳಿಗೆ ಬಿಡುಗಡೆ ಮಾಡಲಾಗಿಲ್ಲ ಎಂದು ತಿಳಿಸಿದರು.

ವಿನಾಕಾರಣ ಹಣ ಬಿಡುಗಡೆ ವಿಳಂಬ ಮಾಡುವುದರಿಂದ ರಾಜ್ಯದ ಅಭಿವೃದ್ಧಿಯ ಮೇಲಾಗುವ ದುಷ್ಪರಿಣಾಮಗಳನ್ನು ವಿವರಿಸಿದ ಅವರು, 15ನೇ ಹಣಕಾಸು ಆಯೋಗದ ಶಿಫಾರಸಿನಂತೆ ರಾಜ್ಯದ ಗ್ರಾಮ ಪಂಚಾಯತಿಗಳಿಗೆ ಹಂಚಿಕೆಯಾದ 13392 ಕೋಟಿ ರೂ. ಪೈಕಿ ರಾಜ್ಯ ಸರ್ಕಾರ 2021–22 ರಿಂದ 2025–26ರ 4 ವರ್ಷದ ಅವಧಿಯಲ್ಲಿ 11,068 ಕೋಟಿ ರೂ. ಮಾತ್ರ ರಾಜ್ಯಕ್ಕೆ ಬಂದಿದ್ದು, ಅದನ್ನು ಸಂಬಂಧಿತ ಪಂಚಾಯ್ತಿಗಳಿಗೆ ವರ್ಗಾಯಿಸಲಾಗಿದೆ, ಇನ್ನೂ 2186.20 ಕೋಟಿ ರೂ. ರಾಜ್ಯಕ್ಕೆ ಬರಬೇಕಾದ ಬಾಕಿ ಇದೆ ಎಂದು ವಿವರಿಸಿದರು.

ಗ್ರಾಮೀಣ ಸ್ಥಳೀಯ ಸಂಸ್ಥೆ ಅನುದಾನಗಳಿಗೆ ಸಂಬಂಧಿಸಿದ 15ನೇ ಹಣಕಾಸು ಆಯೋಗದ ಶಿಫಾರಸುಗಳನ್ನು ಅನುಷ್ಠಾನಗೊಳಿಸಲು ಕಾರ್ಯಾಚರಣಾ ಮಾರ್ಗಸೂಚಿಗಳ ಪ್ಯಾರಾ 5(ಎ) ಅಡಿಯಲ್ಲಿ ನಿಗದಿಪಡಿಸಲಾದ ಎಲ್ಲಾ ನಿಗದಿತ ಷರತ್ತುಗಳನ್ನು ಕರ್ನಾಟಕ ರಾಜ್ಯವು ಪಾಲಿಸಿದೆ ಎಂದೂ ಈಶ್ವರ ಖಂಡ್ರೆ ತಿಳಿಸಿದರು.

ರಾಜ್ಯವು 2024–25ರ ಆರ್ಥಿಕ ವರ್ಷಕ್ಕೆ ಅನುದಾನ ವರ್ಗಾವಣೆ ಪ್ರಮಾಣಪತ್ರಗಳನ್ನು (ಜಿಟಿಸಿ) 08.07.2025 ಮತ್ತು 24.09.2025 ರಂದು ಒದಗಿಸಿದೆ. ಅಲ್ಲದೆ, ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳು ಆಗಸ್ಟ್ 2025 ರೊಳಗೆ ಗ್ರಾಮ ಪಂಚಾಯಿತಿ ಅಭಿವೃದ್ಧಿ ಯೋಜನೆಗಳನ್ನು (ಜಿಪಿಡಿಪಿ) ಅಪ್‌ಲೋಡ್ ಮಾಡುವುದನ್ನು ಪೂರ್ಣಗೊಳಿಸಿವೆ ಎಂಬ ಅಂಶವನ್ನೂ ಅವರು ಸಭೆಯ ಗಮನಕ್ಕೆ ತಂದರು.

ಈ ಬಾರಿ ಎಲ್‌ನಿನೋ ಪ್ರಭಾವದಿಂದ ಕರ್ನಾಟಕ ರಾಜ್ಯವು ಮಳೆಯ ಕೊರತೆ ಎದುರಿಸುತ್ತಿದೆ. ಗ್ರಾಮೀಣ ಜನರಿಗೆ ನೀರು ಪೂರೈಕೆ ನಮ್ಮ ಆದ್ಯತೆಯಾಗಿದೆ. ಗ್ರಾಮ ಪಂಚಾಯಿತಿಗಳಿಗೆ ಸಕಾಲದಲ್ಲಿ ಹಣ ಬಿಡುಗಡೆ ಮಾಡದಿದ್ದರೆ ಕುಡಿಯುವ ನೀರು ಪೂರೈಕೆಗೂ ತೊಡಕಾಗುತ್ತದೆ. ಕೂಡಲೇ, ಕರ್ನಾಟಕದ ಗ್ರಾಮ ಪಂಚಾಯಿತಿಗಳಿಗೆ ಬಾಕಿ ಇರುವ 2186.20 ಕೋಟಿ ರೂ. ಬಿಡುಗಡೆ ಮಾಡುವಂತೆ ಆಗ್ರಹಿಸಿದರು.

**16ನೇ ಹಣಕಾಸು ಆಯೋಗ ಶಿಫಾರಸಿನಲ್ಲಿ ರಾಜ್ಯ ಪಂಚಾಯತಿಗಳಿಗೆ 18,889 ಕೋಟಿ ರೂ.:** ಇನ್ನು 16ನೇ ಹಣಕಾಸು ಆಯೋಗದ ಶಿಫಾರಸಿನಂತೆ ಗ್ರಾಮೀಣ ಸ್ಥಳೀಯ ಸಂಸ್ಥೆಗಳಿಗೆ 15,111ಕೋಟಿ ರೂ. ಮೂಲ ಅನುದಾನ, 3,778 ಕೋಟಿ ಕಾರ್ಯ ಸಾಮರ್ಥ್ಯ ಅನುದಾನ ಸೇರಿ 18,889 ಕೋಟಿ ರೂ. ಮುಂದಿನ 5 ವರ್ಷಗಳಿಗೆ ಹಂಚಿಕೆ ಆಗಿದೆ. ರಾಜ್ಯದ ಪಂಚಾಯ್ತಿಗಳು ಗ್ರಾಮೀಣ ಆಸ್ತಿಗಳಿಂದ ಶೇ.80ರಷ್ಟು ತೆರಿಗೆ ಸಂಗ್ರಹ ಗುರಿ ಸಾಧಿಸಿವೆ ಎಂದೂ ತಿಳಿಸಿದರು.

### ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಸಿದ್ಧತೆ




**ರಾಜ್ಯದಲ್ಲಿ ಬಹುತೇಕ ಗ್ರಾಮ ಪಂಚಾಯ್ತಿಗಳ ಅವಧಿ ಮಾರ್ಚ್ ನಲ್ಲಿ ಮುಗಿದಿದ್ದು, ಪಂಚಾಯ್ತಿಗಳ ಚುನಾವಣೆ ನಡೆಸಲು ತಕ್ಷಣವೇ ಸರ್ಕಾರ ಕ್ರಮ ವಹಿಸಿದೆ. ಕ್ಷೇತ್ರ ಪುನರ್ ವಿಂಗಡಣೆ, ಕ್ಷೇತ್ರ ಮೀಸಲು ಪ್ರಕ್ರಿಯೆ ಪ್ರಗತಿಯಲ್ಲಿದ್ದು, ಮುಂದಿನ ತಿಂಗಳು ಪೂರ್ಣಗೊಳ್ಳಲಿದೆ. ಹೀಗಾಗಿ ಮುಂದಿನ 2 ತಿಂಗಳುಗಳಲ್ಲಿ ಪಂಚಾಯ್ತಿಗಳ ಚುನಾವಣೆ ನಡೆಯಲಿದೆ. ತಾಂತ್ರಿಕ ಕಾರಣದಿಂದ ಚುನಾವಣೆ ವಿಳಂಬವಾಗಿದೆ. ಪಂಚಾಯತಿಗಳು ರಾಜ್ಯದಲ್ಲಿ ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿವೆ. ಸಣ್ಣಪುಟ್ಟ ಲೋಪಗಳನ್ನು ಬದಿಗಿಟ್ಟು, 15ನೇ ಹಣಕಾಸು ಆಯೋಗದ ಶಿಫಾರಸಿನಂತೆ ಬಾಕಿ ಇರುವ ಹಣವನ್ನು ಬಿಡುಗಡೆ ಮಾಡಬೇಕು ಎಂದು ಮನವಿ ಮಾಡಿದರು.**

# ಎಸ್‌ಐಆರ್‌ನಲ್ಲಿ ಭಾರಿ ಅಕ್ರಮ: ಪ್ರಲ್ಹಾದ ಜೋಶಿ ಆರೋಪ



■ ಪ್ರಜಾಪ್ರಭುತ್ವದ ಮೂಲ ಆಶಯಗಳಿಗೆ ಬಗೆದ ದ್ರೋಹ, ಸಮಗ್ರ ತನಿಖೆಗೆ ಆಗ್ರಹ

**ನವದೆಹಲಿ, ಜು.3:** ಕರ್ನಾಟಕದಲ್ಲಿ ಎಸ್‌ಐಆರ್ ಪ್ರಕ್ರಿಯೆ ಆರಂಭವಾಗಿದ್ದು, ಕೇಂದ್ರ ಚುನಾವಣಾ ಆಯೋಗ ನಿಗದಿಪಡಿಸಿರುವ ವಿಶೇಷ ನಿಯಮಾವಳಿ ಹಾಗೂ ಮಾರ್ಗ ಸೂಚಿಗಳನ್ನು ಸಂಪೂರ್ಣವಾಗಿ ಗಾಳಿಗೆ ತೂರಿ ಈ ಪರಿಷ್ಕರಣೆ ಪ್ರಕ್ರಿಯೆ ನಡೆಸಲಾಗಿದೆ. ಸ್ಥಳೀಯ ಬೂತ್ ಮಟ್ಟದ ಅಧಿಕಾರಿಗಳನ್ನು (ಬಿಎಲ್‌ಓ) ರಾಜಕೀಯವಾಗಿ ದುರುಪಯೋಗಪಡಿಸಿಕೊಂಡಿದ್ದು ಈ ಇಡೀ ಪ್ರಕ್ರಿಯೆಯೇ ಕಾನೂನುಬಾಹಿರ ಮತ್ತು ನಿಯಮಬಾಹಿರವಾಗಿದೆ. ಇದು ಪ್ರಜಾಪ್ರಭುತ್ವದ ಮೂಲ ಆಶಯಗಳಿಗೆ ಬಗೆದ ದ್ರೋಹವಾಗಿದ್ದು, ಈ ಬಗ್ಗೆ ಸಮಗ್ರ ತನಿಖೆಯಾಗಬೇಕು ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಒತ್ತಾಯಿಸಿದ್ದಾರೆ.


ಈ ಬಗ್ಗೆ ಮಾತನಾಡಿದ ಅವರು, ರಾಮನಗರ ಜಿಲ್ಲೆಯಲ್ಲಿ ನಡೆದ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಭಾರೀ ಪ್ರಮಾಣದ ಅಕ್ರಮಗಳು ನಡೆದಿವೆ ಎಂದು ಆರೋಪ ಮಾಡಿದ್ದಾರೆ. ಸ್ವತಂತ್ರವಾಗಿ ನಡೆಯಬೇಕಾದ ಸಾಂವಿಧಾನಿಕ ಪ್ರಕ್ರಿಯೆಯಲ್ಲಿ ರಾಜ್ಯದ ಕಾಂಗ್ರೆಸ್ ಸರ್ಕಾರ ನೇರವಾಗಿ ಹಸ್ತಕ್ಷೇಪ ಮಾಡಿದೆ ಎಂದು ಜೋಶಿ ದೂರಿದ್ದಾರೆ. ಕೇವಲ ರಾಜಕೀಯ ಲಾಭಕ್ಕಾಗಿ, ಮತದಾರರ ಪಟ್ಟಿಯನ್ನು ತಮಗೆ ಅನುಕೂಲವಾಗುವಂತೆ ತಿರುಚಲು ಸರ್ಕಾರದ ಉನ್ನತ ಮಟ್ಟದಿಂದಲೇ ವ್ಯವಸ್ಥಿತವಾಗಿ ಸಂಚು ರೂಪಿಸಲಾಗಿದೆ.

ಈ ಪರಿಷ್ಕರಣೆಯು ರಾಜಕೀಯ ಪ್ರಭಾವದಿಂದ ಕೂಡಿದ್ದು, ಸ್ಥಳೀಯ ಆಡಳಿತದ ಮೇಲೆ ತೀವ್ರ ಒತ್ತಡ ಹೇರಲಾಗಿದೆ ಎಂದು ಕಳವಳ ವ್ಯಕ್ತಪಡಿಸಿದ್ದಾರೆ.

ಸಾಮಾನ್ಯ ಮತದಾರರ ಧ್ವನಿಯನ್ನು ಹತ್ತಿಕ್ಕಲು ನಡೆಸಿರುವ ಈ ಬೃಹತ್ ಹಗರಣದ ಹಿಂದೆ ಯಾರ ಹಿತಾಸಕ್ತಿಗಳು ಅಡಗಿವೆ ಎಂಬುದನ್ನು ಪತ್ತೆ ಹಚ್ಚಬೇಕಿದೆ. ಸಾಂವಿಧಾನಿಕ ವ್ಯವಸ್ಥೆಯ ಹಸ್ತಕ್ಷೇಪವು ಚುನಾವಣಾ ಪ್ರಕ್ರಿಯೆಯ ವಿಶ್ವಾಸಾರ್ಹತೆ ಮತ್ತು ಪಾವಿತ್ರ್ಯಕ್ಕೆ ಧಕ್ಕೆ ತರುತ್ತದೆ. ಹೀಗಾಗಿ, ತಕ್ಷಣವೇ ನಿಷ್ಪಕ್ಷಪಾತ, ಸಮಗ್ರ ಹಾಗೂ ಪಾರದರ್ಶಕ ತನಿಖೆ ನಡೆಸಿ ಸತ್ಯಾಂಶವನ್ನು ಬಹಿರಂಗಪಡಿಸಬೇಕು ಎಂದು ಪ್ರಲ್ಹಾದ ಜೋಶಿ ಆಗ್ರಹಿಸಿದ್ದಾರೆ.

# ರಾಮಮಂದಿರಕ್ಕೆ ಕೊಟ್ಟ 1.11 ಲಕ್ಷ ರೂ. ದೇಣಿಗೆ ವಾಪಸ್ ಕೊಡಿ

**ಭೂಪಾಲ್, ಜು.3:** ನಾನು ಕೊಟ್ಟ ದೇಣಿಗೆಯನ್ನು ವಾಪಸ್ ಕೊಡಿ ಇಲ್ಲದಿದ್ದರೆ, ಅಯೋಧ್ಯೆಯಲ್ಲಿ ಮೊಕದ್ದಮೆ ಹೂಡುವುದಾಗಿ ಮಧ್ಯಪ್ರದೇಶದ ಮಾಜಿ ಮುಖ್ಯಮಂತ್ರಿ ಮತ್ತು ಹಿರಿಯ ಕಾಂಗ್ರೆಸ್ ನಾಯಕ ದಿಗ್ವಿಜಯ್ ಸಿಂಗ್ ಎಚ್ಚರಿಕೆ ನೀಡಿದ್ದಾರೆ. ರಾಮಮಂದಿರ ದೇಣಿಗೆ ಕಳ್ಳತನ ಪ್ರಕರಣಕ್ಕೆ ಸಂಬಂಧಿಸಿದಂತೆ ಭೂಪಾಲ್‌ನಲ್ಲಿ ಮಾತನಾಡಿರುವ ಅವರು, ನಾನು ನೀಡಿದ ದೇಣಿಗೆಯನ್ನು ಲೂಟಿ ಮಾಡಲಾಗಿದೆ. ಆದ್ದರಿಂದ, ಹಣವನ್ನು ನನಗೆ ಹಿಂತಿರುಗಿಸಬೇಕು. ನನಗೆ ಪೊಲೀಸರ ಮೇಲೆ ನಂಬಿಕೆ ಇಲ್ಲ. ಪೊಲೀಸರು ಬಿಜೆಪಿ ನಿಯಂತ್ರಣದಲ್ಲಿದ್ದಾರೆ, ಆದ್ದರಿಂದ ನಾನು ಪೊಲೀಸ್ ಠಾಣೆಗೆ ಹೋಗುವುದಿಲ್ಲ, ನ್ಯಾಯಾಲಯಕ್ಕೆ ಹೋಗುತ್ತೇನೆ ಎಂದು ಹೇಳಿದರು. ಅಂದು ಮಧ್ಯಪ್ರದೇಶದ ಸಿಎಂ ಆಗಿದ್ದ ಶಿವರಾಜ್ ಸಿಂಗ್ ಚೌಹಾಣ್ ಅವರು 1 ಲಕ್ಷ ದೇಣಿಗೆ ನೀಡಿದ್ದರು. ಅದಕ್ಕಿಂತ ಹೆಚ್ಚು ನೀಡಬೇಕೆಂದು 1,11,000 ದೇಣಿಗೆ ನೀಡಿದ್ದೇನೆ. ಟ್ರಸ್ಟ್‌ನಲ್ಲಿ ಮೊತ್ತವನ್ನು ಠೇವಣಿ ಇಡುವಂತೆ ಪ್ರಧಾನಿ ಮೋದಿಗೆ ಪತ್ರ ಬರೆದಿದ್ದೇನೆ. ಈ ಹಣವನ್ನು ಠೇವಣಿ ಇಟ್ಟಿದ್ದೇವೆ ಮತ್ತು ರಶೀದಿ ಪಡೆದುಕೊಂಡಿದ್ದೇವೆ. ರಾಮನ ಮೇಲಿನ ನಂಬಿಕೆ ಮತ್ತು ಭವ್ಯ ದೇವಾಲಯ ನಿರ್ಮಿಸುವ ಬಯಕೆಯಿಂದ ದೇಣಿಗೆ ನೀಡಿದ್ದೇನೆ. ಆದರೆ ಈಗ ಕೇಳಿಬರುತ್ತಿರುವ ದೂರುಗಳು ಗಂಭೀರವಾಗಿವೆ ಎಂದು ಹೇಳಿದ್ದಾರೆ.



■ ಕೋರ್ಟ್ ಮೆಟ್ಟಿಲೇರುವ ಎಚ್ಚರಿಕೆ ನೀಡಿದ ಮಾಜಿ ಸಿಎಂ ದಿಗ್ವಿಜಯಸಿಂಗ್

# ಬೆಂಗಳೂರು ನಮ್ಮ ಮೆಟ್ರೋ ಸರಣಿ ವ್ಯತ್ಯಯ ಸಮಗ್ರ ತನಿಖೆಗೆ ಕೇಂದ್ರ ಸರ್ಕಾರ ಆದೇಶ

**ಬೆಂಗಳೂರು, ಜು.3:** ಬೆಂಗಳೂರಿನ ನಮ್ಮ ಮೆಟ್ರೋದಲ್ಲಿ ಪದೇಪದೇ ಸಂಭವಿಸುತ್ತಿರುವ ತಾಂತ್ರಿಕ ಮತ್ತು ಕಾರ್ಯಾಚರಣೆಯ ವೈಫಲ್ಯಗಳ ಕುರಿತು ಸಮಗ್ರ ತನಿಖೆ ನಡೆಸುವಂತೆ ಕೇಂದ್ರ ಸರ್ಕಾರ ಆದೇಶಿಸಿದೆ. ಕಳೆದ ಮೂರು ವರ್ಷಗಳಲ್ಲಿ ನಡೆದಿರುವ ಎಲ್ಲಾ ಪ್ರಮುಖ ಸೇವಾ ವ್ಯತ್ಯಯಗಳ ಕುರಿತು ತನಿಖೆ ನಡೆಸಲು ಮತ್ತು ಮೆಟ್ರೋ ಕಾರ್ಯಾಚರಣೆ ಹಾಗೂ ನಿರ್ವಹಣೆಯ ವ್ಯವಸ್ಥಿತ ತಪಾಸಣೆ (ಆಡಿಟ್) ನಡೆಸುವಂತೆ ಬೆಂಗಳೂರು ಮೆಟ್ರೋ ರೈಲು ನಿಗಮಕ್ಕೆ (ಬಿಎಂಆರ್‌ಸಿಎಲ್) ನಿರ್ದೇಶನ ನೀಡಿದೆ.

ಮೆಟ್ರೋ ರೈಲ್ವೆ ಸುರಕ್ಷತಾ ಆಯುಕ್ತರ (ಸಿಎಂಆರ್‌ಎಸ್) ಈ ನಿರ್ದೇಶನವು, ಮೆಟ್ರೋ ಸೇವೆಗಳಲ್ಲಿ ಪದೇ ಪದೇ ಉಂಟಾಗುತ್ತಿರುವ ತಾಂತ್ರಿಕ ಸ್ಥಗಿತಗಳ ವಿರುದ್ಧ ಕೇಂದ್ರ ಸರ್ಕಾರ ಕೈಗೊಂಡಿರುವ ಅತ್ಯಂತ ಕಠಿಣ ಕ್ರಮವಾಗಿದೆ. ಈ ತಾಂತ್ರಿಕ ದೋಷಗಳಿಂದಾಗಿ ಮೆಟ್ರೋ ಸೇವೆಗಳು ಪದೇ ಪದೇ ಸ್ಥಗಿತಗೊಂಡು ಸಾವಿರಾರು ಪ್ರಯಾಣಿಕರು ತೀವ್ರ ಸಂಕಷ್ಟ ಎದುರಿಸುತ್ತಿದ್ದಾರೆ. ಜೂನ್ 23ರಂದು ನೇರಳೆ ಮಾರ್ಗದಲ್ಲಿ ತಾಂತ್ರಿಕ ವೈಫಲ್ಯದ ನಂತರ ಸುಮಾರು 20 ಸೇವಾ ವ್ಯತ್ಯಯಗಳನ್ನು ಉಲ್ಲೇಖಿಸಿ ಬೆಂಗಳೂರು ದಕ್ಷಿಣ ಸಂಸದ ತೇಜಸ್ವಿ ಸೂರ್ಯ ಅವರು ಸ್ವತಂತ್ರ ತನಿಖೆಗೆ ಆಗ್ರಹಿಸಿ ದೂರು ನೀಡಿದ್ದರು. ಈ ದೂರನ್ನು ಆಧರಿಸಿ ಈಗ ತನಿಖೆಗೆ ಆದೇಶಿಸಲಾಗಿದೆ.



■ ಕಳೆದ ಮೂರು ವರ್ಷಗಳ ಕಾರ್ಯಾಚರಣೆ ಹಾಗೂ ನಿರ್ವಹಣೆಯ ಆಡಿಟ್ ನಡೆಸುವಂತೆ ಬಿಎಂಆರ್‌ಸಿಎಲ್‌ಗೆ ನಿರ್ದೇಶನ

ರೈಲ್ವೆ ಸುರಕ್ಷತೆಯ ಮುಖ್ಯ ಆಯುಕ್ತರಾದ ಜನಕ್ ಕುಮಾರ್ ಗರ್ಗ್ ಅವರು ಬಿಎಂಆರ್‌ಸಿಎಲ್ ವ್ಯವಸ್ಥಾಪಕ ನಿರ್ದೇಶಕರಿಗೆ ಪತ್ರ ಬರೆದಿದ್ದು, ಜೂನ್ 23 ರ ಘಟನೆ ಮಾತ್ರವಲ್ಲದೆ ಕಳೆದ ಮೂರು ವರ್ಷಗಳಲ್ಲಿ ವರದಿಯಾದ ಎಲ್ಲಾ ಪ್ರಮುಖ ಕಾರ್ಯಾಚರಣೆಯ ವೈಫಲ್ಯಗಳನ್ನು ಒಳಗೊಂಡ ವಿವರವಾದ ವರದಿಯನ್ನು ಸಲ್ಲಿಸುವಂತೆ ಸೂಚಿಸಿದ್ದಾರೆ. ಜೊತೆಗೆ, ಇವುಗಳನ್ನು ಸರಿಪಡಿಸಲು ಕೈಗೊಂಡಿರುವ ಕ್ರಮ ಮತ್ತು ಭವಿಷ್ಯದಲ್ಲಿ ಇಂತಹ ಘಟನೆ ಮರುಕಳಿಸದಂತೆ ತಡೆಯಲು ರೂಪಿಸಲಾಗಿರುವ ಮುನ್ನೆಚ್ಚರಿಕೆ ಕ್ರಮಗಳ ವಿವರವನ್ನೂ ಕೇಳಿದ್ದಾರೆ.

ಸೇವೆಯ ವಿಶ್ವಾಸಾರ್ಹತೆಯನ್ನು ಹೆಚ್ಚಿಸಲು ಮತ್ತು ವ್ಯವಸ್ಥೆಯಲ್ಲಿನ ದೋಷಗಳನ್ನು ಗುರುತಿಸಲು ಬಿಎಂಆರ್‌ಸಿಎಲ್ ತನ್ನ ಕಾರ್ಯಾಚರಣೆ ಮತ್ತು ನಿರ್ವಹಣಾ ವ್ಯವಸ್ಥೆಗಳ ಸಂಪೂರ್ಣ ಆಡಿಟ್ ನಡೆಸಬೇಕು ಎಂದು ಸಿಎಂಆರ್‌ಎಸ್ ನಿರ್ದೇಶಿಸಿದೆ.

# ಸುಪ್ರೀಂ ಕೋರ್ಟ್‌ನಿಂದ ನಟ ದರ್ಶನ್ ಜಾಮೀನು ಅರ್ಜಿ ತಿರಸ್ಕೃತ

**ನವದೆಹಲಿ, ಜು.3:** ನಟ ದರ್ಶನ್ ಅವರು ಸಲ್ಲಿಸಿದ್ದ ಆದೇಶ ತಿದ್ದುಪಡಿ ಕುರಿತ ಅರ್ಜಿಯನ್ನು ಸುಪ್ರೀಂ ಕೋರ್ಟ್ ರಿಜಿಸ್ಟ್ರಿ ತಿರಸ್ಕರಿಸಿದೆ. ಅರ್ಜಿಯು ವಿಚಾರಣೆಗೆ ಅರ್ಹವಲ್ಲ ಎಂದು ಹೇಳಿ ಅದನ್ನು ಪಟ್ಟಿ ಮಾಡಲು ಸಾಧ್ಯವಿಲ್ಲ ಎಂದು ನ್ಯಾಯಾಲಯದ ರಿಜಿಸ್ಟ್ರಿ ವಕೀಲರಿಗೆ ತಿಳಿಸಿದೆ. ದರ್ಶನ್ ಅವರು ಈ ಹಿಂದೆ ಸುಪ್ರೀಂ ಕೋರ್ಟ್ ನೀಡಿದ್ದ ಆದೇಶದಲ್ಲಿ ಉಲ್ಲೇಖಿಸಲಾಗಿದ್ದ ಒಂದು ವರ್ಷದವರೆಗೆ ಜಾಮೀನು ಕೋರಿ ಅರ್ಜಿ ಸಲ್ಲಿಸುವ ನಿರ್ಬಂಧವನ್ನು ಸಡಿಲಿಸುವಂತೆ ಮನವಿ ಮಾಡಿದ್ದರು. ಆ ನಿರ್ಬಂಧದ ಕುರಿತು ಸ್ಪಷ್ಟತೆ ನೀಡುವಂತೆ ಹಾಗೂ ತುರ್ತು ಪರಿಸ್ಥಿತಿಗಳಲ್ಲಿ ಜಾಮೀನು ಕೋರುವ ಅವಕಾಶ ಕಲ್ಪಿಸುವಂತೆ ಅವರು ತಮ್ಮ ಅರ್ಜಿಯಲ್ಲಿ ವಿನಂತಿಸಿದ್ದರು. ಆದರೆ ಈ ಮನವಿಯನ್ನು ಪರಿಗಣಿಸದೇ ರಿಜಿಸ್ಟ್ರಿ ಹಂತದಲ್ಲೇ ತಿರಸ್ಕರಿಸಲಾಗಿದೆ. ಪರಿಣಾಮವಾಗಿ ದರ್ಶನ್ ಸಲ್ಲಿಸಿದ್ದ ಅರ್ಜಿ ನ್ಯಾಯಧೀಶರ ಮುಂದೆ ವಿಚಾರಣೆಗೆ ಬರುವ ಅವಕಾಶವೇ ದೊರಕಿಲ್ಲ.

# ವಿದ್ಯುತ್‌ಚಾಲಿತ ವಾಹನ ಸಬ್ಸಿಡಿಗೆ ದೆಹಲಿ ಸರ್ಕಾರದಿಂದ ಹೊಸ ಪೋರ್ಟಲ್ ಆರಂಭ

## ಮುಖ್ಯಮಂತ್ರಿ ರೇಖಾಗುಪ್ತ ಚಾಲನೆ, ಇ.ವಿ. ನೀತಿ-2026 ಕೈಪಿಡಿ ಅನಾವರಣ

**ನವದೆಹಲಿ, ಜು.2:** ದೆಹಲಿ ಸರ್ಕಾರ ಹೊಸದಾಗಿ ಜಾರಿಗೆ ತಂದಿರುವ ಇವಿ ನೀತಿಯು ಇವಿ ವಾಹನ ಖರೀದಿ ವೆಚ್ಚವನ್ನು ಕಡಿಮೆ ಮಾಡುವುದಲ್ಲದೆ, ಅದರ ಜೀವಿತಾವಧಿಯ ಮಾಲೀಕತ್ವದ ಹೊರೆಯನ್ನು ಕಡಿಮೆ ಮಾಡುವ ಗುರಿ ಹೊಂದಿದೆ ಎಂದು ಮುಖ್ಯಮಂತ್ರಿ ರೇಖಾ ಗುಪ್ತಾ ಹೇಳಿದ್ದಾರೆ.

ದೆಹಲಿ ಸಚಿವಾಲಯದಲ್ಲಿ ಶುಕ್ರವಾರ ನಡೆದ ಕಾರ್ಯಕ್ರಮದಲ್ಲಿ ನೂತನ 'ದೆಹಲಿ ಎಲೆಕ್ಟ್ರಿಕ್ ವೆಹಿಕಲ್ ಸಬ್ಸಿಡಿ ಪೋರ್ಟಲ್' ಅನ್ನು ಅಧಿಕೃತವಾಗಿ ಬಿಡುಗಡೆ ಮಾಡಿದರು. ಹಾಗೂ ಇದೇ ಸಂದರ್ಭದಲ್ಲಿ ದೆಹಲಿ ಎಲೆಕ್ಟ್ರಿಕ್ ವೆಹಿಕಲ್ ಪಾಲಿಸಿ 2026ರ (ಇ ವಿ ನೀತಿ) ಅಧಿಕೃತ ಕೈಪಿಡಿಯನ್ನು ಅನಾವರಣಗೊಳಿಸಿದರು.

ಈ ನೂತನ ಇವಿ ನೀತಿಯನ್ನು ವಿವಿಧ ಪಾಲುದಾರರೊಂದಿಗೆ ಒಂದು ವರ್ಷಗಳ ಕಾಲ ಸುದೀರ್ಘ ಚರ್ಚೆ ನಡೆಸಿ ಸಿದ್ಧಪಡಿಸಲಾಗಿದೆ. ಇದು ದ್ವಿಚಕ್ರ, ತ್ರಿಚಕ್ರ, ಖಾಸಗಿ ಕಾರುಗಳು ಮತ್ತು ವಾಣಿಜ್ಯ ವಾಹನಗಳಿಗೆ (ಎನ್ 1 ಮತ್ತು ಎನ್ 2ವರ್ಗದ ವಾಹನಗಳು ಸೇರಿದಂತೆ) ವಿಶೇಷ ಪ್ರೋತ್ಸಾಹಕಗಳನ್ನು ಒಳಗೊಂಡಿದೆ. ಅಲ್ಲದೆ ಚಾರ್ಜಿಂಗ್ ಮೂಲಸೌಕರ್ಯ, ಬ್ಯಾಟರಿ ಮರುಬಳಕೆ ಹಾಗೂ ಇ–ತ್ಯಾಜ್ಯ ನಿರ್ವಹಣೆಗೆ ವಿಶೇಷ ಒತ್ತು ನೀಡಲಾಗಿದೆ.



ಇದರಿಂದಾಗಿ ಹೆಚ್ಚಿನ ಜನರು ಶೂನ್ಯ ಹೊರಸೂಸುವಿಕೆ ವಾಹನಗಳತ್ತ ಮುಖ ಮಾಡಲು ಪ್ರೇರಣೆಯಾಗುತ್ತದೆ. ಪೆಟ್ರೋಲ್ ಆಧಾರಿತ ವಾಹನಗಳನ್ನು ಇವಿಗೆ ಬದಲಾಯಿಸುವ ಬಗ್ಗೆಯೂ ಜನರು ಒಲವು ತೋರುತ್ತಾರೆ ಎಂದು ರೇಖಾಗುಪ್ತ ಹೇಳಿದರು.

ಮುಖ್ಯಮಂತ್ರಿ ಹೇಳಿದರು. ಗುಪ್ತಾ ಅವರ ಪ್ರಕಾರ, ದೆಹಲಿ ಇ ವಿ ನೀತಿ 2026 ಖರೀದಿ ಪ್ರೋತ್ಸಾಹಕಗಳು, ಹಳೆಯ ಮಾಲಿನ್ಯಕಾರಕ ವಾಹನಗಳನ್ನು ರದ್ದುಗೊಳಿಸಲು ಪ್ರೋತ್ಸಾಹಕಗಳು, ರಸ್ತೆ ತೆರಿಗೆಯಿಂದ ಜೀವಿತಾವಧಿಯ ವಿನಾಯಿತಿ, ನೋಂದಣಿ ಶುಲ್ಕವನ್ನು ಮನ್ನಾ ಮಾಡುವುದು ಮತ್ತು ಪೆಟ್ರೋಲ್ ಮತ್ತು ಡೀಸೆಲ್ ವಾಹನಗಳಿಗೆ ಹೋಲಿಸಿದರೆ ಕಡಿಮೆ ಕಾರ್ಯಾಚರಣೆ ಮತ್ತು ನಿರ್ವಹಣಾ ವೆಚ್ಚಗಳು ಸೇರಿದಂತೆ ಬಹು ಆರ್ಥಿಕ ಪ್ರಯೋಜನಗಳನ್ನು ಒಟ್ಟುಗೂಡಿಸುವ ಮೂಲಕ ಸ್ಪಷ್ಟ ಮತ್ತು ಸಕಾರಾತ್ಮಕ ಉತ್ತರವನ್ನು ಒದಗಿಸುತ್ತದೆ. ಅಂತಹ ಎಲ್ಲಾ ಅಂಶಗಳೊಂದಿಗೆ, ಎಲೆಕ್ಟ್ರಿಕ್ ವಾಹನಗಳು ಮನೆಗಳು, ವಾಣಿಜ್ಯ ಚಾಲಕರು ಮತ್ತು ಎಲ್ಲಾ ಗಾತ್ರದ ವ್ಯವಹಾರಗಳಿಗೆ ಆರ್ಥಿಕವಾಗಿ ಅತ್ಯಂತ ಸೂಕ್ತ ಆಯ್ಕೆಯಾಗಿ ಹೊರಹೊಮ್ಮುವ ನಿರೀಕ್ಷೆಯಿದೆ ಎಂದು ಹೇಳಿದರು.

### ಹೊಸನೀತಿಯ ಮುಖ್ಯಾಂಶಗಳು




**ವಿದ್ಯುತ್‌ಚಾಲಿತ ದ್ವಿಚಕ್ರ ವಾಹನಗಳ ಅರ್ಹ ಖರೀದಿದಾರರು 30,000 ರೂ.ಗಳವರೆಗೆ ಖರೀದಿ ಪ್ರೋತ್ಸಾಹ, 10,000 ರೂ.ಗಳ ಸ್ಕ್ರ್ಯಾಪಿಂಗ್ ಪ್ರೋತ್ಸಾಹ, ರಸ್ತೆ ತೆರಿಗೆಯಿಂದ ಜೀವಿತಾವಧಿ ವಿನಾಯಿತಿ ಮತ್ತು ನೋಂದಣಿ ಶುಲ್ಕದ ಸಂಪೂರ್ಣ ಮನ್ನಾವನ್ನು ಪಡೆಯುತ್ತಾರೆ ಎಂದು ಅವರು ಹೇಳಿದರು. ಈ ಪ್ರಯೋಜನಗಳು ಒಟ್ಟಾಗಿ, ತೆರಿಗೆ–ಸಂಬಂಧಿತ ಪ್ರಯೋಜನಗಳನ್ನು ಹೊರತುಪಡಿಸಿ, 50,000 ರೂ.ಗಳಿಗಿಂತ ಹೆಚ್ಚಿನ ಆರಂಭಿಕ ಉಳಿತಾಯಕ್ಕೆ ಕಾರಣವಾಗಬಹುದು. ಎಲೆಕ್ಟ್ರಿಕ್ ಆಟೋ–ರಿಕ್ಷಾಗಳ (ಐ–5) ಅರ್ಹ ಖರೀದಿದಾರರು 50,000 ರೂ.ಗಳವರೆಗೆ ಖರೀದಿ ಪ್ರೋತ್ಸಾಹ, 25,000 ರೂ.ಗಳ ಸ್ಕ್ರ್ಯಾಪಿಂಗ್ ಪ್ರೋತ್ಸಾಹ, ಜೀವಿತಾವಧಿ ರಸ್ತೆ ತೆರಿಗೆ ವಿನಾಯಿತಿ ಮತ್ತು ನೋಂದಣಿ ಶುಲ್ಕದ ಸಂಪೂರ್ಣ ಮನ್ನಾ ಪಡೆಯುತ್ತಾರೆ, ಇದರ ಪರಿಣಾಮವಾಗಿ ತೆರಿಗೆ ಪ್ರಯೋಜನಗಳನ್ನು ಹೊರತುಪಡಿಸಿ, 75,000 ರೂ.ಗಳಿಗಿಂತ ಹೆಚ್ಚಿನ ಆರಂಭಿಕ ಉಳಿತಾಯವಾಗುತ್ತದೆ. ಗಮನಾರ್ಹವಾಗಿ, ಎಲೆಕ್ಟ್ರಿಕ್ ಗ್ರಾಮೀಣ ಸೇವಾ ವಾಹನಗಳ ಖರೀದಿದಾರರು ಹಳೆಯ ವಾಹನವನ್ನು ಬದಲಾಯಿಸಲು 15,000 ರೂ.ಗಳ ಸ್ಕ್ರ್ಯಾಪಿಂಗ್ ಪ್ರೋತ್ಸಾಹವನ್ನು ಪಡೆಯುತ್ತಾರೆ. ಎಲೆಕ್ಟ್ರಿಕ್ N–1 ಸರಕು ಸಾಗಣೆದಾರರ ಅರ್ಹ ಖರೀದಿದಾರರು 1 ಲಕ್ಷ ರೂ.ಗಳವರೆಗೆ ಖರೀದಿ ಪ್ರೋತ್ಸಾಹ, 50,000 ರೂ.ಗಳ ಸ್ಕ್ರ್ಯಾಪಿಂಗ್ ಪ್ರೋತ್ಸಾಹ, ರಸ್ತೆ ತೆರಿಗೆಯಿಂದ ಜೀವಿತಾವಧಿ ವಿನಾಯಿತಿ ಮತ್ತು ನೋಂದಣಿ ಶುಲ್ಕದ ಮನ್ನಾವನ್ನು ಪಡೆಯುತ್ತಾರೆ. ಈ ಪ್ರಯೋಜನಗಳು ತೆರಿಗೆ–ಸಂಬಂಧಿತ ಪ್ರಯೋಜನಗಳನ್ನು ಹೊರತುಪಡಿಸಿ, ಆರಂಭಿಕ ವೆಚ್ಚವನ್ನು ಸುಮಾರು 1.50 ಲಕ್ಷ ರೂ.ಗಳಷ್ಟು ಕಡಿಮೆ ಮಾಡಬಹುದು.**

ಈ ನೀತಿಯು ಖಾಸಗಿ ಎಲೆಕ್ಟ್ರಿಕ್ ಕಾರುಗಳಿಗೆ ಖರೀದಿ ಪ್ರೋತ್ಸಾಹವನ್ನು ಒದಗಿಸುವುದಿಲ್ಲ ಎಂದು ಮುಖ್ಯಮಂತ್ರಿ ರೇಖಾಗುಪ್ತಾ ಹೇಳಿದರು. ಆದಾಗ್ಯೂ, ಸಾಂಪ್ರದಾಯಿಕ ಇಂಧನ ಚಾಲಿತ ಕಾರನ್ನು ಗುಜರಿಗೆ ಹಾಕಿ ಎಲೆಕ್ಟ್ರಿಕ್ ಕಾರನ್ನು ಖರೀದಿಸುವ ಅರ್ಹ ಖರೀದಿದಾರರು 1 ಲಕ್ಷ ರೂ.ಗಳವರೆಗೆ ಸ್ಕ್ರ್ಯಾಪಿಂಗ್ ಪ್ರೋತ್ಸಾಹವನ್ನು ಪಡೆಯುತ್ತಾರೆ. ಅವರು ಜೀವಿತಾವಧಿಯ ರಸ್ತೆ ತೆರಿಗೆ ವಿನಾಯಿತಿ ಮತ್ತು ನೋಂದಣಿ ಶುಲ್ಕದ ಸಂಪೂರ್ಣ ಮನ್ನಾದಿಂದ ಪ್ರಯೋಜನ ಪಡೆಯುತ್ತಾರೆ.

# ರಾಜಸ್ಥಾನದಲ್ಲಿ 1.06 ಲಕ್ಷ ಕೋಟಿ ರೂ. ಅಭಿವೃದ್ಧಿ ಅಭಿಯಾನಕ್ಕೆ ಪ್ರಧಾನಿ ಮೋದಿ ಚಾಲನೆ

**ನವದೆಹಲಿ, ಜು.3:** ಭಾರತದ ವಾಯುಯಾನ, ಇಂಧನ, ನಗರ ಸಾರಿಗೆ, ನವೀಕರಿಸಬಹುದಾದ ಇಂಧನ ಮತ್ತು ಸೆಮಿಕಂಡಕ್ಟರ್ ವಲಯಗಳನ್ನು ಬಲಪಡಿಸುವ ಗುರಿಯನ್ನು ಹೊಂದಿರುವ ಪ್ರಮುಖ ಮೂಲಸೌಕರ್ಯ ಮತ್ತು ಕೈಗಾರಿಕಾ ಯೋಜನೆಗಳ ಸರಣಿಯನ್ನು ಉದ್ಘಾಟಿಸಿ ಉದ್ಘಾಟಿಸುವ ಮೂಲಕ ಪ್ರಧಾನಿ ನರೇಂದ್ರ ಮೋದಿ ಶನಿವಾರ ರಾಜಸ್ಥಾನ ಮತ್ತು ಗುಜರಾತ್‌ಗೆ ಒಂದು ದಿನದ ಭೇಟಿ ನೀಡಲಿದ್ದಾರೆ. ಜೋಧಪುರದಲ್ಲಿ ಮೋದಿ ತಮ್ಮ ಭೇಟಿಯನ್ನು ಪ್ರಾರಂಭಿಸಲಿದ್ದಾರೆ, ಅಲ್ಲಿ ಅವರು ಜೋಧಪುರ ವಿಮಾನ ನಿಲ್ದಾಣದಲ್ಲಿ ಹೊಸ ಟರ್ಮಿನಲ್ ಕಟ್ಟಡವನ್ನು ಉದ್ಘಾಟಿಸಲಿದ್ದಾರೆ ಮತ್ತು ಮಾರ್ಪಡಿಸಿದ ಉಡಾನ್ ಯೋಜನೆಯನ್ನು ಉದ್ಘಾಟಿಸಲಿದ್ದಾರೆ. ನಂತರ ಅವರು ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡುವ ಮೊದಲು 1.06 ಲಕ್ಷ ಕೋಟಿ ರೂ.ಗಳ ಯೋಜನೆಗಳ ಲೋಕಾರ್ಪಣೆ, ಉದ್ಘಾಟನೆ ಮತ್ತು ಅಡಿಪಾಯ ಹಾಕಲು ಬಲೋತ್ರಾಗೆ ಪ್ರಯಾಣಿಸಲಿದ್ದಾರೆ. ಸಂಜೆ, ಅವರು ಸಿಜಿ ಸೆಮಿ ಔಟ್‌ಸೋರ್ಸ್ಡ್ ಸೆಮಿಕಂಡಕ್ಟರ್ ಅಸೆಂಬ್ಲಿ ಮತ್ತು ಟೆಸ್ಟ್ (ಓಎಸ್‌ಎಟಿ) ಸೌಲಭ್ಯವನ್ನು ಉದ್ಘಾಟಿಸಲು ಮತ್ತು ಪಾಲುದಾರರೊಂದಿಗೆ ಸಂವಹನ ನಡೆಸಲು ಗುಜರಾತ್ನ ಸನಂದ್ಗೆ ಭೇಟಿ ನೀಡಲಿದ್ದಾರೆ. ಪ್ರಧಾನ ಮಂತ್ರಿ ಕಚೇರಿಯ ಪ್ರಕಾರ, ಮಾರ್ಪಡಿಸಿದ ಉಡಾನ್ ಯೋಜನೆಯ ಆರಂಭವು ಭಾರತದ ಪ್ರಾದೇಶಿಕ ವಾಯುಯಾನ ಕಾರ್ಯಕ್ರಮದ ಮುಂದಿನ ಹಂತವಾಗಿದೆ ಮತ್ತು "ಉಡೇ ದೇಶ್ ಕಾ ಆಮ್ ನಾಗರಿಕ್" ಎಂಬ ದೃಷ್ಟಿಕೋನದಡಿಯಲ್ಲಿ ವಾಯು ಸಂಪರ್ಕವನ್ನು ವಿಸ್ತರಿಸುವ ಗುರಿಯನ್ನು ಹೊಂದಿದೆ. "ಮುಂದಿನ 10 ವರ್ಷಗಳಲ್ಲಿ 28,840 ಕೋಟಿ ರೂ. ಹಂಚಿಕೆಯೊಂದಿಗೆ, ಈ ಯೋಜನೆಯು ವಾಯುಯಾನ ನೇತೃತ್ವದ ಅಭಿವೃದ್ಧಿಯ ಮುಂದಿನ ಹಂತವನ್ನು ವೇಗಗೊಳಿಸುವ ಗುರಿಯನ್ನು ಹೊಂದಿದೆ" ಎಂದು ಪ್ರಧಾನ ಮಂತ್ರಿ ಕಚೇರಿ ತಿಳಿಸಿದೆ.

ಜೋಧಪುರ ವಿಮಾನ ನಿಲ್ದಾಣದಲ್ಲಿ 480 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾದ ಹೊಸ ಟರ್ಮಿನಲ್ ಕಟ್ಟಡವನ್ನು ಪ್ರಧಾನಿ ಉದ್ಘಾಟಿಸಲಿದ್ದಾರೆ. 23,000 ಚದರ ಮೀಟರ್‌ಗಿಂತಲೂ ಹೆಚ್ಚು ವಿಸ್ತೀರ್ಣದಲ್ಲಿರುವ ಈ ಟರ್ಮಿನಲ್ ವಾರ್ಷಿಕವಾಗಿ 20 ಲಕ್ಷ ಪ್ರಯಾಣಿಕರನ್ನು ನಿರ್ವಹಿಸುವ ಸಾಮರ್ಥ್ಯವನ್ನು ಹೊಂದಿದೆ. ಬಲೋತ್ರಾದಲ್ಲಿ, ಹಿಂದೂಸ್ತಾನ್ ಪೆಟ್ರೋಲಿಯಂ ಕಾರ್ಪೊರೇಷನ್ ಮತ್ತು ರಾಜಸ್ಥಾನ ಸರ್ಕಾರದ ಜಂಟಿ ಉದ್ಯಮವಾಗಿ 79,450 ಕೋಟಿ ರೂ.ಗಳಿಗೂ ಹೆಚ್ಚು ಹೂಡಿಕೆಯಲ್ಲಿ ಅಭಿವೃದ್ಧಿಪಡಿಸಲಾದ ಪಚ್ಪದ್ರಾದಲ್ಲಿ ಭಾರತದ ಮೊದಲ ಹಸಿರು ಕ್ಷೇತ್ರ ಸಂಯೋಜಿತ ಸಂಸ್ಕರಣಾಗಾರ-ಪೆಟ್ರೋಕೆಮಿಕಲ್ ಸಂಕೀರ್ಣವನ್ನು ಮೋದಿ ರಾಷ್ಟ್ರಕ್ಕೆ ಅರ್ಪಿಸಲಿದ್ದಾರೆ. ಪ್ರಧಾನಮಂತ್ರಿಯವರು ಜೈಪುರ ಮೆಟ್ರೋ ರೈಲು ಯೋಜನೆಯ ಎರಡನೇ ಹಂತಕ್ಕೆ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ, ಇದರ ಅಂದಾಜು ವೆಚ್ಚ ರೂ. 13,000 ಕೋಟಿಗೂ ಹೆಚ್ಚು.



ಇತರ ಪ್ರಮುಖ ಯೋಜನೆಗಳಲ್ಲಿ, ಮೋದಿ ಅವರು ಸುಮಾರು ರೂ. 900 ಕೋಟಿ ವೆಚ್ಚದಲ್ಲಿ ನಿರ್ಮಿಸಲಾದ ಚುರು-ಸಾದುಲ್ಪುರ ಮತ್ತು ಚುರು-ರತನ್‌ಗಢ ರೈಲು ದ್ವಿಗುಣಗೊಳಿಸುವ ಯೋಜನೆಗಳನ್ನು ಲೋಕಾರ್ಪಣೆ ಮಾಡಲಿದ್ದಾರೆ, ಸುಮಾರು ರೂ. 740 ಕೋಟಿ ವೆಚ್ಚದಲ್ಲಿ ಅಭಿವೃದ್ಧಿಪಡಿಸಲಾದ NH-125A ಜೋಧ್‌ಪುರ ರಿಂಗ್ ರಸ್ತೆ ವಿಭಾಗದ ಚತುಷ್ಪಥವನ್ನು ಉದ್ಘಾಟಿಸಲಿದ್ದಾರೆ ಮತ್ತು SJVN 1,000 MW ಬಿಕಾನೆರ್ ಸೌರಶಕ್ತಿ ಯೋಜನೆ ಮತ್ತು NHPC ಯ 300 MW ಕರ್ಣಿಸರ್ ಬಿಕಾನೆರ್ ಸೌರಶಕ್ತಿ ಸ್ಥಾವರವನ್ನು ಲೋಕಾರ್ಪಣೆ ಮಾಡಲಿದ್ದಾರೆ. ರಾಜಸ್ಥಾನದ ನವೀಕರಿಸಬಹುದಾದ ಇಂಧನ ವಲಯದಿಂದ ನವೀಕರಿಸಬಹುದಾದ ಶಕ್ತಿಯನ್ನು ಸ್ಥಳಾಂತರಿಸಲು ರೂ. 1,900 ಕೋಟಿಗೂ ಹೆಚ್ಚು ವೆಚ್ಚದಲ್ಲಿ ನಿರ್ಮಿಸಲಾದ ವಿದ್ಯುತ್ ಪ್ರಸರಣ ಮಾರ್ಗವನ್ನು ಉದ್ಘಾಟಿಸಲಿದ್ದಾರೆ ಮತ್ತು ರಾಜ್ಯದ ಶುದ್ಧ ಇಂಧನ ಮೂಲಸೌಕರ್ಯವನ್ನು ಮತ್ತಷ್ಟು ಬಲಪಡಿಸುವ 530 ಕಿಲೋಮೀಟರ್ ಪ್ರಸರಣ ವ್ಯವಸ್ಥೆಗೆ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಕಾರ್ಯಕ್ರಮದ ಸಂದರ್ಭದಲ್ಲಿ, ಶಿಕ್ಷಣ, ಇಂಧನ, ಗೃಹ, ಸಾರಿಗೆ, ಕೃಷಿ, ಮಾಹಿತಿ ತಂತ್ರಜ್ಞಾನ ಮತ್ತು ಕೌಶಲ್ಯ ಅಭಿವೃದ್ಧಿ ಸೇರಿದಂತೆ ರಾಜಸ್ಥಾನ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಹೊಸದಾಗಿ ನೇಮಕಗೊಂಡ ಸುಮಾರು 54,000 ಯುವಕರಿಗೆ ಪ್ರಧಾನಿ ನೇಮಕಾತಿ ಪತ್ರಗಳನ್ನು ಹಸ್ತಾಂತರಿಸಲಿದ್ದಾರೆ.

# 40 ವರ್ಷಗಳ ಬಳಿಕ ಐತಿಹಾಸಿಕ ಭೇಟಿ: ಮುಂದಿನ ವಾರ ನ್ಯೂಜಿಲೆಂಡ್‌ಗೆ ಪ್ರಧಾನಿ ನರೇಂದ್ರ ಮೋದಿ ಪ್ರವಾಸ

**ನವದೆಹಲಿ,ಜು.3:** ಪ್ರಧಾನಿ ನರೇಂದ್ರ ಮೋದಿ ಅವರು ಮುಂದಿನ ವಾರ ನ್ಯೂಜಿಲೆಂಡ್‌ಗೆ ತಮ್ಮ ಮೊದಲ ಅಧಿಕೃತ ದ್ವಿಪಕ್ಷೀಯ ಪ್ರವಾಸ ಕೈಗೊಳ್ಳಲಿದ್ದಾರೆ. ಕಳೆದ 40 ವರ್ಷಗಳಲ್ಲಿ ಭಾರತೀಯ ಪ್ರಧಾನಿಯೊಬ್ಬರು ನ್ಯೂಜಿಲೆಂಡ್‌ಗೆ ಭೇಟಿ ನೀಡುತ್ತಿರುವುದು ಇದೇ ಮೊದಲ ಬಾರಿಗೆ ಆಗಿರುವುದರಿಂದ ಈ ಪ್ರವಾಸಕ್ಕೆ ವಿಶೇಷ ಮಹತ್ವ ಲಭಿಸಿದೆ.

ನ್ಯೂಜಿಲೆಂಡ್ ಪ್ರಧಾನಿ ಕ್ರಿಸ್ಟೋಫರ್ ಲಕ್ಸನ್ ಈ ಭೇಟಿ ಕುರಿತು ಅಧಿಕೃತವಾಗಿ ಮಾಹಿತಿ ನೀಡಿದ್ದು, ಭಾರತ-ನ್ಯೂಜಿಲೆಂಡ್ ಸಂಬಂಧದಲ್ಲಿ ಇದು ಐತಿಹಾಸಿಕ ಘಟ್ಟವಾಗಲಿದೆ ಎಂದು ಹೇಳಿದ್ದಾರೆ. ಉಭಯ ರಾಷ್ಟ್ರಗಳ ನಡುವಿನ ರಾಜತಾಂತ್ರಿಕ, ವ್ಯಾಪಾರ ಮತ್ತು ಕಾರ್ಯತಂತ್ರದ ಸಹಕಾರವನ್ನು ಇನ್ನಷ್ಟು ಬಲಪಡಿಸುವ ಉದ್ದೇಶದಿಂದ ಈ ಭೇಟಿ ಆಯೋಜಿಸಲಾಗಿದೆ.

ಪ್ರಧಾನಿ ಮೋದಿ ಅವರು ಜುಲೈ 10ರಂದು ನ್ಯೂಜಿಲೆಂಡ್ ತಲುಪಿ ಪ್ರಧಾನಿ ಕ್ರಿಸ್ಟೋಫರ್ ಲಕ್ಸನ್ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ಈ ವೇಳೆ ವ್ಯಾಪಾರ, ಹೂಡಿಕೆ, ಕೃಷಿ, ಆಹಾರ ಸಂಸ್ಕರಣೆ, ನವೀಕರಿಸಬಹುದಾದ ಇಂಧನ, ಶಿಕ್ಷಣ, ತಂತ್ರಜ್ಞಾನ, ರಕ್ಷಣಾ ಸಹಕಾರ ಹಾಗೂ ಇಂಡೋ-ಪೆಸಿಫಿಕ್ ಪ್ರದೇಶದಲ್ಲಿನ ಸಹಯೋಗ ಸೇರಿದಂತೆ ಹಲವು ಮಹತ್ವದ



ವಿಷಯಗಳ ಕುರಿತು ಚರ್ಚೆ ನಡೆಯುವ ಸಾಧ್ಯತೆಯಿದೆ. ಅಲ್ಲದೆ ಉಭಯ ದೇಶಗಳ ನಡುವಿನ ಹೊಸ ಒಪ್ಪಂದಗಳು ಹಾಗೂ ಸಹಕಾರದ ಘೋಷಣೆಗಳ ನಿರೀಕ್ಷೆಯೂ ಇದೆ.

ಈ ವರ್ಷದ ಏಪ್ರಿಲ್‌ನಲ್ಲಿ ಭಾರತ ಮತ್ತು ನ್ಯೂಜಿಲೆಂಡ್ ನಡುವೆ ಮುಕ್ತ ವ್ಯಾಪಾರ ಒಪ್ಪಂದ ಅಂತಿಮಗೊಂಡಿತ್ತು. ಈ ಒಪ್ಪಂದದ ಮೂಲಕ ನ್ಯೂಜಿಲೆಂಡ್‌ನ ಶೇ.95ರಷ್ಟು ಉತ್ಪನ್ನಗಳ ಮೇಲಿನ ಸುಂಕವನ್ನು ಭಾರತ ಹಂತ ಹಂತವಾಗಿ ತೆಗೆದುಹಾಕಲು ಒಪ್ಪಿಕೊಂಡಿದೆ. ಇದರ ಪರಿಣಾಮವಾಗಿ ಉಭಯ ರಾಷ್ಟ್ರಗಳ ನಡುವಿನ ವ್ಯಾಪಾರ ಹಾಗೂ ಹೂಡಿಕೆ ಸಂಬಂಧಗಳು ಮತ್ತಷ್ಟು ವಿಸ್ತರಿಸುವ ನಿರೀಕ್ಷೆಯಿದೆ. ಪ್ರಧಾನಿ ಮೋದಿ ಅವರ ಈ ಭೇಟಿ ಆ ಒಪ್ಪಂದದ

> **ಪ್ರಧಾನಿ ನರೇಂದ್ರ ಮೋದಿ ಜುಲೈ 6 ರಿಂದ ಜುಲೈ 11 ರವರೆಗೆ ಮೂರು ಇಂಡೋ-ಪೆಸಿಫಿಕ್ ರಾಷ್ಟ್ರಗಳಾದ ಇಂಡೋನೇಷ್ಯಾ, ಆಸ್ಟ್ರೇಲಿಯಾ ಮತ್ತು ನ್ಯೂಜಿಲೆಂಡ್‌ಗೆ ಆರು ದಿನಗಳ ಭೇಟಿ ನೀಡಲಿದ್ದಾರೆ.**

ಅನುಷ್ಠಾನಕ್ಕೆ ಹೊಸ ವೇಗ ನೀಡಲಿದೆ ಎಂದು ವಿಶ್ಲೇಷಿಸಲಾಗುತ್ತಿದೆ.

ಭಾರತೀಯ ಮೂಲದ ಸಮುದಾಯದ ಪ್ರತಿನಿಧಿಗಳೊಂದಿಗೆ ಪ್ರಧಾನಿ ಮೋದಿ ಸಂವಾದ ನಡೆಸುವ ಸಾಧ್ಯತೆಯೂ ಇದೆ. ನ್ಯೂಜಿಲೆಂಡ್‌ನಲ್ಲಿ ಭಾರತೀಯ ಮೂಲದ ಜನಸಂಖ್ಯೆ ಗಣನೀಯ ಪ್ರಮಾಣದಲ್ಲಿದ್ದು, ಉಭಯ ದೇಶಗಳ ಸಾಂಸ್ಕೃತಿಕ ಮತ್ತು ಆರ್ಥಿಕ ಸಂಬಂಧಗಳಲ್ಲಿ ಅವರು ಪ್ರಮುಖ ಪಾತ್ರವಹಿಸಿದ್ದಾರೆ.

ನ್ಯೂಜಿಲೆಂಡ್ ಪ್ರವಾಸದ ನಂತರ ಪ್ರಧಾನಿ ಮೋದಿ ಅವರು ತಮ್ಮ ವಿದೇಶಿ ಪ್ರವಾಸದ ಮುಂದಿನ ಹಂತವಾಗಿ ಇತರೆ ಇಂಡೋ-ಪೆಸಿಫಿಕ್ ರಾಷ್ಟ್ರಗಳಿಗೂ ಭೇಟಿ ನೀಡುವ ಸಾಧ್ಯತೆ ಇದೆ. ಈ ಪ್ರವಾಸವು ಭಾರತವು ಇಂಡೋ-ಪೆಸಿಫಿಕ್ ಪ್ರದೇಶದಲ್ಲಿ ತನ್ನ ರಾಜತಾಂತ್ರಿಕ ಮತ್ತು ಆರ್ಥಿಕ ಪ್ರಭಾವವನ್ನು ಮತ್ತಷ್ಟು ಬಲಪಡಿಸುವ ಪ್ರಯತ್ನದ ಭಾಗವಾಗಿದೆ.

# ಅಮರನಾಥ ಯಾತ್ರಿಕರಿಗೆ ಪ್ರಧಾನಿ ಮೋದಿ ಪತ್ರ: ಐದು ಸಂಕಲ್ಪ ಪಾಲಿಸುವಂತೆ ಕರೆ

**ನವದೆಹಲಿ:** ಅಮರನಾಥ ಯಾತ್ರೆ ಆರಂಭವಾದ ಹಿನ್ನೆಲೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ದೇಶದಾದ್ಯಂತದ ಶಿವಭಕ್ತರಿಗೆ ವಿಶೇಷ ಪತ್ರ ಬರೆದು ಶುಭಾಶಯ ಕೋರಿದ್ದಾರೆ. ಭಗವಾನ್ ಅಮರನಾಥರ ಕೃಪೆಯಿಂದ ಪ್ರತಿಯೊಬ್ಬ ಯಾತ್ರಿಕರ ಪಯಣ ಸುರಕ್ಷಿತ, ಸುಖಕರ ಹಾಗೂ ಮಂಗಳಕರವಾಗಿರಲಿ ಎಂದು ಹಾರೈಸಿದ್ದಾರೆ.

ಅಮರನಾಥ ಯಾತ್ರೆ ಕೇವಲ ಧಾರ್ಮಿಕ ಪ್ರವಾಸವಲ್ಲ, ಅದು ಭಕ್ತಿ, ಆತ್ಮಸಾಕ್ಷಾತ್ಕಾರ ಹಾಗೂ ರಾಷ್ಟ್ರೀಯ ಏಕತೆಯ ಸಂಕೇತವಾಗಿದೆ ಎಂದು ಪ್ರಧಾನಿ ತಮ್ಮ ಪತ್ರದಲ್ಲಿ ತಿಳಿಸಿದ್ದಾರೆ. ಯಾತ್ರೆಯ ಯಶಸ್ವಿ ಆಯೋಜನೆಗಾಗಿ ಶ್ರಮಿಸುತ್ತಿರುವ ಭದ್ರತಾ ಪಡೆಗಳು, ಆಡಳಿತ ಸಿಬ್ಬಂದಿ, ಆರೋಗ್ಯ ಕಾರ್ಯಕರ್ತರು ಹಾಗೂ ಸ್ವಯಂಸೇವಕರ ಸೇವೆಯನ್ನು ಅವರು ಶ್ಲಾಘಿಸಿದ್ದಾರೆ.

ಇದೇ ಸಮಯದಲ್ಲಿ ಯಾತ್ರಿಕರು ಐದು ಸಂಕಲ್ಪಗಳನ್ನು ಪಾಲಿಸುವಂತೆ ಪ್ರಧಾನಿ ಮನವಿ ಮಾಡಿದ್ದಾರೆ. ಮೊದಲನೆಯದಾಗಿ, ಯಾತ್ರಾ ಮಾರ್ಗದಲ್ಲಿ ಸ್ವಚ್ಛತೆ ಕಾಪಾಡಿ ಪರಿಸರವನ್ನು ಶುಚಿಯಾಗಿಡಬೇಕು. ಎರಡನೆಯದಾಗಿ, ಆಡಳಿತ ಹಾಗೂ ಭದ್ರತಾ ಪಡೆಗಳ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ ಸುರಕ್ಷಿತವಾಗಿ ಯಾತ್ರೆ ಕೈಗೊಳ್ಳಬೇಕು. ಮೂರನೆಯದಾಗಿ, 'ವೋಕಲ್



ಜಮ್ಮುವಿನ ತಾವಿ ನದಿಯ ದಡದಲ್ಲಿರುವ ಅಮರನಾಥ ಯಾತ್ರಾ ನೋಂದಣಿ ಕೇಂದ್ರಕ್ಕೆ, ಶುಕ್ರವಾರದಂದು ವಾರ್ಷಿಕ ಅಮರನಾಥ ಯಾತ್ರೆಗೆ ಭಕ್ತರ ಆಗಮನ.

ಫಾರ್ ಲೋಕಲ್' ಪರಿಕಲ್ಪನೆಯಡಿ ಯಾತ್ರೆಯ ವೆಚ್ಚದ ಕನಿಷ್ಠ ಶೇ.10ರಷ್ಟು ಮೊತ್ತವನ್ನು ಜಮ್ಮು-ಕಾಶ್ಮೀರದ ಸ್ಥಳೀಯ ಉತ್ಪನ್ನಗಳ ಖರೀದಿಗೆ ಮೀಸಲಿಟ್ಟು ಅಲ್ಲಿನ ಜನರ ಜೀವನೋಪಾಯಕ್ಕೆ ಬೆಂಬಲ ನೀಡಬೇಕು. ನಾಲ್ಕನೆಯದಾಗಿ, 'ಏಕ್ ಪೇಡ್ ಮಾಂ ಕೆ ನಾಮ್' ಅಭಿಯಾನದಡಿ ಯಾತ್ರೆಯ ಬಳಿಕ ಒಂದು ಸಸಿ ನೆಟ್ಟು ಪರಿಸರ ಸಂರಕ್ಷಣೆಗೆ ಕೊಡುಗೆ ನೀಡಬೇಕು. ಐದನೆಯದಾಗಿ, 'ನೇಷನ್ ಫಸ್ಟ್' ಸಂಕಲ್ಪದೊಂದಿಗೆ ದೇಶದ ಅಭಿವೃದ್ಧಿಗೆ ಪ್ರತಿಯೊಬ್ಬರೂ ತಮ್ಮ ಕರ್ತವ್ಯವನ್ನು ಪ್ರಾಮಾಣಿಕವಾಗಿ ನಿರ್ವಹಿಸಿ ವಿಕಸಿತ ಭಾರತದ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದು ಕರೆ ನೀಡಿದ್ದಾರೆ.

# ವಾಟ್ಸ್‌ಆ್ಯಪ್ ಬಳಿಕ ಟೆಲಿಗ್ರಾಮ್, ಸಿಗ್ನಲ್‌ಗೂ ಕೇಂದ್ರದ ನೋಟಿಸ್

**ನವದೆಹಲಿ, ಜು.3:** ವಾಟ್ಸಾಪ್‌ನ ಪ್ರಸ್ತಾವಿತ 'ಯೂಸರ್ನೇಮ್' (ಬಳಕೆದಾರಹೆಸರು) ವೈಶಿಷ್ಟ್ಯದ ಜಾರಿಗೆ ತಾತ್ಕಾಲಿಕ ವಿರಾಮ ನೀಡುವಂತೆ ಮೆಟಾ ಸಂಸ್ಥೆಗೆ ಕೇಂದ್ರ ಸರ್ಕಾರ ಸೂಚನೆ ನೀಡಿದ ಒಂದು ದಿನದ ಬಳಿಕ ಟೆಲಿಗ್ರಾಮ್ ಮತ್ತು ಸಿಗ್ನಲ್ ಸಂಸ್ಥೆಗಳಿಗೂ ಅವುಗಳ ಈಗಿರುವ ಬಳಕೆದಾರಹೆಸರು ವ್ಯವಸ್ಥೆಗಳ ಕುರಿತು ನೋಟಿಸ್ ಜಾರಿಗೊಳಿಸಿದೆ.

ವಂಚನೆ, ಫಿಶಿಂಗ್, ಡಿಜಿಟಲ್ ಬಂಧನ ವಂಚನೆ ಹಾಗೂ ಗುರುತಿನ ಅನುಕರಣೆ (ಇಂಪರ್ಸನೇಷನ್) ಪ್ರಕರಣಗಳನ್ನು ತಡೆಯಲು ಈ ವೇದಿಕೆಗಳು ಯಾವ ಕ್ರಮಗಳನ್ನು ಕೈಗೊಂಡಿವೆ ಎಂಬ ಬಗ್ಗೆ ವಿವರ ನೀಡುವಂತೆ ಕೇಂದ್ರದ ಮಾಹಿತಿ ತಂತ್ರಜ್ಞಾನ ಸಚಿವಾಲಯವು ಸೂಚಿಸಿದೆ ಎಂದು ಮೂಲಗಳು ತಿಳಿಸಿವೆ. ಟೆಲಿಗ್ರಾಮ್ ಮತ್ತು ಸಿಗ್ನಲ್ ಸಂಸ್ಥೆಗಳಿಗೆ ಉತ್ತರ ನೀಡಲು ಮೂರು ದಿನಗಳ ಕಾಲಾವಕಾಶ ನೀಡಲಾರುಜಜ.

ಟೆಲಿಗ್ರಾಮ್ಗೆ ಕಳುಹಿಸಿರುವ ನೋಟಿಸ್ನಲ್ಲಿ, ಬಳಕೆದಾರಹೆಸರು ವೈಶಿಷ್ಟ್ಯವನ್ನು ಮುಂದುವರಿಸಲು ಅವಕಾಶ ನೀಡಬೇಕಾದ




ಕಾರಣಗಳನ್ನು ವಿವರಿಸುವಂತೆ ಸರ್ಕಾರ ಕೇಳಿದೆ ಎಂದು ತಿಳಿದುಬಂದಿದೆ.

ವಾಟ್ಸಾಪ್ನ ಪ್ರಸ್ತಾವಿತ ಬಳಕೆದಾರಹೆಸರು ವೈಶಿಷ್ಟ್ಯದಿಂದ, ದುಷ್ಕರ್ಮಿಗಳು ಫೋನ್ ಸಂಖ್ಯೆಯನ್ನು ಬಹಿರಂಗಪಡಿಸದೇ ಬಳಕೆದಾರರನ್ನು ಸಂಪರ್ಕಿಸಲು ಸಾಧ್ಯವಾಗಬಹುದು. ಇದರಿಂದ ಸೈಬರ್ ಅಪರಾಧ, ವಂಚನೆ ಹಾಗೂ ಗುರುತಿನ ಅನುಕರಣೆ ಪ್ರಕರಣಗಳು ಹೆಚ್ಚಾಗುವ ಆತಂಕವಿದೆ ಎಂದು ಕೇಂದ್ರ ಸರ್ಕಾರ ಹೇಳಿದೆ. ಈ ಹಿನ್ನೆಲೆಯಲ್ಲಿ, ಸಂಬಂಧಿತ ಸಮಾಲೋಚನೆಗಳು ಪೂರ್ಣಗೊಳ್ಳುವವರೆಗೆ ಹೊಸ ವೈಶಿಷ್ಟ್ಯದ ಬಿಡುಗಡೆಯನ್ನು ತಾತ್ಕಾಲಿಕವಾಗಿ ಮುಂದೂಡುವಂತೆ ಮೆಟಾಗೆ ಸೂಚಿಸಲಾಗಿದೆ.


ಟೆಲಿಗ್ರಾಮ್ ಮತ್ತು ಸಿಗ್ನಲ್ ಸಂಸ್ಥೆಗಳು ಬಳಕೆದಾರರ ಗುರುತನ್ನು ಹೇಗೆ ಪರಿಶೀಲಿಸುತ್ತವೆ, ಗುರುತಿನ ಅನುಕರಣೆ ಪ್ರಕರಣಗಳನ್ನು ಹೇಗೆ ನಿರ್ವಹಿಸುತ್ತವೆ ಹಾಗೂ ಬಳಕೆದಾರಹೆಸರುಗಳ ದುರುಪಯೋಗವನ್ನು ತಡೆಯಲು ಯಾವ ಸುರಕ್ಷತಾ ಕ್ರಮಗಳನ್ನು ಅನುಸರಿಸುತ್ತವೆ ಎಂಬ ಕುರಿತು ಮಾಹಿತಿ ತಂತ್ರಜ್ಞಾನ ಸಚಿವಾಲಯವು ವಿವರಗಳನ್ನು ಕೋರಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಇತ್ತೀಚಿನ ವಾರಗಳಲ್ಲಿ ಟೆಲಿಗ್ರಾಮ್ ಕೇಂದ್ರ ಸರ್ಕಾರದ ಪರಿಶೀಲನೆಗೆ ಒಳಪಟ್ಟಿದೆ. ಕಳೆದ ತಿಂಗಳು, ಸೋರಿಕೆಯಾದ ಮತ್ತು ನಕಲಿ ನೀಟ್ ಪ್ರಶ್ನೆಪತ್ರಿಕೆಗಳ ಪ್ರಸಾರಕ್ಕೆ ಸಂಬಂಧಿಸಿದ ಪ್ರಕರಣರಚಿಟಚಿ ಹಿನ್ನೆಲೆಯಲ್ಲಿ, ಭಾರತ ಸರ್ಕಾರವು ಟೆಲಿಗ್ರಾಮ್ನ ಕೆಲವು ವೆಬ್ ಸೇವೆಗಳನ್ನು ತಾತ್ಕಾಲಿಕವಾಗಿ ನಿರ್ಬಂಧಿಸಿತ್ತು. ಅಲ್ಲದೆ, ಅದರ ಮೆಸೇಜ್ ಎಡಿಟ್ ವೈಶಿಷ್ಟ್ಯದ ಬಳಕೆಯ ಮೇಲೂ ಜೂನ್ 30ರವರೆಗೆ ನಿರ್ಬಂಧ ಹೇರಲಾಗಿತ್ತು.

# ಕಚ್ಚಾತೈಲ ಬೆಲೆ ಇಳಿಕೆ: ವಿಮಾನ ಟಿಕೆಟ್ ದರದಲ್ಲೂ ಇಳಿಮುಖ ಸಾಧ್ಯತೆ

**ನವದೆಹಲಿ, ಜು.3:** ಅಂತಾರಾಷ್ಟ್ರೀಯ ವಿಮಾನ ಪ್ರಯಾಣಕ್ಕೆ ಯೋಜನೆ ರೂಪಿಸುತ್ತಿರುವವರಿಗೆ ಸಿಹಿಸುದ್ದಿ ಸಿಕ್ಕಿದೆ. ಕಚ್ಚಾತೈಲ ಬೆಲೆ ಇಳಿಕೆಯಾಗಿರುವ ಬೆನ್ನಲ್ಲೇ ಜು.1ರಿಂದ ಅಂತಾರಾಷ್ಟ್ರೀಯ ವಿಮಾನಗಳ ಮೇಲಿನ ಹೆಚ್ಚುವರಿ ಇಂಧನ ಶುಲ್ಕವನ್ನು ಏರ್ ಇಂಡಿಯಾ ಕಡಿತಗೊಳಿಸಿದೆ. ಇದರಿಂದಾಗಿ ಯುರೋಪ್, ಯುಕೆ, ಉತ್ತರ ಅಮೆರಿಕ ಹಾಗೂ ಆಸ್ಟ್ರೇಲಿಯಾ ಸೇರಿ ಹಲವು ಮಾರ್ಗಗಳಲ್ಲಿ ವಿಮಾನ ಟಿಕೆಟ್ ದರವೂ ಇಳಿಕೆಯಾಗುವ ಸಾಧ್ಯತೆ ಇದ್ದು, ಇದರ ಲಾಭ ನೇರವಾಗಿ ಪ್ರಯಾಣಿಕರಿಗೆ ಸಿಗುವ ನಿರೀಕ್ಷೆಯಿದೆ.

ಮಧ್ಯಪ್ರಾಚ್ಯ ಸಂಘರ್ಷ ಆರಂಭವಾದ ಬಳಿಕ ಜಾಗತಿಕ ಮಾರುಕಟ್ಟೆಯಲ್ಲಿ ಕಚ್ಚಾ ತೈಲದ ಬೆಲೆ ಏರಿಕೆಯಾಗಿತ್ತು. ಆದರೆ ಜೂನ್ 30ರಂದು ಒಂದು ಬ್ಯಾರೆಲ್ ಕಚ್ಚಾ ತೈಲದ ಬೆಲೆ 70 ಡಾಲರ್‌ಗಿಂತ ಕಡಿಮೆ ಮಟ್ಟಕ್ಕೆ ಇಳಿದಿದ್ದು, ಈ ಬೆಳವಣಿಗೆಯ ಬೆನ್ನಲ್ಲೇ ಏರ್ ಇಂಡಿಯಾ ಇಂಧನ ಹೆಚ್ಚುವರಿ ಶುಲ್ಕವನ್ನು ಇಳಿಕೆ ಮಾಡಿದೆ. ಏರ್ ಇಂಡಿಯಾ ಯುರೋಪ್ ಹಾಗೂ ಯುನೈಟೆಡ್ ಕಿಂಗ್‌ಡಮ್ (ಯುಕೆ) ಮಾರ್ಗಗಳಲ್ಲಿನ ಇಂಧನ ಹೆಚ್ಚುವರಿ ಶುಲ್ಕವನ್ನು ಶೇ.38ರಷ್ಟು ಕಡಿತಗೊಳಿಸಿದೆ. ಇದೇ ವೇಳೆ ಆಸ್ಟ್ರೇಲಿಯಾ ಮತ್ತು ಉತ್ತರ ಅಮೆರಿಕ ಮಾರ್ಗಗಳಲ್ಲಿ ಈ ಶುಲ್ಕವನ್ನು ಶೇ.28.5ರಷ್ಟು ಇಳಿಕೆ ಮಾಡಲಾಗಿದೆ. ಈ ಮೊದಲು ಯುರೋಪ್ ಮತ್ತು ಯುಕೆಗೆ ಪ್ರಯಾಣಿಸುವ ಪ್ರತಿಯೊಬ್ಬ ಪ್ರಯಾಣಿಕರಿಂದ 205 ಡಾಲರ್ ಇಂಧನ ಹೆಚ್ಚುವರಿ ಶುಲ್ಕ ವಸೂಲಿ ಮಾಡಲಾಗುತ್ತಿತ್ತು. ಈಗ ಅದನ್ನು 125 ಡಾಲರ್‌ಗೆ ಇಳಿಸಲಾಗಿದೆ. ಅದೇ ರೀತಿ ಉತ್ತರ ಅಮೆರಿಕ ಮತ್ತು ಆಸ್ಟ್ರೇಲಿಯಾ ಮಾರ್ಗಗಳಲ್ಲಿ 280 ಡಾಲರ್ ಇದ್ದ ಶುಲ್ಕವನ್ನು 200 ಡಾಲರ್‌ಗೆ ಇಳಿಸಲಾಗಿದೆ.



ವಿಮಾನಯಾನ ಕ್ಷೇತ್ರದ ಮೂಲಗಳ ಪ್ರಕಾರ, ಈ ಇಳಿಕೆಯ ಲಾಭವನ್ನು ಪ್ರಯಾಣಿಕರಿಗೆ ವರ್ಗಾಯಿಸುವುದು ಸರ್ಕಾರದ ನಿರ್ದೇಶನವಾಗಿರುವುದರಿಂದ, ಮುಂದಿನ ದಿನಗಳಲ್ಲಿ ಅಂತಾರಾಷ್ಟ್ರೀಯ ಟಿಕೆಟ್ ದರದಲ್ಲಿ ಗಮನಾರ್ಹ ಇಳಿಕೆ ಕಾಣುವ ಸಾಧ್ಯತೆ ಇದೆ ಎನ್ನಲಾಗುತ್ತಿದೆ.

ಉದಾಹರಣೆಗೆ, ಒಂದು ಲಕ್ಷ ರೂಪಾಯಿ ಮೌಲ್ಯದ ಟಿಕೆಟ್‌ನಲ್ಲಿ ಕೇವಲ ಶೇ.10ರಷ್ಟು ಇಳಿಕೆಯಾದರೂ ಸುಮಾರು ರೂ.10,000 ಉಳಿತಾಯವಾಗಲಿದೆ ಎಂದು ಮೂಲಗಳು ತಿಳಿಸಿವೆ. ಇಂಡಿಗೋ ಈ ಬಗ್ಗೆ ಅಧಿಕೃತ ಪ್ರತಿಕ್ರಿಯೆ ನೀಡಿಲ್ಲ. ಆದರೆ, ಸರ್ಕಾರದ ನಿಯಮಗಳ ಪ್ರಕಾರ ಇಂಧನ ವೆಚ್ಚದಲ್ಲಿ ಉಂಟಾಗಿರುವ ಇಳಿಕೆಯ ಲಾಭವನ್ನು ಪ್ರಯಾಣಿಕರಿಗೆ ನೀಡಬೇಕಾಗಿರುವುದರಿಂದ, ಇಂಡಿಗೋ ಕೂಡ ಶೀಘ್ರದಲ್ಲೇ ಅಂತಾರಾಷ್ಟ್ರೀಯ ಟಿಕೆಟ್ ದರಗಳನ್ನು ಪರಿಷ್ಕರಿಸುವ ಸಾಧ್ಯತೆ ಇದೆ ಎನ್ನಲಾಗಿದೆ. ಸ್ಪೈಸ್‌ಜೆಟ್ ಮಾತ್ರ ತಾವು ಮಧ್ಯಪ್ರಾಚ್ಯ ಬಿಕ್ಕಟ್ಟಿನ ವೇಳೆ ಅಂತಾರಾಷ್ಟ್ರೀಯ ಮಾರ್ಗಗಳಲ್ಲಿ ಇಂಧನ ಹೆಚ್ಚುವರಿ ಶುಲ್ಕವನ್ನು ಹೆಚ್ಚಿಸಿರಲಿಲ್ಲ. ಹೀಗಾಗಿ ಈಗ ಕಡಿತಗೊಳಿಸುವ ಪ್ರಶ್ನೆಯೇ ಉದ್ಭವಿಸುವುದಿಲ್ಲ ಎಂದು ಸ್ಪಷ್ಟಪಡಿಸಿದೆ. ಇದೇ ವೇಳೆ ದೇಶೀಯ ವಿಮಾನ ಇಂಧನ ದರವೂ ಜುಲೈ 1ರಿಂದ ಕಡಿಮೆಯಾಗಿದೆ. ಆದರೆ, ದೇಶೀಯ ವಿಮಾನ ಟಿಕೆಟ್ ದರದಲ್ಲಿ ಅದರ ಲಾಭವನ್ನು ಪ್ರಯಾಣಿಕರಿಗೆ ತಕ್ಷಣವೇ ವರ್ಗಾಯಿಸುವ ಸಾಧ್ಯತೆ ಕಡಿಮೆ ಎಂದು ವಿಮಾನಯಾನ ವಲಯದ ಮೂಲಗಳು ತಿಳಿಸಿವೆ. ಮತ್ತೊಂದೆಡೆ, ಏರ್ ಇಂಡಿಯಾ ಎಕ್ಸ್‌ಪ್ರೆಸ್ ಮಧ್ಯಪ್ರಾಚ್ಯ ಮಾರ್ಗಗಳಲ್ಲಿನ ಸೇವೆಗಳನ್ನು ಸಂಪೂರ್ಣವಾಗಿ ಪುನರಾರಂಭಿಸಿದೆ.

**ಇಂದಿನಿಂದ ಕುವೈತ್ ವಿಮಾನ ಯಾನ ಸೇವೆ ಆರಂಭ:** ಒಮಾನ್‌ನ ಸಲಾಲಾ ಮತ್ತು ಕುವೈತ್‌ಗೆ ವಿಮಾನ ಸೇವೆಗಳನ್ನು ಪುನರಾರಂಭಿಸಲಾಗಿದೆ. ಕೋಯಿಕ್ಕೋಡ್-ಸಲಾಲಾ ಮಾರ್ಗದಲ್ಲಿ ಜುಲೈ 2ರಿಂದ ವಾರಕ್ಕೆ ಎರಡು ಬಾರಿ ವಿಮಾನ ಸಂಚಾರ ಆರಂಭವಾಗಿದ್ದು, ಕೋಯಿಕ್ಕೋಡ್-ಕುವೈತ್ ಸೇವೆ ಜುಲೈ 3ರಿಂದ ಹಾಗೂ ಬೆಂಗಳೂರು-ಕುವೈತ್ ವಿಮಾನ ಸೇವೆ ಜುಲೈ 4ರಿಂದ ಹಂತ ಹಂತವಾಗಿ ಆರಂಭವಾಗಲಿದೆ ಎಂದು ತಿಳಿದುಬಂದಿದೆ. ಈ ಬೆಳವಣಿಗೆ ಮಧ್ಯಪ್ರಾಚ್ಯ ರಾಷ್ಟ್ರಗಳಿಗೆ ಪ್ರಯಾಣಿಸುವ ಭಾರತೀಯರಿಗೆ ಮತ್ತಷ್ಟು ಅನುಕೂಲವಾಗಲಿದೆ.

# ಅಸೋಸಿಯೇಶನ್ ಆಫ್ ಬಂಟ್ಸ್ ಚಾರ್ಟರ್ಡ್ ಆಕೌಂಟೆಂಟ್ಸ್ ಮುಂಬಯಿ ಅಧ್ಯಕ್ಷರಾಗಿ ಸಿ.ಎ.ಜಗದೀಶ್ ಬಿ.ಶೆಟ್ಟಿ ಸುರತ್ಕಲ್ ಆಯ್ಕೆ

**ಮುಂಬಯಿ, ಜು.3:** ಬೃಹನ್ಮುಂಬಯಿ ಇಲ್ಲಿನ ಬಂಟ ಲೆಕ್ಕ ಪರಿಶೋಧಕರ ಸಂಸ್ಥೆಯಾಗಿರುವ ಅಸೋಸಿಯೇಶನ್ ಆಫ್ ಬಂಟ್ಸ್ ಚಾರ್ಟರ್ಡ್ ಆಕೌಂಟೆಂಟ್ಸ್ ಮುಂಬಯಿ (ಎಬಿಸಿಎ) ಇದರ ವಾರ್ಷಿಕ ಮಹಾಸಭೆಯು ಕಳೆದ ಬುಧವಾರ (ಜು.01) ಸಂಜೆ ಮುಂಬಯಿ ಸಾಕಿನಾಕ ಅಲ್ಲಿನ ಮುಂಬಯಿ ಮೆಟ್ರೋ ಹೊಟೇಲ್‌ನ ಬಾಂಕ್ವೆಟ್ ಸಭಾಗೃಹದಲ್ಲಿ ನಡೆಸಲ್ಪಟ್ಟಿತು.

ಅಸೋಸಿಯೇಶನ್‌ನ ಅಧ್ಯಕ್ಷ ಸಿಎ। ವಿಶ್ವನಾಥ್ ಶೆಟ್ಟಿ ಅಧ್ಯಕ್ಷತೆಯಲ್ಲಿ ನಡೆಸಲ್ಪಟ್ಟ ಮಹಾಸಭೆ ಹಾಗೂ 78ನೇ ಚಾರ್ಟರ್ಡ್ ಆಕೌಂಟೆಂಟ್ಸ್ ದಿನಾಚರಣೆಗೆ ಬಂಟರ ಸಂಘದ ಅಧ್ಯಕ್ಷ ಪ್ರವೀಣ್ ಭೋಜ ಶೆಟ್ಟಿ ಹಾಗೂ ಎಬಿಸಿಎ ಉಪಾಧ್ಯಕ್ಷ ಸಿಎ। ಅಶೋಕ್ ಶೆಟ್ಟಿ, ಗೌರವ ಪ್ರಧಾನ ಕಾರ್ಯದರ್ಶಿ ಸಿಎ। ಜಗದೀಶ್ ಬಿ.ಶೆಟ್ಟಿ ಶೆಟ್ಟಿ, ಕೋಶಾಧಿಕಾರಿ ಸಿಎ। ಸುದೇಶ್ ಶೆಟ್ಟಿ ಸೇರಿದಂತೆ ಹಿರಿಯ ಲೆಕ್ಕ ಪರಿಶೋಧಕರು ಉಪಸ್ಥಿತರಿದ್ದು, ದೀಪ ಪ್ರಜ್ವಲಿಸಿ ಚಾಲನೆ ನೀಡಿದರು.

**ಸಿಎ। ಜಗದೀಶ್ ಬಿ.ಶೆಟ್ಟಿ:**

ಕರ್ನಾಟಕ ಕರಾವಳಿಯ ಮಂಗಳೂರು ತಾಲೂಕು ಸುರತ್ಕಲ್ ಚೊಕ್ಕಬೆಟ್ಟು-ಕಟ್ಲ ಅಲ್ಲಿನ ರಾಧಾ ಹೆರಿಟೇಜ್‌ನ ಮಲ್ಲಮಾರ್ ಹೌಸ್ ಮೂಲತಃ ಭೋಜ ಶೆಟ್ಟಿ ಮತ್ತು ರಾಧಾ ಭೋಜ ಶೆಟ್ಟಿ ದಂಪತಿ ಸುಪುತ್ರ



ಆಗಿರುವ ಸಿಎ। ಜಗದೀಶ್‌ಬಿ. ಶೆಟ್ಟಿ ಅವರು ಮುಂಬಯಿ ಮಹಾನಗರದಲ್ಲಿನ ಪ್ರತಿಷ್ಠಿತ ಎಸ್‌ಎನ್‌ಎ (ಶೆಟ್ಟಿ ನಾಯ್ಕ್ ಏಂಡ್ ಅಸೋಸಿಯೇಟ್ಸ್) ಚಾರ್ಟರ್ಡ್ ಅಕೌಂಟೆಂಟ್ಸ್ ಇದರ ಸಂಸ್ಥಾಪಕ ಪಾಲುದಾರ ಆಗಿರುವರು.

ಬಂಟ್ಸ್ ಸಂಘ ಮುಂಬಯಿ ಸಂಚಾಲಿತ ಎಸ್.ಎಂ ಶೆಟ್ಟಿ ಶೈಕ್ಷಣಿಕ ಸಂಸ್ಥೆ ಪೊವಾಯಿ ಇದರ ಗೌರವ ಕೋಶಾಧಿಕಾರಿ ಆಗಿ, ಬಂಟ್ಸ್ ಸಂಘದ ಬೋರಿವಿಲಿ ಶಿಕ್ಷಣ ಸಮಿತಿಯ (ಉಪನಗರ ಬೊರಿವಲಿ ಪಶ್ಚಿಮದ ಬೋರಿವಿಲಿ ಐ.ಸಿ ಕಾಲೋನಿ ಅಲ್ಲಿ ರೂಪಿಸಿದ ಬಂಟ್ಸ್ ಸಂಘ'ಸ್ ಶಶಿಕಿರಣ್ ಶೆಟ್ಟಿ ಎಜ್ಯುಕೇಶನ್ ಇನ್‌ಸ್ಟಿಟ್ಯೂಶನ್ಸ್ ಶಿಕ್ಷಣ ಸಂಕುಲ) ಇದರ ಗೌರವ ಕೋಶಾಧಿಕಾರಿ ಆಗಿ, ಎಬಿಸಿಎ ಗೌರವ ಪ್ರಧಾನ ಕಾರ್ಯದರ್ಶಿ ಆಗಿ ಸೇವೆಸಲ್ಲಿಸಿರುತ್ತಾರೆ. ಪ್ರಸ್ತುತ ಬಂಟ್ಸ್ ಸಂಘದ ಮಾತೃಭೂಮಿ ಕೋ.ಆಪರೇಟಿವ್ ಕ್ರೆಡಿಟ್ ಸೊಸೈಟಿ ಇದರ ವೃತ್ತಿಪರ ನಿರ್ದೇಶಕ, ಬೊರಿವಿಲಿ ಶಿಕ್ಷಣ ಸಮಿತಿಯ ಕಾರ್ಯದರ್ಶಿ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ಕೆಯುಡಬ್ಲ್ಯೂಜೆ) ಮಹಾರಾಷ್ಟ್ರ ರಾಜ್ಯ ಘಟಕದ ಸಲಹೆಗಾರ, ಚುನಾವಣಾಧಿಕಾರಿ ಆಗಿ, ಕನ್ನಡಿಗ ಪತ್ರಕರ್ತರ ಸಂಘ ಮಹಾರಾಷ್ಟ್ರದ ಸಲಹೆಗಾರರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.

ಸೈಂಟ್ ಕ್ಸೇವಿಯರ್ಸ್ ಕಾಲೇಜ್‌ನಿಂದ (ಮುಂಬಯಿ ವಿಶ್ವವಿದ್ಯಾಲಯ) ವಾಣಿಜ್ಯ ಪದವಿ (ಬಿಕಾಂ) ಪಡೆದಿದ್ದು, ಇನ್‌ಸ್ಟಿಟ್ಯೂಟ್ ಆಫ್ ಚಾರ್ಟರ್ಡ್ ಅಕೌಂಟೆಂಟ್ಸ್ ಆಫ್ ಇಂಡಿಯಾ (ಐಸಿಎಐ) ಇದರ ಫೆಲೋ ಸದಸ್ಯರಾಗಿ ಅರ್ಹ ಚಾರ್ಟರ್ಡ್ ಅಕೌಂಟೆಂಟ್ ಎಂದೆಣಿಸಿದ್ದಾರೆ. ಐಸಿಎಐ ಸಂಸ್ಥೆಯಿಂದ ಇನ್‌ಫರ್‌ಮೇಶನ್ ಸಿಸ್ಟಮ್ಸ್ ಆಡಿಟರ್ ಅರ್ಹತೆ (ಡಿಐಎಸ್‌ಎ-ಐಸಿಎಐ) ಪಡೆದಿದ್ದಾರೆ. ಮುಂಬಯಿ ವಿಶ್ವವಿದ್ಯಾಲಯ ನಿಂದ ಕಾನೂನು ಪದವಿ (ಎಲ್‌ಎಲ್‌ಬಿ) ಪದವೀಧರರಾಗಿದ್ದು, ಐಸಿಎಐ ನೀಡುವ ಸರ್ಟಿಫೈಡ್ ಫೋರೆನ್ಸಿಕ್ ಆಡಿಟರ್ (ಎಫ್‌ಎಎಫ್‌ಡಿ- ಐಸಿಎಐ) ಪ್ರಮಾಣಪತ್ರ ಸಹ ಪಡೆದಿದ್ದಾರೆ. ಕಳೆದ ಸುಮಾರು ಮೂರು ದಶಕಗಳಿಂದ ಚಾರ್ಟರ್ಡ್ ಅಕೌಂಟೆಂಟ್ ವೃತ್ತಿಯಲ್ಲಿ ತೊಡಗಿಸಿಕೊಂಡಿದ್ದು ಅವರು ಐಸಿಎಐ ಇದರು ಡಬ್ಲ್ಯೂಐಆರ್‌ಸಿ ಸಾರ್ವಜನಿಕ ಮತ್ತು ಸರ್ಕಾರಿ ಹಣಕಾಸು ನಿರ್ವಹಣಾ ಸಮಿತಿಯ ಸದಸ್ಯರಾಗಿದ್ದಾರೆ. ಸಾರ್ವಜನಿಕ ಮತ್ತು ಖಾಸಗಿ ಕಂಪನಿಗಳ ಮಂಡಳಿಗಳಲ್ಲಿ ವೃತ್ತಿಪರ ಹುದ್ದೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಮುಂಬಯಿಯ ಹಲವಾರು ಸಂಘ-ಸಂಸ್ಥೆಗಳಲ್ಲೂ ವೃತ್ತಿಪರವಾಗಿ ಸಕ್ರೀಯರಾಗಿದ್ದಾರೆ.ಎಸ್‌ಎನ್‌ಎ ಚಾರ್ಟರ್ಡ್ ಅಕೌಂಟೆಂಟ್ಸ್ ಸಂಸ್ಥೆಯಲ್ಲಿ ತೆರಿಗೆ, ಲೆಕ್ಕಪರಿಶೋಧನೆ ಮತ್ತು ಭರವಸೆ (ಆಡಿಟ್ ಮತ್ತು ಅಶ್ಯೂರನ್ಸ್ ), ನಿಯಮಪಾಲನೆ, ಸೂಕ್ತ ಪರಿಶೀಲನೆ, ವಿಲೀನ ಮತ್ತು ಸ್ವಾಧೀನ, ಪುನರ್ರಚನೆ ಮತ್ತು ಮೌಲ್ಯಮಾಪನ, ಕಂಪನಿ ಕಾನೂನು ಮತ್ತು ಎಫ್‌ಇಎಂಎ ವಿಷಯಗಳ ಸಂಪೂರ್ಣ ಕಾರ್ಯಕ್ಷೇತ್ರದ ಪರಿಣತರಾಗಿದ್ದಾರೆ. ಎಸ್‌ಎನ್‌ಎ ಸಂಸ್ಥೆಯಲ್ಲಿ ಸಾವಿರಾರು ಗ್ರಾಹಕರನ್ನು ಹೊಂದಿದ್ದು ವಿಧ ಪಕ್ಷಗಳು, ಗ್ರಾಹಕರ ನಡುವಿನ ವಿವಾದಗಳನ್ನು ಕಾನೂನು ಸಲಹೆ ಅಥವಾ ಸೂಕ್ತ ಪರಿಹಾರಗಳನ್ನು ನೀಡಿ ಬಗೆಹರಿಸುವ ಸಲಹೆಗಾರರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಸಂಬಂಧಿತ ಕಾನೂನುಗಳು, ವಿಧಾನಗಳು ಮತ್ತು ನೀತಿಗಳನ್ನು ವಿಶ್ಲೇಷಿಸಿ ಅನ್ವಯಿಸುವ ಮೂಲಕ ವಿವಾದಗಳನ್ನು ಪರಿಹರಿಸುವಲ್ಲೂ ಸೇವಾ ನಿರತರಾಗಿದ್ದಾರೆ.

# ಅಯೋಧ್ಯೆ ರಾಮಮಂದಿರದಲ್ಲಿ ದೇಣಿಗೆ ಕಳ್ಳತನ ಪ್ರಕರಣ: ಕಠಿಣ ಕ್ರಮಕ್ಕೆ ಆರ್‌ಎಸ್‌ಎಸ್ ಆಗ್ರಹ

**ನವದೆಹಲಿ, ಜು.3:** ಅಯೋಧ್ಯೆಯ ಶ್ರೀರಾಮ ಜನ್ಮಭೂಮಿ ಮಂದಿರದಲ್ಲಿ ಕಾಣಿಕೆ ಪೆಟ್ಟಿಗೆಗಳಲ್ಲಿ ನಡೆದ ಕಳ್ಳತನದ ಘಟನೆಯು ಭಕ್ತರ ಭಾವನೆಗಳಿಗೆ ಗಂಭೀರ ಧಕ್ಕೆಯುಂಟುಮಾಡಿದೆ ಎಂದು ರಾಷ್ಟ್ರೀಯ ಸ್ವಯಂಸೇವಕ ಸಂಘ ಹೇಳಿದೆ. ಈ ಘಟನೆ ಕುರಿತು ಸಂಘದ ಸರಕಾರ್ಯವಾಹ ದತ್ತಾತ್ರೇಯ ಹೊಸಬಾಳೆ ಅವರು ಅಧಿಕೃತ ಹೇಳಿಕೆ ಬಿಡುಗಡೆ ಮಾಡಿದ್ದಾರೆ.

ತಮ್ಮ ಹೇಳಿಕೆಯಲ್ಲಿ, ಶ್ರೀರಾಮ ಜನ್ಮಭೂಮಿ ಮಂದಿರವು ಹಲವು ತಲೆಮಾರುಗಳ ಹೋರಾಟ, ತ್ಯಾಗ ಮತ್ತು ಭಕ್ತರ ಬಲಿದಾನಗಳ ಫಲವಾಗಿ ನಿರ್ಮಿತವಾದ ಧಾರ್ಮಿಕ ಕೇಂದ್ರವಾಗಿದ್ದು, ಇದು ಇಂದು ದೇಶದ ಕೋಟ್ಯಂತರ ರಾಮಭಕ್ತರಿಗೆ ಭಕ್ತಿ ಮತ್ತು ಶ್ರದ್ಧೆಯ ಕೇಂದ್ರವಾಗಿದೆ. ಇಂತಹ ಪವಿತ್ರ ಸ್ಥಳದಲ್ಲಿ ನಡೆದ ಕಳ್ಳತನದ ಘಟನೆ ಸಮಾಜದ ಭಾವನೆಗಳನ್ನು ಆಳವಾಗಿ ನೋಯಿಸಿದೆ ಎಂದು ಅವರು ವಿಷಾದ ವ್ಯಕ್ತಪಡಿಸಿದ್ದಾರೆ.

ಈ ಪ್ರಕರಣದ ಕುರಿತು ಉತ್ತರ ಪ್ರದೇಶ ಸರ್ಕಾರ ವಿಶೇಷ ತನಿಖಾ ತಂಡವನ್ನು ರಚಿಸಿದ್ದು, ಅದರ ಶಿಫಾರಸುಗಳ ಆಧಾರದಲ್ಲಿ ಕಾನೂನು ಕ್ರಮ ಆರಂಭಿಸಲಾಗಿದೆ. ತನಿಖೆಯಲ್ಲಿ ತಪ್ಪಿತಸ್ಥರು ಕಂಡುಬಂದರೆ ಅವರಿಗೆ ಕಠಿಣ ಶಿಕ್ಷೆ ವಿಧಿಸಬೇಕು ಎಂದು ಆಗ್ರಹಿಸಿದ್ದಾರೆ.


ಮಂದಿರ ಆಡಳಿತವು ಈ ಘಟನೆಯನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಿ, ನಿರ್ವಹಣಾ ವ್ಯವಸ್ಥೆಯಲ್ಲಿನ ಎಲ್ಲಾ ಲೋಪಗಳನ್ನು ಸರಿಪಡಿಸುವ ಅಗತ್ಯವಿದೆ ಎಂದು ಆರ್‌ಎಸ್‌ಎಸ್ ಹೇಳಿದೆ. ಹಣಕಾಸು ನಿರ್ವಹಣೆಯಲ್ಲಿ ಪಾರದರ್ಶಕತೆ, ಸುಧಾರಿತ ಕಾರ್ಯವಿಧಾನಗಳು ಹಾಗೂ ಧಾರ್ಮಿಕ ಶುದ್ಧತೆ ಮತ್ತು ಪಾವಿತ್ರ್ಯತೆಯನ್ನು ಕಾಪಾಡುವ ವ್ಯವಸ್ಥೆ ಅಗತ್ಯವಾಗಿದೆ ಎಂದು ಹೊಸಬಾಳೆ ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ಭಕ್ತರು ಶಾಂತಿ ಮತ್ತು ಸಹನೆ ಕಾಯ್ದುಕೊಳ್ಳಬೇಕು ಹಾಗೂ ಧರ್ಮ ಮತ್ತು ಸಮಾಜದ ವಿರುದ್ಧ ದುರುದ್ದೇಶದಿಂದ ನಡೆಯುವ ಪ್ರಚಾರಗಳಿಗೆ ಅವಕಾಶ ನೀಡಬಾರದು ಎಂದು ಸಂಘ ಕರೆ ನೀಡಿದೆ. ರಾಮಮಂದಿರದ ಮೇಲೆ ಭಕ್ತರ ನಂಬಿಕೆ ಮತ್ತು ಭಾವನೆಗಳನ್ನು ಅಸ್ಥಿರಗೊಳಿಸುವ ಯಾವುದೇ ಪ್ರಯತ್ನಗಳನ್ನು ತಡೆಯಬೇಕು ಎಂದು ಅವರು ಒತ್ತಾಯಿಸಿದ್ದಾರೆ.

# ಬೀದಿಬದಿ ವ್ಯಾಪಾರಿಗಳ ತೆರವಿಲ್ಲ, ವಾರ್ಡ್‌ಮಟ್ಟದ ರಸ್ತೆಗೆ ಸ್ಥಳಾಂತರವಷ್ಟೇ: ಸಚಿವ ಕೃಷ್ಣ ಬೈರೇಗೌಡ ಸ್ಪಷ್ಟನೆ

**ಬೆಂಗಳೂರು, ಜು.3:** ಫುಟ್‌ಪಾತ್ ಒತ್ತುವರಿ ತೆರವು ವಿಚಾರ ಉಲ್ಟಾ ಹೊಡೆಯಲಿದೆ ಎಂಬುದು ಅರಿವಿಗೆ ಬರುತ್ತಿದ್ದಂತೆ ಪ್ರತಿಕ್ರಿಯಿಸಿರುವ ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ, ಯಾವುದೇ ಕಾರಣಕ್ಕೂ ಬೀದಿ ಬದಿ ವ್ಯಾಪಾರಿಗಳನ್ನು ತೆರವುಗೊಳಿಸುತ್ತಿಲ್ಲ ಅವರನ್ನು ಪ್ರಮುಖ ರಸ್ತೆಗಳಿಂದ ವಾರ್ಡ್ ಮಟ್ಟದ ರಸ್ತೆಗಳಿಗೆ ಸ್ಥಳಾಂತರಿಸಲಾಗುತ್ತಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಪಾದಚಾರಿ ಮಾರ್ಗಗಳ ಒತ್ತುವರಿ ತೆರವು ಕುರಿತು ಅಧಿಕಾರಿಗಳೊಂದಿಗೆ ನಡೆದ ವರ್ಚುವಲ್ ಸಭೆಯಲ್ಲಿ ಮಾತನಾಡಿದ ಅವರು, ವ್ಯಾಪಾರಿಗಳಷ್ಟೇ ಅಲ್ಲದೆ ಅನಾಥ ವಾಹನಗಳು, ಅಕ್ರಮ ಪಾರ್ಕಿಂಗ್, ವಿವಿಧ ಅಡೆತಡೆಗಳನ್ನೂ ಹಂತ ಹಂತವಾಗಿ ತೆರವುಗೊಳಿಸಿ ಸಾರ್ವಜನಿಕರಿಗೆ ಸುರಕ್ಷಿತ ಹಾಗೂ ಸುಗಮ ಪಾದಚಾರಿ ಮಾರ್ಗ ಕಲ್ಪಿಸಬೇಕು ಎಂದು ಸೂಚಿಸಿದರು.



ಒತ್ತುವರಿ ತೆರವುಗೊಳಿಸಿದ ರಸ್ತೆಗಳಲ್ಲಿ ತಕ್ಷಣವೇ ಅಭಿವೃದ್ಧಿ ಕಾಮಗಾರಿಗಳನ್ನು ಆರಂಭಿಸಬೇಕು. ಉತ್ತಮ ಗುಣಮಟ್ಟದ ಪಾದಚಾರಿ ಮಾರ್ಗಗಳನ್ನು ನಿರ್ಮಿಸಿ, ಬಳಿಕ ಸ್ಥಳೀಯ ನಾಗರಿಕರೊಂದಿಗೆ ಪರಿಶೀಲನೆ ನಡೆಸಿ ಸಾರ್ವಜನಿಕರ ಅಭಿಪ್ರಾಯವನ್ನೂ ಪಡೆಯಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

### ಜು.10ರಿಂದ ಅನಾಥವಾಹನ, ಜು.15ರ ನಂತರ ಕಟ್ಟಡ ತ್ಯಾಜ್ಯ ತೆರವು ಅಭಿಯಾನ

ನಗರದ ರಸ್ತೆ ಬದಿಗಳಲ್ಲಿ ನಿಂತಿರುವ ಅನಾಥ ವಾಹನಗಳ ತೆರವು ಅಭಿಯಾನವನ್ನು ಜು.10ರಿಂದ ಆರಂಭಿಸಲಾಗುವುದು. ನಗರ ಪಾಲಿಕೆ ಹಾಗೂ ಸಂಚಾರಿ ಪೊಲೀಸರು ಜಂಟಿಯಾಗಿ ಕಾರ್ಯಾಚರಣೆ ನಡೆಸಲಿದ್ದಾರೆ. ಜು.15ರ ನಂತರ ಬೃಹತ್ ಕಟ್ಟಡ ತ್ಯಾಜ್ಯ ಹಾಗೂ ಗಿಡಗಂಟಿಗಳ ತೆರವು ಅಭಿಯಾನವನ್ನೂ ಕೈಗೊಳ್ಳಲಾಗುತ್ತದೆ ಎಂದು ಕೃಷ್ಣ ಬೈರೇಗೌಡ ತಿಳಿಸಿದರು.

### ಪಾದಚಾರಿ ಮಾರ್ಗದ ಮೇಲೆ ನಿರ್ಮಿಸಿರುವ ರ್‍ಯಾಂಪ್ ತೆರವು

ಮನೆ ಹಾಗೂ ವಾಣಿಜ್ಯ ಕಟ್ಟಡಗಳ ಮುಂದೆ ಪಾದಚಾರಿ ಮಾರ್ಗದ ಮೇಲೆ ನಿರ್ಮಿಸಿರುವ ರ್‍ಯಾಂಪ್‌ಗಳು ಸಾರ್ವಜನಿಕರ ಓಡಾಟಕ್ಕೆ ತೊಂದರೆಯಾಗುತ್ತಿರುವ ಹಿನ್ನೆಲೆಯಲ್ಲಿ ಮುಂದಿನ ಹಂತದಲ್ಲಿ ಅವುಗಳ ತೆರವಿಗೂ ಕಾರ್ಯಾಚರಣೆ ನಡೆಸಲಾಗುವುದು ಎಂದು ಕೃಷ್ಣ ಬೈರೇಗೌಡ ಹೇಳಿದರು. ಇದೇ ವೇಳೆ ಸಚಿವರು ಬಿಡುಗಡೆ ಮಾಡಿದ ವಿಡಿಯೋ ಸಂದೇಶದಲ್ಲಿ, ಸುಪ್ರೀಂ ಕೋರ್ಟ್ ನಿರ್ದೇಶನ ಹಾಗೂ ಸಾರ್ವಜನಿಕರ ಬಹುಕಾಲದ ಬೇಡಿಕೆಯ ಹಿನ್ನೆಲೆಯಲ್ಲಿ ಪ್ರಮುಖ ರಸ್ತೆಗಳ ಪಾದಚಾರಿ ಮಾರ್ಗಗಳ ಒತ್ತುವರಿ ತೆರವುಗೊಳಿಸಲಾಗುತ್ತಿದೆ ಎಂದರು.ಯಾರ ಜೀವನೋಪಾಯಕ್ಕೂ ತೊಂದರೆ ಉಂಟುಮಾಡುವುದು ಸರ್ಕಾರದ ಉದ್ದೇಶವಲ್ಲ. ಆದರೆ ಪಾದಚಾರಿಗಳ ಜೀವ ರಕ್ಷಣೆ ಸರ್ಕಾರದ ಜವಾಬ್ದಾರಿಯಾಗಿದೆ. ನಗರದ ಕೇವಲ ಶೇ.20ರಷ್ಟು ಪ್ರಮುಖ ರಸ್ತೆಗಳಲ್ಲಿ ಮಾತ್ರ ಈ ಕಾರ್ಯಾಚರಣೆ ನಡೆಯುತ್ತಿದ್ದು, ಉಳಿದ ರಸ್ತೆಗಳಲ್ಲಿ ವ್ಯಾಪಾರಕ್ಕೆ ಅವಕಾಶ ಇರುತ್ತದೆ. ಸಾರ್ವಜನಿಕರು ಮತ್ತು ವ್ಯಾಪಾರಿಗಳು ಸಹಕರಿಸಿದರೆ ಮಾತ್ರ ಬೆಂಗಳೂರು ಸುರಕ್ಷಿತ ಹಾಗೂ ವ್ಯವಸ್ಥಿತ ನಗರವಾಗಲಿದೆ ಎಂದು ಸಚಿವರು ಮನವಿ ಮಾಡಿಕೊಂಡಿದ್ದಾರೆ.



ವಿರಾಜಪೇಟೆ ಶಾಸಕ ಎ.ಎಸ್.ಪೊನ್ನಣ್ಣ ನೇತೃತ್ವದಲ್ಲಿ ಕೊಡಗು ಭಾಗದ ಮಾಜಿ ಸೈನಿಕರು ಹಾಗೂ ಪದ್ಮಶ್ರೀ ಪ್ರಶಸ್ತಿ ಪುರಸ್ಕೃತ ಕ್ರೀಡಾಪಟುಗಳ ನಿಯೋಗ ಸಿಎಂ ಡಿ.ಕೆ.ಶಿವಕುಮಾರ್ ಅವರನ್ನು ವಿಧಾನಸೌಧದಲ್ಲಿ ಶುಕ್ರವಾರ ಭೇಟಿ ಮಾಡಿ ಸಮಾಲೋಚನೆ ನಡೆಸಿದರು. ನಿವೃತ್ತ ಬ್ರಿಗೇಡಿಯರ್ ಬ್ರಿಜ್ ಚೆನಂಡ ಚೀಯಣ್ಣ, ನಿವೃತ್ತ ಏರ್ ಮಾರ್ಷಲ್ ಬಿ ಯು ಚೆಂಗಪ್ಪ, ನಿವೃತ್ತ ಲೆಫ್ಟಿನೆಂಟ್ ಕರ್ನಲ್ ಪಿ ಎಸ್ ಗಣಪತಿ, ನಿವೃತ್ತ ಮೇಜರ್ ಜನರಲ್ ಅರ್ಜುನ್ ಮುತ್ತಯ್ಯ, ನಿವೃತ್ತ ಮೇಜರ್ ಜನರಲ್ ಬಚಮಂಡ ಕಾರ್ಯಪ್ಪ, ನಿವೃತ್ತ ಬ್ರಿಗೇಡಿಯರ್ ಎಂ.ಎ.ದೇವಯ್ಯ, ನಿವೃತ್ತ ಕರ್ನಲ್ ಸಿ.ಪಿ.ಮುತ್ತಯ್ಯ, ಭಾರತ ಹಾಕಿ ತಂಡದ ಮಾಜಿ ನಾಯಕರಾದ ಡಾ. ಎಂ.ಪಿ.ಗಣೇಶ್, ಎಂ.ಎಂ.ಸೋಮಯ್ಯ, ಬಿ.ಸುಬ್ರಮಣಿ ಅವರು ಇದ್ದರು.

**ಕರ್ನಾಟಕದಲ್ಲಿ ಕ್ರೂಸ್, ಬೀಚ್ ಪ್ರವಾಸೋದ್ಯಮಕ್ಕೆ ವಿಶೇಷ ಒತ್ತು**

# ಕರಾವಳಿ-ಮಲೆನಾಡು ಭಾಗಕ್ಕೆ ಹೊಸನೀತಿ, ಪ್ರವಾಸಿ ಸೌಲಭ್ಯಗಳಿಗೆ ಆದ್ಯತೆ: ಸಚಿವ ಕೆ.ಜೆ. ಜಾರ್ಜ್

**ಬೆಂಗಳೂರು, ಜು.3:** ಕರ್ನಾಟಕವನ್ನು ದೇಶದ ಪ್ರಮುಖ ಪ್ರವಾಸೋದ್ಯಮ ತಾಣವನ್ನಾಗಿ ರೂಪಿಸುವ ನಿಟ್ಟಿನಲ್ಲಿ, ಕರಾವಳಿ ಮತ್ತು ಮಲೆನಾಡು ಪ್ರದೇಶಗಳ ಪ್ರವಾಸೋದ್ಯಮಕ್ಕೆ ಹೊಸ ಚೈತನ್ಯ ನೀಡುವ 'ಕರಾವಳಿ–ಮಲೆನಾಡು ಕರ್ನಾಟಕ ಪ್ರವಾಸೋದ್ಯಮ ನೀತಿ 2026 ರೂಪಿಸಲಾಗುತ್ತಿದ್ದು, ಈ ನೀತಿಯಲ್ಲಿ ಕ್ರೂಸ್ ಪ್ರವಾಸೋದ್ಯಮ, ಬೀಚ್ ಪ್ರವಾಸೋದ್ಯಮ ಹಾಗೂ ವಿಶ್ವದರ್ಜೆಯ ಪ್ರವಾಸಿ ಸೌಲಭ್ಯಗಳಿಗೆ ವಿಶೇಷ ಆದ್ಯತೆ ನೀಡಬೇಕು ಎಂದು ಇಂಧನ ಮತ್ತು ಪ್ರವಾಸೋದ್ಯಮ ಸಚಿವರಾದ ಕೆ.ಜೆ. ಜಾರ್ಜ್ ಅಧಿಕಾರಿಗಳಿಗೆ ಸೂಚಿಸಿದರು.

ಇಂದು ಇಂಧನ ಭವನದಲ್ಲಿ ಪ್ರವಾಸೋದ್ಯಮ ಇಲಾಖೆಯ ಹಿರಿಯ ಅಧಿಕಾರಿಗಳೊಂದಿಗೆ ಇಲಾಖೆಯ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನೆ ನಡೆಸಿದ ಸಚಿವರು, ರಾಜ್ಯದ ಪ್ರವಾಸೋದ್ಯಮವನ್ನು ಮೇಲ್ದರ್ಜೆಗೇರಿಸುವ ದೂರದೃಷ್ಟಿಯ ಕಾರ್ಯತಂತ್ರಗಳ ಕುರಿತು ಸುದೀರ್ಘ ಚರ್ಚೆ ನಡೆಸಿದರು.

ರಾಜ್ಯದ ಕರಾವಳಿ ಹಾಗೂ ಮಲೆನಾಡು ವ್ಯಾಪ್ತಿಯ ಆರು ಜಿಲ್ಲೆಗಳ ಪ್ರವಾಸೋದ್ಯಮ ಸಾಮರ್ಥ್ಯವನ್ನು ಸಮಗ್ರವಾಗಿ ಅಭಿವೃದ್ಧಿಪಡಿಸುವ ಉದ್ದೇಶದಿಂದ ಸಿದ್ಧವಾಗುತ್ತಿರುವ ಹೊಸ ಪ್ರವಾಸೋದ್ಯಮ ನೀತಿಯಲ್ಲಿ, ವಿಷಯಾಧಾರಿತ ಪ್ರವಾಸೋದ್ಯಮ ಸರ್ಕೀಟ್‌ಗಳು, ಕಡಲತೀರ ಪ್ರವಾಸೋದ್ಯಮ, ಕ್ರೂಸ್ ಪ್ರವಾಸೋದ್ಯಮ, ಸಾಹಸ ಕ್ರೀಡೆಗಳು ಹಾಗೂ ಸ್ಥಳೀಯ ಆರ್ಥಿಕತೆಯನ್ನು ಉತ್ತೇಜಿಸುವ ಕಾರ್ಯಕ್ರಮಗಳಿಗೆ ಆದ್ಯತೆ ನೀಡಬೇಕು

ಅಂತಾರಾಷ್ಟ್ರೀಯ ಕ್ರೂಸ್ ಹಡಗುಗಳು ಮಂಗಳೂರು ಸೇರಿದಂತೆ ರಾಜ್ಯದ ವಿವಿಧ ಬಂದರುಗಳಿಗೆ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುವಂತೆ ಸಮಗ್ರ ಕಾರ್ಯತಂತ್ರ ರೂಪಿಸಬೇಕಿದೆ. ಕ್ರೂಸ್ ಪ್ರವಾಸಿಗರು ಕರ್ನಾಟಕದಲ್ಲಿ ಹೆಚ್ಚು ದಿನ ಉಳಿಯುವಂತೆ ಆಕರ್ಷಕ ಪ್ರವಾಸೋದ್ಯಮ ಪ್ಯಾಕೇಜ್‌ಗಳು ಮತ್ತು ಸರ್ಕೀಟ್‌ಗಳನ್ನು ಅಭಿವೃದ್ಧಿಪಡಿಸಬೇಕು. ಈ ನಿಟ್ಟಿನಲ್ಲಿ ಪ್ರಮುಖ ಕ್ರೂಸ್ ಆಪರೇಟರ್‌ಗಳೊಂದಿಗೆ ಸಭೆ ನಡೆಸಿ, ಅವರ ಹಾಗೂ ಪ್ರವಾಸಿಗರ ನಿರೀಕ್ಷೆಗಳನ್ನು ಆಧರಿಸಿ ನೀತಿಯಲ್ಲಿ ಅಗತ್ಯ ಬದಲಾವಣೆಗಳನ್ನು ಅಳವಡಿಸಿಕೊಳ್ಳುವಂತೆ ಅಧಿಕಾರಿಗಳಿಗೆ ಸಚಿವರಾದ ಕೆಜೆ ಜಾರ್ಜ್ ಸೂಚಿಸಿದರು.

ಬೀಚ್ ಪ್ರವಾಸೋದ್ಯಮವನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ, ಬ್ಲೂ ಫ್ಲಾಗ್ ಬೀಚ್‌ಗಳ ಅಭಿವೃದ್ಧಿ, ಸ್ವಚ್ಛತೆ, ಸುರಕ್ಷತೆ, ಪ್ರವಾಸಿಗರ ಅನುಕೂಲಕ್ಕಾಗಿ ಅಗತ್ಯ ಮೂಲ ಸೌಕರ್ಯ, ಜಲಕ್ರೀಡೆಗಳು, ಸಾಹಸ ಚಟುವಟಿಕೆಗಳು ಹಾಗೂ ಸಮುದ್ರ ತೀರದಲ್ಲಿ ಗುಣಮಟ್ಟದ ಪ್ರವಾಸಿ ಅನುಭವ ಕಲ್ಪಿಸುವ ಯೋಜನೆಗಳನ್ನು ಹೊಸ ನೀತಿಯಲ್ಲಿ ಸೇರಿಸಬೇಕು ಎಂದು ಅವರು ತಿಳಿಸಿದರು.

ಇದರ ಜೊತೆಗೆ, ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ ಮತ್ತು ಜಂಗಲ್ ಲಾಡ್ಜಸ್ ಅಂಡ್ ರೆಸಾರ್ಟ್ಸ್ ವ್ಯಾಪ್ತಿಯ ಪ್ರವಾಸಿ ತಾಣಗಳಲ್ಲಿ ಗುಣಮಟ್ಟದ ವಸತಿ, ಮೂಲಭೂತ ಸೌಕರ್ಯ, ಸ್ವಚ್ಛತೆ, ಮಾಹಿತಿ ವ್ಯವಸ್ಥೆ ಹಾಗೂ ಪ್ರವಾಸಿಗರಿಗೆ ಅಗತ್ಯವಾದ ಸೇವೆಗಳನ್ನು ಮತ್ತಷ್ಟು ವಿಸ್ತರಿಸುವ ಮೂಲಕ ಪ್ರವಾಸಿಗರ



ಅನುಭವವನ್ನು ಉತ್ತಮಗೊಳಿಸಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. "ಪ್ರವಾಸೋದ್ಯಮ ಎಂದರೆ ಕೇವಲ ಪ್ರವಾಸಿ ತಾಣಗಳ ಅಭಿವೃದ್ಧಿಯಲ್ಲ; ಪ್ರವಾಸಿಗರಿಗೆ ವಿಶ್ವದರ್ಜೆಯ ಅನುಭವವನ್ನು ನೀಡುವ ಸಮಗ್ರ ಪರಿಸರ ವ್ಯವಸ್ಥೆಯನ್ನು ನಿರ್ಮಿಸುವುದು. ಉತ್ತಮ ಮೂಲಸೌಕರ್ಯ, ಸುಲಭ ಸಂಪರ್ಕ, ಸುರಕ್ಷತೆ ಮತ್ತು ಗುಣಮಟ್ಟದ ಸೇವೆಗಳ ಮೂಲಕವೇ ಕರ್ನಾಟಕವನ್ನು ಜಾಗತಿಕ ಪ್ರವಾಸೋದ್ಯಮ ನಕ್ಷೆಯಲ್ಲಿ ಉತ್ತಮ ಸ್ಥಾನ ಪಡೆಯಬಹುದಾಗಿದೆ," ಎಂದರು.

**ಆದಾಯಮೀರಿ ಆಸ್ತಿ ಗಳಿಕೆ: ಕೆ.ಎಸ್.ಈಶ್ವರಪ್ಪಗೆ ಹೈಕೋರ್ಟ್‌ನಲ್ಲಿ ಹಿನ್ನಡೆ**

# ಲೋಕಾಯುಕ್ತ ದಾಖಲಿಸಿರುವ ಪ್ರಕರಣ ರದ್ದು, ಬಂಧನದಿಂದ ರಕ್ಷಣೆ ಕೋರಿದ್ದ ಅರ್ಜಿ ವಜಾ

**ಬೆಂಗಳೂರು, ಜು.3:** ಆದಾಯ ಮೀರಿ ಆಸ್ತಿ ಗಳಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಬಿಜೆಪಿ ಹಿರಿಯ ನಾಯಕ ಹಾಗೂ ಮಾಜಿ ಸಚಿವ ಕೆ.ಎಸ್. ಈಶ್ವರಪ್ಪ ಅವರಿಗೆ ಕರ್ನಾಟಕ ಹೈಕೋರ್ಟ್‌ನಲ್ಲಿ ಹಿನ್ನಡೆಯಾಗಿದೆ. ಲೋಕಾಯುಕ್ತ ದಾಖಲಿಸಿರುವ ಪ್ರಕರಣದಲ್ಲಿ ಬಂಧನದಿಂದ ರಕ್ಷಣೆ ನೀಡುವಂತೆ ಹಾಗೂ ಪ್ರಕರಣವನ್ನು ರದ್ದುಪಡಿಸುವಂತೆ ಸಲ್ಲಿಸಿದ್ದ ಅವರ ಅರ್ಜಿಯನ್ನು ಹೈಕೋರ್ಟ್ ವಜಾಗೊಳಿಸಿದೆ. ಪ್ರಕರಣವನ್ನು ರದ್ದುಪಡಿಸುವುದು ಹಾಗೂ ಬಂಧನದಿಂದ ರಕ್ಷಣೆ ನೀಡುವಂತೆ ಕೋರಿ ಸಲ್ಲಿಸಿದ್ದ ಅರ್ಜಿಯನ್ನು ಹೈಕೋರ್ಟ್ ವಜಾಗೊಳಿಸಿದ್ದು, ಇದರೊಂದಿಗೆ ಲೋಕಾಯುಕ್ತ ತನಿಖೆಗೆ ಇದ್ದ ಕಾನೂನು ಅಡೆತಡೆ ದೂರವಾದಂತಾಗಿದೆ. ನ್ಯಾಯಾಲಯದ



ಈ ಆದೇಶದಿಂದ ಈಶ್ವರಪ್ಪ ಅವರಿಗೆ ಕಾನೂನು ಸಂಕಷ್ಟ ಮತ್ತಷ್ಟು ಹೆಚ್ಚುವ ಸಾಧ್ಯತೆ ಇದೆ.ಲೋಕಾಯುಕ್ತದ ತನಿಖೆಯನ್ನು ಪ್ರಶ್ನಿಸಿ ಹಾಗೂ ತಮ್ಮ ವಿರುದ್ಧ ದಾಖಲಾಗಿರುವ ಪ್ರಕರಣವನ್ನು ರದ್ದುಗೊಳಿಸುವಂತೆ ಈಶ್ವರಪ್ಪ ನ್ಯಾಯಾಲಯದ ಮೊರೆ ಹೋಗಿದ್ದರು.

ಅಲ್ಲದೆ, ತನಿಖೆಯ ಭಾಗವಾಗಿ ಬಂಧನದ ಸಾಧ್ಯತೆ ಇರುವುದರಿಂದ ತಮ್ಮನ್ನು ಬಂಧಿಸದಂತೆ ಮಧ್ಯಂತರ ರಕ್ಷಣೆ ನೀಡುವಂತೆ ಮನವಿ ಮಾಡಿದ್ದರು.ಆದರೆ, ಅರ್ಜಿಯ ವಿಚಾರಣೆ ನಡೆಸಿದ ಹೈಕೋರ್ಟ್, ಈ ಹಂತದಲ್ಲಿ ಮಧ್ಯಪ್ರವೇಶ ಮಾಡುವ ಅಗತ್ಯವಿಲ್ಲ ಎಂದು ಅಭಿಪ್ರಾಯಪಟ್ಟಿದ್ದು, ಅರ್ಜಿಯನ್ನು ವಜಾಗೊಳಿಸಿದೆ. ಇದರೊಂದಿಗೆ ಲೋಕಾಯುಕ್ತದ ತನಿಖೆಗೆ ಹಸಿರು ನಿಶಾನೆ ದೊರೆತಿದ್ದು, ಈಶ್ವರಪ್ಪ ಅವರಿಗೆ ಕಾನೂನು ಹೋರಾಟದಲ್ಲಿ ತಾತ್ಕಾಲಿಕ ಹಿನ್ನಡೆಯಾಗಿದೆ. ಹೈಕೋರ್ಟ್ ಆದೇಶದ ಹಿನ್ನೆಲೆಯಲ್ಲಿ ಲೋಕಾಯುಕ್ತ ತನಿಖೆಯನ್ನು ಮುಂದುವರಿಸುವ ಸಾಧ್ಯತೆ ಹೆಚ್ಚಿದ್ದು, ಅಗತ್ಯವಿದ್ದರೆ ಕಾನೂನು ಪ್ರಕ್ರಿಯೆಯಂತೆ ಮುಂದಿನ ಕ್ರಮ ಕೈಗೊಳ್ಳುವ ಅವಕಾಶವೂ ಲಭ್ಯವಾಗಿದೆ. ಪ್ರಕರಣದ ಮುಂದಿನ ಬೆಳವಣಿಗೆಗಳತ್ತ ರಾಜಕೀಯ ವಲಯದ ಗಮನ ನೆಟ್ಟಿದೆ.

**ಬಾಂಗ್ಲಾ ನಿವಾಸಿಗಳನ್ನು ಮತದಾರರ ಪಟ್ಟಿಗೆ ಸೇರಿಸುವ ಷಡ್ಯಂತ್ರ**

# ಬೀದಿಯಲ್ಲಿ ಎಸ್‌ಐಆರ್ ಅರ್ಜಿ ವಿತರಣೆ ಕಾಂಗ್ರೆಸ್ ವಿರುದ್ಧ ಆರ್.ಅಶೋಕ್ ಕಿಡಿ

**ಬೆಂಗಳೂರು, ಜು.3:** ಕಾಂಗ್ರೆಸ್ ಸರ್ಕಾರದ ಕುಮ್ಮಕ್ಕಿನಿಂದಾಗಿ ಬಿಎಲ್‌ಒಗಳು ಬೀದಿಗಳಲ್ಲಿ ಎಸ್‌ಐಆರ್ ಅರ್ಜಿಗಳನ್ನು ಹಂಚುತ್ತಿದ್ದಾರೆ. ಈ ಮೂಲಕ ಬಾಂಗ್ಲಾ ಜನರನ್ನು ಮತದಾರರ ಪಟ್ಟಿಗೆ ಸೇರಿಸುವ ಷಡ್ಯಂತ್ರ ನಡೆದಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆಕ್ರೋಶ ವ್ಯಕ್ತಪಡಿಸಿದರು.

ಪತ್ರಿಕಾಗೋಷ್ಠಿಯಲ್ಲಿ, ದೇಶದ ಭದ್ರತೆಯ ದೃಷ್ಟಿಯಿಂದ ಚುನಾವಣಾ ಆಯೋಗ ಎಸ್‌ಐಆರ್ ಮಾಡುತ್ತಿದೆ. ಇದು ಕೇಂದ್ರ ಸರ್ಕಾರದ ಉದ್ದೇಶ ಕೂಡ ಹೌದು. ಆದರೆ ಕಾಂಗ್ರೆಸ್ ಸರ್ಕಾರ ಬಾಂಗ್ಲಾ ಜನರ ಪಾಲಿಗೆ ಸ್ವರ್ಗವಾಗಿದೆ. ಈ ಮೊದಲು ಕೋಗಿಲು ಕ್ರಾಸ್‌ನಲ್ಲಿ ಬಾಂಗ್ಲಾ ಜನರಿಗೆ ಮನೆ ನಿರ್ಮಿಸಿಕೊಡಲು ಮುಂದಾಗಿದ್ದು, ಅದರ ವಿರುದ್ಧ ಬಿಜೆಪಿ ಹೋರಾಟ ನಡೆಸಿದ್ದಕ್ಕೆ ಅದನ್ನು ಕೈಬಿಟ್ಟಿದ್ದರು. ಬೆಂಗಳೂರು, ಕೊಡಗು, ಚಿಕ್ಕಮಗಳೂರು ಸೇರಿ ಸುಮಾರು 20 ಲಕ್ಷ ಬಾಂಗ್ಲಾ ಜನರು ರಾಜ್ಯದಲ್ಲಿದ್ದಾರೆ. 2002 ರ ಮತದಾರರ ಪಟ್ಟಿಯಲ್ಲಿ ಈ ಬಾಂಗ್ಲಾ ಜನರ ಹೆಸರಿಲ್ಲ. ಆದ್ದರಿಂದ ಬಾಂಗ್ಲಾ ನಿವಾಸಿಗಳಿಗೆ ಹೆದ್ದಾರಿ ನಿರ್ಮಿಸಿ ಕೊಟ್ಟಿದ್ದು, ಹಜ್ ಭವನ, ಮಸೀದಿಗಳ ಮುಂದೆ ರಾಜಾರೋಷವಾಗಿ ಮತದಾರರ ಪಟ್ಟಿಗೆ ಹೆಸರು ಸೇರಿಸಲಾಗುತ್ತಿದೆ. ಬಿಎಲ್‌ಒಗಳು ಪ್ರತಿ ಮನೆಗೆ ಹೋಗಿ ಸಮೀಕ್ಷೆ ಮಾಡಬೇಕಿದ್ದರೂ ಪ್ರಸಾದ ಹಂಚಿದಂತೆ ಬೀದಿಯಲ್ಲಿ ಕುಳಿತು ಅರ್ಜಿಗಳನ್ನು ಹಂಚುತ್ತಿದ್ದಾರೆ. ಅಧಿಕಾರಿಗಳು ಮನೆ ಗುರುತು ಮಾಡಿ ಅರ್ಜಿ ತುಂಬಿಸಿ, ಮರಳಿ ಅರ್ಜಿಯನ್ನು ಪಡೆಯಬೇಕು. ಆದರೆ ಕಾಂಗ್ರೆಸ್ ಮತಕ್ಕಾಗಿ ಬಾಂಗ್ಲಾ ಜನರನ್ನು ಪಟ್ಟಿಗೆ ಸೇರಿಸುವ ಷಡ್ಯಂತ್ರ ಮಾಡುತ್ತಿದೆ ಎಂದು ದೂರಿದರು.

ಮಹದೇವಪುರ, ಬ್ಯಾಟರಾಯನಪುರದಲ್ಲಿ ಮಸೀದಿಗಳ ಮುಂದೆ ಗುಂಪುಗುಂಪಾಗಿ ಕುಳಿತು ಎಸ್‌ಐಆರ್ ಪ್ರಕ್ರಿಯೆ ನಡೆಸಲಾಗುತ್ತಿದೆ. ಈ ಕುರಿತು ಕೇಂದ್ರ ಹಾಗೂ ರಾಜ್ಯ ಚುನಾವಣಾ ಆಯೋಗಗಳಿಗೆ ಪತ್ರ ಬರೆದು ಅಕ್ರಮ ಮಾಡಲಾಗುತ್ತಿದೆ ಎಂದು ತಿಳಿಸುತ್ತೇನೆ. ಇದಕ್ಕೆ ಅವಕಾಶ ಮಾಡಿಕೊಟ್ಟ ಅಧಿಕಾರಿಗಳ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಿ ಬಂಧಿಸಬೇಕೆಂದು ಆಗ್ರಹಿಸುತ್ತೇನೆ. ಒಂದು ಬಾರಿ ಬಾಂಗ್ಲಾ ನಿವಾಸಿಗಳು ಇಲ್ಲಿ ನೆಲೆಸಿದರೆ ಉಚಿತ ಸೌಲಭ್ಯ ನೀಡಬೇಕಾಗುತ್ತದೆ. ಇದರಿಂದಾಗಿ ನಮ್ಮ ದೇಶಕ್ಕೆ ಹೊರೆಯಾಗುತ್ತದೆ ಎಂದರು.

ಯಲಹಂಕದ ಒಂದು ಕಡೆ 2002ರ ಮತದಾರರ ಪಟ್ಟಿಯ ದಾಖಲೆಗಳೇ ಸಿಗದಂತೆ ಮಾಡಲಾಗಿದೆ. ವೆಬ್‌ಸೈಟ್‌ನಲ್ಲಿ ಅದನ್ನು ಅಪ್‌ಲೋಡ್ ಮಾಡಿಲ್ಲ. ನಿರ್ದಿಷ್ಟ ಸಮುದಾಯಗಳನ್ನು ಗುರಿ ಮಾಡಿ ಇಂತಹ ಕೆಲಸ ಮಾಡಲಾಗುತ್ತಿದೆ. ಇದಕ್ಕೆ ಆದೇಶ ನೀಡಿ ಹಿರಿಯ ನಾಯಕರ ವಿರುದ್ಧವೂ ಕ್ರಮ ಕೈಗೊಳ್ಳಬೇಕಿದೆ. ಎಸ್‌ಐಆರ್ ವಿರೋಧಿಸುವ ಕಾಂಗ್ರೆಸ್, ಗ್ಯಾರಂಟಿ ಪಡೆಯಲು ಎಸ್‌ಐಆರ್‌ನಲ್ಲಿ ಹೆಸರು ನೋಂದಾಯಿಸಿ ಎಂದು ಕರೆ ನೀಡುತ್ತಿದೆ. ಈ ಮೂಲಕ ಬಾಂಗ್ಲಾ ನಿವಾಸಿಗಳನ್ನು ಇಲ್ಲಿಯೇ ಉಳಿಸಿಕೊಳ್ಳುವ ಪ್ರಯತ್ನ ಮಾಡಲಾಗುತ್ತಿದೆ. ಭಾರತೀಯರಿಗೆ ಮಾತ್ರ ಎಸ್‌ಐಆರ್ ಅನ್ವಯವಾಗುತ್ತಿದೆ. ಅನ್ನ ಹಾಕುವವರಿಗೆ ಮತ ಇದೆಯೇ ಹೊರತು ಕನ್ನ ಹಾಕುವವರಿಗೆ ಅಲ್ಲ ಎಂಬುದನ್ನು



ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿದುಕೊಳ್ಳಬೇಕು ಎಂದರು.

**ಹೊಸತನವಿಲ್ಲದ ಆಡಳಿತ**

ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿಯಾಗಿ ಒಂದು ತಿಂಗಳಾದರೂ ರಾಜ್ಯದಲ್ಲಿ ಹೊಸತನ ಬಂದಿಲ್ಲ. ಹಳೆ ಬಾಟಲ್ ಹೊಸ ಹೆಂಡ ಎನ್ನುವಂತಹ ಆಡಳಿತ ನೀಡುತ್ತಿದ್ದಾರೆ. ನೀರಿಲ್ಲವೆಂಬ ಕಾರಣಕ್ಕೆ ಬೆಳೆ ಬೆಳೆಯಬೇಡಿ ಎಂದು ಸಿಎಂ ರೈತರಿಗೆ ಕರೆ ನೀಡಿದ್ದಾರೆ. ಯಾವಾಗ ಬೆಳೆ ಬೆಳೆಯಬೇಕೆಂಬ ಜ್ಞಾನ ರೈತರಿಗೆ ಮೊದಲಿಂದಲೂ ಇದೆ. ಪ್ರಧಾನಿ ನರೇಂದ್ರ ಮೋದಿ ಚಿನ್ನದ ಬಳಕೆ ಕಡಿಮೆ ಮಾಡಿ ಎಂದಿದ್ದಕ್ಕೆ, ಕಾಂಗ್ರೆಸ್ ನಾಯಕರು ಟೀಕಿಸಿದ್ದರು. ಈಗ ಅದೇ ರೀತಿ ಮುಖ್ಯಮಂತ್ರಿಗಳು ಮಾತಾಡುತ್ತಿದ್ದಾರೆ. ಇವರಿಗೆ ಧೈರ್ಯವಿದ್ದರೆ ತಮಿಳುನಾಡಿಗೆ ಬೆಳೆ ಬೆಳೆಯಬೇಡಿ ಎನ್ನಬೇಕಿತ್ತು ಎಂದರು.

ಮೇಕೆದಾಟು ವಿರುದ್ಧ ತಮಿಳುನಾಡು ಸರ್ಕಾರ ನಿರ್ಣಯ ಕೈಗೊಂಡರೂ ಅದರ ವಿರುದ್ಧ ಸಿಎಂ ಮಾತಾಡಿಲ್ಲ. ಅದರ ಬದಲು ಕದ್ದು ಮುಚ್ಚಿ ನೀರು ಬಿಡಲಾಗುತ್ತಿದೆ. ಮೇಕೆದಾಟು ಯೋಜನೆಗೆ 10 ರೂ. ಕೂಡ ನೀಡಿಲ್ಲ. ಸಿಎಂ ಡಿ. ಕೆ.ಶಿವಕುಮಾರ್ ತಮಿಳುನಾಡಿನ ಪರ ಇದ್ದಾರೆ ಎಂದರು.

**ಬೆಂಗಳೂರಿನ ಡೇ ಕೇರ್ ಕೇಂದ್ರದಲ್ಲಿ ಮಗುವಿನ ಮೇಲಿನ ಹಲ್ಲೆಗೆ ವಿಷಾದ**

# ಮಕ್ಕಳ ಮೇಲಿನ ದೌರ್ಜನ್ಯಕ್ಕೆ ಶೂನ್ಯ ಸಹಿಷ್ಣುತೆ: ಸಚಿವ ಪ್ರಿಯಾಂಕ್ ಖರ್ಗೆ

**ಬೆಂಗಳೂರು, ಜು.3:** ಮಕ್ಕಳ ಮೇಲಿನ ದೌರ್ಜನ್ಯವನ್ನು ಯಾವುದೇ ಕಾರಣಕ್ಕೂ ಸಹಿಸಲು ಸಾಧ್ಯವಿಲ್ಲ. ಈ ವಿಷಯದಲ್ಲಿ ಸರ್ಕಾರ ಶೂನ್ಯ ಸಹಿಷ್ಣುತೆ' ನೀತಿಯನ್ನು ಹೊಂದಿದ್ದು, ತಪ್ಪಿತಸ್ಥರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಸ್ಪಷ್ಟಪಡಿಸಿದ್ದಾರೆ.

ಬೆಂಗಳೂರಿನ ಡೇ ಕೇರ್ ಕೇಂದ್ರದಲ್ಲಿ ಮಗುವಿನ ಮೇಲಿನ ಹಲ್ಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾತನಾಡಿದ ಅವರು, ಘಟನೆಯ ಬಗ್ಗೆ ತೀವ್ರ ವಿಷಾದ ವ್ಯಕ್ತಪಡಿಸಿದರು. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯು ಡೇ ಕೇರ್ ಕೇಂದ್ರಗಳನ್ನು ನಡೆಸಲು ಈಗಾಗಲೇ ಸ್ಪಷ್ಟ ಮಾರ್ಗಸೂಚಿಗಳನ್ನು ಹೊರಡಿಸಿದೆ. ಪ್ರಸ್ತುತ ಘಟನೆಗೆ ಸಂಬಂಧಿಸಿದಂತೆ ಸಂಬಂಧಪಟ್ಟವರಿಂದ ಈಗಾಗಲೇ ಸ್ಪಷ್ಟನೆ ಕೇಳಲಾಗಿದ್ದು, ಸಂಪೂರ್ಣ



ವರದಿ ಬಂದ ತಕ್ಷಣವೇ ಕಾನೂನು ಚೌಕಟ್ಟಿನಲ್ಲಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ಭರವಸೆ ನೀಡಿದರು.

ಸುದ್ದಿಗಾರರೊಂದಿಗೆ, ಬೆಂಗಳೂರು, ಜಾಗತಿಕ ಮಟ್ಟದಲ್ಲಿ ಗುರುತಿಸಿಕೊಂಡಿರುವ ನಗರವಾಗಿದೆ. ನಮ್ಮಲ್ಲಿ ಬ್ರ್ಯಾಂಡ್ ಬೆಂಗಳೂರು ಎಂಬ ಹೆಮ್ಮೆಯ ಅಸ್ಮಿತೆಯಿದೆ. ಇಂತಹ ಬೇಜವಾಬ್ದಾರಿ ಘಟನೆಗಳಿಂದ ನಗರದ ಹೆಸರಿಗೆ ಧಕ್ಕೆ ಬರಲು ಬಿಡುವುದಿಲ್ಲ. ಮಕ್ಕಳ ಸುರಕ್ಷತೆಯ ವಿಷಯದಲ್ಲಿ ಯಾವುದೇ ರಾಜಿ ಇಲ್ಲ. ಪೋಷಕರು ಅನಿವಾರ್ಯತೆಯಿಂದ ಮಕ್ಕಳನ್ನು ನಂಬಿಕೆಯಿಂದ ಡೇಕೇರ್ ಕೇಂದ್ರಗಳಿಗೆ ಕಳುಹಿಸುತ್ತಾರೆ. ಹೀಗೆ ನಂಬಿ ಕಳುಹಿಸಿದ ಜಾಗದಲ್ಲಿ ಮಕ್ಕಳ ಮೇಲೆ ದೌರ್ಜನ್ಯ ಎಸಗಿರುವುದು ನಿಜಕ್ಕೂ ತಲೆ ತಗ್ಗಿಸುವಂತಹ ಕೆಲಸ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಪ್ರತಿಷ್ಠಿತ ಕಂಪನಿಗಳಲ್ಲಿ ಇಂತಹ ಸೂಕ್ಷ್ಮ ವಿಷಯಗಳಿಗೆ ಸಂಬಂಧಿಸಿದಂತೆ ತಮ್ಮದೇ ಆದ ಕಟ್ಟುನಿಟ್ಟಿನ ನಿಯಮಗಳಿರುತ್ತವೆ. ಅದೇ ರೀತಿ ಡೇ ಕೇರ್ ಕೇಂದ್ರಗಳನ್ನು ನಡೆಸಲು ಕೂಡ ಸ್ಪಷ್ಟವಾದ ನಿಯಮಾವಳಿಗಳು ಇರಲೇಬೇಕು. ಅಲ್ಲಿ ಕೆಲಸ ಮಾಡುವ ಸಿಬ್ಬಂದಿಯನ್ನು ನೇಮಕ ಮಾಡಿ ಕೊಳ್ಳುವ ಮುನ್ನ ಅವರ ಹಿನ್ನೆಲೆ ತಪಾಸಣೆಯನ್ನು ಕಡ್ಡಾಯವಾಗಿ ಮಾಡಬೇಕು. ಇಂತಹ ಕೃತ್ಯಗಳನ್ನು ಯಾರು ಕೂಡ ಮಾಡಲು ಧೈರ್ಯ ಮಾಡದಂತೆ ಕಠಿಣ ಕ್ರಮ ಜರುಗಿಸಬೇಕಿದೆ ಎಂದರು.

# ಸಿಇಟಿ: ಸಿಬಿಎಸ್‌ಇ ಮರುಮೌಲ್ಯಮಾಪನ ಅಂಕಪಟ್ಟಿ ಸಲ್ಲಿಸಲು 3 ದಿನ ಅವಕಾಶ

**ಬೆಂಗಳೂರು, ಜು.3:** ಸಿಬಿಎಸ್‌ಇ, ಸಿಐಎಸ್ ಸಿಇ ಹಾಗೂ ಇತರ ರಾಜ್ಯ ಪರೀಕ್ಷಾ ಮಂಡಳಿಗಳ 12ನೇ ತರಗತಿಯ ವಿದ್ಯಾರ್ಥಿಗಳಿಗೆ ಮರುಮೌಲ್ಯಮಾಪನದಲ್ಲಿ ಅಂಕಗಳು ಪರಿಷ್ಕೃತಗೊಂಡಿದ್ದರೆ ಅಂತಹವರು ಜುಲೈ 4ರಿಂದ 6ರವರೆಗೆ ತಮ್ಮ ಅಂಕಪಟ್ಟಿಗಳನ್ನು ಸಲ್ಲಿಸಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಅವಕಾಶ ನೀಡಿದೆ.

ಮಲ್ಲೇಶ್ವರದ ಕೆಇಎ ಕಚೇರಿಯಲ್ಲಿ ಅಂಕಪಟ್ಟಿ ಸಲ್ಲಿಸಬೇಕು. ಭಾನುವಾರ ಕೂಡ ಸ್ವೀಕರಿಸಲಾಗುವುದು ಎಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಹೆಚ್.ಪ್ರಸನ್ನ ತಿಳಿಸಿದ್ದಾರೆ.

ಕೌನ್ಸೆಲಿಂಗ್ ಪ್ರಕ್ರಿಯೆ ಆರಂಭವಾದ ನಂತರ ಈ ಮಂಡಳಿಗಳು ಮರುಮೌಲ್ಯಮಾಪನದ ಫಲಿತಾಂಶ ಪ್ರಕಟಿಸಿದ್ದು, ಅ ಕಾರಣಕ್ಕೆ ಆರಂಭದಲ್ಲಿ ಪರಿಗಣಿಸಲು ಸಾಧ್ಯ ಇಲ್ಲ ಎಂದು ಹೇಳಲಾಗಿತ್ತು. ನಂತರ ಬಂದ ಮನವಿಗಳ ಆಧಾರದ ಮೇಲೆ ನಿರ್ಧಾರ ಬದಲಿಸಿ, ಅಂಕಪಟ್ಟಿ ಸಲ್ಲಿಸಲು ಅವಕಾಶ ನೀಡಲಾಗಿದೆ

ಅಭ್ಯರ್ಥಿಗಳು ಅಂಕಪಟ್ಟಿ ನೀಡಿದರೂ ಅವರ ಡಿಜಿಲಾಕರ್ ಅಕೌಂಟ್ ಮೂಲಕ ಅಂಕಗಳನ್ನು ಪರಿಶೀಲಿಸಿದ ನಂತರವೇ ಅವರ ಮನವಿಯನ್ನು ಪರಿಗಣಿಸಲಾಗುವುದು ಎಂದು ಅವರು ಹೇಳಿದ್ದಾರೆ.

ಮರುಮೌಲ್ಯಮಾಪನದಲ್ಲಿ ಅಂಕ ಹೆಚ್ಚಾಗಿರುವವರು ಮಾತ್ರ ಕೆಇಎಗೆ ಅರ್ಜಿಗಳನ್ನು ಕೊಟ್ಟಿದ್ದಾರೆ. ಆದರೆ ಅಂಕ ಕಡಿಮೆ ಆಗಿರುವವರು ಕೂಡ ತಮ್ಮ ಪಿಯುಸಿ ಅಂಕಗಳನ್ನು ಬದಲಿಸಿಕೊಳ್ಳುವ ಅಗತ್ಯ ಇದ್ದು, ಅದರಿಂದಲೂ ರಾಂಕ್ ನಲ್ಲಿ ಬಹಳಷ್ಟು ವ್ಯತ್ಯಾಸವಾಗುವ ಸಾಧ್ಯತೆ ಇರುತ್ತದೆ. ಒಂದು ವೇಳೆ ಹಾಗೆ ಬದಲಾವಣೆ ಮಾಡಿಸಿಕೊಳ್ಳದೆ ಇದ್ದಲ್ಲಿ ಅಂತಹ ಅಭ್ಯರ್ಥಿಗಳು ಕಾಲೇಜು ಪ್ರವೇಶ ಸಂದರ್ಭದಲ್ಲಿ ಅಂಕಗಳು ವ್ಯತ್ಯಾಸ ಇದ್ದಲ್ಲಿ ಸಮಸ್ಯೆ ಎದುರಿಸಬೇಕಾಗುತ್ತದೆ ಎಂದು ಅವರು ಎಚ್ಚರಿಸಿದ್ದಾರೆ. ಬಿ–ಫಾರ್ಮ, ಫಾರ್ಮಾ–ಡಿ ನಂತರ ಅವಕಾಶ: ಫಾರ್ಮ– ಡಿ, ಬಿ–ಫಾರ್ಮ, ಯೋಗ– ನ್ಯಾಚುರೋಪತಿ ಕೋರ್ಸ್‌ಗಳ ಸೀಟ್ ಮ್ಯಾಟ್ರಿಕ್ಸ್ ಇನ್ನೂ ಬಂದಿಲ್ಲ. ಹೀಗಾಗಿ ಆಪ್ಷನ್ಸ್ ದಾಖಲಿಸಲು ಅವಕಾಶ ನೀಡಿಲ್ಲ. ಈ ವಿಷಯದಲ್ಲಿ ಆತಂಕ ಬೇಡ. ಸೀಟ್ ಮ್ಯಾಟ್ರಿಕ್ಸ್ ಬಂದ ನಂತರ ಆಪ್ಷನ್ಸ್ ದಾಖಲಿಸಲು ಅವಕಾಶ ನೀಡಲಾಗುವುದು ಎಂದು ಅವರು ಹೇಳಿದರು.

# ಎಸ್‌ಐಆರ್ ಪ್ರಕ್ರಿಯೆಯಲ್ಲಿ ನಿರಾಸಕ್ತಿ ಬೇಡ

## ಹಿಂದು ಸಮಾಜ ಎಚ್ಚೆತ್ತುಕೊಳ್ಳಬೇಕು: ಎ.ಜಿ.ಆನಂದ್‌ಗೌಡ

**ಬೆಂಗಳೂರು:** ವಿಜಯನಗರ ವಿಧಾನಸಭಾ ಕ್ಷೇತ್ರದಲ್ಲಿ ನಡೆಯುತ್ತಿರುವ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯಲ್ಲಿ ಹಿಂದು ಸಮುದಾಯದ ಮತದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ವಿಜಯನಗರ ನಗರ ಬಿಜೆಪಿ ಮಂಡಲದ ಪ್ರಧಾನ ಕಾರ್ಯದರ್ಶಿ ಎ.ಜಿ. ಆನಂದ್‌ಗೌಡ ಕರೆ ನೀಡಿದ್ದಾರೆ.

ಈ ಕುರಿತು ಮಾತನಾಡಿದ ಅವರು, ಮತದಾರರ ಪಟ್ಟಿಯ ಪರಿಷ್ಕರಣೆ ಪ್ರಕ್ರಿಯೆಯು ಕೇವಲ ಒಂದು ಆಡಳಿತಾತ್ಮಕ ಕಾರ್ಯವಲ್ಲ, ಪ್ರತಿಯೊಬ್ಬ ನಾಗರಿಕನ ಮತದಾನದ ಹಕ್ಕನ್ನು ಭದ್ರಪಡಿಸಿಕೊಳ್ಳುವ ಮಹತ್ವದ ಅವಕಾಶವಾಗಿದೆ ಎಂದು ಹೇಳಿದರು. ಆದರೆ ಕೆಲವು ಕಡೆಗಳಲ್ಲಿ ಹಿಂದು ಸಮುದಾಯದ ಮತದಾರರು ಎಸ್‌ಐಆರ್ ಪ್ರಕ್ರಿಯೆಯ ಬಗ್ಗೆ ನಿರಾಸಕ್ತಿ ತೋರುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ ಎಂದು ಅವರು ಅಭಿಪ್ರಾಯಪಟ್ಟರು. "ಇಂದು ನಾವು ನಿರ್ಲಕ್ಷ್ಯ ತೋರಿದರೆ ಅದರ ಪರಿಣಾಮವನ್ನು ಮುಂದಿನ ಚುನಾವಣೆಗಳಲ್ಲಿ ಅನುಭವಿಸಬೇಕಾಗಬಹುದು. ಮತದಾರರ ಪಟ್ಟಿಯಲ್ಲಿ ಹೆಸರು ಕೈಬಿಟ್ಟಿದ್ದರೆ, ವಿಳಾಸ ಅಥವಾ ಇತರ ವಿವರಗಳಲ್ಲಿ ದೋಷಗಳಿದ್ದರೆ ಅವುಗಳನ್ನು ಸರಿಪಡಿಸಿಕೊಳ್ಳಲು ಈಗಲೇ ಸೂಕ್ತ ಸಮಯವಾಗಿದೆ. ಎಸ್‌ಐಆರ್ ಪ್ರಕ್ರಿಯೆಯಲ್ಲಿ ಭಾಗವಹಿಸದೆ ಹೋದರೆ ಮುಂದೆ ಮತದಾನದ ಹಕ್ಕು ಚಲಾಯಿಸುವ ಸಂದರ್ಭದಲ್ಲಿಯೇ ಸಮಸ್ಯೆಗಳು ಎದುರಾಗುವ ಸಾಧ್ಯತೆ ಇದೆ" ಎಂದು ಆನಂದ್‌ಗೌಡ ಎಚ್ಚರಿಸಿದರು.



ಕೆಲವು ಪ್ರದೇಶಗಳಲ್ಲಿ ಬೇರೆ ಬೇರೆ ಧರ್ಮದ, ಸಮುದಾಯದ ಮತದಾರರು ಎಸ್‌ಐಆರ್ ಪ್ರಕ್ರಿಯೆಯಲ್ಲಿ ಸಕ್ರಿಯವಾಗಿ ಭಾಗವಹಿಸಿ ತಮ್ಮ ಹೆಸರುಗಳು ಮತ್ತು ದಾಖಲೆಗಳನ್ನು ಪರಿಶೀಲಿಸಿಕೊಳ್ಳುತ್ತಿರುವುದು ಗಮನಕ್ಕೆ ಬಂದಿದೆ. ತಮ್ಮ ಮತದಾನದ ಹಕ್ಕನ್ನು ಕಾಪಾಡಿಕೊಳ್ಳುವ ಉದ್ದೇಶದಿಂದ ಅವರು ಹೆಚ್ಚಿನ ಆಸಕ್ತಿ ತೋರುತ್ತಿದ್ದಾರೆ. ಇದೇ ರೀತಿಯ ಜಾಗೃತಿ ಹಿಂದು ಸಮಾಜದಲ್ಲಿಯೂ ಮೂಡಬೇಕಿದೆ ಎಂದು ಅವರು ಹೇಳಿದರು. "ಪ್ರಜಾಪ್ರಭುತ್ವದಲ್ಲಿ ಮತವೇ ಅತ್ಯಂತ ದೊಡ್ಡ ಶಕ್ತಿ. ಮತದಾರರ ಪಟ್ಟಿಯಲ್ಲಿ ಹೆಸರು ಸರಿಯಾಗಿರುವುದು ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿ. ಆದ್ದರಿಂದ ಯಾವುದೇ ನಿರ್ಲಕ್ಷ್ಯಕ್ಕೆ ಅವಕಾಶ ನೀಡದೆ ಪ್ರತಿಯೊಬ್ಬ ಅರ್ಹ ಮತದಾರರು ಎಸ್‌ಐಆರ್ ಪ್ರಕ್ರಿಯೆಯಲ್ಲಿ ಪಾಲ್ಗೊಂಡು ತಮ್ಮ ದಾಖಲೆಗಳನ್ನು ಪರಿಶೀಲಿಸಿಕೊಳ್ಳಬೇಕು. ವಿಶೇಷವಾಗಿ ಯುವ ಮತದಾರರು ಮತ್ತು ಹೊಸದಾಗಿ ಮತದಾರರ ಪಟ್ಟಿಗೆ ಸೇರ್ಪಡೆಯಾಗುವವರು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಅವರು ಕರೆ ನೀಡಿದರು. ವಿಜಯನಗರ ವಿಧಾನಸಭಾ ಕ್ಷೇತ್ರದಲ್ಲಿ ಬಿಜೆಪಿ ಕಾರ್ಯಕರ್ತರು ಮನೆ ಮನೆಗೆ ತೆರಳಿ ಎಸ್‌ಐಆರ್ ಕುರಿತು ಜಾಗೃತಿ ಮೂಡಿಸುವ ಕಾರ್ಯದಲ್ಲಿ ತೊಡಗಿಸಿಕೊಂಡಿದ್ದಾರೆ. ಮತದಾರರ ಪಟ್ಟಿಯ ಪರಿಷ್ಕರಣೆ ಕಾರ್ಯವು ಯಶಸ್ವಿಯಾಗಲು ಸಾರ್ವಜನಿಕರ ಸಹಕಾರ ಅತ್ಯಗತ್ಯವಾಗಿದೆ. ಯಾವುದೇ ಸಮುದಾಯದ ಮತದಾರರಾಗಿರಲಿ, ತಮ್ಮ ಮತದಾನದ ಹಕ್ಕನ್ನು ಭದ್ರಪಡಿಸಿಕೊಳ್ಳುವ ನಿಟ್ಟಿನಲ್ಲಿ ಎಸ್‌ಐಆರ್ ಪ್ರಕ್ರಿಯೆಯಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದು ಎ.ಜಿ. ಆನಂದ್ ಗೌಡ ಮನವಿ ಮಾಡಿದ್ದಾರೆ.

**ವಿದ್ಯುತ್ ವಲಯ ಖಾಸಗೀಕರಣ ಪ್ರಕ್ರಿಯೆಗೆ ತಾತ್ಕಾಲಿಕ ತಡೆ**

# ವಿದ್ಯುತ್ ಸರಬರಾಜು ಪ್ರಸ್ತಾವನೆ ಹಿಂಪಡೆದ ಟಾಟಾ ಪವರ್

**ಬೆಂಗಳೂರು, ಜು.3:** ಸಾರ್ವಜನಿಕ ಆಕ್ರೋಶ ಹಾಗೂ ಪ್ರತಿಭಟನೆಗೆ ಕಾರಣವಾಗಿದ್ದ ವಿದ್ಯುತ್ ವಲಯದ ಖಾಸಗೀಕರಣ ಪ್ರಕ್ರಿಯೆಗೆ ತಾತ್ಕಾಲಿಕ ತಡೆ ಬಿದ್ದಿದೆ. ವಿದ್ಯುತ್ ಸರಬರಾಜು ಪರವಾನಗಿ ಕೋರಿ ತಾನು ಸಲ್ಲಿಸಿದ್ದ ಪ್ರಸ್ತಾವನೆಯನ್ನು ಪ್ರಮುಖ ಉದ್ಯಮ ಸಂಸ್ಥೆಯಾದ 'ಟಾಟಾ ಪವರ್' ಅಧಿಕೃತವಾಗಿ ಹಿಂಪಡೆದುಕೊಂಡಿದೆ. ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗದ ಆಕ್ಷೇಪಣೆ ಆಲಿಕೆ ಪ್ರಕ್ರಿಯೆಯ ಸಂದರ್ಭದಲ್ಲಿ ಕಂಪನಿಯು ಈ ಮಹತ್ವದ ತೀರ್ಮಾನ ಪ್ರಕಟಿಸಿದೆ.

ವಿದ್ಯುತ್ ವಲಯವನ್ನು ಖಾಸಗೀಕರಣಗೊಳಿಸುವ ನೀತಿಯನ್ನು ವಿರೋಧಿಸಿ ರಾಜ್ಯದ ರೈತ ಸಂಘಟನೆಗಳು ಮತ್ತು ವಿವಿಧ ಎಸ್ಕಾಂಗಳ ನೌಕರರು ನಿರಂತರವಾಗಿ ದೊಡ್ಡ ಮಟ್ಟದ ಹೋರಾಟಗಳನ್ನು ಹಮ್ಮಿಕೊಂಡಿದ್ದರು. ಹಳ್ಳಿಗಳಿಂದ ಹಿಡಿದು ಜಿಲ್ಲಾ ಮಟ್ಟದವರೆಗೆ ವ್ಯಾಪಕ ಜನಾಭಿಪ್ರಾಯ ಮೂಡಿದ್ದಲ್ಲದೆ, ಟಾಟಾ ಸಂಸ್ಥೆಯ ಈ ಪ್ರಸ್ತಾವನೆಯ ವಿರುದ್ಧ ರಾಜ್ಯಾದ್ಯಂತ ಬರೋಬ್ಬರಿ 20 ಲಕ್ಷಕ್ಕೂ ಅಧಿಕ ಆಕ್ಷೇಪಣಾ ಅರ್ಜಿಗಳು ಸಲ್ಲಿಕೆಯಾಗಿದ್ದವು.

ಈ ಭಾರಿ ಜನಾಗ್ರಹ ಮತ್ತು ಒಗ್ಗಟ್ಟಿನ ಪ್ರತಿಭಟನೆಗೆ ಮಣಿದಿರುವ ಕಂಪನಿಯು ಇದೀಗ ತನ್ನ ಅರ್ಜಿಯನ್ನು ವಾಪಸ್ ಪಡೆದು ಹಿಂದೆ ಸರಿದಿದೆ.

ಇದು ಸಾರ್ವಜನಿಕ ಹಿತದೃಷ್ಟಿಯಿಂದ ಶ್ಲಾಘನೀಯ ನಿರ್ಧಾರ ಎಂದಿರುವ ಸಂಘದ ಅಧ್ಯಕ್ಷ ರಮೇಶ್, ರೈತರು, ಇಲಾಖೆಯ ನೌಕರರು ಮತ್ತು ಗುತ್ತಿಗೆದಾರರ ಒಗ್ಗಟ್ಟಿನ ಹೋರಾಟಕ್ಕೆ ಕೊನೆಗೂ ಜಯ ಸಿಕ್ಕಿದೆ ಎಂದು ಸಂತಸ ವ್ಯಕ್ತಪಡಿಸಿದ್ದಾರೆ. ಇದೇ ವೇಳೆ ಅವರು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಇಂಧನ ಸಚಿವ ಕೆ.ಜೆ. ಜಾರ್ಜ್ ಅವರಿಗೆ ಧನ್ಯವಾದ ಅರ್ಪಿಸಿದ್ದಾರೆ.

**ಬಿಎಲ್‌ಒಗಳು ಮನೆಗಳಿಗೆ ಭೇಟಿ ನೀಡುವುದು ಕಡ್ಡಾಯ, ಮಾರ್ಗಸೂಚಿ ಉಲ್ಲಂಘಿಸಿದರೆ ದಂಡ**

# ಎಸ್‌ಐಆರ್‌ನಲ್ಲಿ ಪಾರದರ್ಶಕತೆ ಕಾಯ್ದುಕೊಳ್ಳಲು ಮಹತ್ವದ ಕ್ರಮ: ರಾಜ್ಯ ಮುಖ್ಯ ಚುನಾವಣಾಧಿಕಾರಿ ಅನ್ಬುಕುಮಾರ್

**ಬೆಂಗಳೂರು, ಜು.3:** ರಾಜ್ಯದಲ್ಲಿ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಕಾಯ್ದುಕೊಳ್ಳುವ ನಿಟ್ಟಿನಲ್ಲಿ ರಾಜ್ಯ ಮುಖ್ಯ ಚುನಾವಣಾಧಿಕಾರಿ ವಿ. ಅನ್ಬುಕುಮಾರ್ ಮಹತ್ವದ ಕ್ರಮ ಕೈಗೊಂಡಿದ್ದಾರೆ. ಬಿಎಲ್‌ಒಗಳು (ಬೂತ್ ಮಟ್ಟದ ಅಧಿಕಾರಿಗಳು) ಕ್ಷೇತ್ರ ಕಾರ್ಯದಲ್ಲಿ ತೋರುತ್ತಿರುವ ಅಸಡ್ಡೆ ಮತ್ತು ನಿಯಮಬಾಹಿರವಾಗಿ ಒಂದೇ ಸ್ಥಳದಲ್ಲಿ ಕುಳಿತು ನಮೂನೆಗಳನ್ನು ವಿತರಿಸುತ್ತಿರುವ ದೂರುಗಳ ಹಿನ್ನೆಲೆಯಲ್ಲಿ, ಅವರು ಎಲ್ಲಾ ಜಿಲ್ಲಾ ಚುನಾವಣಾಧಿಕಾರಿಗಳಿಗೆ ಕಟ್ಟುನಿಟ್ಟಿನ ಎಚ್ಚರಿಕೆ ನೀಡಿದ್ದಾರೆ.

ಎಲ್ಲಾ ಜಿಲ್ಲಾ ಚುನಾವಣಾಧಿಕಾರಿಗಳಿಗೆ ಸ್ಪಷ್ಟ ನಿರ್ದೇಶನ ನೀಡಿದ್ದು, ಈ ಕೆಳಗಿನ ಅಂಶಗಳನ್ನು ಒತ್ತಿ ಹೇಳಿದ್ದಾರೆ. ಯಾವುದೇ ಕಾರಣಕ್ಕೂ ಕಚೇರಿಯಿಂದ ಅಥವಾ ಒಂದೇ ಸ್ಥಳದಲ್ಲಿ ನಮೂನೆಗಳನ್ನು ವಿತರಿಸಬಾರದು. ಬಿಎಲ್‌ಒಗಳು ನಿಗದಿತ ಮನೆಗಳಿಗೆ ಭೇಟಿ ನೀಡುವುದು ಕಡ್ಡಾಯ. ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯವು ಯಾವುದೇ ದೋಷವಿಲ್ಲದೆ, ಸಂಪೂರ್ಣ ಪಾರದರ್ಶಕವಾಗಿ ನಡೆಯಬೇಕು. ಚುನಾವಣಾ ಆಯೋಗದ ಮಾರ್ಗಸೂಚಿಗಳನ್ನು ಉಲ್ಲಂಘಿಸುವ ಅಧಿಕಾರಿಗಳ ವಿರುದ್ಧ ಕಠಿಣ ಶಿಸ್ತುಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಸಲಾಗಿದೆ.ಮತದಾರರ ಪಟ್ಟಿಗೆ ಹೆಸರು ಸೇರ್ಪಡೆ, ತಿದ್ದುಪಡಿ ಅಥವಾ ಹೆಸರು ತೆಗೆದುಹಾಕುವ ನಮೂನೆಗಳನ್ನು ಭರ್ತಿ ಮಾಡುವಾಗ ಸಾರ್ವಜನಿಕರು ಎದುರಿಸುವ ತಾಂತ್ರಿಕ ತೊಂದರೆಗಳನ್ನು ನಿವಾರಿಸಲು 'ಮತದಾರರ ಸೌಲಭ್ಯ ಕೇಂದ್ರ'ಗಳನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳಲು ಆಯೋಗ ಸೂಚಿಸಿದೆ. ಸಾಕ್ಷರತೆ ಕಡಿಮೆ ಇರುವ ಅಥವಾ ತಾಂತ್ರಿಕ ಜ್ಞಾನವಿಲ್ಲದ ಮತದಾರರಿಗೆ ಈ ಕೇಂದ್ರಗಳಲ್ಲಿ ಅಧಿಕಾರಿಗಳು ಸೂಕ್ತ ಮಾರ್ಗದರ್ಶನ ನೀಡಬೇಕು ಎಂದು ತಿಳಿಸಲಾಗಿದೆ.



ಇತ್ತೀಚಿನ ದಿನಗಳಲ್ಲಿ ಬಿಎಲ್‌ಒಗಳು ಮನೆಗಳಿಗೆ ಭೇಟಿ ನೀಡುವ ಬದಲು, ಸಾರ್ವಜನಿಕ ಸ್ಥಳಗಳಲ್ಲಿ ಅಥವಾ ಕಚೇರಿಗಳಲ್ಲಿ ನಮೂನೆಗಳನ್ನು ವಿತರಿಸುತ್ತಿರುವುದು ಬೆಳಕಿಗೆ ಬಂದಿದೆ. ಈ ಕ್ರಮವು ಚುನಾವಣಾ ನಿಯಮಗಳಿಗೆ ಸಂಪೂರ್ಣ ವಿರುದ್ಧವಾಗಿದ್ದು, ಇದು ಅರ್ಹ ಮತದಾರರನ್ನು ಪಟ್ಟಿಯಿಂದ ಕೈಬಿಡುವ ಅಥವಾ ಅನರ್ಹರನ್ನು ಸೇರ್ಪಡೆಗೊಳಿಸುವ ಅಪಾಯಕ್ಕೆ ದಾರಿ ಮಾಡಿಕೊಡುತ್ತದೆ ಎಂದು ಆಯೋಗ ಅಭಿಪ್ರಾಯ ಪಟ್ಟಿದೆ.



ಕರ್ನಾಟಕ ಸರ್ಕಾರದ ನಿವೃತ್ತ ಮುಖ್ಯ ಕಾರ್ಯದರ್ಶಿ ಹಾಗೂ ಮಹಿಳಾ ಉದ್ಯಮಿಗಳ ಸಂಘಟನೆ 'ಉಬುಂತು' ಸ್ಥಾಪಕ ಅಧ್ಯಕ್ಷೆ ರತ್ನಾಪ್ರಭಾ ನೇತೃತ್ವದ ನಿಯೋಗವು ಸಿಎಂ ಡಿ.ಕೆ. ಶಿವಕುಮಾರ್ ಅವರನ್ನು ಶುಕ್ರವಾರ ಭೇಟಿ ಮಾಡಿ ಸಮಾಲೋಚನೆ ನಡೆಸಿತು.

# ಕೊಡಗಿನ ರೆಸಾರ್ಟ್‌ನಲ್ಲಿ ಅತಿಥಿ ಮಹಿಳೆ ದಾಖಲಿಸಿದ್ದ ಪರಿಶಿಷ್ಟರ ದೌರ್ಜನ್ಯ ಕಾಯ್ದೆ ದೂರಿಗೆ ಹೈಕೋರ್ಟ್ ತಡೆ

**ಮಡಿಕೇರಿ, ಜು.3:** ಕೊಡಗಿನ ಮಡಿಕೇರಿಯ ರೆಸಾರ್ಟ್‌ವೊಂದರಲ್ಲಿ ವಾಸ್ತವ್ಯ ನಡೆಸಿದ ಸರ್ವಿಸ್ ಹುಡುಗ ವಿರುದ್ಧ ಕ್ರಮ ಜರುಗಿಸದಕ್ಕೆ ರೆಸಾರ್ಟ್ ಮಾಲೀಕರ ವಿರುದ್ಧ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ದೌರ್ಜನ್ಯ ತಡೆ ಕಾಯಿದೆ ಅಡಿಯಲ್ಲಿ ಅತಿಥಿ ಮಹಿಳೆ ದಾಖಲಿಸಿದ ದೂರಿಗೆ ಸಂಬಂಧಿಸಿದ ಮುಂದಿನ ಪ್ರಕ್ರಿಯೆಗಳಿಗೆ ಹೈಕೋರ್ಟ್ ತಡೆ ನೀಡಿದೆ.

ಮಡಿಕೇರಿಯ ನಾಪೋಕ್ಲು ಪೊಲೀಸ್ ಠಾಣೆಯಲ್ಲಿ ತಮ್ಮ ವಿರುದ್ಧ ದಾಖಲಾಗಿರುವ ಎಫ್‌ಐಆರ್ ರದ್ದು ಕೋರಿ ಮಡಿಕೇರಿಯ ಸ್ಟೈಲಂಕ್ ರೆಸಾರ್ಟ್ ಮಾಲೀಕರ ಎ.ಕೆ.ಮುತ್ತಪ್ಪ, ಅವರ ಪತ್ನಿ ಕೆ ಸಿ ರೀಟಾ ಹಾಗೂ ಪುತ್ರಿ ಎ ಎಂ ಮೋನಿಷಾ ಮತ್ತು ವ್ಯವಸ್ಥಾಪಕರಾದ ಎನ್ ಪಿ ನಿಕ್ಸನ್ ಸಲ್ಲಿಸಿರುವ ಅರ್ಜಿಯ ವಿಚಾರಣೆಯನ್ನು ನ್ಯಾಯಮೂರ್ತಿ ಎಂ ನಾಗಪ್ರಸನ್ನ ಅವರ ಏಕಸದಸ್ಯ ಪೀಠ ನಡೆಸಿತು.

ರೆಸಾರ್ಟ್‌ನ ಸರ್ವಿಸ್ ಬಾಯ್ ವಿರುದ್ಧ ಕ್ರಮ ಜರುಗಿಸಿಲ್ಲ ಎಂಬ ಕಾರಣಕ್ಕೆ ಅರ್ಜಿದಾರರನ್ನು ಕ್ರಿಮಿನಲ್ ಪ್ರಕರಣದಲ್ಲಿ ಸಿಲುಕಿಸಲಾಗಿದೆ. ಅದೂ ಯಾವ ಅಪರಾಧ ಎಂಬುದುನ್ನು ನೋಡಿದರೆ ಆಘಾತ ಮೂಡಿದೆ. ಅದೂ ಎಸ್‌ಸಿ–ಎಸ್‌ಟಿ ದೌರ್ಜನ್ಯ ತಡೆ ಕಾಯಿದೆ ಅಡಿ ಕ್ರಿಮಿನಲ್ ಪ್ರಕರಣ ದಾಖಲಿಸಲಾಗಿದೆ.

ಒಂದೊಮ್ಮೆ, ಈ ಪ್ರಕರಣ ಮುಂದುವರಿಸಲು ಅನುಮತಿ ನೀಡಿದರೆ, ಅದು ರೆಸಾರ್ಟ್‌ಗೆ ಬರುವ ಪ್ರತಿಯೊಬ್ಬ ಅತಿಥಿಯನ್ನು ಅವರು ಯಾವ ಜಾತಿಗೆ ಸೇರಿದವರು ಎಂದು ಕೇಳಿದಂತಾಗುತ್ತದೆ ಎಂದು ಆಘಾತ ವ್ಯಕ್ತಪಡಿಸಿದೆ.

ಅಲ್ಲದೆ, ಮೇಲಾಗಿ ಅರ್ಜಿದಾರರಿಗೆ ದೂರುದಾರ ಮಹಿಳೆ ಅವರು ಯಾವ ಜಾತಿ ಎಂಬುದು ತಿಳಿದಿಲ್ಲ. ಹೀಗಾಗಿ, ದೂರುದಾರರಿಗೆ ಅವರ ಹೆಸರು ತೆಗೆದು ನಿಂದನೆ ಮಾಡಿರಲು ಅಥವಾ ತೊಂದರೆ ನೀಡಿರಲು ಸಾಧ್ಯವಿಲ್ಲ. ಮತ್ತೊಂದೆಡೆ ಸರ್ವಿಸ್ ಬಾಯ್ ವಿರುದ್ಧ ದೂರು ದಾಖಲಿಸಲಾಗಿದೆ. ಆತನ ವಿರುದ್ಧ ತನಿಖೆ ನಡೆಯುತ್ತಿದೆ. ಆದ್ದರಿಂದ, ಅರ್ಜಿದಾರರ ವಿರುದ್ಧದ ದೂರಿಗೆ ಸಂಬಂಧಿಸಿದ ಮುಂದಿನ ಎಲ್ಲಾ ಪ್ರಕ್ರಿಯೆಗಳಿಗೆ ಅರ್ಜಿ ಇತ್ಯರ್ಥ ವಾಗುವವರೆಗೆ ತಡೆ ನೀಡಲಾಗುತ್ತಿದೆ ಎಂದು



ಪೀಠ ಆದೇಶ ಮಾಡಿದೆ.

ಇದಕ್ಕೂ ಮುನ್ನ, ಅರ್ಜಿದಾರರ ಪರ ವಕೀಲರು ವಾದಿಸಿ, ಅರ್ಜಿದಾರರು ರೆಸಾರ್ಟ್ ಮಾಲೀಕರು ಹಾಗೂ ವ್ಯವಸ್ಥಾಪಕರಾಗಿದ್ದಾರೆ. ದೂರುದಾರರೆಯು ರೆಸಾರ್ಟ್‌ಗೆ ಬಂದಿದ್ದ ಅತಿಥಿಯಾಗಿದ್ದರು. ಸರ್ವಿಸ್ ಬಾಯ್ ಹುಡುಗನ ತನ್ನೊಂದಿಗೆ ಮಾಡಿದ ವಾಗ್ವಾದ ನಡೆಸಿದ ಬಗ್ಗೆ ತಿಳಿಸಿದರೂ ಆತನ ವಿರುದ್ಧ ಯಾವುದೇ ಕ್ರಮ ಜರುಗಿಸಿಲ್ಲ ಎಂಬುದು ರೆಸಾರ್ಟ್ ಮಾಲೀಕರ ಕುರಿತು ದೂರುದಾರೆ ಆರೋಪಿಸಿದ್ದಾರೆ. ಪ್ರೀಮಿಯರ್ ರೂಂ ನೀಡಲಾಗುವುದು. ಊಟದ ಬಿಲ್ ಮನ್ನಾ ಮಾಡುವುದಾಗಿಯ ದೂರುದಾರೆಗೆ ಅರ್ಜಿದಾರರು ಹೇಳಿದ್ದರು. ಆದರೆ, ಎಸ್‌ಸಿ ಎಸ್‌ಟಿ ದೌರ್ಜನ್ಯ ತಡೆ ಕಾಯಿದೆ ಸರ್ವಿಸ್ ಬಾಯ್ ಹಾಗೂ ರೆಸಾರ್ಟ್ ಮಾಲೀಕರ ಮೇಲೆ ಅತಿಥಿ ದೂರು ದಾಖಲಿಸಿದ್ದಾರೆ ಎಂದು ಪೀಠಕ್ಕೆ ವಿವರಿಸಿದರು.

ಆಗ ಪೀಠವು ಅತಿಥಿಯಾಗಿ ಬಂದಿರುವ ಮಹಿಳೆಯ ಜಾತಿ ಯಾವುದು ಎಂದು ರೆಸಾರ್ಟ್ ಮಾಲೀಕರಿಗೆ ಹೇಗೆ ಗೊತ್ತಾಗಲು ಸಾಧ್ಯ ಎಂದು ಪ್ರಶ್ನಿಸಿತು.

ಹಾಗೆಯೇ, ಇದುವೆ ಕಾಯಿದೆಯ ದುರುಪಯೋಗ ಎನ್ನುವುದು ಎಂದು ಪೊಲೀಸರ ಪರ ಹಾಜರಾಗಿದ್ದ ಸರ್ಕಾರಿ ಅಭಿಯೋಜಕನರನ್ನು ಉದ್ದೇಶಿಸಿ ಹೇಳಿ ಮೇಲಿನಂತೆ ಆದೇಶ ಮಾಡಿತು.

ಬೆಂಗಳೂರಿನ ನಾಗರಭಾವಿ ಮುಖ್ಯರಸ್ತೆಯ ಕಾವೇರಿ ಬಡಾವಣೆ ನಿವಾಸಿಯಾದ ಬಿ ಕೆ ಶ್ರುತಿ ಎಂಬಾಕೆ 2026 ಜೂನ್ 24ರಂದು ನೀಡಿದ ದೂರು ಆಧರಿಸಿ ಮಡಿಕೇರಿಯ ನಾಪೋಕ್ಲು ಠಾಣಾ ಪೊಲೀಸರು ಎಸ್‌ಸಿ–ಎಸ್‌ಟಿ ದೌರ್ಜನ್ಯ ಕಾಯಿದೆ ಅಡಿ ಅರ್ಜಿದಾರರ ವಿರುದ್ಧ ಎಫ್‌ಐಆರ್ ದಾಖಲಿಸಿದ್ದರು.

# ಪತ್ರಿಕಾ ಭವನ ನವೀಕರಣಕ್ಕಾಗಿ ಸಚಿವ ಎಂ.ಬಿ.ಪಾಟೀಲರಿಗೆ ಮನವಿ

**ವಿಜಯಪುರ, ಜು.3–** ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕದಿಂದ ಪತ್ರಿಕಾ ಭವನ ನವೀಕರಣ ಕಾರ್ಯಕ್ಕೆ ಆರ್ಥಿಕ ಸಹಾಯ ಅಥವಾ ನವೀಕರಣ ಮಾಡಬೇಕೆಂದು ಒತ್ತಾಯಿಸಿ ಉಸ್ತುವಾರಿ ಸಚಿವ ಎಂ ಬಿ ಪಾಟೀಲರಿಗೆ ಗೃಹ ಕಚೇರಿಯಲ್ಲಿ ಮನವಿ ಸಲ್ಲಿಸಲಾಯಿತು.

ನಗರದ ಸೊಲ್ಲಾಪುರ ರಸ್ತೆಯಲ್ಲಿರೋ ಸಚಿವ ಎಂ ಬಿ ಪಾಟೀಲ್ ಅವರ ನಿವಾಸಕ್ಕೆ ಭೇಟಿ ನೀಡಿದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಪದಾಧಿಕಾರಿಗಳು ಕಾರ್ಯಕಾರಿಣಿ ಸದಸ್ಯರು ಭೇಟಿಯಾಗಿ ಮನವಿ ಸಲ್ಲಿಸಿದರು.

ಸಚಿವರಿಗೆ ಮನವಿ ನೀಡಿ ಮಾತನಾಡಿದ ಕಾರ್ಯನಿರತ ಪತ್ರಕರ್ತರ ಸಂಘ ವಿಜಯಪುರ ಜಿಲ್ಲಾ ಅಧ್ಯಕ್ಷ ಅಶೋಕ ಯಡಳ್ಳಿ, ಶತಮಾನದ ಹೊಸ್ತಿಲಲ್ಲಿರುವ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ವಿಜಯಪುರ ಜಿಲ್ಲಾ ಘಟಕದ ಕಚೇರಿ ಪತ್ರಿಕಾ ಭವನವು ಮೂಲ ಸೌಲಭ್ಯಗಳ ಕೊರತೆಯಿಂದ ನರಳುತ್ತಿದ್ದು, ಅದಕ್ಕೆ ತುರ್ತಾಗಿ ಕಾಯಕಲ್ಪ ಒದಗಿಸಲು ಮುಂದಾಗಬೇಕಿದೆ. ವಿಜಯಪುರ ಜಿಲ್ಲಾ



ಪಂಚಾಯತ ರಸ್ತೆಯಲ್ಲಿರುವ, ಜಿಲ್ಲೆಯ ಪತ್ರಕರ್ತರ ಶಕ್ತಿಕೇಂದ್ರವಾಗಿರುವ ಈ ಪತ್ರಿಕಾ ಭವನಕ್ಕೆ ಪತ್ರಿಕಾ ಭವನ ಕಟ್ಟಡವನ್ನು ನೆಲದಲ್ಲಿ ಮೂರು ಅಡಿ ಎತ್ತರಿಸುವ ಅನಿವಾರ್ಯತೆ ಇದೆ. ಭವನದ ಕಿಟಕಿ ಮತ್ತು ಬಾಗಿಲುಗಳು ಶಿಥಿಲಗೊಂಡಿದ್ದು ಅವುಗಳ ದುರಸ್ಥಿ ಆಗಬೇಕಿದೆ. ಪತ್ರಿಕಾ ಭವನದ ಇಡೀ ಕಟ್ಟಡದಲ್ಲಿ ಕೆಲ ರಿನೋವೇಷನ್ ಮಾಡಿಸಬೇಕಿದೆ. ಕುಡಿಯುವ ನೀರು, ಭವನದ ಆವರಣದಲ್ಲಿರೋ ಸಸಿ ಮರಗಳಿಗೆ ಹಾಗೂ ಉದ್ಯಾನವಕ್ಕಾಗಿ ಕೊಳವೆ ಬಾವಿಯ ಅವಶ್ಯಕತೆಯಿದೆ. ಪಾಳು ಬಿದ್ದಿರುವ ಶೌಚಾಲಯದ ದುರಸ್ತಿಯಾಗಬೇಕಿದೆ. ಭವನದಲ್ಲಿ ಪತ್ರಿಕಾಗೋಷ್ಠಿ ನಡೆಸಲು ಬೇಕಾದ ಪೀಠೋಪಕರಣಗಳು ಸೇರಿದಂತೆ, ತಾಂತ್ರಿಕ ಸೌಲಭ್ಯ ಕಲ್ಪಿಸಿ, ಒಳ ಆವರಣಕ್ಕೆ ಆಧುನಿಕ ಸ್ಪರ್ಶ ನೀಡಬೇಕಿದೆ. ಭವನದ ಕಂಪೌಂಡ್ ಗೋಡೆಯನ್ನು ಎತ್ತರಿಸಿ ಕಬ್ಬಿಣದ ಗೇಟ್ ಅಳವಡಿಕೆ ಹಾಗೂ ಮಹಾದ್ವಾರ ನಿರ್ಮಾಣ ಮಾಡಬೇಕಿದೆ. ಭವನದ ಆವರಣದಲ್ಲಿ ವಿಶಾಲವಾದ ಸ್ಥಳ ಲಭ್ಯವಿದ್ದು, ಅಲ್ಲಿ ಪತ್ರಕರ್ತರ ಸಭೆ – ಸಮಾರಂಭಗಳಿಗಾಗಿ ಸಮುದಾಯ ಭವನದ ನಿರ್ಮಾಣ ಅಗತ್ಯವಿದೆ. ಭವನದ ಹೊರ ಆವರಣದಲ್ಲಿ ಉದ್ಯಾನವನ, ಪಾರ್ಕಿಂಗ್ ನಿರ್ಮಾಣ ಹಾಗೂ ವಿದ್ಯುತ್ ದೀಪಗಳು, ಸಿಸಿ ಕ್ಯಾಮರಾಗಳ ಸೌಲಭ್ಯ ಕಲ್ಪಿಸಬೇಕಿದೆ. ಆದ್ದರಿಂದ ತಾವು ಪತ್ರಿಕಾ ಭವನಕ್ಕೆ ಎಲ್ಲ ಸೌಲಭ್ಯಗಳನ್ನು ಕಲ್ಪಿಸಲು ಅನುದಾನದ ಅವಶ್ಯಕತೆ ಇದೆ. ಸೂಕ್ತ ರೀತಿಯ ಅನುದಾನದಲ್ಲಿ ಆದಷ್ಟು ಹೆಚ್ಚಿನ ಆರ್ಥಿಕ ಸಹಾಯ ಒದಗಿಸಬೇಕೆಂದು ಸಚಿವರಿಗೆ ವಿನಂತಿಸಿದರು.

ಮನವಿ ಸ್ವೀಕರಿಸಿ ಎಂ.ಬಿ.ಪಾಟೀಲರು, ನಾನು ಯಾವಾಗಲೂ ಪತ್ರಕರ್ತರ ಸಂಘದ ಬೆಳವಣಿಗೆಗೆ ಸಹಕರಿಸುವೆ. ಸದಾ ಒತ್ತಾಡದಲ್ಲಿರುವ ಪತ್ರಕರ್ತರ ಏಳಿಗೆಗೆ ಸ್ಪಂದಿಸುವ ಕೆಲಸ ನಮ್ಮಿಂದ ಆಗಲಿದೆ. ಪತ್ರಿಕಾ ಭವನಕ್ಕೆ ಸೌಲಭ್ಯ ಕಲ್ಪಿಸಲು ತಮ್ಮಿಂದ ಹಾಗೂ ಸಂಸ್ಥೆಯಿಂದ ಆಗುವ ಸಹಾಯವನ್ನು ಮಾಡುವ ಭರವಸೆ ನೀಡಿದರು.

ಇದೇ ವೇಳೆ ಮಾತನಾಡಿದ ಪ್ರಧಾನ ಕಾರ್ಯದರ್ಶಿ ಇಂದುಶೇಖರ್ ಮಣೂರ, ಕಾರ್ಯನಿರತ ಪತ್ರಕರ್ತರ ಸಂಘಕ್ಕೆ ಸಚಿವ ಎಂ ಬಿ ಪಾಟೀಲರು ಯಾವಾಗಲು ಸಹಾಯ ಸಹಕಾರ ನೀಡುತ್ತಾ ಬಂದಿದ್ದಾರೆ. ಪತ್ರಕರ್ತರಿಗಾಗಿ ಬಿಎಲ್ಡಿಇ ಸಂಸ್ಥೆಯ ಬಿ ಎಂ ಪಾಟೀಲ್ ವೈದ್ಯಕೀಯ ಮಹಾವಿದ್ಯಾಲಯ ಹಾಗೂ ಆಸ್ಪತ್ರೆಯಿಂದ ಆರೋಗ್ಯ ಕಾರ್ಡ್ ನೀಡಿದ್ದಾರೆ. ಸಂಘದ ಚಟುವಟಿಕೆಗಳಿಗೆ ಬೆಂಬಲಿಸುತ್ತಾ ಬಂದಿದ್ದಾರೆ. ಸದ್ಯ ಪತ್ರಿಕಾ ಭವನದ ನವೀಕರಣಕ್ಕೆ ಸಿ ಎಸ್ ಆರ್ ಅನುದಾನವನ್ನು ಕಾನೂನು ವ್ಯಾಪ್ತಿಯಲ್ಲಿ ಒದಗಿಸೋ ಭರವಸೆ ನೀಡಿದ್ದಾರೆ ಎಂದರು.

# ರಾಯಚೂರು ಜಿಲ್ಲೆಯನ್ನು ಬರಪೀಡಿತ ಘೋಷಿಸಲು ರೈತಸಂಘದ ಆಗ್ರಹ





**ರಾಯಚೂರು, ಜು. 3:** ಜಿಲ್ಲೆಯನ್ನು ಬರಗಾಲ ಪೀಡಿತ ಪ್ರದೇಶವೆಂದು ಘೋಷಿಸಬೇಕು ಹಾಗೂ ಗುಳೆ ತಡೆಯಲು ಈ ಹಿಂದೆ ಜಾರಿಯಲ್ಲಿದ್ದ ಮನರೇಗಾ ಯೋಜನೆ ಜಾರಿಗೊಳಿಸಬೇಕು ಎಂಬುದು ಸೇರಿದಂತೆ ಮತ್ತಿತರ ಪ್ರಮುಖ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕರ್ನಾಟಕ ರೈತ ಸಂಘದ (ಎಐಯುಕೆಎಸ್) ಸಿಂಧನೂರು ತಾಲ್ಲೂಕು ಘಟಕ ಸ್ಥಳೀಯ ಮಿನಿವಿಧಾನಸೌಧ ಕಚೇರಿಯ ಮುಂದೆ ಪ್ರತಿಭಟಿಸಿ ಶಿರಸ್ತೇದಾರ್ ಅವರ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಪತ್ರ ರವಾನಿಸಿತು.

ಈ ಬಾರಿ ಮಳೆ ಸಂಪೂರ್ಣ ವಿಫಲವಾಗಿದ್ದು, ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಪ್ರತಿವರ್ಷ ಮೇ–ಜೂನ್ ತಿಂಗಳಲ್ಲಿ ಬಿತ್ತನೆ ಕಾರ್ಯಗಳು ಆರಂಭವಾಗುತ್ತಿದ್ದವು. ಆದರೆ ಮಳೆ ಬಾರದ ಕಾರಣ ಕೃಷಿ ಚಟುವಟಿಕೆಗಳು ಸಂಪೂರ್ಣ ನಿಂತು ಹೋಗಿವೆ. ಇದರಿಂದ ರೈತರು, ಕಾರ್ಮಿಕರು ಹಾಗೂ ದುಡಿಯುವ ವರ್ಗ ಆರ್ಥಿಕ ಬಿಕ್ಕಟ್ಟಿಗೆ ಸಿಲುಕಿದೆ. ಆದ್ದರಿಂದ ರಾಜ್ಯವನ್ನು ಸಂಪೂರ್ಣ ಬರಪೀಡಿತ ಪ್ರವೇಶವೆಂದು ಘೋಷಿಸಬೇಕು ಮತ್ತು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ವಿಳಂಬ ಮಾಡದೇ ಬರ ಪರಿಹಾರ ಜಾರಿಗೊಳಿಸಬೇಕು' ಎಂದು ತಾಲ್ಲೂಕು ಘಟಕದ ಅಧ್ಯಕ್ಷ ರಮೇಶ ಪಾಟೀಲ್ ಭೇರಿಗಿ ಆಗ್ರಹಿಸಿದರು.

ಸಿಪಿಐ(ಎಂಎಲ್) ಜಿಲ್ಲಾ ಘಟಕದ ಕಾರ್ಯದರ್ಶಿ ಬಿ.ಎನ್.ಯರದಿಹಾಳ ಮಾತನಾಡಿ ಬರಗಾಲದಿಂದಾಗಿ ಜಿಲ್ಲೆಯಲ್ಲಿ ಕುಡಿಯುವ ನೀರಿನ ಕೆರೆಗಳು ತಳ ಕಂಡಿದ್ದು, ನೀರು ಸರಬರಾಜು ಬಹುತೇಕ ಕಡೆ ಸ್ಥಗಿತಗೊಂಡಿದೆ. ಹಳ್ಳ–ಕೊಳ್ಳ ಹಾಗೂ ಕೆರೆ–ಕಟ್ಟೆಗಳು ಬತ್ತಿ ಹೋಗಿವೆ. ಇದರಿಂದ ಜಿಲ್ಲೆಯಲ್ಲಿ ಕುಡಿಯುವ ನೀರಿಗಾಗಿ ಜನ–ಜಾನುವಾರುಗಳು ಹಾಹಾಕಾರ ಎದುರಿಸುತ್ತಿದ್ದಾರೆ. ಕೂಡಲೇ ಜಿಲ್ಲಾಡಳಿತ ನೀರಿನ ಸಮಸ್ಯೆ ಪರಿಹರಿಸಲು ಮುಂದಾಗಬೇಕು ಎಂದು ಒತ್ತಾಯಿಸಿದರು.

ರಾಜ್ಯ ಸರ್ಕಾರ ರಾಜ್ಯದ ಎಲ್ಲ ಜಿಲ್ಲೆಗಳನ್ನು ಬರಗಾಲ ಪೀಡಿತ ಪ್ರದೇಶಗಳೆಂದು ಘೋಷಿಸಿ ಸಣ್ಣ ರೈತರಿಗೆ ಪ್ರತಿ ಎಕರೆಗೆ ? 25 ಸಾವಿರ ಪರಿಹಾರ ನೀಡಬೇಕು. ರೈತರ ಸಾಲವನ್ನು ಮನ್ನಾ ಮಾಡಬೇಕು. ಜಾನುವಾರು ಸಾಕಣೆದಾರರ ಮನೆ ಮನೆಗೆ ಮೇವು ಸರಬರಾಜು ಮಾಡಬೇಕು ಎಂದು ಆಗ್ರಹಿಸಿದರು.

ಸದಸ್ಯರಾದ ರಮೇಶ ಬಸಾಪುರ ಇ.ಜೆ. ಮಹಾದೇವ ಅಮರಾಪುರ, ಗಂಗರಾಜ ಭೀಮರಾಜ ಕ್ಯಾಂಪ್, ನಿಂಗಪ್ಪ ಚಿಕ್ಕಭೇರಿಗಿ, ಬಾಲಾಜಿ ಉದ್ಬಾಳ, ಬಸಪ್ಪ ಕಡಬೂರು, ವೆಂಕಟೇಶ ಉದ್ಬಾಳ, ಯಮನೂರಪ್ಪ ರತ್ನಾಪುರ ಹಟ್ಟಿ, ಅಸ್ಲಂ, ಕಾಶಿಮಸಾಬ್, ಮರಿಯಪ್ಪ ನಾಯಕ ಭೇರಿಗಿ, ಕರಿಯಪ್ಪ ತುರ್ವಿಹಾಳ, ನಿಂಗಪ್ಪ ಕೆ., ಲಾಲಸಾಬ್ ಜಿಲೇಬಿ, ಮಹ್ಮದ್ ಅಲಿ ಭಾಗವಹಿಸಿದ್ದರು.

# ಕೇಂದ್ರ ಕಾರಾಗೃಹದಲ್ಲಿ ಸಜಾಬಂದಿ ಕೈದಿಗಳಿಗೆ ಎಲೆಕ್ಟ್ರಿಕಲ್ ತರಬೇತಿ



**ಕಲಬುರಗಿ, ಜು. 3:** ನಗರದ ಕೇಂದ್ರ ಕಾರಾಗೃಹ ಹಾಗೂ ಜನ ಶಿಕ್ಷಣ ಸಂಸ್ಥಾನ ಇವುಗಳ ಸಂಯುಕ್ತಾಶ್ರಯದಲ್ಲಿ ಕಾರಾಗೃಹದ ಬಂದಿ ನಿವಾಸಿಗಳಲ್ಲಿ ಪತ್ರಿ ತಂಡಕ್ಕೆ 40 ಜನ ಶಿಬಿರಾರ್ಥಿಗಳನ್ನು ಆಯ್ಕೆ ಮಾಡಿ ಹಮ್ಮಿಕೊಳ್ಳಲಾಗಿದ್ದ ಸಹಾಯಕ ಎಲೆಕ್ಟ್ರಿಕಲ್ ಟೆಕ್ನಿಷಿಯನ್ ತರಬೇತಿ ಕಾರ್ಯಕ್ರಮಕ್ಕೆ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ನ್ಯಾ. ಶ್ರೀನಿವಾಸ ನವಲೆ ಅವರು ಚಾಲನೆ ನೀಡಿದರು.

ನಂತರ ಅವರು ಮಾತನಾಡಿ, ಸ್ವಾವಲಂಭಿಯಾಗಿ ಬದುಕನ್ನು ನಡೆಸುವುದಕ್ಕೆ ಈ ತರಬೇತಿಗಳು ತಮಗೆ ಸಹಾಯವಾಗಲಿದ್ದು, ಕಾರಾಗೃಹದಲ್ಲಿ ನೀಡುವ ವೃತ್ತಿಪರ ತರಬೇತಿಯ ಸದುಪಯೋಗ ಪಡೆದುಕೊಂಡು ಸಮಾಜದಲ್ಲಿ ಸ್ವಯಂ ಉದ್ಯೋಗವನ್ನು ಕಲ್ಪಿಸಿ ಕೊಂಡು ಉತ್ತಮವಾಗಿ ಬದುಕನ್ನು ನಡೆಸಬೇಕು ಎಂದರು.

ಜನಶಿಕ್ಷಣ ಸಂಸ್ಥಾನದ ನಿರ್ದೇಶಕ ಸುರೇಂದ್ರ ಪಾಟೀಲ್ ಮಾತನಾಡಿ, ತಮ್ಮ ಸಂಸ್ಥೆಯು ಸಾಮಾನ್ಯವಾಗಿ ಗ್ರಾಮೀಣ ಭಾಗದ ಜನರಿಗೆ ಉಚಿತವಾಗಿ ತರಬೇತಿಗಳನ್ನು ನೀಡುತ್ತಿದೆ. ಈ ಬಾರಿ ಕಲಬುರಗಿ ಕೇಂದ್ರ ಕಾರಾಗೃಹ ಬಂದಿ ನಿವಾಸಿಗಳಿಗೆ ತರಬೇತಿಗಳನ್ನು ನೀಡುವುದಕ್ಕೆ ತಮ್ಮ ಸಂಸ್ಥೆಯು ಮುಂದಾಗಿದ್ದು, ಪ್ರಾರಂಭದಲ್ಲಿ 40 ಶಿಬಿರಾರ್ಥಿಗಳಿಗೆ ಸಹಾಯಕ ಎಲೆಕ್ಟ್ರಿಕಲ್ ಟೆಕ್ನಿಷಿಯನ್ ತರಬೇತಿ ನೀಡುತ್ತಿದೆ. ಕಾರಾಗೃಹದ ಬಂದಿ ನಿವಾಸಿಗಳು ತರಬೇತಿಯ ಲಾಭ ಪಡೆದು ಸ್ವಯಂ ಉದ್ಯೋಗದ ಮುಖಾಂತರ ತಮ್ಮ ಜೀವನದ ಕಾಯಕಲ್ಪವನ್ನು ಕಟ್ಟಿಕೊಳ್ಳಬೇಕು.

ಈ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಕೇಂದ್ರ ಕಾರಾಗೃಹ ಮುಖ್ಯ ಅಧೀಕ್ಷಕ ರಾಕೇಶ್ ಕಾಂಬಳೆ ಮಾತನಾಡಿ, ಕಾರಾಗೃಹ ಮತ್ತು ಸುಧಾರಣಾ ಸೇವೆ ಇಲಾಖೆಯು ಹಲವಾರು ತರಬೇತಿಗಳನ್ನು ನೀಡುವ ಉದ್ದೇಶ ಹೊಂದಿದ್ದು, ಅದರ ಪ್ರಯುಕ್ತ, ಗುಲಬರ್ಗಾ ಜನ ಶಿಕ್ಷಣ ಸಂಸ್ಥಾನ್ ಮುಖಾಂತರ ಆಯ್ದ 40 ಜನ ಶಿಕ್ಷಾ ಬಂದಿಗಳಿಗೆ ಎಲೆಕ್ಟ್ರಿಶಿಯನ್ ತರಬೇತಿಯನ್ನು ಹಮ್ಮಿಕೊಳ್ಳಲಾಗಿದೆ ಎಂದರು.

# ಅನೈತಿಕ ಸಂಬಂಧ ಪ್ರಶ್ನಿಸಿದ ಪತ್ನಿಯನ್ನೇ ರಾಡ್‌ನಿಂದ ಹೊಡೆದು ಕೊಂದ ಪತಿ

**ಬೀದರ್, ಜು. 3:** ಪಕ್ಕದ ಮನೆಯ ಯುವತಿ ಜೊತೆ ಅನೈತಿಕ ಸಂಬಂಧ ಇಟ್ಟುಕೊಂಡಿದ್ದನ್ನು ಪ್ರಶ್ನಿಸಿದ ಪತ್ನಿಗೆ ಕಬ್ಬಿಣದ ರಾಡ್‌ನಿಂದ ಮಾರಣಾಂತಿಕವಾಗಿ ಹಲ್ಲೆ ನಡೆಸಿ ಪತ್ನಿಯನ್ನು ಭೀಕರವಾಗಿ ಕೊಲೆ ಮಾಡಿರುವ ಆಘಾತಕಾರಿ ಘಟನೆ ಜಿಲ್ಲೆಯ ಭಾಲ್ಕಿ ತಾಲೂಕಿನ ಹೊನ್ನಿ ಕೇರಿ ಅರಣ್ಯ ಪ್ರದೇಶದಲ್ಲಿ ನಡೆದಿರು ವುದು ಬೆಳಕಿಗೆ ಬಂದಿದೆ. ಬೀದರ್ ತಾಲೂಕಿನ ಹೊನ್ನಿಕೇರಿ ಗ್ರಾಮದ ಸಂಜನಾ (26) ಕೊಲೆಯಾದ ದುರ್ದೈವಿ.

ಭಾರತೀಯ ಸೇನೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ಆರೋಪಿ ಪತಿ ಭಗವತ್ ಜ್ಞಾನೇಶ್ವರ ಎಂಬಾತನೇ ಈ ಘೋರ ಕೃತ್ಯ ಎಸಗಿದ ಕಿರಾತಕ. ಗಂಭೀರವಾಗಿ ಗಾಯಗೊಂಡಿದ್ದ ಸಂಜನಾ ಅವರನ್ನು ಮಹಾರಾಷ್ಟ್ರದ ಸೊಲ್ಲಾಪುರದ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತಾದರೂ, ಚಿಕಿತ್ಸೆ ಫಲಕಾರಿಯಾಗದೆ ಇಂದು ಅವರು ಕೊನೆಯುಸಿರೆಳೆದಿದ್ದಾರೆ.



**ಕಾಡಿಗೆ ಕರೆದೊಯ್ದು ರಾಡ್‌ನಿಂದ ಹಲ್ಲೆ :** ಮೃತ ಸಂಜನಾ ಹಾಗೂ ಭಗವತ್ ಅವರ ವಿವಾಹ ಎರಡು ವರ್ಷಗಳ ಹಿಂದಷ್ಟೇ ನಡೆದಿತ್ತು. ದಂಪತಿ ಬೀದರ್‌ನ ಶಿವನಗರದಲ್ಲಿ ವಾಸವಾಗಿದ್ದರು. ಆದರೆ, ಪತಿ ಭಗವತ್ ಪಕ್ಕದ ಮನೆಯ ಯುವತಿ ಯೊಂದಿಗೆ ಅನೈತಿಕ ಸಂಬಂಧ ಇಟ್ಟುಕೊಂಡಿದ್ದ ಎನ್ನಲಾಗಿದೆ. ಈ ವಿಷಯ ತಿಳಿದ ಪತ್ನಿ ಸಂಜನಾ ಇದನ್ನು ತೀವ್ರವಾಗಿ ಪ್ರಶ್ನಿಸಿದ್ದಾರೆ. ಇದರಿಂದ ಕೋಪಗೊಂಡ ಭಗವತ್, ಪತ್ನಿಯೊಂದಿಗೆ ಜಗಳವಾಡಿ ಆಕೆ ಯನ್ನು ಕಾರಿನಲ್ಲಿ ಹೊನ್ನಿಕೇರಿ ಅರಣ್ಯ ಪ್ರದೇಶಕ್ಕೆ ಕರೆದೊಯ್ದಿದ್ದಾನೆ. ಕಾರಿನಲ್ಲಿದ್ದ ಕಬ್ಬಿಣದ ರಾಡ್‌ನಿಂದ ಸಂಜನಾ ಅವರ ತಲೆ, ಕತ್ತಿಗೆ ಮಾರಣಾಂತಿಕವಾಗಿ ಹಲ್ಲೆ ನಡೆಸಿದ್ದಾನೆ ಎನ್ನಲಾಗಿದೆ.

# ಸ್ವಸಹಾಯ ಸಂಘದ ಮಹಿಳೆಯರ ಸಾಧನೆ ಸ್ಫೂರ್ತಿ: ನಿಬಂಧಕಿ ನೀಲಾಂಬಿಕಾ



**ಬೀದರ್, ಜು. 3:** ಇಡೀ ಸ್ವಸಹಾಯ ಸಂಘಗಳ ಚಳವಳಿ ಯಶಸ್ಸಿನ ಪ್ರತೀಕವಾಗಿದೆ. ಅವರ ಸಾಧನೆ ಇತರೆ ಮಹಿಳೆಯರಿಗೆ ಸ್ಫೂರ್ತಿ ಹಾಗೂ ಮಾದರಿಯಾಗಬೇಕು ಎಂದು ಸಹಕಾರ ಸಂಘಗಳ ಸಹಾಯಕ ನಿಬಂಧಕಿ ನೀಲಾಂಬಿಕಾ ಹೇಳಿದರು.

ಸ್ವಸಹಾಯ ಸಂಘಗಳ ಸಭೆ, ಉಳಿತಾಯ ಮತ್ತು ನಿರಂತರ ಚಟುವಟಿಕೆ ಎಂದಿಗೂ ನಿಲ್ಲಬಾರದು. ಆರಂಭಿಸಿದ ಉತ್ತಮ ಪದ್ಧತಿಗಳನ್ನು ಯಥಾವತ್ತಾಗಿ ಮುಂದುವರಿಸಬೇಕು. ಮಹಿಳೆಯರು ಶಿಕ್ಷಣ, ಉಳಿತಾಯ ಹಾಗೂ ಆತ್ಮವಿಶ್ವಾಸವನ್ನು ಜೀವನದ ಭಾಗವಾಗಿಸಿಕೊಂಡಾಗ ಕುಟುಂಬದ ಆರ್ಥಿಕ ಅಭಿವೃದ್ಧಿಯ ಜೊತೆಗೆ ಸಮಾಜದ ಪ್ರಗತಿಗೂ ಮಹತ್ತರ ಕೊಡುಗೆ ನೀಡಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಡಿಸಿಸಿ ಬ್ಯಾಂಕ್‌ನ ಡಿಜಿಎಂ ಅನಿಲಕುಮಾರ ಪಾಟೀಲ ಮಾತನಾಡಿ, ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ (ಎನ್‌ಆರ್‌ಎಲ್‌ಎಂ) ಮೂಲಕ ಗ್ರಾಮೀಣ ಭಾಗದ ಮಹಿಳೆಯರು ಸ್ವಾಭಿಮಾನ ಹಾಗೂ ಸ್ವಾವಲಂಬನೆಯ ಬದುಕನ್ನು ಕಟ್ಟಿಕೊಳ್ಳುತ್ತಿದ್ದಾರೆ ಎಂದರು.

ಸಹಾರ್ದ ತರಬೇತಿ ಕೇಂದ್ರದ ನಿರ್ದೇಶಕ ಸುಬ್ರಮಣ್ಯ ಪ್ರಭು ಮಾತನಾಡಿ, ಕುಶಲಕರ್ಮಿಗಳು ಸದಾ ಉತ್ಸಾಹ, ಶ್ರದ್ಧೆ ಹಾಗೂ ಬದ್ಧತೆಯಿಂದ ಕಾರ್ಯನಿರ್ವಹಿಸಬೇಕು. ನಿರಂತರ ಪರಿಶ್ರಮ ಮತ್ತು ಕೌಶಲ ವೃದ್ಧಿಯಿಂದ ಮಾತ್ರ ಉತ್ತಮ ಸಾಧನೆ ಸಾಧ್ಯ. ಸಂಘಟಿತ ಶಕ್ತಿಯಿಂದ ಹೆಚ್ಚಿನ ಅವಕಾಶಗಳು ದೊರೆಯು ತ್ತವೆ. ಆರ್ಥಿಕವಾಗಿ ಸ್ವಾವಲಂಬಿ ಬದುಕು ಕಟ್ಟಿಕೊಳ್ಳಬಹುದು ಎಂದು ತಿಳಿಸಿದರು.

ಹಿರಿಯ ನಿರೀಕ್ಷಕ ನಾಗರಾಜ, ಬೀದರ್ ಜಿಲ್ಲಾ ಸಹಕಾರ ಯೂನಿಯನ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಎಚ್.ಆರ್. ಮಲ್ಲಮ್ಮ, ಅಖಿಲ ಭಾರತ ಕುಂಬಾರ ಕುಶಲ ಕರ್ಮಿಗಳ ಸಂಘದ ಅಧ್ಯಕ್ಷ ಬಾಬುರಾವ್ ಕುಂಬಾರ ಮಾತನಾಡಿದರು.

ಪತ್ರಕರ್ತ ಸುನೀಲ್ ಭಾವಿಕಟ್ಟಿ, ಎಫ್‌ಡಿಸಿಗಳಾದ ಸಂಗಮೇಶ್, ಸುಮಿತ್ ಹಾಗೂ ಸ್ವಸಹಾಯ ಸಂಘಗಳ ಪದಾಧಿಕಾರಿಗಳು, ಮಹಿಳೆಯರು ಉಪಸ್ಥಿತರಿದ್ದರು. ಮಲ್ಲಿಕಾರ್ಜುನ್ ಸದಾಶಿವ ಸ್ವಾಗತಿಸಿದರು. ಮಾರುತಿ ಕೆ. ನಿರೂಪಿಸಿದರು., ಬಾಬುರಾವ್ ಕುಂಬಾರ ವಂದಿಸಿದರು.

ಸ್ವಸಹಾಯ ಸಂಘಗಳ ಮಹಿಳೆಯರು ತಯಾರಿಸಿದ ವಿವಿಧ ಉತ್ಪನ್ನಗಳ ಪ್ರದರ್ಶನ ನಡೆಯಿತು.


# ಮಂತ್ರಾಲಯದ ರಾಘವೇಂದ್ರ ಮಠಕ್ಕೆ ಶಾಸಕ ನಾರಾ ಭರತ್‌ರೆಡ್ಡಿ ಭೇಟಿ

**ಬಳ್ಳಾರಿ, ಜು.03:** ಬಳ್ಳಾರಿ ನಗರ ಕ್ಷೇತ್ರದ ಶಾಸಕ ನಾರಾ ಭರತ್ ರೆಡ್ಡಿ ಅವರು ಶುಕ್ರವಾರ ಮಂತ್ರಾಲಯದ ಶ್ರೀ ರಾಘವೇಂದ್ರ ಸ್ವಾಮಿ ಮಠಕ್ಕೆ ಭೇಟಿ ನೀಡಿ ಆಶೀರ್ವಾದ ಪಡೆದರು.

ಶಾಸಕ ನಾರಾ ಭರತ್ ರೆಡ್ಡಿಯವರು ಮಠಕ್ಕೆ ಭೇಟಿ ನೀಡಿದ ಸಂದರ್ಭ ಮಠದ ಶ್ರೀ ಸುಭುದೇಂದ್ರ ತೀರ್ಥರಿಂದ ದಿವ್ಯ ಆಶೀರ್ವಾದ ಪಡೆದರು.

ಈ ಸಂದರ್ಭದಲ್ಲಿ ಎಪಿಎಂಸಿ ಅಧ್ಯಕ್ಷ ಕಟ್ಟೆಮನೆ ನಾಗೇಂದ್ರ, ಹಿರಿಯ ಕಾಂಗ್ರೆಸ್ ನಾಯಕರು ಅಸುಂಡಿ ಹೊನ್ನರಪ್ಪ, ಪರಶುರಾಮುಡು, ಹೊನ್ನಪ್ಪ, ಹಗರಿ ಗೋವಿಂದ, ಗುಂತಕಲ್ ಸುರೇಶ್,ವೆಂಕಟ ನಾಯ್ಡು ಹಾಗೂ ಇತರ ಹಲವು ಕಾಂಗ್ರೆಸ್ ನಾಯಕರು ಉಪಸ್ಥಿತರಿದ್ದರು.

ಭಕ್ತಿಪೂರ್ವಕವಾಗಿ ಪೂಜೆ ಸಲ್ಲಿಸಿ, ವಿಶೇಷ ಪ್ರಾರ್ಥನೆ ಮಾಡಿದ ಶಾಸಕ ನಾರಾ ಭರತ್ ರೆಡ್ಡಿ ಅವರು, ಜನರ ಕಲ್ಯಾಣ ಮತ್ತು ಬಳ್ಳಾರಿ ಅಭಿವೃದ್ಧಿಗಾಗಿ ಪಕ್ಷವು ಸತತ ಪ್ರಯತ್ನ ಮಾಡುತ್ತಿದೆ



ಈ ಭೇಟಿಯು ಆಧ್ಯಾತ್ಮಿಕ ಶಕ್ತಿಯನ್ನು ಹೆಚ್ಚಿಸಿದೆ ಎಂದು ತಿಳಿಸಿದರು.

# ಎಸ್‌ಐಆರ್ ವಿರೋಧಿ ಒಕ್ಕೂಟದಿಂದ ಕೈಗೆ ಕಪ್ಪುಬಟ್ಟೆ ಕಟ್ಟಿಕೊಂಡು ಪ್ರತಿಭಟನೆ

**ರಾಯಚೂರು, ಜು. 3:** ಎಸ್‌ಐಆರ್ ಪ್ರಕ್ರಿಯೆಯನ್ನು ಪ್ರಜಾತಾಂತ್ರಿಕಗೊಳಿಸಲು ನಾಗರಿಕ ಸಮಾಜ ಮಂಡಿಸಿರುವ ನಾಲ್ಕು ಪ್ರಮುಖ ಹಕ್ಕೊತ್ತಾಯಗಳನ್ನು ಪರಿಗಣಿಸಿ ಸ್ಪಷ್ಟನೆ ನೀಡಬೇಕು ಎಂದು ಆಗ್ರಹಿಸಿ, ಎಸ್‌ಐಆರ್ ವಿರೋಧಿ ಜಾತ್ಯತೀತ ಪಕ್ಷಗಳು ಹಾಗೂ ಜನಪರ ಸಂಘಟನೆಗಳ ಒಕ್ಕೂಟದ ಪದಾಧಿಕಾರಿಗಳು ಕೈಗೆ ಕಪ್ಪು ಬಟ್ಟೆ ಕಟ್ಟಿಕೊಂಡು ನಗರದ ಜಿಲ್ಲಾಡಳಿತ ಕಚೇರಿ ಎದುರು ಪ್ರತಿಭಟನೆ ನಡೆಸಿ ಮನವಿ ಸಲ್ಲಿಸಿದರು.

ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ನಡೆದ ಬೃಹತ್ ಪ್ರತಿರೋಧ ಸಮಾವೇಶಕ್ಕೆ ಚುನಾವಣಾ ಆಯೋಗವನ್ನು ಆಹ್ವಾನಿಸಿ, ನಾಗರಿಕ ಸಮಾಜದ ಹಕ್ಕೊತ್ತಾಯಗಳನ್ನು ಸ್ವೀಕರಿಸಿ ಅವುಗಳ ಕುರಿತು ಸ್ಪಷ್ಟನೆ ನೀಡುವಂತೆ ಮನವಿ ಮಾಡಲಾಗಿತ್ತು. ರಾಜ್ಯದ ಸಾಹಿತಿಗಳು, ಚಿಂತಕರು, ಕಲಾವಿದರು ಹಾಗೂ ರಂಗಕರ್ಮಿಗಳು ಬಹಿರಂಗ ಪತ್ರ ಬರೆದಿದ್ದರೂ, ರಾಜ್ಯ





ಸರ್ಕಾರದ ಪತ್ರಕ್ಕೂ ಆಯೋಗದಿಂದ ಯಾವುದೇ ಪ್ರತಿಕ್ರಿಯೆ ಬಂದಿಲ್ಲ ಎಂದು ಆರೋಪಿಸಿದರು.

ಸಾರ್ವಜನಿಕ ಪ್ರಶ್ನೆಗಳಿಗೆ ಉತ್ತರಿಸುವುದು ಪ್ರತಿಯೊಂದು ಸಾರ್ವಜನಿಕ ಸಂಸ್ಥೆಯ ಕರ್ತವ್ಯವಾಗಿದ್ದು, ಆಯೋಗವು ಮೌನ ವಹಿಸಿರುವುದು ಪ್ರಜಾತಾಂತ್ರಿಕ ನಡವಳಿಕೆಗೆ ವಿರುದ್ಧವಾಗಿದೆ ಎಂದು ಪ್ರತಿಭಟನಾಕಾರರು ಆಕ್ಷೇಪ ವ್ಯಕ್ತಪಡಿಸಿದರು.

ರಾಜ್ಯದಾದ್ಯಂತ ಜಿಲ್ಲಾ ಹಾಗೂ ತಾಲ್ಲೂಕು ಕೇಂದ್ರಗಳಲ್ಲಿ ಬಾಯಿಗೆ ಕಪ್ಪು ಬಟ್ಟೆ ಕಟ್ಟಿಕೊಂಡು ಪ್ರತಿಭಟನೆ ನಡೆಸಲಾಗುತ್ತಿದ್ದು, ಚುನಾವಣಾ ಆಯೋಗವು ನಾಗರಿಕ ಸಮಾಜದ ಹಕ್ಕೊತ್ತಾಯಗಳನ್ನು ಪರಿಶೀಲಿಸಬೇಕು ಎಂದು ಒತ್ತಾಯಿಸಿದರು. ಚುನಾವಣಾ ಆಯೋಗವು ಇದೇ ಧೋರಣೆಯನ್ನು ಮುಂದುವರಿಸಿ, ಸಾಫ್ಟ್‌ವೇರ್ ಬಳಸಿ ಮತದಾರರ ಹೆಸರನ್ನು ಅಳಿಸುವ ಕ್ರಮ ಕೈಗೊಂಡು, ಜನರಿಗೆ ಮೇಲ್ಮನವಿ ಸಲ್ಲಿಸಲು ಸೂಕ್ತ ಅವಕಾಶ ನೀಡದಿದ್ದರೆ, ರಾಜ್ಯದಲ್ಲಿ ಬೃಹತ್ ಜನಾಂದೋಲನ ರೂಪುಗೊಳ್ಳಲಿದೆ ಎಂದು ಪ್ರತಿಭಟನಾಕಾರರು ಎಚ್ಚರಿಕೆ ನೀಡಿದರು.

ಹೋರಾಟಗಾರ ಮಾರೆಪ್ಪ ಹರವಿ, ಎಂ.ಆರ್ ಬೇರಿ, ಜಮಾತೆ ಇಸ್ಲಾಂ ಹಿಂದ್ ಜಿಲ್ಲಾ ಘಟಕದ ಅಧ್ಯಕ್ಷ ಅಸಿಮುದ್ದೀನ್ ಅಖ್ತರ್, ಸೈಯದ್ ಅಕ್ಬರ್ ಪಾಶ, ಶರಣಕುಮಾರ, ಮೊಹಮ್ಮದ್ ಏಜಾಜ್ ಅಲಿ, ಎಸ್ ಡಿಪಿಐ ಜಿಲ್ಲಾ ಮುಖಂಡ ಮುಶ್ತಾಕ್ ಅಹ್ಮದ್, ಕಾಂಗ್ರೆಸ್ ಯುವ ಮುಖಂಡ ಫೈಸಲ್ ಖಾನ್, ಅಬ್ದುಲ್ ಮತೀನ್ ಉಪಸ್ಥಿತರಿದ್ದರು.

# ಪತ್ರಿಕೋದ್ಯಮದ ಅವನತಿಯನ್ನು ತಡೆಯಲು ಡಾ.ಶಿವರಂಜನ ಕರೆ



**ಕಲಬುರಗಿ, ಜು. 3:** ಪತ್ರಿಕೋದ್ಯಮ ವೃತ್ತಿಯ ನೈಜ ಮೌಲ್ಯಗಳನ್ನು ಕಾಪಾಡುವ ಮೂಲಕ ಪತ್ರಿಕೋದ್ಯಮ ವೃತ್ತಿಯ ಅವನತಿ ತಡೆಹಿಡಿಯುವುದು ಇಂದಿನ ಅಗತ್ಯವಾಗಿದೆ ಎಂದು ಹಿರಿಯ ಪತ್ರಕರ್ತ ಡಾ.ಶಿವರಂಜನ್ ಸತ್ಯಂಪೇಟೆ ಅಭಿಪ್ರಾಯಪಟ್ಟರು.

ನಗರದ ಶರಣಬಸವ ವಿಶ್ವ ವಿದ್ಯಾಲಯದ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ಅಧ್ಯಯನ ಹಾಗೂ ಸಂಶೋಧನಾ ವಿಭಾಗದ ವತಿಯಿಂದ ಆಯೋಜಿಸಿದ್ದ ಪತ್ರಿಕಾ ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದ ಅವರು, ಇತ್ತೀಚಿನ ದಿನಗಳಲ್ಲಿ ಪತ್ರಕರ್ತರಲ್ಲಿ ವೃತ್ತಿಪರ ನೈತಿಕತೆ ಹಾಗೂ ಪ್ರಾಮಾಣಿಕತೆಯ ಮೌಲ್ಯಗಳು ಆತಂಕಕಾರಿ ರೀತಿಯಲ್ಲಿ ಕುಸಿಯುತ್ತಿವೆ ಎಂದು ವಿಷಾದ ವ್ಯಕ್ತಪಡಿಸಿದರು.

ಉದಾತ್ತ ವೃತ್ತಿಯೆಂದು ಪರಿಗಣಿಸಲ್ಪಟ್ಟ ಪತ್ರಿಕೋದ್ಯಮವು ಇಂದು ಭ್ರಷ್ಟಾಚಾರದ ನೆರಳಿನಲ್ಲಿ ತನ್ನ ಗೌರವವನ್ನು ಕಳೆದುಕೊಳ್ಳುತ್ತಿದೆ. ಕೆಲವರ ತಪ್ಪು ನಡೆ-ನುಡಿಗಳಿಂದ ವೃತ್ತಿಯ ಘನತೆಗೆ ಧಕ್ಕೆಯಾಗುತ್ತಿದೆ. ಈ ಹಿನ್ನೆಲೆಯಲ್ಲಿ ಪತ್ರಕರ್ತರು ಆತ್ಮಾವಲೋಕನ ಮಾಡಿಕೊಂಡು ವೃತ್ತಿಯ ಗೌರವವನ್ನು ಮರುಸ್ಥಾಪಿಸಲು ಮುಂದಾಗಬೇಕಾಗಿದೆ. "ವೃತ್ತಿಪರತೆ ಮತ್ತು ನೈತಿಕತೆಗೆ ಧಕ್ಕೆ ಉಂಟಾಗಿದ್ದು, ಕೆಲವು ಪತ್ರಕರ್ತರು ಭ್ರಷ್ಟಾಚಾರದ ಆಮಿಷಕ್ಕೆ ಒಳಗಾಗುತ್ತಿದ್ದಾರೆ" ಎಂದು ಶಿವರಂಜನ್ ಕಳವಳ ವ್ಯಕ್ತಪಡಿಸಿದರು.

ಇಂದು ಯೂಟ್ಯೂಬ್ ಚಾನೆಲ್‌ಗಳು, ಇನ್‌ಸ್ಟಾಗ್ರಾಮ್ ರೀಲ್ಸ್, ಟೆಲಿಗ್ರಾಂ ಹಾಗೂ ವಿವಿಧ ಆನ್‌ಲೈನ್ ಸುದ್ದಿ ವೇದಿಕೆಗಳಂತಹ ಡಿಜಿಟಲ್ ಮಾಧ್ಯಮಗಳ ಆಗಮನ ದಿಂದ ಪತ್ರಿಕೋದ್ಯಮದ ಸ್ವರೂಪವೇ ಬದಲಾಗಿದೆ. ಹಾಗಾಗಿ ಸ್ವಲ್ಪ ಪ್ರತಿಭೆ ಹಾಗೂ ಆಂಡ್ರಾಯ್ಡ್ ಮೊಬೈಲ್ ಹೊಂದಿರುವ ಯಾರಾದರೂ ಪತ್ರಕರ್ತರಾಗುವ ಪರಿಸ್ಥಿತಿ ನಿರ್ಮಾಣವಾಗಿದೆ. ಆದಾಗ್ಯೂ, ಸತ್ಯಾಸತ್ಯತೆ ಹಾಗೂ ವಿಶ್ವಾಸಾರ್ಹತೆಯ ದೃಷ್ಟಿಯಿಂದ ಮುದ್ರಣ ಮಾಧ್ಯಮ ಇನ್ನೂ ತನ್ನ ಸ್ಥಾನವನ್ನು ಉಳಿಸಿ ಕೊಂಡಿದೆ. ಡಿಜಿಟಲ್ ವೇದಿಕೆಗಳಲ್ಲಿ ಹಲವು ಬಾರಿ ಮಾಹಿತಿಯನ್ನು ಪರಿಶೀಲಿಸದೇ ಸುದ್ದಿಗಳನ್ನು ಪ್ರಕಟಿಸುವ ಪ್ರವೃತ್ತಿ ಕಂಡುಬರುತ್ತಿದ್ದು, ಅಲ್ಲಿ ಸೂಕ್ತ ನಿಯಂತ್ರಣ ವ್ಯವಸ್ಥೆಯ ಕೊರತೆಯಿದೆ ಎಂದು ಹೇಳಿದರು.

ಶರಣಬಸವೇಶ್ವರ ಸಂಸ್ಥಾನದ 8ನೇ ಮಹಾದಾಸೋಹ ಪೀಠಾಧಿಪತಿಗಳು ಹಾಗೂ ಶರಣಬಸವ ವಿಶ್ವವಿದ್ಯಾಲಯದ ಸಂಸ್ಥಾಪಕ ಕುಲಾಧಿಪತಿಗಳಾದ ಲಿಂ.ಪೂಜ್ಯ ಡಾ. ಶರಣಬಸವಪ್ಪ ಅಪ್ಪಾಜಿ ಅವರ ಪತ್ರಿಕೋದ್ಯಮ ಕ್ಷೇತ್ರದ ಕೊಡುಗೆಯನ್ನು ಸ್ಮರಿಸಿದ ಡಾ.ಶಿವರಂಜನ್ ಸತ್ಯಂಪೇಟೆ, ವಿದ್ಯಾವರ್ಧಕ ಸಂಘದಲ್ಲಿ ಮುದ್ರಣಾಲಯ ಸ್ಥಾಪಿಸಿ, ಸಂಘದ ಚಟುವಟಿಕೆಗಳು ಹಾಗೂ ಸಂಸ್ಥಾನದ ಧಾರ್ಮಿಕ ಕಾರ್ಯಕ್ರಮಗಳನ್ನು ಜನರಿಗೆ ತಲುಪಿಸುವ ಉದ್ದೇಶದಿಂದ "ದಾಸೋಹ ಜ್ಞಾನರತ್ನ" ಎಂಬ ಪಾಕ್ಷಿಕ ಪತ್ರಿಕೆಯನ್ನೂ ಆರಂಭಿಸಿದ್ದನ್ನು ನೆನಪಿಸಿದರು.

ಇದಲ್ಲದೇ, ಗೋದುತಾಯಿ ಪದವಿ ಮಹಾವಿದ್ಯಾಲಯದಲ್ಲಿ ಪತ್ರಿಕೋದ್ಯಮದ ಸ್ನಾತಕೋತ್ತರ ಕೇಂದ್ರವನ್ನು ಆರಂಭಿಸಿದ ಪೂಜ್ಯ ಡಾ. ಅಪ್ಪಾಜಿ, ನಂತರ ಶರಣಬಸವ ವಿಶ್ವವಿದ್ಯಾಲಯದಲ್ಲಿ ಪ್ರತ್ಯೇಕ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗವನ್ನು ಸ್ಥಾಪಿಸುವ ಮೂಲಕ ಈ ಭಾಗದ ವಿದ್ಯಾರ್ಥಿಗಳಿಗೆ ಹೊಸ ಶೈಕ್ಷಣಿಕ ಅವಕಾಶಗಳನ್ನು ಕಲ್ಪಿಸಿದರು. ಆರ್ಥಿಕವಾಗಿ ಹಿಂದುಳಿದ ವಿದ್ಯಾರ್ಥಿಗಳೂ ಪತ್ರಿಕೋದ್ಯಮವನ್ನು ಅಧ್ಯಯನ ಮಾಡಲು ಸಾಧ್ಯವಾಗುವಂತೆ ಕೋರ್ಸ್ ಶುಲ್ಕವನ್ನು ಅತ್ಯಂತ ಕಡಿಮೆ ಮಟ್ಟದಲ್ಲಿರಿಸುವ ದೂರದೃಷ್ಟಿಯನ್ನೂ ಅಪ್ಪಾಜಿಯವರು ಹೊಂದಿದ್ದರು. ಡಾ. ಅಪ್ಪಾಜಿಯವರು ಹಾಕಿಕೊಟ್ಟ ಈ ಪರಂಪರೆಯನ್ನು ಇಂದಿಗೂ ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಅಧ್ಯಕ್ಷರು ಹಾಗೂ ಶರಣಬಸವ ವಿಶ್ವವಿದ್ಯಾಲಯದ ಕುಲಾಧಿಪತಿಗಳಾದ ಮಾತೋಶ್ರೀ ಡಾ. ದಾಕ್ಷಾಯಿಣಿ ಅವ್ವಾಜಿ ಯಶಸ್ವಿಯಾಗಿ ಮುಂದುವರಿಸಿಕೊಂಡು ಬರುತ್ತಿದ್ದಾರೆ ಎಂದು ತಿಳಿಸಿದರು.



ಹಾವೇರಿಯ ತಾಲೂಕು ಪಂಚಾಯತಿಯ ಆವರಣದಲ್ಲಿರುವ ಲೋಕಸಭಾ ಸದಸ್ಯರ ಜನಸಂಪರ್ಕ ಕಾರ್ಯಾಲಯದಲ್ಲಿ ರೈತ ಸಂಘದ ಮುಖಂಡರು ಹಾಗೂ ಸಾರ್ವಜನಿಕರ ಅಹವಾಲನ್ನು ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಸದಸ್ಯ ಬಸವರಾಜ ಬೊಮ್ಮಾಯಿ ಸ್ವೀಕರಿಸಿದರು.

### 'ಸಂಗೀತ ಸ್ವರ ಸಂಗಮ' ಕಾರ್ಯಕ್ರಮಕ್ಕೆ ಚಾಲನೆ

# ಸಂಗೀತ-ಸಾಹಿತ್ಯ ಮಾನಸಿಕ ನೆಮ್ಮದಿಗೆ ಪೂರಕ : ನೀಲಕಂಠರಾವ್ ಮೂಲಗೆ



**ಕಲಬುರಗಿ, ಜೂ. 3:** ಸಂಗೀತ ಮತ್ತು ಸಂಸ್ಕೃತಿ ಸಮಾಜವನ್ನು ಒಗ್ಗೂಡಿಸುವ ಶಕ್ತಿಯಾಗಿದ್ದು, ಇಂತಹ ಕಾರ್ಯಕ್ರಮಗಳು ಯುವಜನರಲ್ಲಿ ಕಲೆಯ ಬಗ್ಗೆ ಆಸಕ್ತಿ ಬೆಳೆಸುವ ಜೊತೆಗೆ ಕನ್ನಡ ಸಂಸ್ಕೃತಿಯ ಉಳಿವು ಮತ್ತು ಬೆಳವಣಿಗೆಗೆ ಸಹಕಾರಿಯಾಗುತ್ತವೆ ಎಂದು ಕಲಬುರಗಿ ದಕ್ಷಿಣ ಕ್ಷೇತ್ರದ ಕಾಂಗ್ರೆಸ್ ಮುಖಂಡ ನೀಲಕಂಠರಾವ್ ಮುಲಗೆ ಹೇಳಿದರು.

ನಗರದ ಕಲಾ ಮಂಡಳದಲ್ಲಿ ಹಂಸವೇಣಿ ಸಂಗೀತ ಸೇವಾ ಸಂಸ್ಥೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಆಯೋಜಿಸಿದ್ದ 'ಸಂಗೀತ ಸ್ವರ ಸಂಗಮ' ಸಾಂಸ್ಕೃತಿಕ ಕಾರ್ಯಕ್ರಮವು ಸಂಭ್ರಮ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾನಾಡಿದರು.

ಸಾಹಿತಿ ಡಾ. ಕೆ. ಗಿರಿಮಲ್ಲ ಮಾತನಾಡಿ, ಹರಿಯುವ ನೀರು, ಪಕ್ಷಿಗಳು ಹಾಗೂ ನಿಸರ್ಗದ ಪ್ರತಿಯೊಂದು ಅಂಶದಲ್ಲೂ ಸಂಗೀತದ ನಾದ ಅಡಗಿದೆ. ಭಾರತೀಯ ಸಂಸ್ಕೃತಿಯಲ್ಲಿ ಸಂಗೀತಕ್ಕೆ ವಿಶೇಷ ಸ್ಥಾನಮಾನವಿದ್ದು, ಕರ್ನಾಟಕದಲ್ಲಿ ಸಂಗೀತಕ್ಕೆ ಹೆಚ್ಚಿನ ಮಹತ್ವ ನೀಡಲಾಗಿದೆ. ರಾಜ ಮನೆತನಗಳ ಆಸ್ಥಾನಗಳಲ್ಲಿ ಕಲಾವಿದರಿಗೆ ಅಪಾರ ಗೌರವ ದೊರೆಯುತ್ತಿತ್ತು ಎಂದು ತಿಳಿಸಿದರು.

ಸಾಹಿತಿ ಡಾ. ವಿಶಾಲಾಕ್ಷಿ ವಿ. ಕರೆಡ್ಡಿ ಮಾತನಾಡಿ, ಸಂಗೀತ ಮತ್ತು ಸಾಹಿತ್ಯವು ಒಂದೇ ನಾಣ್ಯದ ಎರಡು ಮುಖಗಳಂತಿದ್ದು, ಅವು ಮಾನವನ ಮನಸ್ಸಿಗೆ ನೆಮ್ಮದಿ ಮತ್ತು ಸಾಂಸ್ಕೃತಿಕ ಅರಿವು ನೀಡುತ್ತವೆ ಎಂದು ಹೇಳಿದರು.

### ಬಿ.ಕಾಂ. ರಿಟೇಲ್ ಆಪರೇಷನ್ ವಿದ್ಯಾರ್ಥಿಗಳಿಗೆ ಅಪ್ರೆಂಟಿಸ್‌ಶಿಪ್ ಸಂದರ್ಶನ ತರಬೇತಿ

# ಡಾ.ಅಬ್ದುಲ್ ರೆಹಮಾನ್ ಉದ್ಘಾಟನೆ

**ಕಲಬುರಗಿ, ಜು. 3:** ರಿಟೇಲ್ ಆಪರೇಷನ್ ಅತ್ಯುತ್ತಮ ಉದ್ಯೋಗಾಧಾರಿತ ಕೋರ್ಸ್ ಆಗಿದ್ದು, ಜಾಗತಿಕ ಮಟ್ಟದಲ್ಲಿ ಈ ಕ್ಷೇತ್ರಕ್ಕೆ ಹೆಚ್ಚಿನ ಬೇಡಿಕೆಯಿದೆ. ವಿದ್ಯಾರ್ಥಿಗಳು ಇಂತಹ ಅವಕಾಶಗಳನ್ನು ಸದು ಪಯೋಗಪಡಿಸಿಕೊಂಡು ತಮ್ಮ ವೃತ್ತಿಜೀವನವನ್ನು ಉಜ್ವಲಗೊಳಿಸಿ ಕೊಳ್ಳಬೇಕು ಎಂದು ಕಾಲೇಜು ಶಿಕ್ಷಣ ಇಲಾಖೆ ಜಂಟಿ ನಿರ್ದೇಸಕ ಡಾ.ಅಬ್ದುಲ್ ರೆಹಮಾಮಾನ್ ಅವರು ಸಲಹೆ ನೀಡಿದರು.

ನಗರದ ಸರ್ಕಾರಿ ಮಹಾ ವಿದ್ಯಾಲಯದಲ್ಲಿ ಬಿ.ಕಾಂ. ರಿಟೇಲ್ ಆಪರೇಷನ್ ಅಂತಿಮ ವರ್ಷದ ವಿದ್ಯಾರ್ಥಿಗಳಿಗಾಗಿ ಆಯೋಜಿಸಲಾಗಿದ್ದ ಅಪ್ರೆಂಟಿಸ್‌ಶಿಪ್ ಸಂದರ್ಶನ ಕಾರ್ಯಕ್ರಮವನ್ನು ಕಾಲೇಜು ಶಿಕ್ಷಣ ಇಲಾಖೆಯ ಜಂಟಿ ನಿರ್ದೇಶಕ ಡಾ. ಅಬ್ದುಲ್ ರೆಹಮಾನ್ ಎಂ. ಅವರು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿದರು. ಮುಖ್ಯ ಅತಿಥಿಗಳಾಗಿ ರಿಲಯನ್ಸ್ ಇಂಡಸ್ಟ್ರೀಸ್‌ನ ಮಾನವ ಸಂಪನ್ಮೂಲ ಅಧಿಕಾರಿ ಶ್ರೀಮತಿ




ಫಾಲೇಶ್ವರಿ ಪಿ. ಬೆಳ್ಳಾರಿ, ಟಾಟಾ ಕ್ರೋಮಾದ ಮಾನವ ಸಂಪನ್ಮೂಲ ಅಧಿಕಾರಿ ಶ್ರೀ ಶರಣಪ್ಪ ಕಂದಗೂಳ ಹಾಗೂ ರಿಲಯನ್ಸ್ ಇಂಡಸ್ಟ್ರೀಸ್‌ನ ಸ್ಟೋರ್ ಮ್ಯಾನೇಜರ್ ಶ್ರೀ ಶಿವಕುಮಾರ್ ಉಪಸ್ಥಿತರಿದ್ದು ವಿದ್ಯಾರ್ಥಿಗಳಿಗೆ ಉದ್ಯೋಗಾವಕಾಶಗಳು ಹಾಗೂ ಉದ್ಯಮದ ಅಗತ್ಯತೆಗಳ ಕುರಿತು ಮಾಹಿತಿ ನೀಡಿದರು.

### ಸಿಬ್ಬಂದಿಗೆ ಪೊಲೀಸ್ ಆಯುಕ್ತ ಸೀಮಂತ್‌ಕುಮಾರ್ ಸಿಂಗ್ ಎಚ್ಚರಿಕೆ

# ಇಲಾಖೆಯಲ್ಲಿ ಅಶಿಸ್ತು, ಬೇಜವಾಬ್ದಾರಿತನ ತೋರಿದರೆ ಸೇವೆಯಿಂದ ವಜಾ

**'ನಮ್ಮ 112' ಕಾರ್ಯವೈಖರಿಗೆ ಶ್ಲಾಘನೆ**



**ಬೆಂಗಳೂರು, ಜು.3:** ಪೊಲೀಸ್ ಇಲಾಖೆಯಲ್ಲಿ ಯಾವುದೇ ಹಂತದ ಅಧಿಕಾರಿ ಅಥವಾ ಸಿಬ್ಬಂದಿ ಅಶಿಸ್ತು ಮತ್ತು ಬೇಜವಾಬ್ದಾರಿತನ ತೋರಿದರೆ ಮುಲಾಜಿಲ್ಲದೆ ಸೇವೆಯಿಂದ ವಜಾಗೊಳಿಸಲಾಗುವುದು ಎಂದು ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಖಡಕ್ ಎಚ್ಚರಿಕೆ ನೀಡಿದ್ದಾರೆ. ಆಡುಗೋಡಿಯ ಸಿಎಆರ್ ದಕ್ಷಿಣ ಮೈದಾನದಲ್ಲಿ ನಡೆದ ಮಾಸಿಕ ಪರೇಡ್ ಪರಿಶೀಲನೆ ನಡೆಸಿ ಮಾತನಾಡಿದ ಅವರು, ಕರ್ತವ್ಯಲೋಪ ಎಸಗುವವರನ್ನು ತಕ್ಷಣವೇ ಅಮಾನತು ಮಾಡಲಾಗುವುದು. ಈಗಾಗಲೇ ನಿಯಮ ಉಲ್ಲಂಘಿಸಿರುವ ಹಲವರ ವಿರುದ್ಧ ಕಠಿಣ ಶಿಸ್ತುಕ್ರಮ ಕೈಗೊಳ್ಳಲಾಗಿದೆ ಎಂದು ಸ್ಪಷ್ಟಪಡಿಸಿದರು.

ನಗರದ ತುರ್ತು ಸಹಾಯವಾಣಿ 'ನಮ್ಮ 112'ರ ಕಾರ್ಯವೈಖರಿಯನ್ನು ಆಯುಕ್ತರು ಮುಕ್ತಕಂಠದಿಂದ ಶ್ಲಾಘಿಸಿದರು. "ಹಿಂದೆ ಸಾರ್ವಜನಿಕರು ಕರೆ ಮಾಡಿದಾಗ ಪೊಲೀಸರು ಘಟನಾ ಸ್ಥಳಕ್ಕೆ ತಲುಪಲು ಸರಾಸರಿ 13 ನಿಮಿಷ ತಗಲುತ್ತಿತ್ತು. ಆದರೆ ಈಗ ಕೇವಲ 6 ನಿಮಿಷ 30 ಸೆಕೆಂಡ್‌ಗಳಲ್ಲಿ ಪೊಲೀಸರು ಸ್ಥಳಕ್ಕೆ ಧಾವಿಸುತ್ತಿದ್ದಾರೆ. ಬೆಂಗಳೂರಿನಂತಹ ಬೃಹತ್ ಮಹಾನಗರದಲ್ಲಿ ಸಂಕಷ್ಟದಲ್ಲಿರುವವರಿಗೆ ಸಕಾಲದಲ್ಲಿ ಸ್ಪಂದಿಸುತ್ತಿರುವುದು ಇಲಾಖೆಗೆ ಹೆಮ್ಮೆಯ ವಿಚಾರ ಎಂದು ಸೀಮಂತ್‌ಕುಮಾರ್ ಸಿಂಗ್ ಹೇಳಿದರು.

ಮಾದಕ ವಸ್ತು ವಿರೋಧಿ ದಿನದ ಅಂಗವಾಗಿ ಕಂಠೀರವ ಕ್ರೀಡಾಂಗಣದಲ್ಲಿ ಮುಖ್ಯಮಂತ್ರಿಗಳು ಹಾಗೂ ಗೃಹ ಸಚಿವರು ಚಾಲನೆ ನೀಡಿರುವ 'ರೈಸ್' ಮತ್ತು 'ಬೇಡ ಬ್ರೋ' ಜಾಗೃತಿ ಆಂದೋಲನಗಳಲ್ಲಿ ಇಲಾಖೆಯ ಪ್ರತಿಯೊಬ್ಬ ಸಿಬ್ಬಂದಿಯೂ ಸಕ್ರಿಯವಾಗಿ ತೊಡಗಿಸಿಕೊಳ್ಳಬೇಕು ಎಂದು ಕಮಿಷನರ್ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.ಎಲ್ಲರಿಗೂ ಅನ್ವಯ: ಸಂಚಾರಿ ವಿಭಾಗ, ಸಿಎಆರ್ ಸೇರಿದಂತೆ ಇಲಾಖೆಯ ಯಾವುದೇ ವಿಭಾಗವೂ ಇದರಿಂದ ಹೊರತಾಗಿಲ್ಲ. ಕಾನ್‌ಸ್ಟೇಬಲ್‌ನಿಂದ ಹಿಡಿದು ಕಮಿಷನರ್‌ವರೆಗೆ ಎಲ್ಲರೂ ಡ್ರಗ್ಸ್ ವಿರುದ್ಧ ಹೋರಾಡಬೇಕಿದೆ. ಕಳೆದ ಒಂದು ವರ್ಷದಲ್ಲಿ ಇಲಾಖೆಯು ಸುಮಾರು 350 ಕೋಟಿ ರೂಪಾಯಿ ಮೌಲ್ಯದ ಮಾದಕ ವಸ್ತುಗಳನ್ನು ಜಪ್ತಿ ಮಾಡಿದ್ದು, ಈ ಕಾರ್ಯಾಚರಣೆ ಹೀಗೆಯೇ ಮುಂದುವರಿಯಲಿದೆ ಎಂದು ತಿಳಿಸಿದರು.

ರಾಜ್ಯದಲ್ಲಿ ಸರ್ಕಾರ ಬದಲಾವಣೆಯಾಗುವ ಸೂಕ್ಷ್ಮ ಸಂದರ್ಭದಲ್ಲಿ ಇಲಾಖೆಯ ಸಿಬ್ಬಂದಿ ಅತ್ಯಂತ ಜವಾಬ್ದಾರಿಯಿಂದ ಕೆಲಸ ಮಾಡಿದ್ದಾರೆ. ಯಾವುದೇ ಅಹಿತಕರ ಘಟನೆಗಳಿಗೆ ಆಸ್ಪದ ನೀಡದೆ ಕಾನೂನು ಸುವ್ಯವಸ್ಥೆ ಕಾಪಾಡಿರುವುದು ಶ್ಲಾಘನೀಯ ಎಂದ ಆಯುಕ್ತರು, ಮುಂಬರುವ ಹಬ್ಬ ಹರಿದಿನಗಳ ಸಂದರ್ಭದಲ್ಲೂ ಇದೇ ರೀತಿಯ ಬಿಗಿ ಬಂದೋಬಸ್ತ್ ಕಾಯ್ದುಕೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

# ಅಂತರರಾಜ್ಯ ಗಡಿ ಪೊಲೀಸ್ ಅಧಿಕಾರಿಗಳ ಸಭೆ




**ಬೀದರ, ಜು. 3:** ಜಿಲ್ಲೆಯ ಔರಾದ ಪಟ್ಟಣದ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಬುಧವಾರ ಕರ್ನಾಟಕ – ತೆಲಂಗಾಣ ಹಾಗೂ ಮಹಾರಾಷ್ಟ್ರ ರಾಜ್ಯಗಳ ಅಂತರರಾಜ್ಯ ಗಡಿ ಪೊಲೀಸ್ ಅಧಿಕಾರಿಗಳ ಸಭೆ ನಡೆಯಿತು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಭಾಲ್ಕಿ ಉಪವಿಭಾಗದ ಡಿವೈಎಸ್‌ಪಿ ಬಲ್ಲಪ್ಪ ನಂದಗಾವಿ ಮಾತನಾಡಿ, ಮೂರು ರಾಜ್ಯಗಳ ಗಡಿಭಾಗದಲ್ಲಿ ನಡೆಯುವ ಅಪರಾಧ ಪ್ರಕರಣಗಳ ಪತ್ತೆ ಹಾಗೂ ಆರೋಪಿಗಳ ಬಂಧನಕ್ಕೆ ಪರಸ್ಪರ ಸಮನ್ವಯ ಮತ್ತು ಮಾಹಿತಿ ವಿನಿಮಯ ಅತ್ಯಗತ್ಯವಾಗಿದ. ಅಕ್ರಮ ಮದ್ಯ ಸಾಗಾಟ, ಗಾಂಜಾ ಹಾಗೂ ಇತರ ಮಾದಕ ವಸ್ತುಗಳ ಕಳ್ಳಸಾಗಣೆ, ವಾಹನ ಕಳವು, ಜೂಜಾಟ ಸೇರಿದಂತೆ ವಿವಿಧ ಕಾನೂನುಬಾಹಿರ ಚಟುವಟಿಕೆಗಳನ್ನು ತಡೆಗಟ್ಟಲು ಗಡಿಭಾಗದ ಪೊಲೀಸ್ ಠಾಣೆಗಳ ಅಧಿಕಾರಿಗಳು ನಿರಂತರ ಸಂಪರ್ಕದಲ್ಲಿದ್ದು, ಜಂಟಿ ಕಾರ್ಯಾಚರಣೆ ನಡೆಸಬೇಕು ಎಂದು ಸೂಚಿಸಿದರು.

ಗಡಿಭಾಗದ ಸೂಕ್ಷ್ಮ ಹಾಗೂ ಅಪರಾಧ ಸಂಭವಿಸುವ ಪ್ರದೇಶಗಳಲ್ಲಿ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಿದರೆ ಅಪರಾಧ ನಿಯಂತ್ರಣಕ್ಕೆ ಸಹಕಾರಿಯಾಗುತ್ತದೆ. ಅನುಮಾನಾಸ್ಪದ ವ್ಯಕ್ತಿಗಳು ಹಾಗೂ ವಾಹನಗಳ ಬಗ್ಗೆ ತಕ್ಷಣವೇ ಮಾಹಿತಿ ಹಂಚಿಕೊಳ್ಳುವ ಮೂಲಕ ಅಪರಾಧಗಳನ್ನು ಪರಿಣಾಮಕಾರಿಯಾಗಿ ತಡೆಯಬಹುದು' ಎಂದು ಸಭೆಯಲ್ಲಿ ಅಧಿಕಾರಿಗಳು ತಮ್ಮ ಅಭಿಪ್ರಾಯ ಮುಂದಿಟ್ಟರು. ಹುಮನಾಬಾದ್ ಡಿವೈಎಸ್‌ಪಿ ಮಡೊಳಪ್ಪ, ಉದಗೀರ್ ಡಿವೈಎಸ್‌ಪಿ ಗಜಾನಂದ, ನಿಲಂಗಾ ಡಿವೈಎಸ್‌ಪಿ ವಿಶಾಲ್ ಎಸ್. ಧುನೆ, ದೇಗಲೂರು ಡಿವೈಎಸ್‌ಪಿ ಕಿರಣ್ ಪೊಪಲ್‌ಘಾಟ್, ನಾರಾಯಣಖೇಡ್ ಎಸ್‌ಡಿಪಿಒ ಜೆ.ವೆಂಕಟರೆಡ್ಡಿ ಸಭೆಯಲ್ಲಿ ಪಾಲ್ಗೊಂಡು ಗಡಿ ಭಾಗದ ಅಪರಾಧ ತಡೆಯುವ ಕುರಿತು ಸಲಹೆ ನೀಡಿದರು.

ಸಿಪಿಐ ರಘುವೀರಸಿಂಗ್ ಠಾಕೂರ್, ಶ್ರೀಕಾಂತ ಅಲ್ಲಾಪುರೆ ಹಾಗೂ ಗಡಿ ಭಾಗದ ಠಾಣೆಗಳ ಸಿಪಿಐ ಮತ್ತು ಪಿಎಸ್‌ಐ ಸಭೆಯಲ್ಲಿ ಪಾಲ್ಗೊಂಡಿದ್ದರು. ಔರಾದ್ ಸಿಪಿಐ ರಘುವೀರಸಿಂಗ್ ಠಾಕೂರ್ ಅವರು ಸಭೆಯಲ್ಲಿ ಪಾಲ್ಗೊಂಡ ನೆರೆ ರಾಜ್ಯಗಳ ಪೊಲೀಸ್ ಅಧಿಕಾರಿಗಳಿಗೆ ಬೀದರ್ ಜಿಲ್ಲೆಯ ಬಿದ್ರಿ ಕಲೆ ನೆನಪಿನ ಕಾಣಿಕೆ ನೀಡಿದರು.

# 88ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ ನಡೆಸಲು ಮೇಯರ್ ಗಾದೆಪ್ಪ ಮನವಿ



**ಬಳ್ಳಾರಿ ಜು 03.** ಬಳ್ಳಾರಿ ನಗರದಲ್ಲಿ ನಡೆಯಬೇಕಿದ್ದ 88ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ ಹಲವು ಕಾರಣಗಳಿಂದ ನಡೆದಿಲ್ಲ. ಈಗ ದಿನಾಂಕ ನಿರ್ಧಾರಮಾಡಿ, ಸ್ವಾಗತ ಸಮಿತಿ ರಚಿಸಿ, ಸಮ್ಮೇಳನವನ್ನು ಈ ವರ್ಷವೇ ಆಯೋಜಿಸಲು ಕನ್ನಡ ಸಾಹಿತ್ಯ ಪರಿಷತ್ತಿನ ಆಡಳಿತಾಧಿಕಾರಿಕೆ.ಎ ದಯಾನಂದ ಅವರಿಗೆ ಮೇಯರ್ ಗಾದೆಪ್ಪ ಮನವಿ ಪತ್ರವನ್ನು ಸಲ್ಲಿಸಿದ್ದಾರೆ.

ಅಖಿಲ ಭಾರತ 88 ನೇ ಕನ್ನಡ ಸಾಹಿತ್ಯ ಸಮ್ಮೇಳನವು ಗಡಿ ಜಿಲ್ಲೆ ಬಳ್ಳಾರಿಯಲ್ಲಿ ಆಯೋಜಿಸಲು ಮಂಡ್ಯದಲ್ಲಿ ಜರುಗಿದ 87ನೇ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ನಿರ್ಧರಿಸಲಾಗಿತ್ತು. ಬಳ್ಳಾರಿಯಲ್ಲಿ 1958ರಲ್ಲಿ ಡಾ ವಿ.ಕೃ. ಗೋಕಾಕ ಅವರ ಅಧ್ಯಕ್ಷತೆಯಲ್ಲಿ ಸಮ್ಮೇಳನವು ನಡೆದಿತ್ತು ನಂತರ ನಡೆದಿಲ್ಲ. 58 ವರ್ಷಗಳ ನಂತರ ಈಗ ಕನ್ನಡ ಹಬ್ಬಕ್ಕೆ ಸಮಯ ಬಂದಿದೆ. ಇದಕ್ಕಾಗಿ ಜಿಲ್ಲೆಯ ಸಂಸದರು, ಶಾಸಕರು ಸಮ್ಮೇಳನ ಆಯೋಜಿಸಲು ಸಿದ್ಧರಿದ್ದಾರೆ. ಹಾಗೆಯೇ ಮಹಾನಗರ ಪಾಲಿಕೆಯಿಂದ ನಾವು ಕೂಡ ಸಮ್ಮೇಳನ ಯಶಸ್ವಿಗೊಳಿಸಲು ಕೆಲಸ ಮಾಡು ಸನ್ನದ್ದರಾಗಿದ್ದೇವೆ. ಜಿಲ್ಲೆಯ ಎಲ್ಲಾ ಧಾರ್ಮಿಕ ಸಂಸ್ಥೆಗಳ ಪೂಜ್ಯರು, ಸಾಹಿತಿಗಳು ಹಾಗೂ ಕನ್ನಡಪರ ಮತ್ತು ವಿವಿಧ ಸಾಹಿತ್ಯಕ ಮತ್ತು ಸಾಂಸ್ಕೃತಿಕ ಮತ್ತು ವಾಣಿಜ್ಯ ಸಂಘಟನೆಗಳು ಜಿಲ್ಲೆಯ ಸಮಸ್ತ ಕನ್ನಡಾಭಿಮಾನಿಗಳು ಕೂಡ ಬಹುಬೇಗ ಸಾಹಿತ್ಯ ಸಮ್ಮೇಳನವನ್ನು ಆಯೋಜಿಸಬೇಕೆಂದು ಒತ್ತಾಯಿಸುತ್ತಿದ್ದಾರೆ. ಅದ್ದರಿಂದ ಸಮ್ಮೇಳನವನ್ನು ಆಯೋಜಿಸಲು ಶೀಘ್ರವೇ ಕ್ರಮ ಕೈಗೊಳ್ಳಬೇಕೆಂದು ಮನವಿ ಮಾಡಿದ್ದಾರೆ.

# ಶಿಕ್ಷಣ, ಸಂಶೋಧನೆ, ಆಡಳಿತ, ಸಂಗೀತ ಮತ್ತು ಸಮಗ್ರ ಜಾನಪದ ಕ್ಷೇತ್ರಗಳ ಸಮನ್ವಯಕಾರ ಡಾ. ಎಸ್.ಸಿ. ಶರ್ಮ

ಡಾ.ಎಸ್.ಸಿ.ಶರ್ಮ ಸಾಂಸ್ಕೃತಿಕ ರಾಯಭಾರಿಗಳಲ್ಲಿ ಮುಂಚೂಣಿಯಲ್ಲಿ ನಿಲ್ಲುವ ವಿಶಿಷ್ಟ ಕರ್ನಾಟಕದ ಜಾನಪದ ಪರಂಪರೆಯನ್ನು ಸಂರಕ್ಷಿಸಿದ ಸಾಂಸ್ಕೃತಿಕ ದಾರ್ಶನಿಕ. ಜಾನಪದ, ಸಂಗೀತ, ಶಿಕ್ಷಣತಜ್ಞ ಮತ್ತು ಸಂಸ್ಥೆಗಳ ನಿರ್ಮಾತೃ, ಜಾನಪದ ಪರಂಪರೆಯನ್ನು ಜೀವಂತ ಚಳುವಳಿಯಾಗಿ ಪರಿವರ್ತಿಸಿದ ಚೇತನ.

ಅವರ ಕೃತಿಗಳು ಇತಿಹಾಸದ ಮೂಲಕ ಮಾತ್ರವಲ್ಲದೇ ಜನರ ಹಾಡುಗಳು, ಬಳಸುವ ಪರಿಕರಗಳು, ಅಭ್ಯಾಸ ಮಾಡುವ ಕರಕುಶಲ ವಸ್ತುಗಳು, ಕಥೆಗಳು. ಮುಂದಿನ ಪೀಳಿಗೆಗೆ ರವಾನಿಸುವ ಮೌಲ್ಯಗಳ ಮೂಲಕವೂ ಉಳಿಯುತ್ತದೆ. ನಾವೀನ್ಯತೆಯನ್ನು ಅಳವಡಿಸಿಕೊಳ್ಳುವಾಗ, ಈ ಜೀವಂತ ಸಂಪ್ರದಾಯಗಳನ್ನು ಸಂರಕ್ಷಿಸುವ ಮೂಲಕ, ಇದರ ಹಿಂದಿನ ಬುದ್ಧಿಮತ್ತೆ, ಭವಿಷ್ಯದ ಆಕಾಂಕ್ಷೆಗಳ ನಡುವೆ ಸೇತುವೆಯನ್ನು ಅವರು ನಿರ್ಮಿಸಿದ್ದಾರೆ. ಕರ್ನಾಟಕ ಜಾನಪದ ವಿಶ್ವವಿದ್ಯಾಲಯ ಪ್ರಕಟಿಸಿದ ನೆಲದ ಕಂಪು ಡಾ. ಎಸ್. ಸಿ. ಶರ್ಮ ಅವರ ಇತ್ತೀಚಿನ ಗಮನಾರ್ಹ ಕೃತಿ. ಕರ್ನಾಟಕದ ವೈವಿಧ್ಯಮಯ ಜಾನಪದ ಕಲಾ ಪ್ರಕಾರಗಳು, ಸಂಪ್ರದಾಯಗಳು ಮತ್ತು ಸಾಂಸ್ಕೃತಿಕ ಪರಂಪರೆಯ ಸಮಗ್ರ ಅವಲೋಕನವನ್ನು ಈ ಪುಸ್ತಕ ಪ್ರಸ್ತುತಪಡಿಸುತ್ತದೆ. ರಾಜ್ಯದ ಜಾನಪದ ಪರಂಪರೆಯ ಶ್ರೀಮಂತಿಕೆಯನ್ನು ಇದು ಪ್ರತಿಬಿಂಬಿಸುತ್ತದೆ.

ಡಾ.ಎಸ್. ಸಿ.ಶರ್ಮ ಶಿಕ್ಷಣ ತಜ್ಞ, ಸಂಶೋಧಕ, ಆಡಳಿತಗಾರ ಎಂಬ ಹೆಗ್ಗಳಿಕೆಯ ಜೊತೆಗೆ ಸಂಗೀತ ಹಾಗೂ ಭಾರತೀಯ ಸಾಂಸ್ಕೃತಿಕ ಪರಂಪರೆಯ ಪ್ರಬಲ ಆರಾಧಕರಾಗಿದ್ದಾರೆ. ತುಮಕೂರು ವಿ.ವಿ ಕುಲಪತಿಯಾಗಿ (2009-2013) ಅವರು ವಿಶ್ವವಿದ್ಯಾಲಯದ ಶೈಕ್ಷಣಿಕ



ಬೆಳವಣಿಗೆಯ ಜೊತೆಗೆ ಸಾಂಸ್ಕೃತಿಕ ಚಟುವಟಿಕೆಗಳಿಗೂ ಹೊಸ ಆಯಾಮ ನೀಡಿದ್ದನ್ನು ಅಲ್ಲಿನ ವಿದ್ಯಾರ್ಥಿಗಳು ಈಗಲೂ ಸ್ಮರಿಸುತ್ತಾರೆ.

ಸಂಗೀತದ ಬಗ್ಗೆ ಡಾ. ಶರ್ಮ ಅವರು ವ್ಯಾಪಕ ಸಂಶೋಧನೆ ಮಾಡಿದ್ದು, ಸಂಗೀತಶಾಸ್ತ್ರದ ವಿವಿಧ ಆಯಾಮಗಳ ಕುರಿತು ಉಪನ್ಯಾಸ ಮತ್ತು ಪಾಂಡಿತ್ಯಪೂರ್ಣ ಬರಹಗಳ ಮೂಲಕ ತಮ್ಮ ಚಿಂತನೆಗಳನ್ನು ದಾಖಲಿಸಿದ್ದಾರೆ. ಡಾ. ಎಸ್. ಸಿ. ಶರ್ಮ ಅವರದ್ದು, ಶಿಕ್ಷಣ, ಸಂಶೋಧನೆ, ಆಡಳಿತ, ಸಂಗೀತ ಮತ್ತು ಸಮಗ್ರ ಜಾನಪದ ಕ್ಷೇತ್ರಗಳನ್ನು ಸಮನ್ವಯಗೊಳಿಸಿದ ಅಪರೂಪದ ವ್ಯಕ್ತಿತ್ವ. ಅವರ ಜೀವನ ಸಂದೇಶವೆಂದರೆ "ಉತ್ತಮ ಶಿಕ್ಷಣ ವಿಜ್ಞಾನವನ್ನು ಮಾತ್ರ ಕಲಿಸಬಾರದು; ಸಂಸ್ಕೃತಿ, ಕಲೆ ಮತ್ತು ಮಾನವೀಯ ಮೌಲ್ಯಗಳನ್ನು ಸಹ ಬೆಳೆಸಬೇಕು" ಎಂಬುದಾಗಿದೆ.

ಜಾನಪದ ಕ್ಷೇತ್ರದಲ್ಲಿನ ಸಾಧನೆಗೆ ಅವರಿಗೆ 2000 ರಲ್ಲಿ ಕರ್ನಾಟಕ ಜಾನಪದ ಯಕ್ಷಗಾನ ಅಕಾಡೆಮಿ ಪ್ರಶಸ್ತಿ ಸಂದಿದೆ. 2026 ರಲ್ಲಿ ಕೇಂದ್ರ ಸಂಗೀತ ನಾಟಕ ಅಕಾಡೆಮಿ ಪುರಸ್ಕಾರಕ್ಕೆ ಅವರನ್ನು ನಾಮನಿರ್ದೇಶನ ಮಾಡಿರುವುದು ನಾಡಿನ ಜಾನಪದ ತಜ್ಞನಿಗೆ ಸಂದ ಗೌರವವಾಗಿದೆ.

ಸಂಸ್ಕತಿ ದಾಖಲಿಸುವ ವಿದ್ವಾಂಸರಾದ ಇವರಿಂದ ಸಂಸ್ಕೃತಿಯು ಮುಂದುವರೆಯುತ್ತಿದೆ. ವಿಕಸನಗೊಳ್ಳುತ್ತಿದೆ. ಅವರ ಕೊಡುಗೆ ಜಾನಪದ ಅಧ್ಯಯನಗಳ ಗಡಿಗಳನ್ನು ಮೀರಿದೆ. ಜಾನಪದ ಪ್ರತ್ಯೇಕವಾದ ಶೈಕ್ಷಣಿಕ ಶಿಸ್ತಲ್ಲ, ಅದು ಜನರ ಇತಿಹಾಸ, ತತ್ವಶಾಸ್ತ್ರ, ಸೃಜನಶೀಲತೆ ಮತ್ತು ಗುರುತಿನ ಜೀವಂತ ಅಭಿವ್ಯಕ್ತಿ ಎಂದು ಅವರು ಇದನ್ನು ಸಾದರಪಡಿಸಿದ್ದಾರೆ. ಅವರ ಜೀವನ ಸಾಧನೆಯು ಕರ್ನಾಟಕದ ಜಾನಪದ ಪರಂಪರೆಯನ್ನು ಸಮಾಜದೊಂದಿಗೆ ವಿದ್ವತ್ಪೂರ್ಣ ಸಂಪರ್ಕವನ್ನು ಕಲ್ಪಿಸುವ ಒಂದು ರೋಮಾಂಚಕ ಚಳುವಳಿಯಾಗಿಯೂ ಪರಿವರ್ತನೆಗೊಂಡಿದೆ.

ಡಾ. ಶರ್ಮ ಅವರ ಸಂಶೋಧನೆ, ಗ್ರಂಥಾಲಯಗಳ ಮೇಲೆ ಮಾತ್ರ ಅವಲಂಬಿತವಾಗಿಲ್ಲ, ಸಮುದಾಯಗಳೊಂದಿಗೆ ನೇರ ಸಂಪರ್ಕದಿಂದ ಹೊರಹೊಮ್ಮಿದೆ. ಮೌಖಿಕ ಸಂಪ್ರದಾಯಗಳು, ಆಚರಣೆಗಳು, ಜಾನಪದ ಹಾಡುಗಳು, ಕೃಷಿ ಪದ್ಧತಿಗಳು, ಸ್ಥಳೀಯ ತಂತ್ರಜ್ಞಾನಗಳು, ಕರಕುಶಲತೆ ಮತ್ತು ಸಮುದಾಯ ಇತಿಹಾಸಗಳನ್ನು ದಾಖಲಿಸಿದ್ದಾರೆ. ನಗರೀಕರಣದಿಂದ ವೇಗವಾಗಿ ಕಣ್ಮರೆಯಾಗುತ್ತಿದ್ದ ಅಮೂಲ್ಯ ಜ್ಞಾನ ವ್ಯವಸ್ಥೆಗಳನ್ನು ಅವರ ಕಾರ್ಯಕ್ಷೇತ್ರ ಸಂರಕ್ಷಿಸಿದೆ. ಇತಿಹಾಸ, ಮಾನವಶಾಸ್ತ್ರ, ಸಮಾಜಶಾಸ್ತ್ರ ಮತ್ತು ಸಾಂಸ್ಕೃತಿಕ ಅಧ್ಯಯನಗಳ ದೃಷ್ಟಿಕೋನ, ಜಾನಪದವನ್ನು ಅಧ್ಯಯನ ಮಾಡಿದ್ದಾರೆ. ಕೇವಲ ಹಾಡುಗಳು ಮತ್ತು ಕಥೆಗಳ ಸಂಗ್ರಹಕ್ಕಿಂತ ಹೆಚ್ಚಾಗಿ ಜಾನಪದವನ್ನು ಸಂಪೂರ್ಣ ಜೀವನ ವಿಧಾನವಾಗಿ ತಿಳುವಳಿಕೆಯನ್ನು ವಿಸ್ತರಿಸಿದ್ದಾರೆ.

1990 ರಲ್ಲಿ 'ಕ್ರಿಯಾಕಲ್ಪ' ಜಾನಪದ ವಸ್ತುಸಂಗ್ರಹಾಲಯದ ಸ್ಥಾಪನೆಯು ಅವರ ಶ್ರೇಷ್ಠ ಸಾಧನೆಗಳಲ್ಲೊಂದು. ದಶಕಗಳ ಕಾಲ ಸುತ್ತಾಡಿ, ಸಂಶೋಧಿಸಿ ನಿರ್ಮಿಸಲಾದ ಈ ವಸ್ತು ಸಂಗ್ರಹಾಲಯದಲ್ಲಿ ಹಸ್ತಪ್ರತಿಗಳು, ಕೃಷಿ ಉಪಕರಣಗಳು, ಧಾರ್ಮಿಕ ವಸ್ತುಗಳು, ಗೃಹೋಪಯೋಗಿ ವಸ್ತುಗಳು, ಶಿಲ್ಪಗಳು, ನಾಣ್ಯಗಳು, ಸಂಗೀತ ವಾದ್ಯಗಳು, ಸ್ಥಳೀಯ ತಂತ್ರಜ್ಞಾನಗಳು ಮತ್ತು ಜನರ ದೈನಂದಿನ ಜೀವನವನ್ನು ಪ್ರತಿನಿಧಿಸುವ ಅಸಂಖ್ಯಾತ ಇತರ ಕಲಾಕೃತಿಗಳನ್ನು ಇವರು ಸಂರಕ್ಷಿಸಿದ್ದಾರೆ. ಇದು ಕೇವಲ ವಸ್ತು ಭಂಡಾರವಾಗಿ ಮಾತ್ರವಲ್ಲದೇ ಸಂಶೋಧನಾ ಕೇಂದ್ರ, ಶೈಕ್ಷಣಿಕ ಸಂಪನ್ಮೂಲ ಮತ್ತು ಜೀವನದ ಪಾಠವಾಗಿಯೂ ಗುರುತಿಸಿಕೊಳ್ಳುತ್ತದೆ.

ಡಾ.ಶರ್ಮ ನಿರಂತರವಾಗಿ ಶೈಕ್ಷಣಿಕ ಜ್ಞಾನವನ್ನು ಸಮಾಜಕ್ಕೆ ಪ್ರಯೋಜನಕಾರಿ ಕಾರ್ಯಕ್ರಮಗಳಾಗಿ ಪರಿವರ್ತಿಸಿದರು. ಕುಶಲಕರ್ಮಿಗಳು, ಮಹಿಳೆಯರು, ಗ್ರಾಮೀಣ ಯುವ ಸಮೂಹ ಮತ್ತು ಅಂಚಿನಲ್ಲಿರುವ ಸಮುದಾಯಗಳಿಗೆ ಸಾಂಪ್ರದಾಯಿಕ ಉದ್ಯೋಗ ಕಲ್ಪಿಸಲು ನೆರವಾಗಿದ್ದಾರೆ. ಸ್ವ-ಉದ್ಯೋಗ ಕೌಶಲ್ಯಗಳಾದ ಕರಕುಶಲ ವಸ್ತುಗಳು, ಬಿದಿರಿನ ಕೆಲಸ, ಟೈಲರಿಂಗ್, ಆಹಾರ ಸಂಸ್ಕರಣೆ, ಜೇನುಸಾಕಣೆ ಮತ್ತು ಇತರ ಗ್ರಾಮೀಣ ಕೈಗಾರಿಕೆಗಳಲ್ಲಿ ಸಾಂಪ್ರದಾಯಿಕ ವೃತ್ತಿ ತರಬೇತಿ ಕಾರ್ಯಕ್ರಮಗಳನ್ನು ಆರಂಭಿಸಿ ಗ್ರಾಮೀಣ ಜನರ ಜೀವನೋಪಾಯಕ್ಕೂ ನೆರವಾಗಿದ್ದಾರೆ.. ಈ ಸಾಧನೆಗೆ ಅವರಿಗೆ 2005 ಮತ್ತು 2007 ರಲ್ಲಿ ಡಾ. ಅಂಬೇಡ್ಕರ್ ಪ್ರಶಸ್ತಿ ಮತ್ತು ಬಾಬು ಜಗಜೀವನರಾಮ್ ಪ್ರಶಸ್ತಿ ಸಂದಿದೆ.

ಪರಿಸರ ಸುಸ್ಥಿರತೆಯು ವ್ಯಾಪಕವಾಗಿ ಚರ್ಚಿಸಲ್ಪಡುವ ಬಹಳ ಹಿಂದೆಯೇ, ಡಾ. ಶರ್ಮ ವರ್ಮಿ ಕಾಂಪೋಸ್ಟಿಂಗ್, ಸಾವಯವ ತ್ಯಾಜ್ಯ ಬಳಕೆ, ತ್ಯಾಜ್ಯನೀರಿನ ಸಂಸ್ಕರಣೆ ಮತ್ತು ಪರಿಸರ ಜವಾಬ್ದಾರಿಯುತ ಕೃಷಿ ಪದ್ಧತಿಗಳನ್ನು ಉತ್ತೇಜಿಸಿದರು. ವೈಜ್ಞಾನಿಕ ನಾವೀನ್ಯತೆಗಳು ಸ್ಥಳೀಯ ಪರಿಸರ ಜ್ಞಾನವನ್ನು ಹೇಗೆ ಬಲಪಡಿಸಬಹುದು ಮತ್ತು ಸುಸ್ಥಿರ ಗ್ರಾಮೀಣ ಅಭಿವೃದ್ಧಿಗೆ ಹೇಗೆ ಕೊಡುಗೆ ನೀಡಬಹುದು ಎಂಬುದನ್ನು ಅವರ ಕೆಲಸ ಸಾಕ್ಷಿಯಾಗಿದೆ.

ಕರ್ನಾಟಕ ಸಂಗೀತದ ರಚನಾತ್ಮಕ ಸೊಬಗನ್ನು ಜಾನಪದ ಗಾಯನ ಸಂಪ್ರದಾಯಗಳ ಅಭಿವ್ಯಕ್ತಿಶೀಲ ಚೈತನ್ಯದೊಂದಿಗೆ ಅವರು ಬೆರೆಸಿದ್ದಾರೆ. ಶಿಕ್ಷಣ ಕ್ಷೇತ್ರದಲ್ಲಿ ಉನ್ನತ ಸಾಧನೆ ಮಾಡಿದ ಕೆಲವೇ ವ್ಯಕ್ತಿಗಳಲ್ಲಿ ಡಾ. ಎಸ್. ಸಿ. ಶರ್ಮ ಪ್ರಮುಖರು. ಶಿಕ್ಷಣ ತಜ್ಞ ಎನ್ನುವುದು ಅವರ ವ್ಯಕ್ತಿತ್ವದ ಒಂದು ಭಾಗ ಮಾತ್ರ. ಭಾರತೀಯ ಶಾಸ್ತ್ರೀಯ ಸಂಗೀತ, ಸಂಗೀತಶಾಸ್ತ್ರ, ಜಾನಪದ ಸಂಸ್ಕೃತಿಯ ಬಗ್ಗೆ ಅವರಿಗಿರುವ ಆಳವಾದ ಆಸಕ್ತಿ ಅವರನ್ನು ವಿಭಿನ್ನ ವ್ಯಕ್ತಿಯನ್ನಾಗಿ ರೂಪಿಸಿದೆ.

## ವ್ಯಕ್ತಿತ್ವ ವಿಕಸನ, ಸಾಮಾಜಿಕ ಸಾಮರಸ್ಯದ ಸಾಧನ ಸಂಗೀತ

ಡಾ. ಶರ್ಮ ಶಾಸ್ತ್ರೀಯ ಸಂಗೀತಗಾರರಾಗಿದ್ದು, ಸಂಗೀತವನ್ನು ಕೇವಲ ಮನರಂಜನೆಯ ಮಾಧ್ಯಮದ ಜೊತೆಗೆ ವ್ಯಕ್ತಿತ್ವ ವಿಕಾಸ, ಶೈಕ್ಷಣಿಕ ಮೌಲ್ಯ ಮತ್ತು ಸಾಮಾಜಿಕ ಸಾಮರಸ್ಯದ ಸಾಧನವೆಂದು ಪರಿಗಣಿಸಿದ್ದಾರೆ. ಸಂಗೀತ ಮತ್ತು ಸಂಗೀತಶಾಸ್ತ್ರ ಕ್ಷೇತ್ರದಲ್ಲಿ ಅವರ ಸೇವೆಯನ್ನು ಗುರುತಿಸಿ ಅವರನ್ನು ಕರ್ನಾಟಕ ರಾಜ್ಯ ಡಾ. ಗಂಗೂಭಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶನ ಕಲೆಗಳ ವಿವಿಯಲ್ಲಿ ಸಂದರ್ಶಕ ಪ್ರಾಧ್ಯಾಪಕರಾಗಿ ನೇಮಿಸಲಾಗಿತ್ತು. ತುಮಕೂರು ವಿ.ವಿ ಕುಲಪತಿಯಾಗಿದ್ದಾಗ ವಿದ್ಯಾರ್ಥಿಗಳಲ್ಲಿ ಸಾಂಸ್ಕೃತಿಕ ಆಸಕ್ತಿ ಬೆಳೆಸುವ ಉದ್ದೇಶದಿಂದ ಸಂಗೀತ ಕಚೇರಿಗಳು, ನಾಟಕೋತ್ಸವಗಳು, ಜಾನಪದ ಕಲಾ ಕಾರ್ಯಕ್ರಮಗಳು ಹಾಗೂ ಸಾಹಿತ್ಯ ಚಟುವಟಿಕೆಗಳಿಗೆ ಉತ್ತೇಜನ ನೀಡಿದರು. ಡಾ. ಶರ್ಮ ಅವರ ದೃಷ್ಟಿಯಲ್ಲಿ ಸಂಸ್ಕೃತಿ ಸಮಾಜದ ಕನ್ನಡಿ. ಉತ್ತಮ ಸಂಸ್ಕೃತಿ ಜನರಲ್ಲಿ ಸಮಷ್ಟಿ ಪ್ರಜ್ಞೆಯ ಜಾಗೃತಿ ಮೂಡಿಸುತ್ತವೆ. ಇವು ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ, ನಾಯಕತ್ವ, ಸಂವಹನ ಕೌಶಲ್ಯ ಹಾಗೂ ತಂಡದ ಮನೋಭಾವ ಬೆಳೆಯುತ್ತದೆ ಎನ್ನುತ್ತಾರೆ. ಜಾನಪದ ಮತ್ತು ಸಂಗೀತ ಪರಂಪರೆಯನ್ನು ಆಧುನಿಕ ಶಿಕ್ಷಣದೊಂದಿಗೆ ಜೋಡಿಸುವ ಅಗತ್ಯವನ್ನು ಒತ್ತಿ ಹೇಳಿದ್ದಾರೆ. ಸಂಸ್ಕೃತಿ ಉಳಿದಾಗ ಮಾತ್ರ ಸಮಾಜದ ಮೌಲ್ಯಗಳು ಉಳಿಯುತ್ತವೆ ಎಂಬುದು ಅವರ ನಿಲುವಾಗಿದೆ. ಹೀಗೆ ಅವರು ಶಿಕ್ಷಣ, ಸಂಶೋಧನೆ, ಆಡಳಿತ, ಸಂಗೀತ ಮತ್ತು ಸಮಗ್ರ ಜಾನಪದ ಕ್ಷೇತ್ರಗಳ ಸಮನ್ವಯಕಾರರಾಗಿ ಸಮಾಜಕ್ಕೆ ಮಾದರಿಯಾಗಿದ್ದಾರೆ.

# ಖಮೇನಿ ಪಾರ್ಥಿವ ಶರೀರದ ಮೆರವಣಿಗೆ ಆರಂಭ: ಮಶಾದ್‌ನಲ್ಲಿ ಜು.9ರಂದು ಅಂತ್ಯಕ್ರಿಯೆ

**ಟೆಹರಾನ್, ಜು.3:** ಇರಾನ್‌ನಲ್ಲಿ 37 ವರ್ಷಗಳ ಕಾಲ ರಾಜಕೀಯ, ಮಿಲಿಟರಿ ಮತ್ತು ಧಾರ್ಮಿಕ ವ್ಯವಸ್ಥೆಗಳ ಮೇಲೆ ಪರಮಾಧಿಕಾರ ಹೊಂದಿದ್ದ ಸುಪ್ರೀಂ ಲೀಡರ್ ಆಯತ್‌ಉಲ್ಲಾ ಅಲಿ ಖಮೇನಿ ಅವರ ನಿಧನದ ಕೆಲವು ತಿಂಗಳುಗಳ ನಂತರ, ದೇಶದ ಇತಿಹಾಸದಲ್ಲೇ ಅತ್ಯಂತ ದೊಡ್ಡದಾಗಬಹುದಾದ ಭವ್ಯ ಸರ್ಕಾರಿ ಅಂತ್ಯಕ್ರಿಯೆಯ ಮೆರವಣಿಗೆಗೆ ಸಿದ್ಧತೆ ಆರಂಭವಾಗಿವೆ.

**ಅಂತ್ಯಕ್ರಿಯೆಯ ಪ್ರಮುಖ ಮುಖ್ಯಾಂಶಗಳು:**

ಖಮೇನಿ ಅವರ ಶವದ ಪೆಟ್ಟಿಗೆಯನ್ನು ಶಿಯಾ ಸಂತ ಇಮಾಮ್ ಹುಸೇನ್ ಅವರ ಮಸೀದಿಯ ಪವಿತ್ರ ಕೆಂಪುಧ್ವಜದಿಂದ ಅಲಂಕರಿಸಲಾಗಿದೆ. ಇದನ್ನು ಇರಾನ್ ಸರ್ಕಾರವು "ತ್ಯಾಗ ಮತ್ತು ಪ್ರತಿರೋಧದ ಸಂಕೇತ" ಎಂದು ಬಣ್ಣಿಸಿದೆ. ಜುಲೈ 4 ಮತ್ತು 5 ರಂದು ತೆಹ್ರಾನ್ನಲ್ಲಿ ಸಾರ್ವಜನಿಕ ದರ್ಶನ ನಡೆಯಲಿದ್ದು, ಜುಲೈ 6–7 ರಂದು ಪವಿತ್ರ ನಗರವಾದ 'ಕೋಮ್' ಗೆ ಕೊಂಡೊಯ್ಯಲಾಗುತ್ತದೆ. ನಂತರ ಇರಾಕ್‌ನ ಪ್ರಮುಖ ಶಿಯಾ ಧಾರ್ಮಿಕ ನಗರಗಳಾದ ಕರ್ಬಲಾ ಮತ್ತು ನಜಾಫ್‌ಗೆ



ಕೊಂಡೊಯ್ದು, ಅಂತಿಮವಾಗಿ ಜುಲೈ 9 ರಂದು ಖಮೇನಿ ಅವರ ಜನ್ಮಸ್ಥಳವಾದ 'ಮಶಾದ್' ನಗರದಲ್ಲಿ ಅಂತ್ಯಕ್ರಿಯೆ ನೆರವೇರಲಿದೆ.

**ಬಿಗಿಭದ್ರತೆ, ರಜೆ ಘೋಷಣೆ:**

ಈ ಹಿಂದೆ 1989 ರಲ್ಲಿ ಖೊಮೇನಿ ಮತ್ತು 2020 ರಲ್ಲಿ ಜನರಲ್ ಕಾಸಿಂ ಸುಲೈಮಾನಿ ಅವರ ಅಂತ್ಯಕ್ರಿಯೆಯ ಸಂದರ್ಭದಲ್ಲಿ ನಡೆದಿದ್ದ ಕಾಲ್ತುಳಿತದಂತಹ ದುರಂತಗಳನ್ನು ತಪ್ಪಿಸಲು ಇರಾನ್ ಸರ್ಕಾರ ತೀವ್ರ ಭದ್ರತಾ ಕ್ರಮಗಳನ್ನು ಕೈಗೊಂಡಿದೆ. ಅಧ್ಯಕ್ಷ ಮಸೂದ್ ಪೆಜೆಶ್ಕಿಯನ್ ಅವರು ಶನಿವಾರದಿಂದ ಸೋಮವಾರದವರೆಗೆ ಟೆಹ್ರಾನ್‌ನಲ್ಲಿ ಸಾರ್ವಜನಿಕ ರಜೆ ಘೋಷಿಸಿದ್ದಾರೆ ಮತ್ತು ವಾಯುಪ್ರದೇಶದ ಮೇಲೆ ನಿರ್ಬಂಧಗಳನ್ನು ವಿಧಿಸಿದ್ದಾರೆ. ಪ್ರಸ್ತುತ ಇರಾನ್‌ನ ನೂತನ ಸುಪ್ರೀಂ ಲೀಡರ್ ಆಗಿ ಅಧಿಕಾರ ವಹಿಸಿಕೊಂಡಿರುವ ಅವರ ಪುತ್ರ ಮೊಜ್ತಬಾ ಖಮೇನಿ ಅವರು ಭದ್ರತಾ ಕಾರಣಗಳಿಂದಾಗಿ ಈ ಸಮಾರಂಭದಲ್ಲಿ ಸಾರ್ವಜನಿಕವಾಗಿ ಕಾಣಿಸಿಕೊಳ್ಳುವ ಸಾಧ್ಯತೆ ಕಡಿಮೆ ಎಂದು ವರದಿಯಾಗಿದೆ.

## ಖಮೇನಿ ಅಂತ್ಯಕ್ರಿಯೆಯಲ್ಲಿ ಭಾರತೀಯ ನಿಯೋಗ

**ಟೆಹರಾನ್/ನವದೆಹಲಿ, ಜು.3:** ಖಮೇನಿ ವಿದಾಯ ಸಮಾರಂಭದಲ್ಲಿ ಭಾಗವಹಿಸಲು ವಿಶ್ವದ 100ಕ್ಕೂ ಹೆಚ್ಚು ದೇಶಗಳ ಪ್ರತಿನಿಧಿಗಳು ಆಗಮಿಸುತ್ತಿದ್ದಾರೆ. ಭಾರತದ ಪರವಾಗಿ ವಿದೇಶಾಂಗ ವ್ಯವಹಾರಗಳ ರಾಜ್ಯ ಸಚಿವ ಪಬಿತ್ರಾ ಮಾರ್ಗರಿಟಾ ಮತ್ತು ಬಿಹಾರದ ರಾಜ್ಯಪಾಲ ಲೆಫ್ಟಿನೆಂಟ್ ಜನರಲ್ (ನಿವೃತ್ತ) ಸೈಯದ್ ಅತಾ ಹಸ್ನೈನ್ ನೇತೃತ್ವದ ನಿಯೋಗವು ಟೆಹ್ರಾನ್‌ನ ಗ್ರ್ಯಾಂಡ್ ಮೊಸಲ್ಲಾ ಸಂಕೀರ್ಣದಲ್ಲಿ ಗೌರವ ನಮನ ಸಲ್ಲಿಸಿದೆ. ಕಾಂಗ್ರೆಸ್ ಪರವಾಗಿ ಮಾಜಿ ವಿದೇಶಾಂಗ ಸಚಿವ ಸಲ್ಮಾನ್ ಖುರ್ಷಿದ್ ಮತ್ತು ಜಮ್ಮು–ಕಾಶ್ಮೀರದ ಪಿಡಿಪಿ ಮುಖ್ಯಸ್ಥೆ ಮೆಹಬೂಬಾ ಮುಫ್ತಿ ಕೂಡ ಈ ಸಂದರ್ಭದಲ್ಲಿ ಉಪಸ್ಥಿತರಿದ್ದಾರೆ. ಇದಲ್ಲದೆ, ಜಮ್ಮು ಮತ್ತು ಕಾಶ್ಮೀರದ ಮಾಜಿ ಮುಖ್ಯಮಂತ್ರಿ ಮೆಹಬೂಬಾ ಮುಫ್ತಿ, ಹಿರಿಯ ಕಾಂಗ್ರೆಸ್ ನಾಯಕ ಮತ್ತು ಮಾಜಿ ವಿದೇಶಾಂಗ ಸಚಿವ ಸಲ್ಮಾನ್ ಖುರ್ಷಿದ್ ಮತ್ತು ಜಮ್ಮು ಮತ್ತು ಕಾಶ್ಮೀರ ಶಿಯಾ ಅಸೋಸಿಯೇಷನ್ನ ಅಧ್ಯಕ್ಷ ಇಮ್ರಾನ್ ರೆಜಾ ಅನ್ಸಾರಿ ಕೂಡ ಅಂತ್ಯಕ್ರಿಯೆಯ ಪ್ರಾರ್ಥನೆಗಾಗಿ ಟೆಹರಾನ್ನಲ್ಲಿದ್ದಾರೆ. ಪಿಡಿಪಿ ನಾಯಕಿ ಮೆಹಬೂಬಾ ಮುಫ್ತಿ "ಇರಾನ್‌ನಸರ್ವೋಚ್ಚನಾಯಕ ಅಯತೊಲ್ಲಾ ಸಯ್ಯದ್ ಅಲಿ ಖಮೇನಿ ಅವರ ಹುತಾತ್ಮತೆಗೆ ನನ್ನ ಆಳವಾದ ಸಂತಾಪ ಮತ್ತು ಒಗ್ಗಟ್ಟನ್ನು ವ್ಯಕ್ತಪಡಿಸಲು ಟೆಹ್ರಾನ್‌ನಲ್ಲಿರುವುದು ಗೌರವ" ಎಂದು ಬಣ್ಣಿಸಿದರು. ಇದು ರಾಷ್ಟ್ರೀಯ ಕಾರ್ಯಕ್ರಮ ಮಾತ್ರವಲ್ಲದೆ ಮಹತ್ವದ ಅಂತರರಾಷ್ಟ್ರೀಯ ಸಭೆಯೂ ಆಗಿದೆ. ಹಿರಿಯ ನಾಯಕ ಮತ್ತು ಮಾಜಿ ಅಧ್ಯಕ್ಷ ಡಿಮಿಟ್ರಿ ಮೆಡ್ವೆಡೆವ್ ನೇತೃತ್ವದ ರಷ್ಯಾದ ನಿಯೋಗವು ಅಂತ್ಯಕ್ರಿಯೆಯಲ್ಲಿ ಭಾಗವಹಿಸಲು ಇರಾನ್ನಲ್ಲಿದೆ. ಪಾಕಿಸ್ತಾನದ ಪ್ರಧಾನಿ ಶೆಹಬಾಜ್ ಷರೀಫ್, ಸೇನಾ ಮುಖ್ಯಸ್ಥ ಜನರಲ್ ಅಸಿಮ್ ಮುನೀರ್ ಮತ್ತು ಅವರ ನಿಯೋಗವು ಟೆಹ್ರಾನ್‌ನಲಿ ಸರ್ವೋಚ್ಚ ನಾಯಕ ಅಲಿ ಖಮೇನಿ ಅವರಿಗೆ ಗೌರವ ಸಲ್ಲಿಸಿತು. ಷರೀಫ್ ಕೂಡ ಸಂತಾಪ ಪುಸ್ತಕದಲ್ಲಿ ಸಹಿ ಹಾಕಿದರು. ಜುಲೈ 4 ರಿಂದ 9 ರವರೆಗೆ ಇರಾನಿನ ಹಲವಾರು ನಗರಗಳಲ್ಲಿ ಮುಖ್ಯ ಅಂತ್ಯಕ್ರಿಯೆ ನಡೆಯುವ ನಿರೀಕ್ಷೆಯಿದೆ.

# ನ್ಯಾಟೋ ದೇಶಗಳ ವಿರುದ್ಧ ಡೊನಾಲ್ಡ್ ಟ್ರಂಪ್ ಅಸಮಾಧಾನ

**ವಾಷಿಂಗ್ಟನ್, ಜು.3:** ನ್ಯಾಟೋಗೆ ಅಮೆರಿಕ ನೀಡುತ್ತಿರುವ ಪ್ರಸ್ತುತ ಬೆಂಬಲ ಏಕಪಕ್ಷೀಯವಾಗಿದ್ದು, ಅದೇ ರೀತಿಯ ಸಂಬಂಧವನ್ನು ಮುಂದುವರಿಸುವುದು ಹಾಸ್ಯಾಸ್ಪದ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ.

ಜುಲೈ 7 ಮತ್ತು 8ರಂದು ನಡೆಯಲಿರುವ ನ್ಯಾಟೋ ಶೃಂಗಸಭೆಗೆ ಕೆಲವೇ ದಿನಗಳು ಬಾಕಿ ಇರುವ ಸಂದರ್ಭದಲ್ಲಿ ಟ್ರಂಪ್ ಹೇಳಿಕೆ ಹೊಸ ಚರ್ಚೆಗೆ ಕಾರಣವಾಗಿದೆ.

ತಮ್ಮ ಸಾಮಾಜಿಕ ಜಾಲತಾಣದಲ್ಲಿ ಈ ಬಗ್ಗೆ ಮಾಹಿತಿ ಹಂಚಿಕೊಂಡಿರುವ ಅವರು, ನ್ಯಾಟೋ ಮತ್ತು ಅಮೆರಿಕ ನಡುವಿನ ಸಂಬಂಧ ಪರಸ್ಪರ ಸಮಾನವಾಗಿಲ್ಲ. ಅಮೆರಿಕ ನ್ಯಾಟೋಗೆ ನೀಡುತ್ತಿರುವ ಸಹಕಾರಕ್ಕೆ ತಕ್ಕ ಪ್ರತಿಫಲ ಸಿಗುತ್ತಿಲ್ಲ. ಅವರು ನಮ್ಮ ಪರವಾಗಿ ನಿಲ್ಲಲಿಲ್ಲ ಎಂದಿದ್ದಾರೆ.

ಇದೇ ವೇಳೆ ಇರಾನ್ ಸಂಘರ್ಷದ ಸಂದರ್ಭದಲ್ಲಿ ಹಲವು ಯುರೋಪಿಯನ್ ರಾಷ್ಟ್ರಗಳು ಅಮೆರಿಕದ ಸೇನಾ ಕಾರ್ಯಾಚರಣೆಗಳಿಗೆ ತಮ್ಮ ಸೇನಾ ನೆಲೆಗಳನ್ನು ಬಳಸಲು ನಿರ್ಬಂಧ ವಿಧಿಸಿದ್ದನ್ನು ಉಲ್ಲೇಖಿಸಿರುವ ಟ್ರಂಪ್, ಸಂಕಷ್ಟದ ಸಮಯದಲ್ಲಿ ಮಿತ್ರ ರಾಷ್ಟ್ರಗಳು ಅಮೆರಿಕದ ಬೆಂಬಲಕ್ಕೆ ಬರಲಿಲ್ಲ. ಇದೇ ಕಾರಣಕ್ಕೆ ಅಮೆರಿಕ ಮಾತ್ರ ನ್ಯಾಟೋ ರಕ್ಷಣೆಯ ಭಾರವನ್ನು ಹೊರುವುದು ಸರಿಯಲ್ಲ ಎಂದು



ಅಭಿಪ್ರಾಯಪಟ್ಟಿದ್ದಾರೆ. ಟ್ರಂಪ್ ಅವರು ಬಹಳ ಹಿಂದಿನಿಂದಲೂ ಯುರೋಪಿನ ರಾಷ್ಟ್ರಗಳು ತಮ್ಮ ಭದ್ರತೆಯ ಹೊಣೆಗಾರಿಕೆಯನ್ನು ತಾವೇ ಹೆಚ್ಚಾಗಿ ವಹಿಸಿಕೊಳ್ಳಬೇಕು ಎಂದು ಒತ್ತಾಯಿಸುತ್ತಿದ್ದಾರೆ. ಅಮೆರಿಕದ ತೆರಿಗೆದಾರರ ಹಣವನ್ನು ಇತರ ರಾಷ್ಟ್ರಗಳ ಭದ್ರತೆಗಾಗಿ ಅತಿಯಾಗಿ ಬಳಸಬಾರದು ಎಂಬುದು ಅವರ ನಿಲುವಾಗಿದೆ. ಈ ಹಿನ್ನೆಲೆಯಲ್ಲಿ ಅಮೆರಿಕ ಈಗಾಗಲೇ ಕೆಲವು ರಕ್ಷಣಾ ಬದ್ಧತೆಗಳನ್ನು ಮರುಪರಿಶೀಲಿಸುವ ಕೆಲಸ ಆರಂಭಿಸಿದೆ ಎಂದು ತಿಳಿಸಿದ್ದಾರೆ.

ಟ್ರಂಪ್ ಒತ್ತಡದ ಪರಿಣಾಮವಾಗಿ ಕಳೆದ ವರ್ಷದ ನ್ಯಾಟೋ ಸಭೆಯಲ್ಲಿ ಸದಸ್ಯ ರಾಷ್ಟ್ರಗಳು 2035ರೊಳಗೆ ತಮ್ಮ ಒಟ್ಟು ದೇಶೀಯ ಉತ್ಪನ್ನದ ಶೇಕಡಾ 5ರಷ್ಟು ಮೊತ್ತವನ್ನು ರಕ್ಷಣಾ ವೆಚ್ಚಕ್ಕೆ ಮೀಸಲಿಡುವ ಗುರಿಯನ್ನು ಒಪ್ಪಿಕೊಂಡಿದ್ದವು. ಇದರಿಂದ ಅಮೆರಿಕದ ಮೇಲಿನ ಆರ್ಥಿಕ ಹೊರೆ ಕಡಿಮೆಯಾಗಲಿದೆ ಎಂಬ ನಿರೀಕ್ಷೆ ವ್ಯಕ್ತವಾಗಿದೆ. ಈ ನಡುವೆ, ಜುಲೈ 7 ಮತ್ತು 8ರಂದು ಟರ್ಕಿಯ ರಾಜಧಾನಿಯಲ್ಲಿ ನಡೆಯಲಿರುವ ನ್ಯಾಟೋ ಶೃಂಗಸಭೆಯಲ್ಲಿ 32 ಸದಸ್ಯ ರಾಷ್ಟ್ರಗಳ ನಾಯಕರು ಭಾಗವಹಿಸಲಿದ್ದಾರೆ. ಉಕ್ರೇನ್ ಯುದ್ಧ, ಮಧ್ಯಪ್ರಾಚ್ಯದ ಬೆಳವಣಿಗೆಗಳು,

> ನ್ಯಾಟೋ ಜೊತೆಗಿನ "ಏಕಪಕ್ಷೀಯ" ಸಂಬಂಧವನ್ನು ಅಮೆರಿಕ ಉಳಿಸಿಕೊಳ್ಳುವುದು "ಹಾಸ್ಯಾಸ್ಪದ" ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ. "ನ್ಯಾಟೋ ಜೊತೆಗಿನ ಸಂಬಂಧವು ಪರಸ್ಪರವಾಗಿಲ್ಲದಿದ್ದಾಗ ಅಮೆರಿಕ ಈ ಏಕಪಕ್ಷೀಯ ಹಾದಿಯಲ್ಲಿ ಮುಂದುವರಿಯುವುದು ಹಾಸ್ಯಾಸ್ಪದ," "ಅವರು ನಮಗಾಗಿ ಇರಲಿಲ್ಲ."

ಯುರೋಪಿನ ಭದ್ರತೆ ಹಾಗೂ ಸದಸ್ಯ ರಾಷ್ಟ್ರಗಳ ರಕ್ಷಣಾ ವೆಚ್ಚ ಹೆಚ್ಚಳ ಸೇರಿದಂತೆ ಹಲವು ಮಹತ್ವದ ವಿಷಯಗಳು ಸಭೆಯ ಪ್ರಮುಖ ಅಜೆಂಡಾಗಿವೆ.

1949ರಲ್ಲಿ ಸ್ಥಾಪನೆಯಾದ ನ್ಯಾಟೋ, ಅಮೆರಿಕ ನೇತೃತ್ವದ ಪ್ರಮುಖ ರಕ್ಷಣಾ ಮೈತ್ರಿಕೂಟವಾಗಿ ಹಲವು ದಶಕಗಳಿಂದ ಯುರೋಪಿನ ಭದ್ರತೆಯನ್ನು ಬಲಪಡಿಸುವಲ್ಲಿ ಹಾಗೂ ಶೀತಲ ಸಮರದ ಅವಧಿಯಲ್ಲಿ ಸೋವಿಯತ್ ಒಕ್ಕೂಟದ ಪ್ರಭಾವವನ್ನು ತಡೆಯುವಲ್ಲಿ ಪ್ರಮುಖ ಪಾತ್ರ ವಹಿಸಿದೆ. ಆದರೆ, ಟ್ರಂಪ್ ಅಧ್ಯಕ್ಷರಾದ ನಂತರ ನ್ಯಾಟೋ ಸದಸ್ಯ ರಾಷ್ಟ್ರಗಳ ವೆಚ್ಚ ಹಂಚಿಕೆ ಮತ್ತು ಅಮೆರಿಕದ ಪಾತ್ರದ ಕುರಿತು ಅವರು ನಿರಂತರವಾಗಿ ಪ್ರಶ್ನೆಗಳನ್ನು ಎತ್ತುತ್ತಿದ್ದು, ಅವರ ಇತ್ತೀಚಿನ ಹೇಳಿಕೆ ಕೂಡ ಇದೇ ಚರ್ಚೆಯನ್ನು ಮತ್ತಷ್ಟು ತೀವ್ರಗೊಳಿಸಿದೆ.



ಕೇಂದ್ರ ಹಣಕಾಸು ಮತ್ತು ಕಾರ್ಪೊರೇಟ್ ವ್ಯವಹಾರಗಳ ಸಚಿವೆ ನಿರ್ಮಲಾ ಸೀತಾರಾಮನ್ ಅವರು ಶುಕ್ರವಾರ ಪ್ಯಾರಿಸ್‌ನಲ್ಲಿ ಭಾರತ–ಫ್ರಾನ್ಸ್ ವ್ಯವಹಾರ ದುಂಡು ಮೇಜಿನ ಸಭೆಯ ನೇತೃತ್ವ ವಹಿಸಿದ್ದರು.

# ಲೆಬನಾನ್‌ನಲ್ಲಿ ಸ್ಥಳಾಂತರಗೊಂಡಿದ್ದ 6.4 ಲಕ್ಷ ಜನರು ವಾಪಸ್

**ಬೈರುತ್, ಜು.3:** ಇಸ್ರೇಲ್ ಮತ್ತು ಹಿಜ್ಬುಲ್ಲಾ ನಡುವಿನ ಸಂಘರ್ಷ ಕಡಿಮೆಯಾದ ಹಿನ್ನೆಲೆಯಲ್ಲಿ ಲೆಬನಾನ್‌ನಲ್ಲಿ ಆಂತರಿಕವಾಗಿ ಸ್ಥಳಾಂತರಗೊಂಡಿದ್ದ 6,40,000ಕ್ಕೂ ಹೆಚ್ಚು ಜನರು ತಮ್ಮ ಮನೆಗಳಿಗೆ ಮರಳಿದ್ದಾರೆ ಎಂದು ಅಂತರರಾಷ್ಟ್ರೀಯ ವಲಸೆ ಸಂಸ್ಥೆ ತಿಳಿಸಿದೆ. ಅಮೆರಿಕ–ಇಸ್ರೇಲ್ ಜಂಟಿ ದಾಳಿಯಲ್ಲಿ ಇರಾನ್‌ನ ಸರ್ವೋಚ್ಚ ನಾಯಕ ಆಯತ್‌ಉಲ್ಲಾ ಅಲಿ ಖಮೇನಿ ಅವರ ಸಾವಿಗೆ ಪ್ರತೀಕಾರವಾಗಿ, ಇರಾನ್ ಬೆಂಬಲಿತ ಹೆಜ್ಬೊಲ್ಲಾ ಉಗ್ರಗಾಮಿ ಸಂಘಟನೆಯು ಇಸ್ರೇಲ್ ಮೇಲೆ ರಾಕೆಟ್ ದಾಳಿ ನಡೆಸಿದಾಗ ಮಾರ್ಚ್ 2 ರಂದು ಲೆಬನಾನ್ ನೇರವಾಗಿ ವ್ಯಾಪಕವಾದ ಇರಾನ್ ಯುದ್ಧದಲ್ಲಿ ಭಾಗಿಯಾಯಿತು. ಇದಕ್ಕೆ ಪ್ರತಿಯಾಗಿ ಜೆರುಸಲೆಮ್ ದಕ್ಷಿಣ ಲೆಬನಾನ್‌ನಲ್ಲಿ ವ್ಯಾಪಕ ವೈಮಾನಿಕ ದಾಳಿ ಮತ್ತು ಭೂಸೇನಾ ಕಾರ್ಯಾಚರಣೆಯನ್ನು ನಡೆಸಿತು. ಪ್ರಸ್ತುತ ಇಸ್ರೇಲಿ ಪಡೆಗಳು ದಕ್ಷಿಣ ಲೆಬನಾನ್‌ನ ಹಲವು ಪ್ರದೇಶಗಳಲ್ಲಿ ತಮ್ಮ ಹಿಡಿತವನ್ನು ಮುಂದುವರಿಸಿವೆ.

ಲೆಬನಾನ್ ಅಧಿಕಾರಿಗಳ ಪ್ರಕಾರ, ಈ ಭೀಕರ ಹೋರಾಟದಲ್ಲಿ ಸುಮಾರು 4,300 ಜನರು ಸಾವನ್ನಪ್ಪಿದ್ದಾರೆ ಮತ್ತು ದಕ್ಷಿಣ ಲೆಬನಾನ್ ಹಾಗೂ ಬೈರುತ್‌ನ ದಕ್ಷಿಣ ಉಪನಗರಗಳಿಂದ 10 ಲಕ್ಷಕ್ಕೂ ಹೆಚ್ಚು ನಿವಾಸಿಗಳು ಸ್ಥಳಾಂತರಗೊಂಡಿದ್ದಾರೆ.

ಗುರುವಾರ ಬಿಡುಗಡೆ ಮಾಡಿದ ವರದಿಯಲ್ಲಿ ಖಔಒ, ಜೂನ್ 22ರಿಂದ ಸ್ಥಳೀಯ ಅಧಿಕಾರಿಗಳೊಂದಿಗೆ ಸಂಗ್ರಹಿಸಿದ ದತ್ತಾಂಶದ ಆಧಾರದ ಮೇಲೆ 6,46,107 ಆಂತರಿಕವಾಗಿ ಸ್ಥಳಾಂತರಗೊಂಡ ಜನರು ಮನೆಗಳಿಗೆ ಮರಳಿದ್ದಾರೆ. ಆದಾಗ್ಯೂ, ದೇಶದಾದ್ಯಂತ ಇನ್ನೂ 5,00,000 ಜನರು ನಿರಾಶ್ರಿತರಾಗಿಯೇ ಉಳಿದಿದ್ದಾರೆ. ದಕ್ಷಿಣ ಗಡಿಯ ಸಮೀಪವಿರುವ ಸಮುದಾಯಗಳಿಗೆ ಮರಳಲು ಅನೇಕ ನಿವಾಸಿಗಳಿಗೆ ಇನ್ನು ಸಾಧ್ಯವಾಗಿಲ್ಲ ಎಂದು ಸಂಸ್ಥೆ ಗಮನಿಸಿದೆ, ಏಕೆಂದರೆ ಅಲ್ಲಿನ ವ್ಯಾಪಕ ವಿನಾಶದಿಂದಾಗಿ ಡಜನ್‌ಗಟ್ಟಲೆ ಪಟ್ಟಣಗಳು ಮತ್ತು ಹಳ್ಳಿಗಳು ವಾಸಯೋಗ್ಯವಾಗಿ ಉಳಿದಿಲ್ಲ. ಇಸ್ರೇಲಿ ಪಡೆಗಳ ಸಂಪೂರ್ಣ ಹಿಂತೆಗೆದುಕೊಳ್ಳುವಿಕೆಗೆ ಈ ಚೌಕಟ್ಟು ಯಾವುದೇ ನಿರ್ದಿಷ್ಟ ವೇಳಾಪಟ್ಟಿಯನ್ನು ನಿಗದಿಪಡಿಸಿಲ್ಲ. ಬದಲಾಗಿ, ಹೆಜ್ಬೊಲ್ಲಾದ ನಿಶ್ಶಸ್ತ್ರೀಕರಣ ಮತ್ತು ಅದರ ಮಿಲಿಟರಿ ಮೂಲಸೌಕರ್ಯಗಳ ಧ್ವಂಸವನ್ನು ಸಂಪೂರ್ಣವಾಗಿ ಪರಿಶೀಲಿಸಿದ ನಂತರವಷ್ಟೇ ಇಸ್ರೇಲ್ ತನ್ನ ಪಡೆಗಳನ್ನು ಹಿಂಪಡೆಯಲಿದೆ. ಈ ನಿಬಂಧನೆಯು ಈಗ ಪ್ರಮುಖ ಅಡ್ಡಿಯಾಗಿ ಹೊರಹೊಮ್ಮಿದೆ. ಏಕೆಂದರೆ ಇಸ್ಲಾಮಿಕ್ ಸಂಘಟನೆಯಾದ ಹಿಜ್ಬುಲ್ಲಾ ಈ ಒಪ್ಪಂದವನ್ನು ಸಂಪೂರ್ಣವಾಗಿ ತಿರಸ್ಕರಿಸಿದೆ. ಇದು ಲೆಬನಾನ್‌ನ ಸಾರ್ವಭೌಮತ್ವವನ್ನು ಕುಗ್ಗಿಸುತ್ತದೆ ಮತ್ತು ಪ್ರಾದೇಶಿಕ ಕದನ ವಿರಾಮ ಅಡಿಯಲ್ಲಿ ಈ ಹಿಂದೆ ಮಾಡಿಕೊಳ್ಳಲಾದ ಒಡಂಬಡಿಕೆಗೆ ವಿರುದ್ಧವಾಗಿದೆ ಎಂದು ಹಿಜ್ಬುಲ್ಲಾ ವಾದಿಸಿದೆ. 100,000 ಲೆಬನಾನಿನ ಮಕ್ಕಳು ಹೊಸ ಶಾಲಾ ವರ್ಷವನ್ನು ಕಳೆದುಕೊಳ್ಳುವ ಅಪಾಯದಲ್ಲಿದ್ದಾರೆ: ಯುದ್ಧದಿಂದ ಹಾನಿಗೊಳಗಾದ ಶಾಲೆಗಳನ್ನು ಸೆಪ್ಟೆಂಬರ್ ವೇಳೆಗೆ ದುರಸ್ತಿ ಮಾಡದ ಹೊರತು ಸುಮಾರು 100,000 ಲೆಬನಾನಿನ ಮಕ್ಕಳು ಹೊಸ ಶಾಲಾವರ್ಷವನ್ನು ಕಳೆದುಕೊಳ್ಳುವ ಅಪಾಯದಲ್ಲಿದ್ದಾರೆ ಎಂದು ವಿಶ್ವಸಂಸ್ಥೆಯ ಮಕ್ಕಳ ನಿಧಿ ಹೇಳಿಕೆಯಲ್ಲಿ ತಿಳಿಸಿದೆ.

ಇತ್ತೀಚಿನ ಮಧ್ಯಪ್ರಾಚ್ಯ ಸಂಘರ್ಷದಿಂದ ದೇಶದ ಶಿಕ್ಷಣ ಕ್ಷೇತ್ರದಾದ್ಯಂತ ವ್ಯಾಪಕ ಹಾನಿಯನ್ನು ಗಓಖಅಇಈ ಮತ್ತು ಲೆಬನಾನ್ನ ಶಿಕ್ಷಣ ಮತ್ತು ಉನ್ನತ ಶಿಕ್ಷಣ ಸಚಿವಾಲಯ ನಡೆಸಿದ ರಾಷ್ಟ್ರವ್ಯಾಪಿ ಸಮೀಕ್ಷೆಯ ನಂತರ ಈ ಎಚ್ಚರಿಕೆ ಬಂದಿದೆ. ಮೌಲ್ಯಮಾಪನವು ಶಾಲೆಗಳು ಮತ್ತು ವೃತ್ತಿಪರ ಕೇಂದ್ರಗಳು ಸೇರಿದಂತೆ 340 ಪೀಡಿತ ಶಿಕ್ಷಣ ಸಂಸ್ಥೆಗಳನ್ನು ಗುರುತಿಸಿದೆ, 17 ನಾಶವಾಗಿವೆ ಮತ್ತು ಇನ್ನೂ ಅನೇಕವು ಸುರಕ್ಷಿತವಾಗಿ ಪುನಃ ತೆರೆಯುವ ಮೊದಲು ಪ್ರಮುಖ ದುರಸ್ತಿಗಳ ಅಗತ್ಯವಿದೆ, ಯುನಿಸೆಫ್ ಈ ಶಾಲೆಗೆ ದೀರ್ಘಕಾಲದವರೆಗೆ ಗೈರುಹಾಜರಾಗುವುದು ಬಾಲಕಾರ್ಮಿಕ ಪದ್ಧತಿ ಮತ್ತು ಬಾಲ್ಯ ವಿವಾಹದಂತಹ ಅಪಾಯಗಳನ್ನು ಹೆಚ್ಚಿಸಬಹುದು ಎಂದು ಎಚ್ಚರಿಕೆ ನೀಡಿದೆ. ಹಾನಿಗೊಳಗಾದ ಶಾಲೆಗಳನ್ನು ಪುನರ್ವಸತಿ ಮಾಡಲು ಮತ್ತು ಕಲಿಕೆಯನ್ನು ಉಳಿಸಿಕೊಳ್ಳಲು ಸ್ಥಳೀಯ ಅಧಿಕಾರಿಗಳೊಂದಿಗೆ ಕೆಲಸ ಮಾಡುತ್ತಿದೆ ಎಂದು ಸಂಸ್ಥೆ ಹೇಳಿದೆ, ಆದರೆ ಹೆಚ್ಚುವರಿ ನಿಧಿಗೆ ಕರೆ ನೀಡಿದೆ.

## ಶರಣಾಗತಿಯ ಪ್ರಶ್ನೆಯೇ ಇಲ್ಲ, ಶತ್ರುಗಳ ವಿರುದ್ಧ ಕ್ರಮ: ಇರಾನ್‌ನ ಐಆರ್‌ಜಿಸಿ ಮುಖ್ಯಸ್ಥ ಎಚ್ಚರಿಕೆ

**ಟೆಹರಾನ್, ಜು.3:** ಇರಾನ್ ಶರಣಾಗತಿಯಾಗುವುದನ್ನು ನೋಡಬೇಕೆಂಬ ಶತ್ರುಗಳ ಕನಸು ಅವರ ಉಸಿರಿನ ಜತೆಗೆ ಮಣ್ಣಾಗಲಿದೆ ಎಂದು ಇರಾನ್‌ನ ಇಸ್ಲಾಮಿಕ್ ರೆವಲ್ಯೂಷನರಿ ಗಾರ್ಡ್ ಕಾರ್ಪ್ಸ್ (ಐಆರ್‌ಜಿಸಿ) ಮುಖ್ಯಸ್ಥ ಅಹ್ಮದ್ ವಾಹಿದಿ ಹೇಳಿದ್ದಾರೆ. ಮೃತ ಸುಪ್ರೀಂ ಲೀಡರ್ ಆಯತ್‌ಉಲ್ಲಾ ಅಲಿ ಖಮೇನಿ ಅವರ ಅಂತ್ಯಕ್ರಿಯೆಯ ಮೆರವಣಿಗೆಯ ಸಂದರ್ಭದಲ್ಲಿ ಮಾತನಾಡಿದ ಅವರು, ಫೆಬ್ರವರಿ 28 ರಂದು ಅಮೆರಿಕ ಮತ್ತು ಇಸ್ರೇಲ್ ವಿರುದ್ಧ ಇರಾನ್ ಯುದ್ಧ ಆರಂಭವಾಗುವ ಕೆಲವೇ ದಿನಗಳ ಮುಂಚೆ (ಫೆಬ್ರವರಿ 8 ರಂದು) ಕಾಣಿಸಿಕೊಂಡಿದ್ದ ವಾಹಿದಿ, ಅದಾದ ನಂತರ ಹಲವು ತಿಂಗಳುಗಳ ಕಾಲ ಸಾರ್ವಜನಿಕವಾಗಿ ಎಲ್ಲಿಯೂ ಕಾಣಿಸಿಕೊಂಡಿರಲಿಲ್ಲ. ಯುದ್ಧದ ನಂತರ ಅವರ ಮೊದಲ ಸಾರ್ವಜನಿಕ ಭಾಷಣ ಇದಾಗಿದೆ.

ಇರಾನ್‌ನ ಸೇನಾ ಮಹಾದಂಡನಾಯಕ ಮೇಜರ್ ಜನರಲ್ ಅಮೀರ್ ಹತಾಮಿ ಅವರು ಸರ್ಕಾರಿ ವಾಹಿನಿ ಐಆರ್‌ಐಬಿ ಜೊತೆ ಮಾತನಾಡಿ, "ಅಮೆರಿಕ



ಮತ್ತು ಕ್ರಿಮಿನಲ್ ಜಿಯೋನಿಸ್ಟ್ (ಇಸ್ರೇಲ್) ಆಡಳಿತದ ವಿರುದ್ಧ ನಮ್ಮ ಹುತಾತ್ಮ ಇಮಾಮ್ ಮತ್ತು ಇತರ ಎಲ್ಲಾ ವೀರರ ರಕ್ತದ ದೂಷಣೆಗೆ ಖಂಡಿತವಾಗಿಯೂ ಪ್ರತಿಕಾರ ತೀರಿಸಿಕೊಳ್ಳುತ್ತೇವೆ ಎಂದು ಪ್ರತಿಜ್ಞೆ ಮಾಡಿದ್ದಾರೆ.



ಲಡಾಖ್‌ನ ಯುವಜನರ ಕ್ರೀಡಾ ಪ್ರತಿಭೆಯನ್ನು ಪೋಷಿಸುವ ಗುರಿಯನ್ನು ಹೊಂದಿರುವ ಆಧುನಿಕ ಕ್ರೀಡಾ ಸೌಲಭ್ಯವಾದ ಚುಚೋಟ್ ಗೊಂಗ್ಮಾದಲ್ಲಿ ಹೊಸದಾಗಿ ನಿರ್ಮಿಸಲಾದ ಮಿನಿ ಒಳಾಂಗಣ ಕ್ರೀಡಾಂಗಣವನ್ನು ಲಡಾಖ್ ಲೆಫ್ಟಿನೆಂಟ್ ಗವರ್ನರ್ ವಿನಯ್ ಕುಮಾರ್ ಸಕ್ಸೇನಾ ಉದ್ಘಾಟಿಸಿದರು.

## ವೆನೆಜುವೆಲಾ ಭೂಕಂಪ: ಮೃತರ ಸಂಖ್ಯೆ 2,595ಕ್ಕೆ ಏರಿಕೆ

**ಕರಾಕಸ್, ಜು.3:** ಜೂನ್ 24 ರಂದು ವೆನೆಜುವೆಲಾದಲ್ಲಿ ಸಂಭವಿಸಿದ ಪ್ರಬಲ ಭೂಕಂಪದಲ್ಲಿ ಮೃತಪಟ್ಟವರ ಸಂಖ್ಯೆ 2,595ಕ್ಕೆ ಏರಿಕೆಯಾಗಿದೆ ಎಂದು ದೇಶದ ಹಂಗಾಮಿ ಅಧ್ಯಕ್ಷೆ ಡೆಲ್ಸಿ ರೊಡ್ರಿಗಸ್ ತಿಳಿಸಿದ್ದಾರೆ. ಭೂಕಂಪದಿಂದಾಗಿ 12,000 ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ. ಪ್ರಸ್ತುತ ಸ್ಥಳದಲ್ಲಿ ತೀವ್ರ ಶೋಧನೆ ಮತ್ತು ರಕ್ಷಣಾ ಕಾರ್ಯಾಚರಣೆಗಳು ಮುಂದುವರಿದಿದ್ದು, ಈವರೆಗೆ 6,462 ಜನರನ್ನು ಸುರಕ್ಷಿತವಾಗಿ ರಕ್ಷಿಸಲಾಗಿದೆ. ಈ ನೈಸರ್ಗಿಕ ವಿಕೋಪಕ್ಕೆ ಸಿಲುಕಿ ಒಟ್ಟು 189 ಕಟ್ಟಡಗಳು ಸಂಪೂರ್ಣವಾಗಿ ಧ್ವಂಸಗೊಂಡಿವೆ. ಇಂತಹ ಕಠಿಣ ಪರಿಸ್ಥಿತಿಯಲ್ಲಿ ದೇಶಕ್ಕೆ ಮಾನವೀಯ ನೆರವು ಮತ್ತು ರಕ್ಷಣಾ ಸಿಬ್ಬಂದಿಯನ್ನು ಕಳುಹಿಸಿದ ಎಲ್ಲಾ ರಾಷ್ಟ್ರಗಳಿಗೆ ಕೃತಜ್ಞತೆ ಸಲ್ಲಿಸಿರುವ ರೋಡ್ರಿಗಸ್, ವೆನೆಜುವೆಲಾಗೆ ತಮ್ಮ ಬೆಂಬಲವನ್ನು ಮುಂದುವರಿಸುವಂತೆ ಅಂತರರಾಷ್ಟ್ರೀಯ ಸಮುದಾಯಕ್ಕೆ ಕರೆ ನೀಡಿದ್ದಾರೆ. ಭೂಕಂಪದ ನಂತರದ ಪುನರ್ನಿರ್ಮಾಣ ಕಾರ್ಯಗಳಿಗಾಗಿ ಅಂತರರಾಷ್ಟ್ರೀಯ ಹಣಕಾಸು ನಿಧಿ ಸಹಯೋಗದೊಂದಿಗೆ ವೆನೆಜುವೆಲಾ ಸರ್ಕಾರವು 200 ದಶಲಕ್ಷ ಡಾಲರ್ ಮೊತ್ತದ ವಿಶೇಷ ಪುನರ್ನಿರ್ಮಾಣ ನಿಧಿಯನ್ನು ಸ್ಥಾಪಿಸಲಿದೆ ಎಂದು ಅವರು ಪ್ರಕಟಿಸಿದ್ದಾರೆ.

## ಗ್ಲೋಬಲ್ ಚೆಸ್‌ಲೀಗ್ 4ನೇ ಆವೃತ್ತಿಗೆ ಎಲ್ಲ ಸಹಕಾರ: ಪರಮೇಶ್ವರ್ ಭರವಸೆ



**ಬೆಂಗಳೂರು, ಜು.3:** ವಿಶ್ವದ ಅತಿದೊಡ್ಡ ಚೆಸ್ ಲೀಗ್‌ನ ನಾಲ್ಕನೇ ಆವೃತ್ತಿಯನ್ನು ಕರ್ನಾಟಕದ ರಾಜಧಾನಿ ಬೆಂಗಳೂರಿನಲ್ಲಿ ಆಯೋಜಿಸಲು ಅಗತ್ಯ ಸಹಕಾರ ನೀಡಲಾಗುವುದು ಎಂದು ಕ್ರೀಡಾ ಸಚಿವರೂ ಆಗಿರುವ ಡಿಸಿಎಂ ಡಾ.ಜಿ.ಪರಮೇಶ್ವರ್ ಭರವಸೆ ನೀಡಿದ್ದಾರೆ. ಈ ಮೂಲಕ ಐಟಿ ಸಿಟಿ ಬೆಂಗಳೂರು ಮತ್ತೊಂದು ಮಹತ್ವದ ದಿನಕ್ಕೆ ಸಾಕ್ಷಿಯಾಗುವ ದಿನ ಸನ್ನಿಹಿತವಾಗಲಿದೆ.

ಡಿಸಿಎಂ ಡಾ. ಜಿ. ಪರಮೇಶ್ವರ್ ಅವರನ್ನು ಸದಾಶಿವನಗರದ ಗೃಹ ಕಚೇರಿಯಲ್ಲಿ ಶುಕ್ರವಾರ ಭೇಟಿಮಾಡಿದ ಗ್ಲೋಬಲ್ ಚೆಸ್ ಲೀಗ್ ನಿಯೋಗವು ಸಚಿವರೊಂದಿಗೆ ಮಹತ್ವ ವಿಷಯಗಳನ್ನು ಚರ್ಚಿಸಿತು. ನಿಯೋಗದ ಮನವಿ ಸ್ಪಂದಿಸಿದ ಸಚಿವರು, ರಾಜ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಚೆಸ್ ಆವೃತ್ತಿ ಆಯೋಜನೆಗೆ ಎಲ್ಲ ವಿಧವಾದ ಬೆಂಬಲ, ಸಹಕಾರ ನೀಡುವುದಾಗಿ ತಿಳಿಸಿದರು. ವಿಶ್ವಮಟ್ಟದ ಕ್ರೀಡಾಕೂಟಗಳಿಗೆ ಬೆಂಗಳೂರು ಆತಿಥ್ಯ ವಹಿಸುವ ಮೂಲಕ ರಾಜ್ಯದ ಕ್ರೀಡಾ ಕ್ಷೇತ್ರಕ್ಕೆ ಹೊಸ ಉತ್ತೇಜನ ಸಿಗಲಿದೆ. ಇಂತಹ ಪ್ರತಿಷ್ಠಿತ ಕಾರ್ಯಕ್ರಮಗಳಿಗೆ ಸರ್ಕಾರ ಅಗತ್ಯ ಸಹಕಾರ ಒದಗಿಸಲು ಕಾಂಗ್ರೆಸ್ ಸರ್ಕಾರ ಬದ್ಧವಾಗಿದೆ ಎಂದು ತಿಳಿಸಿದರು. ಗ್ಲೋಬಲ್ ಚೆಸ್ ಲೀಗ್‌ನ ಸಿಇಓ ಗೌರವ್ ರಕ್ಷಿತ್, ಅಂತರರಾಷ್ಟ್ರೀಯ ಚೆಸ್ ಆಟಗಾರ ಪ್ರಚುರ ಪಿ.ಪಿ. ಹಾಗೂ ಸದಸ್ಯರೊಂದಿಗೆ ಸಚಿವರು ಸುದೀರ್ಘ ಮಾತುಕತೆ ನಡೆಸಿದರು.

# ಟಿಸಿಎಸ್ ವರ್ಲ್ಡ್ 10ಕೆ ಬೆಂಗಳೂರು 5.73 ಕೋಟಿ ರೂ.ಗಳನ್ನು ಸಂಗ್ರಹ

**ಬೆಂಗಳೂರು, ಜು.3:** ಟಿಸಿಎಸ್ ವರ್ಲ್ಡ್ 10ಕೆ ಬೆಂಗಳೂರು 2026 ಈ ವರ್ಷ ಸಾಮಾಜಿಕ ಉದ್ದೇಶಗಳಿಗಾಗಿ 5.73 ಕೋಟಿ ರೂ.ಗಳನ್ನು ಸಂಗ್ರಹಿಸುವ ಮೂಲಕ ಭಾರತದ ಪ್ರಮುಖ ಕ್ರೀಡಾ ಲೋಕೋಪಕಾರ ವೇದಿಕೆಗಳಲ್ಲಿ ಒಂದಾಗಿ ತನ್ನ ಖ್ಯಾತಿಯನ್ನು ಬಲಪಡಿಸಿಕೊಂಡಿದೆ, 2008 ರಲ್ಲಿ ತನ್ನ ಲೋಕೋಪಕಾರ ಕಾರ್ಯಕ್ರಮವನ್ನು ಪ್ರಾರಂಭಿಸಿದ ನಂತರ ಒಟ್ಟು ಸಂಗ್ರಹಿಸಿದ ಹಣವನ್ನು 64.93 ಕೋಟಿ ರೂ.ಗಳಿಗೆ ಹೆಚ್ಚಿಸಿದೆ. ಈ ವರ್ಷದ ಅಭಿಯಾನವು 94 ಎನ್‌ಜಿಒಗಳು, 46 ಕಾರ್ಪೊರೇಟ್‌ಗಳು, 40 ಕಾರ್ಪೊರೇಟ್ ತಂಡಗಳು ಮತ್ತು ವಿಶ್ವಸಂಸ್ಥೆಯ ಸುಸ್ಥಿರ ಅಭಿವೃದ್ಧಿ ಗುರಿಗಳೊಂದಿಗೆ ಹೊಂದಿಕೆಯಾಗುವ 12 ಉದ್ದೇಶ ವಿಭಾಗಗಳಲ್ಲಿ ಕೆಲಸ ಮಾಡುವ 184 ಸಕ್ರಿಯ ನಿಧಿಸಂಗ್ರಹಕಾರರನ್ನು ಒಟ್ಟುಗೂಡಿಸಿತು. 18 ವರ್ಷಕ್ಕಿಂತ ಕಡಿಮೆ ವಯಸ್ಸಿನ 15 ಯುವ ಲೋಕೋಪಕಾರಿಗಳು ಸಹ ಭಾಗವಹಿಸಿದ್ದರು, ಒಂಬತ್ತು ಮಂದಿ ತಲಾ ಒಂದು ಲಕ್ಷ ರೂ.ಗಿಂತ ಹೆಚ್ಚು ಹಣವನ್ನು ಸಂಗ್ರಹಿಸಿದರು. ಕರ್ನಾಟಕ ಸರ್ಕಾರ, ಭಾರತೀಯ ಸೇನೆ, ಕರ್ನಾಟಕ ಮತ್ತು ಕೇರಳ ಉಪ ಪ್ರದೇಶಗಳ ಪ್ರಧಾನ ಕಚೇರಿ, ಬೆಂಗಳೂರು ಪೊಲೀಸ್, ಗ್ರೇಟರ್ ಬೆಂಗಳೂರು ಪ್ರಾಧಿಕಾರ, ಬೆಂಗಳೂರು ಮೆಟ್ರೋ ರೈಲು ನಿಗಮ, ರಾಷ್ಟ್ರೀಯ ಕೆಡೆಟ್ ಕಾರ್ಪ್ಸ್ ಮತ್ತು ಕರ್ನಾಟಕ ಅಥ್ಲೆಟಿಕ್ ಅಸೋಸಿಯೇಷನ್ ಈ ಕಾರ್ಯಕ್ರಮವನ್ನು ಸುಗಮವಾಗಿ ನಡೆಸುವಲ್ಲಿ ಬೆಂಬಲ ನೀಡಿದ್ದಕ್ಕಾಗಿ ಸಂಘಟಕರು ಕೃತಜ್ಞತೆ ಸಲ್ಲಿಸಿದರು. ಪ್ರಶಸ್ತಿ ವಿಜೇತರಲ್ಲಿ, ಗೋಸ್ಪೋರ್ಟ್ಸ್ ಫೌಂಡೇಶನ್ 81.88 ಲಕ್ಷ ರೂ.ಗಳನ್ನು ಸಂಗ್ರಹಿಸಿ ಅತಿ ಹೆಚ್ಚು ನಿಧಿಸಂಗ್ರಹಣೆ ಮಾಡಿದ NGOಆಗಿ ಹೊರಹೊಮ್ಮಿತು, ನಂತರ ರೀಚಿಂಗ್ ಹ್ಯಾಂಡ್ (43.73 ಲಕ್ಷ ರೂ.) ಮತ್ತು ನಿಯೋನೇಟ್ಸ್ ಫೌಂಡೇಶನ್ ಆಫ್ ಇಂಡಿಯಾ (41.51 ಲಕ್ಷ ರೂ.) ಸ್ಥಾನ ಪಡೆದಿವೆ. ಓಪನ್‌ಟೆಕ್ಸ್ಟ್ ಮತ್ತು ಅಟ್ಲಿಸ್ಸಿಯಾಲಿಸ್‌ಗಿಂತ ಮುಂದಿರುವ ೦ಖಬ ಟೆಕ್ನಾಲಜೀಸ್ ಲಿಮಿಟೆಡ್ ಗೋಸ್ಪೋರ್ಟ್ಸ್ ಫೌಂಡೇಶನ್ಗಾಗಿ 74.10 ಲಕ್ಷ ರೂ.ಗಳನ್ನು ಸಂಗ್ರಹಿಸಿದ ನಂತರ ಅತಿಹೆಚ್ಚು ಕೊಡುಗೆ ನೀಡಿದ ಕಾರ್ಪೊರೇಟ್ ತಂಡವೆಂದು ಗುರುತಿಸಲ್ಪಟ್ಟಿದೆ. ಬೆಂಗಳೂರು ಕಿಡ್ನಿ ಫೌಂಡೇಶನ್‌ಗಾಗಿ 40.68 ಲಕ್ಷ ರೂ.ಗಳನ್ನು ಸಂಗ್ರಹಿಸಿ ಉಷಾ ಬಾಳಿಗಾ ವೈಯಕ್ತಿಕ ನಿಧಿಸಂಗ್ರಹ ವಿಭಾಗದಲ್ಲಿ ಅಗ್ರಸ್ಥಾನದಲ್ಲಿದ್ದರು. ಪ್ರಮುಖ ವೈಯಕ್ತಿಕ ನಿಧಿಸಂಗ್ರಹಕಾರರಲ್ಲಿ ಲ್ಯೂಕ್ ನಿನಾನ್, ರಾಧಾ ಮತ್ತು ಪಾರ್ಥ ಮತ್ತು ಸುಧೀರ್ ಶೆಟ್ಟಿ ಅವರನ್ನು ಸಹ ಗೌರವಿಸಲಾಯಿತು, ಆದರೆ ಒಂಬತ್ತು ಯುವ ಲೋಕೋಪಕಾರಿಗಳನ್ನು ವಿವಿಧ ದತ್ತಿ ಕಾರ್ಯಗಳಿಗಾಗಿ ತಲಾ ಒಂದು ಲಕ್ಷ ರೂ.ಗಿಂತ ಹೆಚ್ಚು ಸಂಗ್ರಹಿಸಿದಕ್ಕಾಗಿ ಗುರುತಿಸಲಾಯಿತು.